24 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

www.dehalivaarthe.com

EDITION: NEW DELHI / CIRCULATION IN U.P. & HARYANA | EDITOR : K.R. RENU | RNI No. DELKAN/2003/10363 | ಪುಟ 8 | ಸಂಪುಟ 24 | ಸಂಚಿಕೆ 55 | ನವದೆಹಲಿ | ಬೆಲೆ ₹10 | ಆಗಸ್ಟ್ 21, 2026 ಶುಕ್ರವಾರ

# ದಕ್ಷಿಣ ಭಾರತಕ್ಕೆ ನ್ಯಾಯಯುತ ಪಾಲು ನೀಡಿ: ಕೇಂದ್ರಕ್ಕೆ ಡಿಕೆಶಿ ಆಗ್ರಹ

- ದಕ್ಷಿಣ ರಾಜ್ಯಗಳು ಬಲಿಷ್ಠವಾದಾಗ ದೇಶಕ್ಕೆ ಶಕ್ತಿ
- ದಕ್ಷಿಣ ವಲಯ ಮಂಡಳಿ ಸಭೆಯಲ್ಲಿ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಒತ್ತಾಯ




**ಚೆನ್ನೈ, ಆ. 20:** ಕರ್ನಾಟಕ ಬಲಿಷ್ಠವಾದಾಗ, ದಕ್ಷಿಣ ಭಾರತ ಮತ್ತಷ್ಟು ಬಲಿಷ್ಠವಾಗುತ್ತದೆ. ದಕ್ಷಿಣ ಭಾರತ ಬಲಿಷ್ಠವಾದಾಗ, ಭಾರತ ಮತ್ತಷ್ಟು ಬಲಿಷ್ಠವಾಗುತ್ತದೆ. ನಾವು ಭಾರತದ ಅಭಿವೃದ್ಧಿಯ ಪಾಲುದಾರರು. ನಮಗೆ ನಮ್ಮ ನಿಧಿಗಳಲ್ಲಿ, ನಮ್ಮ ಧ್ವನಿಯಲ್ಲಿ ನ್ಯಾಯಬೇಕು. ನಮಗೆ ನ್ಯಾಯಯುತವಾಗಿ ಅನುದಾನ ನೀಡಿ. ದಕ್ಷಿಣ ಭಾರತಕ್ಕೆ ಸಲ್ಲಬೇಕಾದ ನ್ಯಾಯಯುತ ಪಾಲನ್ನು ನೀಡಿ ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಒತ್ತಾಯಿಸಿದ್ದಾರೆ.

ತಮಿಳುನಾಡಿನ ಮಹಾಬಲಿಪುರಂನಲ್ಲಿ ಕೇಂದ್ರ ಗೃಹ ಸಚಿವ ಅಮಿತ್ ಶಾ ಅಧ್ಯಕ್ಷತೆಯಲ್ಲಿ ನಡೆದ 31ನೇ ದಕ್ಷಿಣ ವಲಯ ಮಂಡಳಿ ಸಭೆಯಲ್ಲಿ ಮಾತನಾಡಿ, ಕರ್ನಾಟಕ ಇಲ್ಲಿ ದೂರು ನೀಡಲು ಬಂದಿಲ್ಲ. ಆರ್ಥಿಕತೆಯನ್ನು ಮುನ್ನಡೆಸುತ್ತಿರುವ ರಾಜ್ಯಗಳಿಗೆ ಸಲ್ಲಬೇಕಾದ ಗೌರವ, ನ್ಯಾಯಯುತ ಅಂಶಗಳನ್ನು ತಿಳಿಸಲು ಬಂದಿದ್ದೇವೆ. ನಮ್ಮೊಂದಿಗೆ ಹೆಜ್ಜೆ ಹಾಕಿ. ನಾವು ಭಾರತದ ಭವಿಷ್ಯ ಬೆಳಗುವ ಅವಕಾಶಗಳನ್ನು ಮುಂದುವರಿಸಿಕೊಂಡು ಹೋಗುತ್ತೇವೆ ಎಂದು ತಿಳಿಸಿದರು.

ನಾನು ಹೆಮ್ಮೆಯ ಭಾರತೀಯನಾಗಿ ಹಾಗೂ 16 ಶತಮಾನಗಳಿಗೂ ಹೆಚ್ಚಿನ ಇತಿಹಾಸವನ್ನು ಹೊಂದಿರುವ ನಮ್ಮ ಕನ್ನಡ ಭಾಷೆ ಮತ್ತು ಸಂಸ್ಕೃತಿಯ ಹೆಮ್ಮೆಯ ಕನ್ನಡಿಗನಾಗಿ ಮಾತನಾಡುತ್ತಿದ್ದೇನೆ. ನಾನು ಕರ್ನಾಟಕದ ಪರವಾಗಿ ಮಾತ್ರವಲ್ಲ, ಇಡೀ ದಕ್ಷಿಣ ಭಾರತದ ಪರವಾಗಿ ಮಾತನಾಡುತ್ತಿದ್ದೇನೆ. ಭಾರತದ ಅಭಿವೃದ್ಧಿಯ ಪಯಣವು ದಕ್ಷಿಣ ಭಾರತದ ಮೂಲಕ ಸಾಗುತ್ತದೆ. ಭಾರತದ ಅಭಿವೃದ್ಧಿಯ ತೇರು ದಕ್ಷಿಣ ಭಾರತ ಮೂಲಕವೇ ಸಾಗುತ್ತಿತ್ತು, ಸಾಗುತ್ತಿದೆ, ಮುಂದೆಯೂ ಸಾಗುತ್ತದೆ ಎಂದರು.

### ಪ್ರೋತ್ಸಾಹ ಇರಬೇಕು, ದಂಡಿಸಬಾರದು

15ನೇ ಹಣಕಾಸು ಆಯೋಗದ ಅವಧಿಯಲ್ಲಿ ವಿಭಜಿಸಬಹುದಾದ ತೆರಿಗೆ ಭಾಗದಲ್ಲಿ ಕರ್ನಾಟಕದ ಪಾಲು ಶೇ.4.7ರಿಂದ ಶೇ.3.6ಕ್ಕೆ ಇಳಿಕೆಯಾಯಿತು. ಇದು ಸುಮಾರು ಶೇ.23ರಷ್ಟು ಕಡಿತವಾಗಿದ್ದು, ಆರು ವರ್ಷಗಳ ಅವಧಿಯಲ್ಲಿ ರಾಜ್ಯಕ್ಕೆ ಅಂದಾಜು ರೂ.65,000 ಕೋಟಿಯಷ್ಟು ನಷ್ಟ ಉಂಟಾಗಿದೆ. 15ನೇ ಹಣಕಾಸು ಆಯೋಗವು ಕರ್ನಾಟಕಕ್ಕೆ ರೂ.5,495 ಕೋಟಿ ವಿಶೇಷ ಅನುದಾನ ಮತ್ತು ರೂ.6,000 ಕೋಟಿ ರಾಜ್ಯ ನಿರ್ದಿಷ್ಟ ಅನುದಾನವನ್ನು ಶಿಫಾರಸು ಮಾಡಿತ್ತು. ಆದರೆ, ಈ ಎರಡೂ ಶಿಫಾರಸು ಮಾಡಿದ ಅನುದಾನ ಬಿಡುಗಡೆಯಾಗಿಲ್ಲ ಎಂದು ಆಗಿರುವ ಅನ್ಯಾಯ ಎಂದು ಡಿ.ಕೆ. ಶಿವಕುಮಾರ್ ವಿವರಿಸಿದರು. 16ನೇ ಹಣಕಾಸು ಆಯೋಗವು ನಮ್ಮ ರಾಜ್ಯಕ್ಕೆ ಭಾಗಶಃ ನ್ಯಾಯ ಒದಗಿಸಿದ್ದು, ಕರ್ನಾಟಕದ ಪಾಲನ್ನು ಶೇ.3.64ರಿಂದ ಶೇ.4.131ಕ್ಕೆ ಹೆಚ್ಚಿಸುವ ಮೂಲಕ ಕೆಲವು ಮಟ್ಟಿಗೆ ಮರುಸ್ಥಾಪಿಸಿದೆ. ಆದಾಗ್ಯೂ, ನಮ್ಮ ಪಾಲನ್ನು ಸಂಪೂರ್ಣವಾಗಿ ಶೇ.4.7ಕ್ಕೆ ನಿಲ್ಲಿಸಬೇಕಿದೆ. ಕರ್ನಾಟಕ ಜಿಎಸ್‌ಟಿ ಮತ್ತು ಆದಾಯ ತೆರಿಗೆಗೆ ಎರಡನೇ ಅತಿದೊಡ್ಡ ಕೊಡುಗೆ ನೀಡುವ ರಾಜ್ಯವಾಗಿದೆ. ಬೆಳವಣಿಗೆ ಮತ್ತು ಆದಾಯದ ವಿಷಯದಲ್ಲಿ ಉತ್ತಮ ಸಾಧನೆ ಮಾಡುವ ರಾಜ್ಯವನ್ನು ಪ್ರೋತ್ಸಾಹಿಸಬೇಕೇ ಹೊರತು, ದಂಡಿಸಬಾರದು ಎಂದು ಕೇಂದ್ರಕ್ಕೆ ಮನವರಿಕೆ ಮಾಡಿಕೊಟ್ಟರು.

**ನದಿಗಳು ರಾಜಕೀಯ ಗಡಿಯನ್ನು ಗುರುತಿಸುವುದಿಲ್ಲ:** ಈ ಸಭೆಯಲ್ಲಿರುವ ಪ್ರತಿಯೊಂದು ರಾಜ್ಯಕ್ಕೂ ನೀರಿಗಿಂತ ಮಹತ್ವದ ಸಂಪನ್ಮೂಲ ಮತ್ತೊಂದಿಲ್ಲ. ನಮ್ಮ ನದಿಗಳು ರಾಜಕೀಯ ಗಡಿಗಳನ್ನು ಗುರುತಿಸುವುದಿಲ್ಲ. ಕಾವೇರಿ, ಕೃಷ್ಣಾ, ತುಂಗಭದ್ರಾ, ಪಿನಾಕಿನಿ ಮತ್ತು ಪಾಲಾರ್ ನದಿಗಳು ಇಡೀ ದಕ್ಷಿಣ ಪರ್ಯಾಯ ದ್ವೀಪದ ಜೀವನಾಡಿಗಳಾಗಿವೆ. ನೀರು ನಮ್ಮನ್ನು ಒಗ್ಗೂಡಿಸಬೇಕು, ವಿಭಜಿಸಬಾರದು. ನೀರಿನ ಹಂಚಿಕೆಯಿಂದ ನೀರಿನ ಸಹಕಾರದತ್ತ ಸಾಗುವ ಸಮಯ ಈಗ ಬಂದಿದೆ ಎಂದು ಡಿ.ಕೆ. ಶಿವಕುಮಾರ್ ಕರೆ ನೀಡಿದರು.

ಜೂನ್ 25ರಂದು ಕೇಂದ್ರ ಜಲಶಕ್ತಿ ಸಚಿವರಾದ ಸಿ.ಆರ್. ಪಾಟೀಲ್ ಅವರ ಅಮೂಲ್ಯ ನಾಯಕತ್ವಕ್ಕೆ ಧನ್ಯವಾದ ಸಲ್ಲಿಸುತ್ತಾ, ನಾವು ಜಂಟಿ ಸಾರ್ವಜನಿಕ ಸಭೆಯನ್ನು ನಡೆಸಿದೆವು. ಇದು ಅಂತಾರಾಜ್ಯ ಜಲ ಸಂಬಂಧಗಳ ಇತಿಹಾಸದಲ್ಲಿ ಒಂದು ಮಹತ್ವದ ಮೈಲಿಗಲ್ಲಾಗಿದೆ. ಆಂಧ್ರಪ್ರದೇಶ ಮತ್ತು ತೆಲಂಗಾಣದ ಮುಖ್ಯಮಂತ್ರಿಗಳಾದ ಚಂದ್ರಬಾಬು ನಾಯ್ಡು ಹಾಗೂ ರೇವಂತ್ ರೆಡ್ಡಿ ಅವರು ನನ್ನೊಂದಿಗೆ ಆ ಸಭೆಯಲ್ಲಿ ಭಾಗವಹಿಸಿದ್ದರು ಎಂದು ಡಿಕೆಶಿ ಸ್ಮರಿಸಿಕೊಂಡರು.

### ಜಿಡಿಪಿಗೆ ಶೇ.33ರಷ್ಟು ಕೊಡುಗೆ

ನಮ್ಮ ಐದು ರಾಜ್ಯಗಳು ಭಾರತದ ಒಟ್ಟು ಜನಸಂಖ್ಯೆಯ ಸುಮಾರು ಶೇ.20ರಷ್ಟನ್ನು ಹೊಂದಿದ್ದರೂ, ದೇಶದ ಒಟ್ಟು ಜಿಡಿಪಿಗೆ ಶೇ.33ರಷ್ಟು ಕೊಡುಗೆ ನೀಡುತ್ತಿವೆ. ಅಂದರೆ, ಭಾರತದ ಆರ್ಥಿಕತೆಯಲ್ಲಿ ಉತ್ಪತ್ತಿಯಾಗುವ ಪ್ರತಿ ಮೂರು ರೂಪಾಯಿಗಳಲ್ಲಿ ಒಂದು ರೂಪಾಯಿ ದಕ್ಷಿಣ ಭಾರತದಿಂದ ಬರುತ್ತದೆ. ಭಾರತದ ಆರ್ಥಿಕತೆಯ ಈ ಪ್ರಮುಖ ಎಂಜಿನ್‌ನಲ್ಲಿ ಕರ್ನಾಟಕವು ಅತ್ಯಂತ ಬಲಿಷ್ಠ ಚಾಲಕ ಶಕ್ತಿಗಳಲ್ಲಿ ಒಂದಾಗಿದೆ. ತಂತ್ರಾಂಶದ ರಫ್ತಿನಲ್ಲಿ ನಾವು ದೇಶದಲ್ಲೇ ಪ್ರಥಮ ಸ್ಥಾನದಲ್ಲಿದ್ದು, ಕರ್ನಾಟಕದ ಕೊಡುಗೆ ಶೇ.42ರಷ್ಟಿದೆ. ಸುಮಾರು 1,100 ಗ್ಲೋಬಲ್ ಕೆಪಬಲಿಟಿ ಸೆಂಟರ್‌ಗಳನ್ನು ಹೊಂದಿರುವ ನಾವು, ದೇಶದಲ್ಲೇ ಅತಿ ಹೆಚ್ಚು ಜಿಸಿಸಿಗಳನ್ನು ಹೊಂದಿರುವ ರಾಜ್ಯವಾಗಿದ್ದೇವೆ. 2019ರಿಂದ 2025ರ ಅವಧಿಯಲ್ಲಿ ಭಾರತದ ಒಟ್ಟು ವಿದೇಶಿ ನೇರ ಬಂಡವಾಳ ಈಕ್ವಿಟಿ ಒಳಹರಿವಿನಲ್ಲಿ ಶೇ.21ಕ್ಕಿಂತ ಹೆಚ್ಚಿನ ಪಾಲನ್ನು ಕರ್ನಾಟಕ ಆಕರ್ಷಿಸಿದೆ. ಭಾರತದ ಜನಸಂಖ್ಯೆಯಲ್ಲಿ ಕರ್ನಾಟಕದ ಪಾಲು ಕೇವಲ ಶೇ.5.5ರಷ್ಟಿದ್ದರೂ, ದೇಶದ ಜಿಡಿಪಿಗೆ ನಮ್ಮ ಕೊಡುಗೆ ಶೇ.9ರಷ್ಟಿದೆ. ಕರ್ನಾಟಕದ ತಲಾ ಜಿ.ಎಸ್.ಡಿ.ಪಿ ದೇಶದಲ್ಲೇ ಅತ್ಯಧಿಕವಾಗಿದ್ದು, ಭಾರತದ ತಲಾ ಜಿ.ಎಸ್.ಡಿ.ಪಿ ಗಿಂತ ಎರಡು ಪಟ್ಟು ಹೆಚ್ಚಾಗಿದೆ. ದೇಶದ ಏರೋಸ್ಪೇಸ್ ಉದ್ಯಮದ ಶೇ.60ರಷ್ಟು ಭಾಗ ಕರ್ನಾಟಕದಲ್ಲಿದೆ. ಭಾರತದ ಕಾಫಿ ಉತ್ಪಾದನೆಯ ಶೇ. 70 ಮತ್ತು ಸಂಸ್ಕರಿಸಿದ ಸೌತೆಕಾಯಿ ರಫ್ತಿನ ಶೇ.90 ಕೊಡುಗೆ ನಮ್ಮದಾಗಿದೆ. ಬೆಂಗಳೂರು ಇಂದು ಕ್ಯಾಲಿಫೋರ್ನಿಯಾದ ಸಿಲಿಕಾನ್ ವ್ಯಾಲಿ, ನ್ಯೂಯಾರ್ಕ್, ಬೀಜಿಂಗ್ ಮತ್ತು ಲಂಡನ್‌ಗಳೊಂದಿಗೆ ವಿಶ್ವದ ಪ್ರಮುಖ ಐದು ಎಐ ನಗರಗಳಲ್ಲಿ ಒಂದಾಗಿ ಗುರುತಿಸಿಕೊಂಡಿದೆ ಎಂದು ಡಿ.ಕೆ. ಶಿವಕುಮಾರ್ ಹೇಳಿದರು.

## ಒಳಪುಟಗಳಲ್ಲಿ

ಮಾಜಿ ಪ್ರಧಾನಿ ರಾಜೀವ್ ಗಾಂಧಿ ಜನ್ಮದಿನ ಗೌರವ ನವಭಾರತ ಶಿಲ್ಪಿಗೆ ಪ್ರಧಾನಿ ಮೋದಿ ನಮನ - ಪು.4

ಐಎಎಸ್ ಅಧಿಕಾರಿ ವಿರುದ್ಧ ಹೇಳಿಕೆ: ರವಿಕುಮಾರ್‌ಗೆ ಹೈಕೋರ್ಟ್ ತರಾಟೆ- ಪು.5

ಬಸವ ಜಯಂತಿಗೆ ಅನುಭವ ಮಂಟಪ ಲೋಕಾರ್ಪಣೆ: ಖಂಡ್ರೆ - ಪು.6

### ಎರಡನೇ ವಿಮಾನ ನಿಲ್ದಾಣಕ್ಕೆ 3 ಪ್ರದೇಶಗಳ ಪಟ್ಟಿ: ತುಮಕೂರು ಪ್ರಸ್ತಾವನೆ ಇಲ್ಲ

- ಮೂರು ಜಾಗ ಶಾರ್ಟ್‌ಲಿಸ್ಟ್: ಶಾಸಕ ಜ್ಯೋತಿಪ್ರಕಾಶ್ ಪ್ರಶ್ನೆಗೆ ಸರ್ಕಾರ ಸ್ಪಷ್ಟನೆ

**ಬೆಂಗಳೂರು, ಆ.20:** ಎರಡನೇ ವಿಮಾನ ನಿಲ್ದಾಣಕ್ಕೆ ಮೂರು ಸ್ಥಳಗಳನ್ನು ಶಾರ್ಟ್‌ಲಿಸ್ಟ್ ಮಾಡಲಾಗಿದ್ದು, ಅದರಲ್ಲಿ ತುಮಕೂರು ಜಿಲ್ಲೆಯಲ್ಲಿ ಮಾಡುವ ಪ್ರಸ್ತಾಪ ಇಲ್ಲ ಎಂದು ಸರ್ಕಾರ ಸ್ಪಷ್ಟಪಡಿಸಿದೆ. ವಿಧಾನಸಭೆಯಲ್ಲಿ ತುಮಕೂರು ಶಾಸಕ ಜ್ಯೋತಿ ಗಣೇಶ್ ಕೇಳಿದ ಪ್ರಶ್ನೆಗೆ ಸಚಿವ ಎಂಬಿ ಪಾಟೀಲ್ ಅವರು ಉತ್ತರಿಸಿದರು.

ಎರಡನೇ ವಿಮಾನ ನಿಲ್ದಾಣಕ್ಕೆ ಸೋಮನಹಳ್ಳಿ–ಕನಕಪುರ ರಸ್ತೆ ರಾಮನಗರ, ಚೂಡಹಳ್ಳಿ– ಕನಕಪುರ ರಸ್ತೆ ರಾಮನಗರ, ಗುಡೇಮಾರನಹಳ್ಳಿ ನೆಲಮಂಗಲ ಮೂರು ಸ್ಥಳಗಳನ್ನು ಪಟ್ಟಿಮಾಡಲಾಗಿದೆ ಎಂದು ಸದನಕ್ಕೆ ಮಾಹಿತಿ ನೀಡಿದ್ದಾರೆ. ಜೊತೆಗೆ ಹಾರೋಹಳ್ಳಿ ಕೂಡ ಅಂತಿಮ ಪರಿಶೀಲನೆಯ ಹಂತದಲ್ಲಿದೆ ಎಂದು ಸಚಿವರು ಸ್ಪಷ್ಟಪಡಿಸಿದ್ದಾರೆ.

# ಲೋಕಸಭಾ ಕ್ಷೇತ್ರ ಹೆಚ್ಚಳ ಮಾಡದಂತೆ ಮನವಿ

**ಅಮಿತ್‌ಶಾ ನೇತೃತ್ವದಲ್ಲಿ ನಡೆದ 31ನೇ ದಕ್ಷಿಣ ವಲಯ ಮಂಡಳಿ ಸಭೆಯಲ್ಲಿ ಸಿಎಂ ಡಿ.ಕೆ. ಶಿವಕುಮಾರ್ ಪ್ರಸ್ತಾಪ**

**1971ರ ಜನಸಂಖ್ಯೆ ಆಧಾರವನ್ನು ಗೌರವಿಸುವಂತೆ ಸಲಹೆ**

**ಮಹಾಬಲಿಪುರಂ, ಆ.20:** ಕ್ಷೇತ್ರ ಪುನರ್ವಿಂಗಡಣೆಗೆ 1971ರ ಜನಗಣತಿಯನ್ನು ಆಧಾರ ವಾಗಿಟ್ಟುಕೊಂಡು, ಮುಂದಿನ 25 ವರ್ಷಗಳವರೆಗೆ ಲೋಕಸಭೆಯ ಈಗಿರುವ 543 ಸ್ಥಾನಗಳ ಸಂಖ್ಯೆಯನ್ನು ಯಥಾಸ್ಥಿತಿಯಲ್ಲಿ ಮುಂದುವರಿಸುವಂತೆ ಹಾಗೂ ಈ ಸ್ಥಾನಗಳ ವ್ಯಾಪ್ತಿಯಲ್ಲಿ ಮಹಿಳಾ ಮೀಸಲಾತಿ ಕಲ್ಪಿಸುವಂತೆ ಕೇಂದ್ರ ಸರ್ಕಾರವನ್ನು ಒತ್ತಾಯಿಸುವ ನಿರ್ಣಯವನ್ನು ದಕ್ಷಿಣ ವಲಯ ಮಂಡಳಿ ಅಂಗೀಕರಿಸಬೇಕು ಎಂದು ಕರ್ನಾಟಕ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಗುರುವಾರ ಆಗ್ರಹಿಸಿದರು.



ದಕ್ಷಿಣ ವಲಯ ಮಂಡಳಿಯ 31ನೇ ಸಭೆಯನ್ನುದ್ದೇಶಿಸಿ ಮಾತನಾಡಿದ ಶಿವಕುಮಾರ್, ಜನಸಂಖ್ಯೆ ನಿಯಂತ್ರಿಸುವಲ್ಲಿ ದಕ್ಷಿಣ ರಾಜ್ಯಗಳು ಸಾಧಿಸಿರುವ ಯಶಸ್ಸು ಅವುಗಳ ರಾಜಕೀಯ ಪ್ರಾತಿನಿಧ್ಯವನ್ನು ಕಡಿಮೆ ಮಾಡಲು ಕಾರಣವಾಗಬಾರದು. ಯಾವುದೇ ದಕ್ಷಿಣ ರಾಜ್ಯ ತನ್ನ ಲೋಕಸಭಾ ಸ್ಥಾನಗಳನ್ನು ಕಳೆದುಕೊಳ್ಳುವುದಿಲ್ಲ ಎಂಬ ಭರವಸೆಯನ್ನು ಸ್ವಾಗತಿಸುತ್ತೇವೆ. ಆದರೆ ಪ್ರಾತಿನಿಧ್ಯ ಎಂಬುದು ಕೇವಲ ಸಂಖ್ಯೆಗಳ ವಿಚಾರವಲ್ಲ. ಅದು ಪ್ರಭಾವ ಮತ್ತು ಧ್ವನಿಯ ವಿಚಾರವೂ ಹೌದು. ನಮ್ಮ ಈ ಯಶಸ್ಸು ನಮ್ಮ ಧ್ವನಿಯನ್ನು ದುರ್ಬಲಗೊಳಿಸಲು ಎಂದಿಗೂ ಕಾರಣವಾಗಬಾರದು. ನಮ್ಮ ಆರ್ಥಿಕ ಪ್ರಭಾವಕ್ಕೆ ತಕ್ಕಂತೆ ರಾಜಕೀಯ ಧ್ವನಿಯೂ ಇರಬೇಕು ಎಂದು ಹೇಳಿದರು.

1971ರ ಜನಸಂಖ್ಯೆಯನ್ನು ಆಧಾರವಾಗಿ ಗೌರವಿಸಬೇಕು ಮತ್ತು ಲೋಕಸಭೆಯ ಒಟ್ಟು ಸ್ಥಾನಗಳ ಸಂಖ್ಯೆಯನ್ನು ಬದಲಾಯಿಸಬಾರದು ಎಂದು ಆಗ್ರಹಿಸಿದರು.

ಕ್ಷೇತ್ರ ಪುನರ್ವಿಂಗಡಣೆ ವಿಚಾರವನ್ನು ಮಹಿಳಾ ಮೀಸಲಾತಿಯೊಂದಿಗೆ ಜೋಡಿಸಿದ ಶಿವಕುಮಾರ್, ಹೊಸ ಕ್ಷೇತ್ರ ಪುನರ್ವಿಂಗಡಣೆ ಪ್ರಕ್ರಿಯೆಯ ಕಾರಣಕ್ಕೆ ಮಹಿಳಾ ಮೀಸಲಾತಿಯ ಅನುಷ್ಠಾನವನ್ನು ವಿಳಂಬ ಮಾಡಬಾರದು ಎಂದು ಹೇಳಿದರು.ದಕ್ಷಿಣ ಭಾರತದ ರಾಜಕೀಯ ಧ್ವನಿಯನ್ನು ರಕ್ಷಿಸುವುದು ಭಾರತದ ಒಕ್ಕೂಟ ವ್ಯವಸ್ಥೆಯಲ್ಲಿ ನ್ಯಾಯಸಮ್ಮತತೆಯನ್ನು ಖಚಿತಪಡಿಸುವ ಪ್ರಮುಖ ಭಾಗವಾಗಿದೆ. ನಮ್ಮ ಧ್ವನಿಯಲ್ಲಿ ನ್ಯಾಯ ಎಂಬುದು ಒಂದು ಭಾಗ. ನಮ್ಮ ಸಂಪನ್ಮೂಲಗಳಲ್ಲಿ ನ್ಯಾಯ ಎಂಬುದು ಮತ್ತೊಂದು ಭಾಗ ಎಂದು ಶಿವಕುಮಾರ್ ಹೇಳಿದರು.

### ಮೇಕೆದಾಟು ಯೋಜನೆ: ನೀರಾವರಿಗೆ ನೀರು ಬಳಸಲ್ಲ

"ಇದರ ಜೊತೆಗೆ ನೀರು ಹಾಗೂ ಇತರೆ ಸಮಸ್ಯೆಗಳ ಬಗ್ಗೆ ಮನವಿ ಸಲ್ಲಿಸಿದ್ದೇವೆ. ಈ ವಿಚಾರವಾಗಿ ಪ್ರತ್ಯೇಕ ಸಭೆ ಕರೆದು ಸೂಕ್ತ ರೀತಿಯಲ್ಲಿ ಬಗೆಹರಿಸಲಾಗುವುದು ಎಂದು ಹೇಳಿದ್ದಾರೆ. ಗೃಹಸಚಿವರ ಸಮ್ಮುಖದಲ್ಲಿ ನಾನು ಮೇಕೆದಾಟು ಯೋಜನೆಯಡಿ ಸಂಗ್ರಹವಾಗುವ ಒಂದೇ ಒಂದು ಹನಿ ನೀರನ್ನು ನೀರಾವರಿಗೆ ಬಳಸುವುದಿಲ್ಲ ಎಂದು ತಮಿಳುನಾಡಿಗೆ ಸ್ಪಷ್ಟಪಡಿಸಿದ್ದೇನೆ. ಕುಡಿಯಲು 5 ಟಿಎಂಸಿ ನೀರು ಬಳಸುವುದು ಬಿಟ್ಟರೆ ಉಳಿದ ನೀರನ್ನು ತಮಿಳುನಾಡಿಗೆ ಹರಿಸಲಾಗುವುದು. ಮೇಕೆದಾಟು ಯೋಜನೆಯಿಂದ ತಮಿಳುನಾಡು ಹಾಗೂ ಪಾಂಡಿಚೇರಿ ಪಾಲಿನ ನೀರು ನೀಡಲು ಸಾಧ್ಯ. ಈ ಅಣೆಕಟ್ಟು ನಿರ್ಮಾಣವಾಗುತ್ತಿರುವುದೇ ನಿಮಗಾಗಿ ಎಂದು ಹೇಳಿರುವೆ" ಎಂದು ತಿಳಿಸಿದರು.

## ಪ್ರತಿಪಕ್ಷಗಳ ಗದ್ದಲದ ನಡುವೆಯೇ ಪ್ರಮುಖ ಮೂರು ವಿಧೇಯಕಗಳಿಗೆ ಅಂಗೀಕಾರ

**ಬೆಂಗಳೂರು, ಆ.20:** ಸೋಮವಾರ ಮಧ್ಯಾಹ್ನವೂ ಪ್ರತಿಪಕ್ಷಗಳ ಗದ್ದಲದ ನಡುವೆ ಆರಂಭಗೊಂಡ ವಿಧಾನಸಭೆ ಕಲಾಪದಲ್ಲಿ ಮೂರು ಪ್ರಮುಖ ವಿಧೇಯಕಗಳನ್ನು ಅಂಗೀಕರಿಸಲಾಯಿತು.

2026ನೇ ಸಾಲಿನ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ (ತಿದ್ದುಪಡಿ) ವಿಧೇಯಕವನ್ನು ಮುಖ್ಯಮಂತ್ರಿಯವರ ಪರವಾಗಿ, 2026ನೇ ಸಾಲಿನ ನಾಡಪ್ರಭು ಕೆಂಪೇಗೌಡ ಪಾರಂಪರಿಕ ತಾಣದ ಅಭಿವೃದ್ಧಿ ಪ್ರಾಧಿಕಾರ (ತಿದ್ದುಪಡಿ) ವಿಧೇಯಕವನ್ನು ಉಪಮುಖ್ಯಮಂತ್ರಿ ಅವರ ಪರವಾಗಿ ಹಾಗೂ 2026ನೇ ಸಾಲಿನ ಕರ್ನಾಟಕ ಪಟ್ಟಣ ಮತ್ತು ಗ್ರಾಮಾಂತರ ಯೋಜನೆ (ತಿದ್ದುಪಡಿ) ವಿಧೇಯಕವನ್ನು ನಗರಾಭಿವೃದ್ಧಿ ಸಚಿವ ಡಾ. ಯತೀಂದ್ರ ಸಿದ್ದರಾಮಯ್ಯ ಅವರ ಪರವಾಗಿ ಸಂಸದೀಯ ವ್ಯವಹಾರಗಳ ಸಚಿವ ಕೃಷ್ಣ ಬೈರೇಗೌಡರು ಸಭೆಯ ಅನುಮೋದನೆಗಾಗಿ ಮಂಡಿಸಿದರು. ಸಭಾಧ್ಯಕ್ಷರಾದ ಜಿ.ಎನ್. ಪಾಟೀಲ್ ಅವರು ಈ ಮೂರು ವಿಧೇಯಕಗಳನ್ನು ಧ್ವನಿ ಮತಕ್ಕೆ ಹಾಕುವ ಮೂಲಕ ಅನುಮೋದನೆ ದೊರಕಿದೆ ಎಂದು ಘೋಷಿಸಿದರು.



**2026ನೇ ಸಾಲಿನ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ (ತಿದ್ದುಪಡಿ) ವಿಧೇಯಕ:** ಸಾರ್ವಜನಿಕರು ಭೂಹಂಚಿಕೆಯನ್ನು ಪಡೆಯಲು ಮುಂದೆ ಬರುವುದನ್ನು ಪ್ರೋತ್ಸಾಹಿಸುವ ಸಲುವಾಗಿ ಚಾಲ್ತಿಯಲ್ಲಿರುವ ದರಗಳ ಶೇಕಡಾ ಐವತ್ತರಷ್ಟು ಹಂಚಿಕೆ ಚಾರ್ಜುಗಳನ್ನು ಕಡಿಮೆ ಮಾಡುವ ಸಲುವಾಗಿ ಹಾಗೂ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಫ್ಲಾಟ್‌ಗಳು, ವಿಲ್ಲಾಗಳು, ಬಡಾವಣೆಗಳ ದುರಸ್ತಿ ಮತ್ತು ನಿರ್ವಹಣೆಯಂತಹ ತ್ವರಿತ ಕಾಮಗಾರಿಗಳಿಗೆ ಅನುಕೂಲವಾಗುವಂತೆ ಮತ್ತು ವಿಳಂಬವನ್ನು ನೀಗಿಸಲು ಹಾಗೂ ಆಯವ್ಯಯ

■ ...5ನೇ ಪುಟಕ್ಕೆ

**ಖನಿಜಗಳ ಮೇಲೆ ತೆರಿಗೆ ವಿಧಿಸುವ ರಾಜ್ಯಗಳ ಅಧಿಕಾರ ಮೊಟಕು**

## ಸುಪ್ರೀಂ ಮೆಟ್ಟಿಲೇರಲು ಮುಂದಾದ ಕರ್ನಾಟಕ, ಕೇರಳ, ತೆಲಂಗಾಣ ಸರ್ಕಾರ

**ವಿವಾದಾತ್ಮಕ ಗಣಿ ಮತ್ತು ಖನಿಜ ತಿದ್ದುಪಡಿ ಕಾಯ್ದೆಗೆ ವಿರೋಧ**

**ನವದೆಹಲಿ, ಆ.20:** ಖನಿಜ ಮತ್ತು ಖನಿಜಯುಕ್ತ ಭೂಮಿಯ ಮೇಲೆ ತೆರಿಗೆ ವಿಧಿಸುವ ರಾಜ್ಯಗಳ ಅಧಿಕಾರವನ್ನು ಮೊಟಕುಗೊಳಿಸುವ ವಿವಾದಾತ್ಮಕ ಗಣಿ ಮತ್ತು ಖನಿಜ (ಅಭಿವೃದ್ಧಿ ಮತ್ತು ನಿಯಂತ್ರಣ) ತಿದ್ದುಪಡಿ ಕಾಯ್ದೆಯನ್ನು ಪ್ರಶ್ನಿಸಿ ಸುಪ್ರೀಂ ಕೋರ್ಟ್ ಮೆಟ್ಟಿಲೇರಲು ಕರ್ನಾಟಕ, ಕೇರಳ ಮತ್ತು ತೆಲಂಗಾಣದ ಕಾಂಗ್ರೆಸ್ ಸರ್ಕಾರಗಳು ಮುಂದಾಗಿವೆ.

ಈ ಕಾಯ್ದೆಯನ್ನು ಹೆಚ್ಚಿನ ಪರಿಶೀಲನೆಗಾಗಿ ಸಂಸದೀಯ ಸ್ಥಾಯಿ ಸಮಿತಿಗೆ ಕಳುಹಿಸಬೇಕೆಂಬ ವಿರೋಧ ಪಕ್ಷಗಳ ಬೇಡಿಕೆಯ ನಡುವೆಯೇ, ಇತ್ತೀಚೆಗೆ ಮುಕ್ತಾಯಗೊಂಡ ಸಂಸತ್ತಿನ ಮುಂಗಾರು ಅಧಿವೇಶನದಲ್ಲಿ ಅಂಗೀಕರಿಸಲಾಗಿತ್ತು. ವಿರೋಧ ಪಕ್ಷಗಳ ತೀವ್ರ ಪ್ರತಿಭಟನೆಯ ನಡುವೆಯೇ ಲೋಕಸಭೆಯಲ್ಲಿ ಈ ವಿಧೇಯಕವನ್ನು ಕೇವಲ ಐದು ನಿಮಿಷಗಳಲ್ಲಿ ಮತ್ತು ರಾಜ್ಯಸಭೆಯಲ್ಲಿ 12 ಸದಸ್ಯರ ಚರ್ಚೆಯೊಂದಿಗೆ 50 ನಿಮಿಷಗಳಲ್ಲಿ ಅಂಗೀಕರಿಸಲಾಗಿತ್ತು. ಗಣಿ ಮತ್ತು ಖನಿಜ (ಅಭಿವೃದ್ಧಿ ಮತ್ತು ನಿಯಂತ್ರಣ) ತಿದ್ದುಪಡಿ ಕಾಯ್ದೆಯನ್ನು ಪ್ರಶ್ನಿಸಿ ಅರ್ಜಿ ಸಲ್ಲಿಸಲು ಸಿದ್ಧತೆ ಮಾಡಿಕೊಳ್ಳಲಾಗಿದೆ ಎಂದು ಕಾಂಗ್ರೆಸ್ ಮೂಲಗಳು ತಿಳಿಸಿವೆ. ಸಂಸತ್ತಿನಲ್ಲಿ ಅಂಗೀಕಾರಗೊಂಡಿರುವ ಗಣಿ ಮತ್ತು ಖನಿಜ ತಿದ್ದುಪಡಿ ಕಾಯ್ದೆಗೆ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಅಂಕಿತ ಹಾಕಿದ್ದಾರೆ. ಖನಿಜಗಳ ಮೇಲಿನ ರಾಜಧನ ತೆರಿಗೆಯಲ್ಲ. ಹೀಗಾಗಿ ರಾಜ್ಯ ಸರ್ಕಾರಗಳು ಖನಿಜಗಳ ಮೇಲೆ ಪ್ರತ್ಯೇಕವಾಗಿ ತೆರಿಗೆ ವಿಧಿಸಬಹುದು ಎಂದು 2024ರಲ್ಲಿ ಸುಪ್ರೀಂ ಕೋರ್ಟ್‌ನ ಒಂಬತ್ತು ನ್ಯಾಯಾಧೀಶರ ಪೀಠವು ನೀಡಿದ್ದ ತೀರ್ಪನ್ನು ರದ್ದುಗೊಳಿಸುವ ಉದ್ದೇಶವನ್ನು ಈ ಕಾಯ್ದೆ ಹೊಂದಿದೆ ಎಂಬುದು ಕಾಂಗ್ರೆಸ್ ಸರ್ಕಾರಗಳ ವಾದ.

**ಕಂದಾಯ ನಿರೀಕ್ಷೆಗೆ ದೊಡ್ಡ ಹೊಡೆತ:** ಗಣಿ ಮತ್ತು ಖನಿಜ ತಿದ್ದುಪಡಿ ಕಾಯ್ದೆ ಅಂಗೀಕಾರದಿಂದಾಗಿ ಕಬ್ಬಿಣದ ಅದಿರು ಸಮೃದ್ಧವಾಗಿರುವ ಕರ್ನಾಟಕದ ಕಂದಾಯ ನಿರೀಕ್ಷೆಗಳಿಗೆ ದೊಡ್ಡ ಹೊಡೆತ ನೀಡಲಿದೆ ಎಂದು ಹೇಳಲಾಗಿದೆ. ಈ ಕಾಯ್ದೆಯು ಖನಿಜಗಳ ಮೇಲಿನ ರಾಜ್ಯಗಳ ಹಕ್ಕನ್ನು ಕಸಿದುಕೊಳ್ಳಲು ಯತ್ನಿಸುತ್ತಿದ್ದು, ಇದು ಒಕ್ಕೂಟ ವ್ಯವಸ್ಥೆಯ ತತ್ವಗಳಿಗೆ ವಿರುದ್ಧವಾಗಿದೆ ಎಂದು ಕೇರಳಂ ಮುಖ್ಯಮಂತ್ರಿ ವಿ.ಡಿ. ಸತೀಶನ್ ಅವರು ಈ ಹಿಂದೆ ಹೇಳಿದ್ದರು.ಈ ವಿಧೇಯಕವನ್ನು ಹೆಚ್ಚಿನ ಪರಿಶೀಲನೆಗಾಗಿ ಸಂಸದೀಯ ಸ್ಥಾಯಿ ಸಮಿತಿಗೆ ಕಳುಹಿಸಬೇಕೆಂದು ಕಾಂಗ್ರೆಸ್ ಸಂಸದ ಎಸ್. ಶಶಿಕಾಂತ್ ಸೆಂಥಿಲ್ ಒತ್ತಾಯಿಸಿದ್ದರು. ಈ ವಿಧೇಯಕವು ಖನಿಜಗಳು ಮತ್ತು ಖನಿಜಯುಕ್ತ ಭೂಮಿಯ ಮೇಲೆ ತೆರಿಗೆ, ಸೆಸ್ ಅಥವಾ ಇತರ ಸುಂಕಗಳನ್ನು ವಿಧಿಸುವ ರಾಜ್ಯ ಸರ್ಕಾರಗಳ ಅಧಿಕಾರದ ಮೇಲೆ ಹೆಚ್ಚಿನ ನಿರ್ಬಂಧಗಳನ್ನು ಹೇರುತ್ತದೆ. ಜತೆಗೆ, ಕೇಂದ್ರ ಸರ್ಕಾರಕ್ಕೆ ಷರತ್ತುಗಳನ್ನು ವಿಧಿಸಲು ಅವಕಾಶ ನೀಡುತ್ತದೆ ಎಂದೂ ಅವರು ಹೇಳಿದ್ದರು.ರಾಜ್ಯಗಳ ಮೇಲೆ ಪ್ರಸ್ತಾಪಿಸಲಾದ ನಿರ್ಬಂಧಗಳು ಖನಿಜ ಉತ್ಪಾದಿಸುವ ರಾಜ್ಯಗಳ ಕಂದಾಯ ಮತ್ತು ಹಣಕಾಸಿನ ಸ್ವಾಯತ್ತತೆಯ ಮೇಲೆ ಗಂಭೀರ ಪರಿಣಾಮ ಬೀರುತ್ತವೆ ಎಂದೂ ಸೆಂಥಿಲ್ ದೂರಿದ್ದರು.

# ಒಬ್ಬ ಸಚಿವರಿಗಾಗಿ 224 ಶಾಸಕರ ಹಕ್ಕುಚ್ಯುತಿ: ಪ್ರತಿಪಕ್ಷ ನಾಯಕ ಅಶೋಕ್ ಕಿಡಿ

**ಬೆಂಗಳೂರು, ಆ.20:** ವಾಲ್ಮೀಕಿ ಅಭಿವೃದ್ಧಿ ನಿಗಮದ ಹಣ ನುಂಗಿದ ಸಚಿವ ಬಿ.ನಾಗೇಂದ್ರ ರಾಜೀನಾಮೆ ನೀಡುವವರೆಗೂ ನಾವು ಹೋರಾಟ ಮುಂದುವರಿಸುತ್ತೇವೆ. ಒಬ್ಬ ಸಚಿವರಿಗಾಗಿ 224 ಶಾಸಕರ ಹಕ್ಕು ಚ್ಯುತಿ ಆಗುತ್ತಿದೆ ಎಂದು ಪ್ರತಿಪಕ್ಷ ನಾಯಕ ಆರ್.ಅಶೋಕ ವಿಧಾನಸಭೆಯಲ್ಲಿಂದು ಹೇಳಿದರು.

ಸದನದಲ್ಲಿ ಮಾತನಾಡಿದ ಅವರು, ನಾವು ನಾಲ್ಕನೇ ದಿನವೂ ಧರಣಿ ಮುಂದುವರಿಸಿದ್ದೇವೆ. ಈ ಬಗ್ಗೆ ಸದನದಲ್ಲಿ ಮಾತನಾಡಿದ ಸಚಿವ ಡಾ.ಜಿ.ಪರಮೇಶ್ವರ್ ಅವರು ಯಾವುದೇ ಕೇಸ್ ಇಲ್ಲ ಎಂದಿದ್ದಾರೆ. ಆದರೆ ಅವರ ಮೇಲೆ 24 ಚಾರ್ಜ್‌ಶೀಟ್‌ಗಳಿವೆ. ಪರಮೇಶ್ವರ್ ಅವರು ಸದನಕ್ಕೆ ತಪ್ಪು ಮಾಹಿತಿ ನೀಡುತ್ತಿದ್ದಾರೆ. ಸಚಿವ ನಾಗೇಂದ್ರ ಅವರ ವಿರುದ್ಧ ಇರುವ ಪ್ರಕರಣಗಳ ಸಂಪೂರ್ಣ ದಾಖಲೆ ನನ್ನ ಬಳಿ ಇದ್ದು, ಅದರ ಸಂಖ್ಯೆಗಳನ್ನು ಕೂಡ ನೀಡುತ್ತೇನೆ ಎಂದರು.

### ಸಚಿವ ನಾಗೇಂದ್ರ ವಿರುದ್ಧ ಹೋರಾಟ ಮುಂದುವರಿಕೆ



ಆತ್ಮಹತ್ಯೆ ಮಾಡಿಕೊಂಡ ಅಧಿಕಾರಿ ಚಂದ್ರಶೇಖರನ್ ಅವರ ಪತ್ನಿಗೆ ಪಿಂಚಣಿ ನೀಡಿಲ್ಲ, ಉದ್ಯೋಗ ನೀಡಿಲ್ಲ. ಆದರೆ ನಾಗೇಂದ್ರ ಅವರಿಗೆ ಮಾತ್ರ ಸಚಿವ ಸ್ಥಾನ ನೀಡಲಾಗಿದೆ.

### ತನಿಖೆಗೆ ರಾಜ್ಯಪಾಲರ ಅನುಮತಿ ಕೇಳಿದ್ದೇಕೆ?

ಸಿಬಿಐ ಚಾರ್ಜ್‌ಶೀಟ್‌ನಲ್ಲಿ ಸಚಿವ ನಾಗೇಂದ್ರ ಅವರ ಹೆಸರಿಲ್ಲ ಎಂದು ಸಚಿವ ಡಾ.ಜಿ.ಪರಮೇಶ್ವರ್ ಸುಳ್ಳು ಹೇಳಿದ್ದಾರೆ. ಹಾಗಿದ್ದಲ್ಲಿ ತನಿಖೆಗೆ ರಾಜ್ಯಪಾಲರ ಅನುಮತಿಯನ್ನು ಏಕೆ ಕೇಳಲಾಯಿತು. ಬರಗಾಲ, ಕೆಪಿಎಸ್‌ಸಿ ಹಗರಣ, ಪಿಂಚಣಿ ಬಾಕಿ ಮೊದಲಾದ ವಿಷಯಗಳ ಬಗ್ಗೆ ಚರ್ಚಿಸಬೇಕಿದೆ. ಒಬ್ಬ ಸಚಿವನಿಗಾಗಿ 224 ಶಾಸಕರ ಹಕ್ಕನ್ನು ಕಸಿಯಲಾಗುತ್ತಿದೆ. ಕೂಡಲೇ ಸಚಿವರ ರಾಜೀನಾಮೆ ಪಡೆದು ಚರ್ಚೆ ಆರಂಭಿಸಲು ಅವಕಾಶ ಕೊಡಿ ಎಂದು ಅಶೋಕ್ ಆಗ್ರಹಿಸಿದರು.

ಸರ್ಕಾರಕ್ಕೆ ಮಾನ ಮರ್ಯಾದೆ ಇದ್ದರೆ ಬರಗಾಲ ಘೋಷಣೆ ಮಾಡಬೇಕು. ಅದಕ್ಕಿಂತ ಮೊದಲು ಚರ್ಚೆ ಮಾಡಬೇಕಿಲ್ಲ. ಬರಗಾಲ ಇದೆ ಎಂಬುದನ್ನು ಸರ್ಕಾರವೇ ಒಪ್ಪಿಲ್ಲ. ಬರಗಾಲಕ್ಕೆ ಇಷ್ಟು ಹಣ ನೀಡುತ್ತೇವೆ, ಕುಡಿಯುವ ನೀರಿಗೆ ಇಷ್ಟು ಹಣ ನೀಡಿದ್ದೇವೆ ಎಂದು ಸರ್ಕಾರ ಹೇಳಬೇಕು. ನಯಾಪೈಸೆ ಪರಿಹಾರ ಬಿಡುಗಡೆ ಮಾಡದೆ ಬರಗಾಲದ ಬಗ್ಗೆ ಚರ್ಚೆ ಮಾಡುವುದರಲ್ಲಿ ಅರ್ಥವಿಲ್ಲ ಎಂದರು.


ಸದನದ ಹೊರಗೆ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ವಾಲ್ಮೀಕಿ ಅಭಿವೃದ್ಧಿ ನಿಗಮದ 187 ಕೋಟಿ ರೂ. ದಲಿತರಿಗೆ ಸೇರಿದೆ. ಸಚಿವ ನಾಗೇಂದ್ರ ದಲಿತ ಹೆಸರಿನಲ್ಲಿ ರಕ್ಷಣೆ ಪಡೆಯಲು ನೋಡುತ್ತಿದ್ದಾರೆ. ಆದರೆ ನಿಗಮದ ಹಣ ಸಂಪೂರ್ಣವಾಗಿ ದಲಿತರಿಗೆ ಸೇರಿದೆ. ಕೋಟ್ಯಂತರ ದಲಿತರು ಬೇಕಾ ಅಥವಾ ಒಬ್ಬ ನಾಗೇಂದ್ರ ಬೇಕಾ ಎಂದು ಕಾಂಗ್ರೆಸ್ ಸರ್ಕಾರ ತೀರ್ಮಾನಿಸಬೇಕಿದೆ. ಕೋಟ್ಯಂತರ ಬಡ ದಲಿತರು ಮನೆ ಕಟ್ಟಲು, ಸಾಲ ಪಡೆಯಲು ಕಾಯುತ್ತಿದ್ದಾರೆ. ಅಂತಹ ಬಡವರಿಗಾಗಿ ಸಚಿವರ ರಾಜೀನಾಮೆ ಪಡೆಯಬೇಕು ಎಂದರು.

### ವಂದೇಮಾತರಂ ಮೊಟಕು: ಹರಿಪ್ರಸಾದ್ ಸಮರ್ಥನೆ



ಸಿಡಬ್ಲ್ಯುಸಿ ಸಭೆಯಲ್ಲಿ ವಂದೇಮಾತರಂ ರಾಷ್ಟ್ರಗೀತೆಯನ್ನು ಎರಡು ಸಾಲುಗಳಿಗೆ ಮೊಟಕುಗೊಳಿಸುವ ನಿರ್ಧಾರದ ವಿರುದ್ಧ ಬಿಜೆಪಿ ನಾಯಕರು ಕಿಡಿಕಾರಿದ್ದಾರೆ. ವಂದೇಮಾತರಂ ಬ್ರಿಟಿಷರ ವಿರುದ್ಧದ ಹೋರಾಟಕ್ಕೆ ಧ್ವನಿಯಾಗಿದ್ದ ಗೀತೆ. ಅಂಥ ರಾಷ್ಟ್ರಗೀತೆಗೆ ಗೌರವ ಕೊಡಲು ಕಾಂಗ್ರೆಸ್‌ಗೆ ಮನಸ್ಸಿಲ್ಲ ಎಂದು ಬಿಜೆಪಿ ಶಾಸಕ ಅರವಿಂದ್ ಬೆಲ್ಲದ್ ವಾಗ್ದಾಳಿ ನಡೆಸಿದ್ದಾರೆ. ಇದಕ್ಕೆ ತಿರುಗೇಟು ನೀಡಿರುವ ಕಾಂಗ್ರೆಸ್ ಮುಖಂಡ ಬಿ.ಕೆ. ಹರಿಪ್ರಸಾದ್, ಬಿಜೆಪಿಯವರಿಗೆ ತಾಕತ್ತಿದ್ದರೆ ಸಂಘದಲ್ಲಿ ರಾಷ್ಟ್ರಗೀತೆ ಹಾಡಲಿ. ನಾವು ಹಾಡುವುದೇ ಎರಡು ಚರಣ ಮಾತ್ರ. ಸಿಡಬ್ಲ್ಯುಸಿ ಸಭೆಯಲ್ಲಿ ಸರಿಯಾದ ನಿರ್ಣಯವನ್ನೇ ತೆಗೆದುಕೊಂಡಿದ್ದಾರೆ ಎಂದು ಸಮರ್ಥಿಸಿಕೊಂಡಿದ್ದಾರೆ. ಮತ್ತೊಂದೆಡೆ ಮಾತನಾಡಿದ ಅಶೋಕ್, ಬಿಜೆಪಿಯವರು ವಂದೇಮಾತರಂ ಹಾಡನ್ನು ಬರೆದಿಲ್ಲ. ಹೋರಾಟಗಾರ ಬಂಕಿಮಚಂದ್ರ ಚಟರ್ಜಿ ಬರೆದ ವಂದೇಮಾತರಂ ಹಾಡನ್ನು ಸ್ವಾತಂತ್ರ್ಯ ಹೋರಾಟಗಾರರು ಪೂರ್ತಿಯಾಗಿ ಹಾಡುತ್ತಿದ್ದರು. ಇದು ಅಂದಿನ ಯುವಜನರಿಗೆ ದೊಡ್ಡ ಪ್ರೇರಣೆಯಾಗಿತ್ತು. ಅಂತಹ ಹೋರಾಟಗಾರರಿಗೆ ಬೆಲೆ ಕೊಡದ ಕಾಂಗ್ರೆಸ್‌ನ ಯೋಗ್ಯತೆ ಈಗ ಗೊತ್ತಾಗಿದೆ. ಸ್ವಾತಂತ್ರ್ಯ ದಿನಾಚರಣೆಯಂದು ವಂದೇಮಾತರಂ ಗೀತೆ ಹಾಡುವಾಗ ಮಲ್ಲಿಕಾರ್ಜುನ ಖರ್ಗೆ, ಸೋನಿಯಾ ಗಾಂಧಿ ಹಾಗೂ ರಾಹುಲ್ ಗಾಂಧಿ ಗೀತೆಗೆ ಗೌರವ ನೀಡಲಿಲ್ಲ. ಇವರು ಭಾರತದವರೇ ಅಥವಾ ಇಟಲಿಯವರೇ ಎಂದು ಪ್ರಶ್ನೆ ಮಾಡಿಕೊಳ್ಳಬೇಕಿದೆ ಎಂದಿದ್ದಾರೆ.

## ನಿತ್ಯ ಪಂಚಾಂಗ 21.08.2026 ಶುಕ್ರವಾರ



ಶ್ರೀಶಕ 1949 ಶ್ರೀ ಪರಾಭವ ನಾಮ ಸಂವತ್ಸರ, ದಕ್ಷಿಣಾಯಣ ಗ್ರೀಷ್ಮ ಋತು, ಚಾಂದ್ರಮಾನ, ಆಷಾಢ-ಶ್ರಾವಣ ಮಾಸ

ಶ್ರಾವಣ ಶುದ್ಧ, ನವಮಿ, ಅನುರಾಧ ನಕ್ಷತ್ರ, ವರಮಹಾಲಕ್ಷ್ಮೀ ವ್ರತ, ದೇವಿ ಪವಿತ್ರಾರೋಪಣ, ಕೋಲಾರ ಡಿ. ಕೈವಾರ ಸತ್ಯನಾರಾಯಣ ರಥ

| ದಿನ | ರಾಹುಕಾಲ | ಯಮಗಂಡ | ಗುಳಿಕಕಾಲ |
|---|---|---|---|
| ಭಾನು | ಸ. 5.04– 6.33 | 12.00– 1.30 | 3.00– 4.00 |
| ಸೋಮ | ಬೆ. 7.20– 9.04 | 10.30–12.00 | 1.30– 3.00 |
| ಮಂಗಳ | ಮ. 3.25– 4.59 | 9.00–10.30 | 12.00– 1.30 |
| ಬುಧ | ಮ.12.16– 1.50 | 7.30– 9.00 | 10.30– 12.00 |
| ಗುರು | ಮ. 1.50– 3.29 | 6.00– 7.30 | 9.00– 10.30 |
| ಶುಕ್ರ | ಬೆ.10.42–12.16 | 3.00– 4.30 | 7.30– 9.00 |
| ಶನಿ | ಬೆ. 9.07–10.41 | 1.30– 3.00 | 6.00– 7.30 |



31ನೇ ದಕ್ಷಿಣ ವಲಯ ಮಂಡಳಿ ಸಭೆಗೂಮುನ್ನ ಸಿಎಂ ಡಿ.ಕೆ. ಶಿವಕುಮಾರ್ ಮತ್ತು ಗೃಹ ಸಚಿವ ಪ್ರಿಯಾಂಕ್ ಖರ್ಗೆ ಅವರು ಕೇರಳ ಮುಖ್ಯಮಂತ್ರಿ ವಿ.ಡಿ.ಸತೀಶನ್, ತೆಲಂಗಾಣ ಡಿಸಿಎಂ ಭಟ್ಟಿ ವಿಕ್ರಮಾರ್ಕ, ತೆಲಂಗಾಣ ಕೃಷಿ ಸಚಿವ ತುಮ್ಮಲ ನಾಗೇಶ್ವರ ರಾವ್ ಅವರನ್ನು ಭೇಟಿ ಮಾಡಿ ಸಂವಾದ ನಡೆಸಿದರು. ನಮ್ಮ ಹಂಚಿಕೆಯ ಆದ್ಯತೆ ಮತ್ತು ನಮ್ಮ ಪ್ರದೇಶದ ಪ್ರಗತಿ ಮತ್ತು ಅಭಿವೃದ್ಧಿಗೆ ಮುಖ್ಯವಾದ ವಿಷಯಗಳ ಕುರಿತು ಅಭಿಪ್ರಾಯ ವಿನಿಮಯ ಮಾಡಿಕೊಂಡರು.

# ರಾಷ್ಟ್ರಪತಿ ಭವನದಲ್ಲಿ 'ಆರ್ಟಿಸ್ಟ್ ಇನ್ ರೆಸಿಡೆನ್ಸಿ'

**ರಾಜ್ಯದ ಕಮಲ್ ಅಹ್ಮದ್ ಮಾಳೇಕೊಪ್ಪ ಸೇರಿ 12 ಕಲಾವಿದರು ಭಾಗಿ**

**ಕಲಾವಿದರ ಸಾಧನೆಗೆ ರಾಷ್ಟ್ರಪತಿ ದ್ರೌಪದಿ ಮುರ್ಮು ಶ್ಲಾಘನೆ**




**ಕಾರ್ಕಳ, ಆ.20:** ಉಡುಪಿ ಜಿಲ್ಲೆಯ ಕಾರ್ಕಳದಲ್ಲಿ ವಾಸ್ತವ್ಯವಿರುವ ಗದಗ ಜಿಲ್ಲೆಯ ಖ್ಯಾತ ಚಿತ್ರಕಲಾವಿದ, ವಿಜಯನಗರ ಗರುಡಾದ್ರಿ ಶೈಲಿಯಿಂದ ಪ್ರಭಾವಿತರಾದ ಕಮಲ್ ಅಹ್ಮದ್ ಮಾಳೇಕೊಪ್ಪ ಅವರಿಗೆ ರಾಷ್ಟ್ರಪತಿ ಭವನದಲ್ಲಿ ನಡೆದ ಪ್ರತಿಷ್ಠಿತ "ಆರ್ಟಿಸ್ಟ್ ಇನ್ ರೆಸಿಡೆನ್ಸಿ" ಕಾರ್ಯಕ್ರಮದಲ್ಲಿ ಭಾಗವಹಿಸುವ ಮೂಲಕ ಭಾರತದ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರಿಂದ ಗೌರವ ದೊರಕಿದೆ.

ನವದೆಹಲಿಯ ರಾಷ್ಟ್ರಪತಿ ಭವನದಲ್ಲಿ 10 ದಿನ ಆಯೋಜಿಸಲಾದ ಈ ವಿಶೇಷ ಕಾರ್ಯಕ್ರಮದಲ್ಲಿ ಭಾರತದೆಲ್ಲೆಡೆಯ ವಿವಿಧ ಸಾಂಪ್ರದಾಯಿಕ ಕಲಾ ಪ್ರಕಾರಗಳನ್ನು ಪ್ರತಿನಿಧಿಸುವ 12 ಕಲಾವಿದರು ಭಾಗವಹಿಸಿದ್ದರು. ಇದರಲ್ಲಿ ಬನಾರಸ್ ಮ್ಯೂರಲ್, ಥಾಂಕಾ, ನಾಯಕ್, ಕೇರಳ ಮ್ಯೂರಲ್, ಬಸೋಹ್ಲಿ, ಸುರಪುರ ಹಾಗೂ ಮೈಸೂರು ಶೈಲಿಯ ಕಲಾವಿದರು ಸೇರಿದ್ದರು. ಅವರೆಲ್ಲರೂ ರಾಷ್ಟ್ರಪತಿ ಭವನದಲ್ಲೇ ವಾಸ್ತವ್ಯ ಹೂಡಿ ತಮ್ಮ ಕಲಾಕೃತಿಗಳನ್ನು ಪ್ರದರ್ಶಿಸಿದರು.

ಕಮಲ್ ಅಹ್ಮದ್ ಮಾಳೇಕೊಪ್ಪ ಅವರು ಕಳೆದ 3 ದಶಕಗಳಿಂದ ವಿಜಯನಗರ ಗರುಡಾದ್ರಿ ಶೈಲಿಯಿಂದ ಪ್ರಭಾವಿತರಾಗಿ ತಮ್ಮದೇ ಆದ ಒಂದು ಶೈಲಿಯನ್ನು ಕಂಡುಕೊಂಡು ಮಿನಿಯೇಚರ್ ಚಿತ್ರಕಲೆಯಲ್ಲಿ ತೊಡಗಿಸಿಕೊಂಡಿದ್ದಾರೆ. ಕಮಲ್ ಅಹ್ಮದ್ ಮಾಳೇಕೊಪ್ಪ ಅವರು ರಾಷ್ಟ್ರಪತಿ ಭವನದಲ್ಲಿ ಒಂದು ಕಲಾಕೃತಿಯನ್ನು ರಚಿಸಿದ್ದಾರೆ. ಅಲ್ಲದೇ ಒಂದು ಕಲಾಕೃತಿಯನ್ನು ಪ್ರದರ್ಶಿಸಿದರು. ರಾಷ್ಟ್ರಪತಿ ಭವನದಲ್ಲಿ 2 ಕಲಾಕೃತಿಗಳನ್ನು ಪ್ರದರ್ಶಿಸಿದರು. ಅವುಗಳಲ್ಲಿ 1 ನ್ನು 'ಪಂಚತಂತ್ರ' ಕಥಾವಸ್ತುವಿನ ಆಧಾರದ ಮೇಲೆ ರಚಿಸಲಾಗಿತ್ತು.

ಇದೇ ಸಂದರ್ಭದಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಕಲಾವಿದರೊಂದಿಗೆ ಸಂವಾದ ನಡೆಸಿ, ಅವರ ಕಲಾಕೃತಿಗಳನ್ನು ವೀಕ್ಷಿಸಿ ಮೆಚ್ಚುಗೆ ವ್ಯಕ್ತಪಡಿಸಿದರು. ಭಾರತದ ಸಾಂಪ್ರದಾಯಿಕ ಕಲಾ ಪರಂಪರೆಯನ್ನು ಸಂರಕ್ಷಿಸಿ, ಮುಂದಿನ ಪೀಳಿಗೆಗೆ ಪರಿಚಯಿಸುವಲ್ಲಿ ಕಲಾವಿದರ ಕೊಡುಗೆ ಶ್ಲಾಘನೀಯವಾಗಿದೆ ಎಂದು ಶ್ಲಾಘಿಸಿದರು.

ಆರ್ಟಿಸ್ಟ್ ಇನ್ ರೆಸಿಡೆನ್ಸಿ ಕಾರ್ಯಕ್ರಮವು ಭಾರತದ ಶ್ರೀಮಂತ ಕಲಾ ಪರಂಪರೆಯನ್ನು ಆಚರಿಸುವ, ದೇಶದ ಸಾಂಪ್ರದಾಯಿಕ ಕಲೆಗಳನ್ನು ಉಳಿಸಿ ಬೆಳೆಸುವ ಹಾಗೂ ಭಾರತದ ಸಾಂಸ್ಕೃತಿಕ ಗುರುತನ್ನು ಮತ್ತಷ್ಟು ಬಲಪಡಿಸುವ ಉದ್ದೇಶದಿಂದ ಆಯೋಜಿಸಲಾದ ವಿಶೇಷ ಕಾರ್ಯಕ್ರಮವಾಗಿದೆ. ಗದಗ ಜಿಲ್ಲೆಯ ಕಮಲ್ ಅಹ್ಮದ್ ಮಾಳೇಕೊಪ್ಪ ಅವರ ಆಯ್ಕೆ ವಿಜಯನಗರ ಗರುಡಾದ್ರಿಯಿಂದ ಪ್ರಭಾವಿತ ಚಿತ್ರಕಲೆಗೆ ರಾಷ್ಟ್ರೀಯ ಮಟ್ಟದಲ್ಲಿ ಮತ್ತಷ್ಟು ಗೌರವ ಮತ್ತು ಮನ್ನಣೆಯನ್ನು ತಂದುಕೊಟ್ಟಿದೆ.

ಕಮಲ್ ಅಹ್ಮದ್ ಅವರು ಉಡುಪಿ ಜಿಲ್ಲೆಯ ಹೆಬ್ರಿ ತಾಲೂಕಿನ ಶಿವಪುರ ಸರ್ಕಾರಿ ಪ್ರೌಢಶಾಲೆಯಲ್ಲಿ 18 ವರ್ಷಗಳ ಕಾಲ ಚಿತ್ರಕಲಾ ಶಿಕ್ಷಕರಾಗಿ ಸೇವೆ ಸಲ್ಲಿಸಿದವರು. ಕಮಲ್ ಅಹ್ಮದ್ ಅವರ ವಿವಿಧ ಕಲಾಕೃತಿಗಳು ಹೆಬ್ರಿ ಸರ್ಕಾರಿ ಕಚೇರಿ ಕಟ್ಟಡಗಳು, ವಿವಿಧ ಸಂಸ್ಥೆಗಳ ಗೋಡೆಗಳಲ್ಲಿ ಮೂಡಿಬಂದಿವೆ.

ರಾಷ್ಟ್ರಪತಿ ಭವನದ ಪ್ರತಿಷ್ಠಿತ ಕಾರ್ಯಕ್ರಮಕ್ಕೆ ನನ್ನನ್ನು ಆಯ್ಕೆ ಮಾಡಿರುವುದು ನನಗೆ ಅತ್ಯಂತ ಖುಷಿ ನೀಡಿದೆ. ಇದು ನನ್ನ ಜೀವನದ ಮರೆಯಲಾಗದ ಕ್ಷಣವಾಗಿದೆ. ವಿಜಯನಗರ ಗರುಡಾದ್ರಿ-ಪ್ರೇರಿತ ಚಿತ್ರಕಲೆ ಶೈಲಿಗೆ ರಾಷ್ಟ್ರೀಯ ಮನ್ನಣೆ ಮತ್ತು ಗೌರವವನ್ನು ತಂದಿದೆ. ಇದು ಭಾರತದ ಶ್ರೀಮಂತ ಕಲಾತ್ಮಕ ಪರಂಪರೆಯಲ್ಲಿ ಅದರ ಮಹತ್ವವನ್ನು ಮತ್ತಷ್ಟು ಎತ್ತಿ ತೋರಿಸುತ್ತದೆ.

# ನಕಲಿ ಖಾತೆಗೆ ಹಣ ವರ್ಗಾವಣೆ ಮಾಡುವಲ್ಲಿ ನಾಗೇಂದ್ರ ತಜ್ಞ: ಸಿ.ಟಿ. ರವಿ ವ್ಯಂಗ್ಯ



**ಬೆಂಗಳೂರು, ಆ.20:** ನಕಲಿ ಖಾತೆಗಳಿಗೆ ಹಣ ಹೇಗೆ ವರ್ಗಾವಣೆ ಮಾಡಬೇಕು ಎಂಬುದರಲ್ಲಿ ತಜ್ಞನಾಗಿರುವ ನಾಗೇಂದ್ರರಿಗೆ ಮುಖ್ಯ ಮಂತ್ರಿ ಡಿ.ಕೆ.ಶಿವಕುಮಾರ್ ಅಂಕಿ-ಅಂಶಗಳ ಖಾತೆ ನೀಡುವ ಬದಲು ಹಣಕಾಸು ಖಾತೆ ನೀಡಬೇಕು ಎಂದು ವಿಧಾನ ಪರಿಷತ್ ಸದಸ್ಯ ಸಿ.ಟಿ.ರವಿ ವ್ಯಂಗ್ಯವಾಡಿದ್ದಾರೆ.

ವಿಧಾನಸೌಧದ ಬಿಜೆಪಿ ಕಚೇರಿಯಲ್ಲಿ ಮಾಧ್ಯಮ ಗಳೊಂದಿಗೆ ಮಾತನಾಡಿದ ಅವರು, ನಾಗೇಂದ್ರರನ್ನು ಹಣಕಾಸು ಖಾತೆ ಸಚಿವರಾಗಿ ಮಾಡಿದರೆ ರಾಜ್ಯದ ಖಜಾನೆ ಹಣವನ್ನು ದೇಶದ ವಿವಿಧ ಬ್ಯಾಂಕ್‌ಗಳ ಖಾತೆಗೆ ಚೆನ್ನಾಗಿ ವರ್ಗಾವಣೆ ಮಾಡಿ ಲೂಟಿ ಮಾಡುತ್ತಾರೆ. ವಾಲ್ಮೀಕಿ ನಿಗಮದ ಬಹುಕೋಟಿ ಹಗರಣದಲ್ಲಿ ಷರತ್ತಿನ ಮೇಲೆ ಜಾಮೀನು ಪಡೆದು ಸಚಿವ ನಾಗೇಂದ್ರ ಹೊರಗೆ ಇದ್ದಾರೆ. ಅವರು ಆರೋಪಮುಕ್ತರಾಗಿಲ್ಲ. ಅವರ ರಾಜೀನಾಮೆವರೆಗೆ ಬಿಜೆಪಿ ಹೋರಾಟ ಮಾಡಲಿದೆ ಎಂದರು.

**ಭ್ರಷ್ಟರಿಗೆ ಜಾತಿ ಇಲ್ಲ**

ನಾನು ಪರಿಶಿಷ್ಟ ಪಂಗಡದವನು ಅಂತ ನನ್ನನ್ನು ಗುರಿ ಮಾಡಲಾಗುತ್ತಿದೆ ಎಂದು ನಾಗೇಂದ್ರ ಹೇಳುತ್ತಿದ್ದಾರೆ. ಆದರೆ ಭ್ರಷ್ಟಾಚಾರಿಗಳಿಗೆ ಜಾತಿ ಇಲ್ಲ. ಇಷ್ಟಕ್ಕೂ ನುಂಗಿದ್ದು ಪರಿಶಿಷ್ಟರ ಹಣ. ಅವರ ಕಲ್ಯಾಣಕ್ಕಾಗಿ ಬಳಕೆಯಾಗಬೇಕಾದ ಹಣ ಎಂದರು.ಹಗರಣದಲ್ಲಿ ಆಗಿನ ಸಚಿವ ನಾಗೇಂದ್ರ ಅವರ ಮೌಖಿಕ ಸೂಚನೆ ಬಹುದೊಡ್ಡ ಪಾತ್ರ ವಹಿಸಿದೆ. ಸಚಿವರು ಮೌಖಿಕವಾಗಿ ಸೂಚಿಸಿರುವ ಹಿನ್ನೆಲೆಯಲ್ಲೇ ನಿಗಮದ ಹಣವನ್ನು ಬೇರೆ ಬೇರೆ ಖಾತೆಗಳಿಗೆ ವರ್ಗಾವಣೆ ಮಾಡಲಾಗಿದೆ. ಇಡೀ ಭ್ರಷ್ಟಾಚಾರದಲ್ಲಿ ಸಚಿವರ ಸೂಚನೆ ಮಹತ್ವದ ಪಾತ್ರವಿದೆ ಎಂದು ಸಿ.ಟಿ.ರವಿ ಆರೋಪಿಸಿದರು.

# ನಾಗೇಂದ್ರಗೆ ದೇಶದೊಳಗೆ ಸಂಚರಿಸಲು ಅನುಮತಿ



**ಬೆಂಗಳೂರು, ಆ.20:** ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಬಹುಕೋಟಿ ಹಣ ದುರ್ಬಳಕೆ ಪ್ರಕರಣದಲ್ಲಿ ಆರೋಪ ಎದುರಿಸುತ್ತಿರುವ ಸಚಿವ ಬಿ. ನಾಗೇಂದ್ರ ಅವರಿಗೆ ಕರ್ನಾಟಕ ಹೈಕೋರ್ಟ್‌ನಿಂದ ಬಿಗ್ ರಿಲೀಫ್ ಸಿಕ್ಕಿದೆ. ವಿಚಾರಣಾ ನ್ಯಾಯಾಲಯದ ಪೂರ್ವಾನುಮತಿ ಇಲ್ಲದೆ ರಾಜ್ಯ ತೊರೆಯಬಾರದು ಎಂದು ವಿಧಿಸಲಾಗಿದ್ದ ಜಾಮೀನು ಷರತ್ತನ್ನು ಹೈಕೋರ್ಟ್ ತಡೆಹಿಡಿದಿದ್ದು, ದೇಶದಾದ್ಯಂತ ಉಚಿತವಾಗಿ ಪ್ರಯಾಣಿಸಲು ಅನುಮತಿ ನೀಡಿದೆ.

ಷರತ್ತು ಸಡಿಲಿಕೆಗೆ ಹೈಕೋರ್ಟ್ ಒಪ್ಪಿಗೆ –ವಿಶೇಷ ನ್ಯಾಯಾಲಯವು ಜಾಮೀನು ಮಂಜೂರು ಮಾಡುವ ಸಂದರ್ಭದಲ್ಲಿ, ನ್ಯಾಯಾಲಯದ ಪೂರ್ವಾನುಮತಿ ಪಡೆಯದೆ ರಾಜ್ಯ ತೊರೆಯಬಾರದು ಎಂಬ ಷರತ್ತನ್ನು ವಿಧಿಸಿತ್ತು. ಈ ಷರತ್ತನ್ನು ಪ್ರಶ್ನಿಸಿ ಬಿ. ನಾಗೇಂದ್ರ ಸಲ್ಲಿಸಿದ್ದ ಅರ್ಜಿಯ ವಿಚಾರಣೆ ನಡೆಸಿದ ಹೈಕೋರ್ಟ್, ಜನಪ್ರತಿನಿಧಿಯಾಗಿ ಸಚಿವರಾಗಿ ಕರ್ತವ್ಯ ನಿರ್ವಹಿಸಲು ದೇಶಾದ್ಯಂತ ಸಂಚರಿಸುವುದು ಅಗತ್ಯವಿರುತ್ತದೆ. ಪ್ರಯಾಣ ನಿಷೇಧವು ವ್ಯಕ್ತಿಯ ಹಕ್ಕನ್ನು ಮೊಟಕುಗೊಳಿಸುತ್ತದೆ ಎಂದು ಅಭಿಪ್ರಾಯಪಟ್ಟು ಈ ಸಡಿಲಿಕೆ ನೀಡಿದೆ.

**ವಿದೇಶ ಪ್ರಯಾಣಕ್ಕೆ ಅಸಮ್ಮತಿ**

ದೇಶದೊಳಗೆ ಸಂಚರಿಸಲು ಹೈಕೋರ್ಟ್ ಪೂರ್ಣ ವಿನಾಯಿತಿ ನೀಡಿದ್ದರೂ, ವಿದೇಶ ಪ್ರಯಾಣ ಬೆಳೆಸಬೇಕಾದಲ್ಲಿ ಮಾತ್ರ ವಿಚಾರಣಾ ನ್ಯಾಯಾಲಯದ ಅನುಮತಿ ಕಡ್ಡಾಯವಾಗಿದೆ ಎಂದು ಸ್ಪಷ್ಟಪಡಿಸಲಾಗಿದೆ.

# ಸಮಸಮಾಜ ನಿರ್ಮಾಣಕ್ಕೆ ರಾಜೀವ್‌ಗಾಂಧಿ, ದೇವರಾಜ ಅರಸು ಕೊಡುಗೆ ಸ್ಮರಣೀಯ

**ಯುವಜನತೆಗೆ ಮಹಾನ್ ನಾಯಕರ ಆದರ್ಶ ಪರಿಚಯಿಸುವುದು ಅಗತ್ಯ: ಮಾಜಿ ಸಿಎಂ ಸಿದ್ದರಾಮಯ್ಯ**



ಬೆಂಗಳೂರು, ಆ.20: ಮುತ್ಸದ್ದಿ ನಾಯಕರಾದ ರಾಜೀವ್ ಗಾಂಧಿ ಮತ್ತು ದೇವರಾಜ ಅರಸು ಅವರು ಸಾಮಾಜಿಕ ನ್ಯಾಯ ಮತ್ತು ಸಮಸಮಾಜ ನಿರ್ಮಾಣಕ್ಕೆ ನೀಡಿದ ಮಹತ್ವದ ಕೊಡುಗೆಗಳು ಸ್ಮರಣೀಯ. ಇಬ್ಬರು ಮಹಾನ್ ನಾಯಕರ ಜನ್ಮದಿನ ಒಂದೇ ಎಂಬುದು ವಿಶೇಷ. ಅವರ ಆದರ್ಶಗಳನ್ನು ಯುವಜನತೆಗೆ ಹೆಚ್ಚೆಚ್ಚು ಪರಿಚಯಿಸಬೇಕು ಎಂದು ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಹೇಳಿದರು.

ನಗರದ ಫ್ರೀಡಂ ಪಾರ್ಕ್‌ನಲ್ಲಿ ಆಯೋಜಿಸಲಾದ ರಾಜೀವ್ ಗಾಂಧಿ ಹಾಗೂ ದೇವರಾಜ ಅರಸು ಅವರ ಜನ್ಮದಿನಾಚರಣೆಯಲ್ಲಿ ಮಾತನಾಡಿದ ಸಿದ್ದರಾಮಯ್ಯ ಅವರು ದೇಶದಲ್ಲೇ ಅತ್ಯಂತ ಸಣ್ಣ ವಯಸ್ಸಿಗೆ ರಾಜೀವ್ ಗಾಂಧಿ ಅವರು ಪ್ರಧಾನಿಯಾದರು. ಅವರು ಈಗ ಬದುಕಿದ್ದಿದ್ದರೆ 82 ವರ್ಷವಾಗುತ್ತಿತ್ತು. ಆದರೆ ದುಷ್ಕರ್ಮಿಗಳ ದಾಳಿಗೆ ಬಲಿಯಾದರು. ಅವರು ಬದುಕಿದ್ದಿದ್ದರೆ ಇನ್ನೊಮ್ಮೆ ಪ್ರಧಾನಿಯಾಗುತ್ತಿದ್ದರು, ಆಗ ಈ ದೇಶದ ಅಭ್ಯುದಯ ಸಾಧ್ಯವಾಗುತ್ತಿತ್ತು ಎಂದರು.

ರಾಜೀವ್ ಗಾಂಧಿ ಅವರು ಹತ್ಯೆಯಾದ ಸಂದರ್ಭ ನಾನು ಕೊಪ್ಪಳದಿಂದ ಲೋಕಸಭೆ ಚುನಾವಣೆಗೆ ಜೆಡಿಎಸ್ ಅಭ್ಯರ್ಥಿಯಾಗಿ ಸ್ಪರ್ಧಿಸಿದ್ದೆ. ಆಗ ಚುನಾವಣೆ ಮುಂದೂಡಲಾಯಿತು. ಅದರ ಪರಿಣಾಮ ಸೋಲಬೇಕಾಯಿತು. ಹಾಗಾಗಿ ರಾಜ್ಯ ರಾಜಕಾರಣದಲ್ಲೇ ನೆಲೆಯೂರುವಂತಾಯಿತು. ಒಂದು ವೇಳೆ ರಾಜೀವ್ ಗಾಂಧಿ ಅವರ ಹತ್ಯೆ ಆಗದೆ ಇದ್ದಿದ್ದರೆ ನಾನು ಗೆದ್ದು, ಲೋಕಸಭಾ ಸದಸ್ಯನಾಗುತ್ತಿದ್ದೆ. ನನ್ನ ರಾಜಕೀಯ ನಡೆ ಬೇರೆಯಾಗಿರುತ್ತಿತ್ತು. ಬಹುಶಃ ನಾನು ರಾಜ್ಯದ ಮುಖ್ಯಮಂತ್ರಿಯಾಗಲು ಸಾಧ್ಯವಾಗುತ್ತಿರಲಿಲ್ಲ ಎಂದು ಸಿದ್ದರಾಮಯ್ಯ ಅಂದಿನ ಘಟನೆಯನ್ನು ಸ್ಮರಿಸಿದರು.

ರಾಜೀವ್ ಗಾಂಧಿ ಅವರು ಯುವಜನತೆ ಮೇಲೆ ಅಪಾರವಾದ ನಂಬಿಕೆ ಇಟ್ಟಿದ್ದರು. ಅವರನ್ನು ಭವಿಷ್ಯದ ಪ್ರಜೆಗಳು ಎನ್ನುತ್ತಿದ್ದರು. ಬಲಿಷ್ಠ ರಾಷ್ಟ್ರ ಕಟ್ಟುವ ಕನಸು ಕಂಡಿದ್ದರು. ಅದಕ್ಕಾಗಿಯೇ ಯುವ ಜನತೆಗೆ 18 ವರ್ಷಕ್ಕೆ ಮತದಾನದ ಹಕ್ಕನ್ನು ನೀಡಿದರು. 21ನೇ ಶತಮಾನದ ಕನಸನ್ನು ಕಂಡಿದ್ದರು. ಆ ದಿಕ್ಕಿನಲ್ಲಿ ಅನೇಕ ಕಾರ್ಯಕ್ರಮಗಳನ್ನು ಮಾಡಿದ್ದರು. ವಿಶೇಷವಾಗಿ ವಿಜ್ಞಾನ ಮತ್ತು ತಂತ್ರಜ್ಞಾನ ಕ್ಷೇತ್ರಕ್ಕೆ ಅಪಾರ ಕೊಡುಗೆ ನೀಡಿದ್ದಾರೆ. ದೂರಸಂಪರ್ಕ ವಿಭಾಗದಲ್ಲಿ ಬಹಳಷ್ಟು ಕೆಲಸ ಮಾಡಿದ್ದಾರೆ. ಇಂದು ನಮ್ಮ ದೇಶದ ಯಾವುದೇ ಮೂಲೆಯಿಂದ ಜಗತ್ತಿನ ಅನೇಕ ಭಾಗಗಳಿಗೆ ಸಂಪರ್ಕ ಸಾಧಿಸಲು ಸಾಧ್ಯವಾಗಿದ್ದರೆ ಅದಕ್ಕೆ ರಾಜೀವ್ ಗಾಂಧಿ ಕಾರಣ ಎಂದರು.

ಆಡಳಿತದಲ್ಲಿ ಎಲ್ಲರಿಗೂ ಅಧಿಕಾರ ಮತ್ತು ಅವಕಾಶ ಸಿಗಬೇಕು ಎಂಬ ಕಾರಣಕ್ಕೆ ಹಿಂದುಳಿದ ವರ್ಗದ ಜನರಿಗೆ, ಮಹಿಳೆಯರಿಗೆ, ಯುವಕರಿಗೆ, ಎಸ್‌ಸಿ/ಎಸ್‌ಟಿ, ಅಲ್ಪಸಂಖ್ಯಾತರಿಗೆ ಸಂವಿಧಾನದ 73, 74ನೇ ತಿದ್ದುಪಡಿ ಮಾಡುವ ಮೂಲಕ ಮೀಸಲಾತಿ ಕೊಟ್ಟಿದ್ದು ರಾಜೀವ್ ಗಾಂಧಿ ಎಂಬುದನ್ನು ಮರೆಯಲು ಸಾಧ್ಯವಿಲ್ಲ. ಮಹಿಳೆಯರಿಗೆ 33% ಮೀಸಲಾತಿ ಕೊಡುವ ಮೂಲಕ ಮಹಿಳೆಯರನ್ನು ಸಮಾಜದ ಮುನ್ನೆಲೆಗೆ ತರುವ ಪ್ರಯತ್ನ ನಡೆಸಿದರು. ಇಂದು 50% ಮೀಸಲಾತಿ ಸಿಕ್ಕಿದ್ದರೆ ಅದಕ್ಕೆ ರಾಜೀವ್ ಗಾಂಧಿ ಕಾರಣ ಎಂದರು.

ನಾಲ್ವಡಿ ಕೃಷ್ಣರಾಜ ಒಡೆಯರ್, ದೇವರಾಜ ಅರಸು ಮತ್ತು ನಾನು ಮೂವರು ಮೈಸೂರಿನವರು ಎಂಬುದು ವಿಶೇಷ. ನಾವೆಲ್ಲರೂ ಸಾಮಾಜಿಕ ನ್ಯಾಯಕ್ಕೆ ಮಿಡಿದಿದ್ದೇವೆ. ನಾಲ್ವಡಿ ಕೃಷ್ಣರಾಜ ಒಡೆಯರ್ ಅವರು ಮಿಲ್ಲರ್ ಆಯೋಗವನ್ನು ರಚಿಸಿ, ವರದಿಯನ್ನು ತರಿಸಿ ಜಾರಿ ಮಾಡುವ ಮೂಲಕ ಮಹಿಳೆಯರಿಗೆ, ಹಿಂದುಳಿದವರಿಗೆ ಸಾಮಾಜಿಕ ನ್ಯಾಯ ಕೊಡಿಸುವ ಪ್ರಯತ್ನ ನಡೆಸಿದ್ದರು. 1972ರಲ್ಲಿ ಮುಖ್ಯಮಂತ್ರಿಗಳಾಗಿದ್ದ ದೇವರಾಜ ಅರಸು ಅವರು ಹಾವನೂರು ಆಯೋಗವನ್ನು ರಚನೆ ಮಾಡಿ, ವರದಿಯನ್ನು ಸ್ವೀಕರಿಸಿ, ಶಿಕ್ಷಣದಲ್ಲಿ, ಉದ್ಯೋಗದಲ್ಲಿ ಅವಕಾಶವನ್ನು ಕಲ್ಪಿಸಿಕೊಟ್ಟರು ಎಂದು ಸಿದ್ದರಾಮಯ್ಯ ಹೇಳಿದರು. ಮೈಸೂರು ರಾಜ್ಯಕ್ಕೆ ಕರ್ನಾಟಕ ಎಂಬ ಹೆಸರನ್ನು ಇಟ್ಟವರು. ಭೂಸುಧಾರಣೆ ಕಾಯ್ದೆ, ಮಲ ಹೊರುವ ಪದ್ಧತಿ ನಿಷೇಧ, ಸಾಲ ವಿಮೋಚನೆ ಸೇರಿದಂತೆ ಅನೇಕ ಜನಪರ ಕೆಲಸಗಳನ್ನು ಮಾಡುವ ಮೂಲಕ ಸಮಾಜದ ಕಟ್ಟಕಡೆಯ ವ್ಯಕ್ತಿಯನ್ನೂ ವಿಧಾನಸೌಧದ ಮೆಟ್ಟಿಲು ಹತ್ತುವಂತೆ ಮಾಡಿದರು ಎಂದು ಸ್ಮರಿಸಿದರು.

## ತಾಂತ್ರಿಕ - ಆರ್ಥಿಕವಾಗಿ ಭಾರತ ಬಲಿಷ್ಠವಾಗಿರುವುದಕ್ಕೆ ರಾಜೀವ್‌ಗಾಂಧಿ ಕಾರಣ: ಡಿಸಿಎಂ ಡಾ.ಜಿ. ಪರಮೇಶ್ವರ್

ಬೆಂಗಳೂರು, ಆ.20: ಭಾರತವು ತಾಂತ್ರಿಕವಾಗಿ ಮತ್ತು ಆರ್ಥಿಕವಾಗಿ ಬಲಿಷ್ಟವಾಗಿರುವುದಕ್ಕೆ ಮಾಜಿ ಪ್ರಧಾನಿ ರಾಜೀವ್ ಗಾಂಧಿಯವರ ಕೊಡುಗೆ ಸಾಕಷ್ಟಿದೆ ಎಂದು ಉಪ ಮುಖ್ಯಮಂತ್ರಿಗಳಾದ ಡಾ. ಜಿ. ಪರಮೇಶ್ವರ ಅವರು ಹೇಳಿದರು. 21ನೇ ಶತಮಾನಕ್ಕೆ ನಾವು ಕಾಲಿಡುತ್ತಿದ್ದೇವೆ. ನಾಡಿನ ಜನತೆ ಸಮಾಧಾನ, ಸಂತೋಷದಿಂದ ಬಾಳಬೇಕು. ಇದೇ ಕನಸನ್ನು ಕಂಡವರು ರಾಜೀವ್ ಗಾಂಧಿಯವರು. ಭಾರತ ಆಧುನಿಕವಾಗಿ ತಂತ್ರಜ್ಞಾನದಲ್ಲಿ ಅಭಿವೃದ್ಧಿ ಹೊಂದಿದೆ. ತಳ ಸಮುದಾಯಗಳಿಗೆ ಅವಕಾಶ, ಮಹಿಳೆಯರಿಗೆ ಸಮಾನತೆ ಕಲ್ಪಿಸಲು ಸಂವಿಧಾನದ 73 ಮತ್ತು 74ನೇ ಕಲಂಗಳಿಗೆ ತಿದ್ದುಪಡಿ ತಂದು ಮೀಸಲಾತಿ ಕಲ್ಪಿಸಿದರು. ದೇಶದಲ್ಲಿ ಬಹುದೊಡ್ಡ ಬದಲಾವಣೆಯಿಂದ ಮಹಿಳೆಯರು ಸ್ಥಳೀಯ ಸಂಸ್ಥೆಗಳಲ್ಲಿ ಪ್ರತಿನಿಧಿಗಳಾಗಿದ್ದಾರೆ ಎಂದರು.

ಮಾಜಿ ಮುಖ್ಯಮಂತ್ರಿ ಡಿ.ದೇವರಾಜ ಅರಸು ಅವರು ರಾಜ್ಯದಲ್ಲಿ ಅನೇಕ ಪ್ರಗತಿಪರ ಕಾರ್ಯಕ್ರಮಗಳನ್ನು ಜಾರಿಗೆ ತಂದರು. ಶೋಷಣೆಗೆ ಒಳಗಾಗುತ್ತಿದ್ದ ರೈತನನ್ನು, ಉಳುವವನೇ ಭೂಮಿಯ ಒಡೆಯನನ್ನಾಗಿ ಮಾಡಿದರು. 1974ರಲ್ಲಿ ಬೆಂಗಳೂರಿನಲ್ಲಿ ಎಲೆಕ್ಟ್ರಾನಿಕ್ ಸಿಟಿ ನಿರ್ಮಿಸಿದರು. ದೇಶದ ಯುವಕರಿಗೆ ಭವಿಷ್ಯ ಕಟ್ಟಿಕೊಡುವ ಕೆಲಸ ಮಾಡಿದರು. ಕರ್ನಾಟಕವನ್ನು ಒಗ್ಗೂಡಿಸಿ ಪ್ರಪಂಚದಲ್ಲೇ ಪ್ರಖ್ಯಾತಿ ಮಾಡಿದರು. ಧ್ವನಿ ಇಲ್ಲದ ಸಮಾಜದ ಕಟ್ಟಕಡೆಯ ವ್ಯಕ್ತಿಗೆ ಶಕ್ತಿ ತುಂಬುವ ಕೆಲಸ ಮಾಡಿದ್ದಾರೆ ಎಂದು ದೇವರಾಜ ಅರಸು ಅವರ ಕೊಡುಗೆಗಳನ್ನು ಸ್ಮರಿಸಿದರು.

# ರಾಯಚೂರು ನೂತನ ಜಿಲ್ಲಾ ಕಾರಾಗೃಹ ನಿರ್ಮಾಣಕ್ಕೆ ಕ್ರಮ: ಶರಣಪ್ರಕಾಶ್ ಪಾಟೀಲ್

ಬೆಂಗಳೂರು, ಆ.20: ರಾಯಚೂರುನಲ್ಲಿ ನೂತನ ಜಿಲ್ಲಾ ಕಾರಾಗೃಹ ನಿರ್ಮಾಣ ಕಾಮಗಾರಿಗೆ 2026–27ನೇ ಸಾಲಿನಲ್ಲಿ ಒದಗಿಸಲಾಗಿರುವ 7500 ಲಕ್ಷಗಳ ಅನುದಾನದಲ್ಲಿ ರೂ.500 ಲಕ್ಷಗಳ ಅನುದಾನವನ್ನು ನಿಗಧಿಪಡಿಸಿ ಕೊಂಡು ಕ್ರಿಯಾ ಯೋಜನೆಗೆ ಅನುಮೋದನೆ ಪಡೆಯಲು, ಆಡಳಿತಾತ್ಮಕ ಮಂಜೂರಾತಿ ಹಾಗೂ ಅನುದಾನ ಬಿಡುಗಡೆಗೆ ಕ್ರಮವಹಿಸಲಾಗುತ್ತಿದೆ ಎಂದು ವೈದ್ಯಕೀಯ ಶಿಕ್ಷಣ ಸಚಿವ ಶರಣ ಪ್ರಕಾಶ್ ಪಾಟೀಲ್ ತಿಳಿಸಿದರು. ಇಂದು ವಿಧಾನ ಪರಿಷತ್‌ನ ಪ್ರಶ್ನೋತ್ತರ ವೇಳೆಯಲ್ಲಿ ಸದಸ್ಯ ಬೋಸರಾಜುಗೆ ಗೃಹ ಸಚಿವರ ಪರವಾಗಿ ಉತ್ತರ ನೀಡಿದ ಸಚಿವರು, ರಾಯಚೂರು ಜಿಲ್ಲೆಯ ಬಿಜನಗೇರಾ ಗ್ರಾಮದ ಸರ್ವೆ ನಂ. 30 ರಲ್ಲಿ ಮಂಜೂರಾಗಿರುವ 19.15 ಎಕರೆ ಜಮೀನಿನಲ್ಲಿ 500 ಬಂದಿಗಳ ಸಾಮರ್ಥ್ಯದ ನೂತನ ಜಿಲ್ಲಾ ಕಾರಾಗೃಹ ನಿರ್ಮಾಣಕ್ಕಾಗಿ ಕರ್ನಾಟಕ ರಾಜ್ಯ ಪೊಲೀಸ್ ವಸತಿ ಮತ್ತು ಮೂಲಭೂತ ಸೌಲಭ್ಯ ಅಭಿವೃದ್ಧಿ ನಿಗಮ ಇವರಿಂದ ರೂ.90 ಕೋಟಿಗಳ ಸಮಗ್ರ ಅಂದಾಜು ಪಟ್ಟಿಯನ್ನು ಪಡೆಯಲಾಗಿದೆ ಎಂದರು.

# ಸ್ಯಾಮ್ ಪಿತ್ರೋಡಾ ಭೇಟಿ ಮಾಡಿದ ಕೆಎಸ್‌ಬಿಡಿಬಿ ಅಧ್ಯಕ್ಷ ಎಸ್.ಇ. ಸುಧೀಂದ್ರ

**ದಶಕಗಳು ಮತ್ತು ಖಂಡಗಳಾದ್ಯಂತ; ಅಮೆರಿಕದ ಚಿಕಾಗೋದಲ್ಲಿ ಭಾರತದ ದೂರಸಂಪರ್ಕ ದಾರ್ಶನಿಕ ಸ್ಯಾಮ್ ಪಿತ್ರೋಡಾ ಅವರೊಂದಿಗೆ ಕೆಎಸ್‌ಬಿಡಿಬಿ ಅಧ್ಯಕ್ಷ ಎಸ್.ಇ. ಸುಧೀಂದ್ರ ಅವರ ಭಾವನಾತ್ಮಕ ಸಭೆ ಮತ್ತು ಆಳವಾದ ಚರ್ಚೆ**



ಭಾರತದ ಭವಿಷ್ಯದ ಬಗ್ಗೆ ನಾಸ್ಟಾಲ್ಜಿಯಾ, ತಂತ್ರಜ್ಞಾನ ಮತ್ತು ಹಂಚಿಕೆಯ ದೃಷ್ಟಿಕೋನವನ್ನು ಬೆರೆಸಿದ ಸ್ಮರಣೀಯ ಸಭೆಯಲ್ಲಿ, ಕರ್ನಾಟಕ ರಾಜ್ಯ ಜೈವಿಕ ಇಂಧನ ಅಭಿವೃದ್ಧಿ ಮಂಡಳಿಯ ಅಧ್ಯಕ್ಷ ಎಸ್.ಇ. ಸುಧೀಂದ್ರ ಅವರು ಭಾರತದ ದೂರಸಂಪರ್ಕ ಮತ್ತು ಮಾಹಿತಿ ತಂತ್ರಜ್ಞಾನ ಕ್ರಾಂತಿಯ ಶಿಲ್ಪಿ ಎಂದು ವ್ಯಾಪಕವಾಗಿ ಪರಿಗಣಿಸಲ್ಪಟ್ಟ ಪ್ರಸಿದ್ಧ ತಂತ್ರಜ್ಞ ಸ್ಯಾಮ್ ಪಿತ್ರೋಡಾ ಅವರನ್ನು ಭೇಟಿಯಾದರು.

ಚಿಕಾಗೋದಲ್ಲಿರುವ ಸ್ಯಾಮ್ ಪಿತ್ರೋಡಾ ಅವರ ನಿವಾಸದಲ್ಲಿ ನಡೆದ ಸಂವಾದದ ಸಮಯದಲ್ಲಿ, ಇಬ್ಬರೂ ಭಾರತದ ತಾಂತ್ರಿಕ ಪ್ರಯಾಣ, ಸುಸ್ಥಿರ ಅಭಿವೃದ್ಧಿ, ಶುದ್ಧ ಇಂಧನ ಮತ್ತು ಜೈವಿಕ ಇಂಧನದ ಭವಿಷ್ಯದ ಕುರಿತು ವ್ಯಾಪಕ ಚರ್ಚೆಯಲ್ಲಿ ತೊಡಗಿದ್ದರು. 1980 ರ ದಶಕದ ಆರಂಭದಲ್ಲಿ ಭಾರತಕ್ಕೆ ಹಿಂದಿರುಗಿದ ಸ್ಯಾಮ್ ಪಿತ್ರೋಡಾ, 1984 ರಲ್ಲಿ ಆಗಿನ ಪ್ರಧಾನಿ ಇಂದಿರಾ ಗಾಂಧಿ ಅವರನ್ನು ಹೊಸದಾಗಿ ಸ್ಥಾಪಿಸಲಾದ ಟೆಲಿಮ್ಯಾಟಿಕ್ಸ್ ಅಭಿವೃದ್ಧಿ ಕೇಂದ್ರ (ಸಿ–ಡಿಒಟಿ) ದ ನೇತೃತ್ವ ವಹಿಸಲು ಹೇಗೆ ಆಹ್ವಾನಿಸಿದರು ಎಂಬುದನ್ನು ಪ್ರತಿಬಿಂಬಿಸಿದರು.

ಲಕ್ಷಾಂತರ ಭಾರತೀಯರಿಗೆ ಸ್ಥಳೀಯ ದೂರಸಂಪರ್ಕ ತಂತ್ರಜ್ಞಾನವನ್ನು ಪ್ರವೇಶಿಸುವಂತೆ ಮಾಡಿದ ಪ್ರವರ್ತಕ ಪ್ರಯತ್ನಗಳ ಬಗ್ಗೆ ಅವರು ಮಾತನಾಡಿದರು. ದಿವಂಗತ ಪ್ರಧಾನಿ ರಾಜೀವ್ ಗಾಂಧಿ ಅವರ ನೇತೃತ್ವದಲ್ಲಿ ರಾಷ್ಟ್ರೀಯ ತಂತ್ರಜ್ಞಾನ ಮಿಷನ್‌ಗಳಲ್ಲಿ ಅವರು ವಹಿಸಿದ ನಾಯಕತ್ವವನ್ನು ಅವರು ಸ್ಮರಿಸಿದರು. ದೂರಸಂಪರ್ಕ, ಕುಡಿಯುವ ನೀರು, ಸಾಕ್ಷರತೆ, ರೋಗನಿರೋಧಕ ಶಕ್ತಿ, ಡೈರಿ ಅಭಿವೃದ್ಧಿ ಮತ್ತು ಎಣ್ಣೆಬೀಜಗಳು ಭಾರತದ ಅಭಿವೃದ್ಧಿಯಲ್ಲಿ ಪರಿವರ್ತನಾತ್ಮಕ ಪಾತ್ರ ವಹಿಸಿದ್ದವು. ಸ್ಯಾಮ್ ಪಿತ್ರೋಡಾ 1990 ರ ದಶಕದ ಉತ್ತರಾರ್ಧದ ಹಳೆಯ ಛಾಯಾಚಿತ್ರವನ್ನು ಯುವ ಎಸ್.ಇ. ಸುಧೀಂದ್ರ ಅವರ ತಾಯಿ ವಿಶಾಲಾ ಈಶ್ವರ್ ಅವರೊಂದಿಗೆ ತೋರಿಸಿದಾಗ ಸಭೆಯು ಭಾವನಾತ್ಮಕ ತಿರುವು ಪಡೆದುಕೊಂಡಿತು. ಈ ನೆನಪಿನಿಂದ ತೀವ್ರವಾಗಿ ಭಾವುಕರಾದ ಅಧ್ಯಕ್ಷ ಎಸ್.ಇ. ಸುಧೀಂದ್ರ ಅವರು ವಿಶಾಲಾ ಈಶ್ವರ್ ಅವರೊಂದಿಗೆ ವೀಡಿಯೊ ಕರೆಯ ಮೂಲಕ ಸಂಪರ್ಕ ಸಾಧಿಸಿದ ಭಾವನಾತ್ಮಕ ಕ್ಷಣವನ್ನು ಹಂಚಿಕೊಂಡರು, ಇದು ಪುನರ್ಮಿಲನವನ್ನು ಇನ್ನಷ್ಟು ವಿಶೇಷವಾಗಿಸಿತು.

ಚರ್ಚೆಗಳ ಸಮಯದಲ್ಲಿ, ಸ್ಥಳೀಯ ಸಮುದಾಯಗಳಿಂದ ಸಂರಕ್ಷಿಸಲ್ಪಟ್ಟ ಭಾರತದ ಅಪಾರ ಸಸ್ಯ ಸಂಪತ್ತು ಮತ್ತು ಸಾಂಪ್ರದಾಯಿಕ ಜ್ಞಾನವನ್ನು ವೈಜ್ಞಾನಿಕವಾಗಿ ಅಧ್ಯಯನ ಮಾಡಬೇಕು, ಮೌಲ್ಯೀಕರಿಸಬೇಕು, ದಾಖಲಿಸಬೇಕು ಮತ್ತು ಜಾಗತಿಕವಾಗಿ ಹಂಚಿಕೊಳ್ಳಬೇಕು ಎಂದು ಸ್ಯಾಮ್ ಪಿತ್ರೋಡಾ ಒತ್ತಿ ಹೇಳಿದರು. ಸುಸ್ಥಿರ ಅಭಿವೃದ್ಧಿ ಮತ್ತು ನಾವೀನ್ಯತೆಗೆ ಕೊಡುಗೆ ನೀಡುವಲ್ಲಿ ಭಾರತದ ಜೀವವೈವಿಧ್ಯತೆಯ ಅಗಾಧ ಸಾಮರ್ಥ್ಯವನ್ನು ಅವರು ಎತ್ತಿ ತೋರಿಸಿದರು. ಕೇರಳವನ್ನು ಉಲ್ಲೇಖಿಸುತ್ತಾ, ಸ್ಯಾಮ್ ಪಿತ್ರೋಡಾ, ಲೋಕಸಭಾ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಪ್ರತಿನಿಧಿಸುತ್ತಿದ್ದ ಮತ್ತು ಈಗ ಪ್ರಿಯಾಂಕಾ ಗಾಂಧಿ ಪ್ರತಿನಿಧಿಸುತ್ತಿರುವ ಲೋಕಸಭಾ ಕ್ಷೇತ್ರ ವಯನಾಡನ್ನು ಉಲ್ಲೇಖಿಸಿದರು. ಅವರು ಕೇರಳ ಮೂಲದವರಾದ ಅಧ್ಯಕ್ಷರ ಸಲಹೆಗಾರ ಡಾ. ಶಿಜು ಸೆಬಾಸ್ಟಿಯನ್ ಅವರೊಂದಿಗೆ ಕೃಷಿ ಅರಣ್ಯದ ಕುರಿತು ಅಭಿಪ್ರಾಯಗಳನ್ನು ವಿನಿಮಯ ಮಾಡಿಕೊಂಡರು, ಪರಿಸರ ಸಂರಕ್ಷಣೆಯೊಂದಿಗೆ ಸುಸ್ಥಿರ ಕೃಷಿ ಪದ್ಧತಿಗಳನ್ನು ಸಂಯೋಜಿಸುವ ಅವಕಾಶಗಳನ್ನು ಚರ್ಚಿಸಿದರು. ಪುರಸಭೆಯ ಘನತ್ಯಾಜ್ಯ ನಿರ್ವಹಣೆ, ಪರಿಸರ ಸಂರಕ್ಷಣೆ, ಸುಸ್ಥಿರ ಕೃಷಿ ಮತ್ತು ದೇಶದ ಗ್ರಾಮೀಣ ಮತ್ತು ಹಿಂದುಳಿದ ಪ್ರದೇಶಗಳ ಮೇಲೆ ಪರಿಣಾಮ ಬೀರುತ್ತಿರುವ ಪರಿಸರ ಸವಾಲುಗಳನ್ನು ಪರಿಹರಿಸುವ ಅಗತ್ಯತೆಯ ಬಗ್ಗೆ ಈ ಸಂಭಾಷಣೆ ಮತ್ತಷ್ಟು ಗಮನಹರಿಸಿತು.

ನೈಸರ್ಗಿಕ ಸಂಪನ್ಮೂಲಗಳನ್ನು ರಕ್ಷಿಸುವಾಗ ವೈಜ್ಞಾನಿಕ ಯೋಜನೆ ಮತ್ತು ತಾಂತ್ರಿಕ ನಾವೀನ್ಯತೆ ಜೀವನೋಪಾಯವನ್ನು ಗಮನಾರ್ಹವಾಗಿ ಸುಧಾರಿಸಬಹುದು ಎಂದು ಸ್ಯಾಮ್ ಪಿತ್ರೋಡಾ ಒತ್ತಿ ಹೇಳಿದರು.

ನವೀಕರಿಸಬಹುದಾದ ಶಕ್ತಿಯ ಹೆಚ್ಚುತ್ತಿರುವ ಪ್ರಾಮುಖ್ಯತೆಯನ್ನು ಎತ್ತಿ ತೋರಿಸಿದ ಸ್ಯಾಮ್ ಪಿತ್ರೋಡಾ, ಶುದ್ಧ ಇಂಧನವು ಈ ಸಮಯದ ಅಗತ್ಯವಾಗಿದೆ ಎಂದು ಒತ್ತಿ ಹೇಳಿದರು. ಜೈವಿಕ ಇಂಧನ ವಲಯವನ್ನು ವಿಸ್ತರಿಸುವುದರಿಂದ ಆರ್ಥಿಕ ಬೆಳವಣಿಗೆಯನ್ನು ವೇಗಗೊಳಿಸುವುದಲ್ಲದೆ, ಸಂಪೂರ್ಣ ಜೈವಿಕ ಇಂಧನ ಮೌಲ್ಯ ಸರಪಳಿಯನ್ನು ಬಲಪಡಿಸುತ್ತದೆ, ಉದ್ಯೋಗಾವಕಾಶಗಳನ್ನು ಸೃಷ್ಟಿಸುತ್ತದೆ, ಸುಸ್ಥಿರ ತ್ಯಾಜ್ಯ ನಿರ್ವಹಣೆಯನ್ನು ಉತ್ತೇಜಿಸುತ್ತದೆ ಮತ್ತು ಕರ್ನಾಟಕದ ದೀರ್ಘಕಾಲೀನ ಪರಿಸರ ಮತ್ತು ಅಭಿವೃದ್ಧಿ ಗುರಿಗಳಿಗೆ ಕೊಡುಗೆ ನೀಡುತ್ತದೆ ಎಂದು ಅವರು ಗಮನಿಸಿದರು. ಭವಿಷ್ಯದ ಪೀಳಿಗೆಯ ಪ್ರಯೋಜನಕ್ಕಾಗಿ ನಾವೀನ್ಯತೆ, ಸುಸ್ಥಿರತೆ ಮತ್ತು ತಂತ್ರಜ್ಞಾನ ಆಧಾರಿತ ಅಭಿವೃದ್ಧಿಯನ್ನು ಉತ್ತೇಜಿಸುವ ಹಂಚಿಕೆಯ ಬದ್ಧತೆಯೊಂದಿಗೆ ಸಭೆ ಮುಕ್ತಾಯವಾಯಿತು, ಹಸಿರು ಮತ್ತು ಹೆಚ್ಚು ಸಮೃದ್ಧ ಭಾರತವನ್ನು ನಿರ್ಮಿಸುವಲ್ಲಿ ವೈಜ್ಞಾನಿಕ ನಾಯಕತ್ವ ಮತ್ತು ಸಾರ್ವಜನಿಕ ನೀತಿಯ ನಡುವಿನ ಸಹಯೋಗದ ಮಹತ್ವವನ್ನು ಬಲಪಡಿಸಿತು.

# ಬಿಸಿಯೂಟ ನೌಕರರಿಗೆ ಕನಿಷ್ಠ ವೇತನ ಹೆಚ್ಚಿಸಲು ಕ್ರಮ: ಸಚಿವ ಮಧು ಬಂಗಾರಪ್ಪ ಭರವಸೆ



**ಬೆಂಗಳೂರು, ಆ.20:** ರಾಜ್ಯದ ಬಿಸಿಯೂಟ ನೌಕರರ ಪರವಾಗಿ ಎಂದಿಗೂ ನಾನು ಜೊತೆ ಇರುತ್ತೇನೆ. ಮಾಜಿ ಮುಖ್ಯಮಂತ್ರಿ ದಿವಂಗತ ಎಸ್. ಬಂಗಾರಪ್ಪ ಅವರ ಮಗನಾಗಿ ನಿಮಗೆಲ್ಲ ಸಹಾಯ ಮಾಡಲು ಸಿದ್ಧನಿದ್ದೇನೆ ಎಂದು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯ ಸಚಿವ ಮಧು ಬಂಗಾರಪ್ಪ ಅವರು ಬಿಸಿಯೂಟ ನೌಕರರಿಗೆ ಭರವಸೆ ನೀಡಿದ್ದಾರೆ.

ಸ್ವಾತಂತ್ರ್ಯ ಉದ್ಯಾನವನದಲ್ಲಿ ಕನಿಷ್ಠ ವೇತನ ಸೇರಿದಂತೆ ವಿವಿಧ ಬೇಡಿಕೆ ಈಡೇರಿಕೆಗಾಗಿ ಆಗ್ರಹಿಸಿ ಪ್ರತಿಭಟಿಸುತ್ತಿರುವ ರಾಜ್ಯ ಅಕ್ಷರದಾಸೋಹ ಬಿಸಿಯೂಟ ತಯಾರಕರ ಯೂನಿಯನ್ ಸದಸ್ಯರನ್ನು ವಿಧಾನಸೌಧದ ತಮ್ಮ ಕಚೇರಿಗೆ ಕರೆಸಿಕೊಂಡು, ಅವರೊಂದಿಗೆ ಸಮಾಲೋಚನೆ ನಡೆಸಿದ ಸಂದರ್ಭದಲ್ಲಿ ಸಚಿವ ಮಧು ಬಂಗಾರಪ್ಪ ಅವರು ಈ ಭರವಸೆ ನೀಡಿದ್ದಾರೆ.

ರಾಜ್ಯ ಅಕ್ಷರದಾಸೋಹ ಬಿಸಿಯೂಟ ತಯಾರಕರ ಯೂನಿಯನ್ ಅಧ್ಯಕ್ಷ ಹೊನ್ನಪ್ಪ ಮರೆಮ್ಮನವರ ಅವರು, ಕನಿಷ್ಠ ವೇತನ ನೀಡುವುದು, ಬಿಸಿಯೂಟ ತಯಾರಕರಿಗೆ ಇಡುಗಂಟು ಹೆಚ್ಚಿಸುವುದು ಸೇರಿದಂತೆ ವಿವಿಧ ಬೇಡಿಗಳನ್ನು ಸಚಿವರ ಮುಂದೆ ಮಂಡಿಸಿದರು.

ಕನಿಷ್ಠ ವೇತನ ದರಗಳ ಪರಿಷ್ಕರಣೆಗೆ ಸಂಬಂಧಿಸಿದಂತೆ ಸಚಿವ ಸಂಪುಟ ಉಪಸಮಿತಿಯನ್ನು ರಚಿಸಲಾಗಿದೆ. ಇದರಲ್ಲಿ ನಾನೂ ಸದಸ್ಯನಿದ್ದೇನೆ. ಬಿಸಿಯೂಟ ನೌಕರರ ಸಮಸ್ಯೆಗಳ ಬಗ್ಗೆ ಖಂಡಿತ ಗಮನವಿದೆ. ಸರ್ಕಾರದ ಅಂಗ ನೀವು. ನಮ್ಮ ಮಕ್ಕಳನ್ನು ನೀವೂ ನೋಡಿಕೊಳ್ಳುತ್ತಿದ್ದೀರಿ. ನಿಮ್ಮ ಬಗ್ಗೆ ನನಗೆ ಸಹಾನುಭೂತಿ ಇದೆ. ನಿಮ್ಮ ಕಷ್ಟಕ್ಕೆ ಸ್ಪಂದಿಸುವುದು ನನ್ನ ಕರ್ತವ್ಯ. ಸರ್ಕಾರದ ನಿಯಮಗಳ ಅಡಿಯಲ್ಲಿ ನಿಮಗೇನು ಸಹಾಯ ಮಾಡಲು ಆಗುತ್ತದೆಯೋ ಅದನ್ನೆಲ್ಲ ಮಾಡುತ್ತೇನೆ ಎಂದು ನಿಯೋಗಕ್ಕೆ ಭರವಸೆ ನೀಡಿದರು.

ಯಾವ ಯಾವ ರಾಜ್ಯದಲ್ಲಿ ಎಷ್ಟು ವೇತನ ನೀಡಲಾಗುತ್ತಿದೆ. ಜೊತೆಗೆ ಬೇರೆ ಬೇರೆ ಸೌಲಭ್ಯಗಳನ್ನು ಹೇಗೆ ವಿತರಿಸಲಾಗುತ್ತಿದೆ. ಕೇಂದ್ರ ಸರ್ಕಾರ ಮತ್ತು ಉಳಿದ ರಾಜ್ಯ ಸರ್ಕಾರಗಳು ಇಡುಗಂಟು ಎಷ್ಟು ನೀಡುತ್ತಿವೆ? ಅದರಲ್ಲೂ ಮುಖ್ಯವಾಗಿ ದಕ್ಷಿಣ ಭಾರತದ ರಾಜ್ಯಗಳ ಸ್ಥಿತಿಗತಿ ಹೇಗಿದೆ ಎಂಬುದರ ಕುರಿತು ಶೀಘ್ರ ವರದಿ ಕೊಡಿ ಎಂದು ಸ್ಥಳದಲ್ಲೇ ಅಧಿಕಾರಿಗಳಿಗೆ ಈ ಸಂದರ್ಭದಲ್ಲಿ ಸಚಿವರು ಸೂಚಿಸಿದರು.

ಅಧಿಕಾರಿಗಳ ಮಾಹಿತಿ ಮತ್ತು ನಿಮ್ಮ ಬೇಡಿಕೆಗಳನ್ನು ಮುಖ್ಯಮಂತ್ರಿಗಳ ಗಮನಕ್ಕೆ ತರುತ್ತೇನೆ. ಮೂರು ವರ್ಷದ ಅವಧಿಯಲ್ಲಿ ನಾನು ನಿಮಗೆ ಹಲವಾರು ಬಾರಿ ನೆರವಾಗಿದ್ದೇನೆ. ಈಗಲೂ ನಿಮ್ಮ ಕಷ್ಟ ಸುಖಗಳ ಜೊತೆ ಇರುತ್ತೇನೆ ಎಂದು ಹೇಳಿದರ ಸಚಿವರು, ಕಳೆದ ದೀಪಾವಳಿ ಸಂದರ್ಭದಲ್ಲಿ ಹಬ್ಬ ಆಚರಿಸಲು ಮುಂಚಿತವಾಗಿ ನಿಮಗೆಲ್ಲ ಹಣ ಬಿಡುಗಡೆಗೊಳಿಸಿದ್ದೆ ಎಂದು ಸ್ಮರಿಸಿದರು. ನಿಮ್ಮ ಕಷ್ಟವನ್ನು ನಾನು ಅರ್ಥ ಮಾಡಿಕೊಂಡಿದ್ದೇನೆ. ದೂರದ ಊರಿಂದ ಬಂದು, ಹೀಗೆ ದುಡಿಮೆಯ ಹಣವನ್ನು ಖರ್ಚು ಮಾಡಿಕೊಂಡು ಪ್ರತಿಭಟಿಸಬೇಡಿ. ಏನೇ ಇದ್ದರೂ ನೇರವಾಗಿ ನನ್ನ ಮನೆಗೆ ಬನ್ನಿ ಎಂದು ಸಚಿವರು ಕಿವಿಮಾತು ಹೇಳಿದರು.

ಗೃಹಲಕ್ಷ್ಮಿ ಹಣವನ್ನು ಎಲ್ಲಾ ಬಿಸಿಯೂಟದ ಮಹಿಳಾ ನೌಕರರಿಗೆ ನೀಡಬೇಕು ಎಂದು ನಿಯೋಗವು ಸಚಿವರಿಗೆ ಮನವಿ ಮಾಡಿತು. ಇದಕ್ಕೆ ಸ್ಪಂದಿಸಿದ ಸಚಿವರು, ನಮ್ಮ ಸರ್ಕಾರ ಜಾರಿಗೆ ತಂದಿರುವ ಐದು ಗ್ಯಾರಂಟಿ ಯೋಜನೆಗಳು ನಿಮ್ಮ ಮನೆಯ ಆರ್ಥಿಕತೆಗೆ ಶಕ್ತಿ ತುಂಬಿವೆ. ಈ ವಿಷಯವನ್ನು ಮುಖ್ಯಮಂತ್ರಿಗಳ ಗಮನಕ್ಕೂ ತರುತ್ತೇನೆ. ಸಾಧ್ಯತೆ ಇದ್ದರೆ ಗೃಹಲಕ್ಷ್ಮಿ ಹಣವನ್ನು ಕೊಡಿಸೋಣ ಎಂದು ತಿಳಿಸಿದರು.

ನಿಯೋಗದಲ್ಲಿ ಸಂಘಟನೆಯ ಕಾರ್ಯದರ್ಶಿ ಕಲ್ಪನಾ ವಿ ಜಿ. ಖಜಾಂಚಿ ಪುಷ್ಪಲತಾ ಸದಸ್ಯರಾದ ನಿರ್ಮಲಾ ರಾಮನಗರ, ಉಮಾದೇವಿ, ರಾಜೇಶ್ವರಿ ಪಾಟೀಲ್ ಹಾಗೂ ಶಿಕ್ಷಣ ಇಲಾಖೆಯ ಅಧಿಕಾರಿಗಳು ಹಾಜರಿದ್ದರು.

Chief reporter : SANDEEP RENU ✆ 99728 72151 | Executive Editor : SHARAT JYOTSNA B.R ✆ 9886766483 ✉ vaarthe@gmail.com

Published from: K10,'A'/4, Khriki Extension, Malviya Nagar, New Delhi-110 017. Phone: 95-120-3917916-20

Printed at: Jyoti Printers, E-94, Sector 6, Noida, UP. Phone: 0120-4232687 Off : E-94,Sector 6, Noida,UP | RNI No. DELKAN/2003/10363

# 1984ರ ಸಿಖ್ ವಿರೋಧಿ ದಂಗೆ ಪ್ರಕರಣದಲ್ಲಿ ಜೀವಾವಧಿ ಶಿಕ್ಷೆ ಅನುಭವಿಸುತ್ತಿದ್ದ ಸಂಸದ ಸಜ್ಜನ್ ಕುಮಾರ್ ನಿಧನ



**ನವದೆಹಲಿ, ಆ.20:** 1984ರ ಸಿಖ್ ವಿರೋಧಿ ದಂಗೆ ಪ್ರಕರಣದಲ್ಲಿ ಜೀವಾವಧಿ ಶಿಕ್ಷೆ ಅನುಭವಿಸುತ್ತಿದ್ದ ಮಾಜಿ ಕಾಂಗ್ರೆಸ್ ಸಂಸದ ಸಜ್ಜನ್ ಕುಮಾರ್ (80) ದೆಹಲಿಯ ಸಫ್ದರ್ಜಂಗ್ ಆಸ್ಪತ್ರೆಯಲ್ಲಿ ನಿಧನರಾಗಿದ್ದಾರೆ. ತಿಹಾರ್ ಜೈಲಿನಲ್ಲಿದ್ದ ಅವರನ್ನು ಆರೋಗ್ಯ ಹದಗೆಟ್ಟ ಹಿನ್ನೆಲೆಯಲ್ಲಿ ಆಸ್ಪತ್ರೆಗೆ ಕರೆದೊಯ್ಯಲಾಗಿತ್ತು. ಆದರೆ, ಆಸ್ಪತ್ರೆ ತಲುಪುವ ವೇಳೆಗೆ ಅವರು ನಿಧನರಾಗಿದ್ದರು.

ಸಜ್ಜನ್ ಕುಮಾರ್ ಮೂರು ಬಾರಿ ಲೋಕಸಭಾ ಸಂಸದರಾಗಿದ್ದರು. 1977ರಲ್ಲಿ ದೆಹಲಿ ಮಹಾನಗರ ಪಾಲಿಕೆ ಸದಸ್ಯರಾಗಿ ರಾಜಕೀಯ ಪ್ರವೇಶಿಸಿದ ಅವರು ಬಳಿಕ ದೆಹಲಿ ಕಾಂಗ್ರೆಸ್ನ ಪ್ರಧಾನ ಕಾರ್ಯದರ್ಶಿಯಾಗಿದ್ದರು. 1980ರಲ್ಲಿ ಮೊದಲ ಬಾರಿಗೆ ಲೋಕಸಭೆಗೆ ಆಯ್ಕೆಯಾದರು. 1991 ಮತ್ತು 2004ರಲ್ಲೂ ಹೊರ ದೆಹಲಿ ಕ್ಷೇತ್ರದಿಂದ ಗೆಲುವು ಸಾಧಿಸಿದ್ದರು.

ಮಾಜಿ ಪ್ರಧಾನಿ ಇಂದಿರಾ ಗಾಂಧಿ ಹತ್ಯೆಯ ಬಳಿಕ ದೆಹಲಿ ಸೇರಿದಂತೆ ದೇಶದ ಹಲವು ಭಾಗಗಳಲ್ಲಿ ಸಿಖ್ ವಿರೋಧಿ ಹಿಂಸಾಚಾರ ನಡೆದಿತ್ತು. ಈ ಪ್ರಕರಣಗಳಲ್ಲಿ ಸಜ್ಜನ್ ಕುಮಾರ್ ವಿರುದ್ಧ ಹಲವು ವರ್ಷಗಳ ಕಾಲ ಕಾನೂನು ಹೋರಾಟ ನಡೆಯಿತು.

2018ರ ಡಿಸೆಂಬರ್ನಲ್ಲಿ ದೆಹಲಿ ಹೈಕೋರ್ಟ್, ಐವರು ಸಿಖ್ಖರ ಹತ್ಯೆ ಮತ್ತು ಗುರುದ್ವಾರವೊಂದನ್ನು ಸುಟ್ಟುಹಾಕಿದ ಪ್ರಕರಣದಲ್ಲಿ ಸಜ್ಜನ್ ಕುಮಾರ್ಗೆ ಜೀವಾವಧಿ ಶಿಕ್ಷೆ ವಿಧಿಸಿತ್ತು. ಬಳಿಕ ಅವರು ಕಾಂಗ್ರೆಸ್ಗೆ ರಾಜೀನಾಮೆ ನೀಡಿದ್ದರು.

1984ರ ದಂಗೆಗೆ ಸಂಬಂಧಿಸಿದ ಮತ್ತೊಂದು ಪ್ರಕರಣದಲ್ಲಿ ಇಬ್ಬರು ಸಿಖ್ ವ್ಯಕ್ತಿಗಳ ಹತ್ಯೆಗೆ ಸಂಬಂಧಿಸಿ ದೆಹಲಿ ನ್ಯಾಯಾಲಯವು 2025ರ ಫೆಬ್ರವರಿಯಲ್ಲಿ ಸಜ್ಜನ್ ಕುಮಾರ್ಗೆ ಮತ್ತೊಮ್ಮೆ ಜೀವಾವಧಿ ಶಿಕ್ಷೆ ವಿಧಿಸಿತ್ತು. ಈ ಕಾರಣದಿಂದ ಅವರು ತಿಹಾರ್ ಜೈಲಿನಲ್ಲಿ ಶಿಕ್ಷೆ ಅನುಭವಿಸುತ್ತಿದ್ದರು.

ದೆಹಲಿ ಕಾಂಗ್ರೆಸ್ನ ಪ್ರಮುಖ ನಾಯಕರಾಗಿ ಗುರುತಿಸಿಕೊಂಡಿದ್ದ ಸಜ್ಜನ್ ಕುಮಾರ್ ಅವರ ರಾಜಕೀಯ ಜೀವನ 1984ರ ದಂಗೆ ಪ್ರಕರಣಗಳಿಂದಾಗಿ ವಿವಾದಕ್ಕೆ ಒಳಗಾಯಿತು. ಪ್ರಕರಣಗಳ ವಿಚಾರಣೆ ಹಲವು ದಶಕಗಳ ಕಾಲ ಮುಂದುವರಿದಿದ್ದು, ಕೆಲವು ಪ್ರಕರಣಗಳಲ್ಲಿ ಅವರು ಖುಲಾಸೆಗೊಂಡಿದ್ದರೆ, ಇನ್ನು ಕೆಲವು ಪ್ರಕರಣಗಳಲ್ಲಿ ಶಿಕ್ಷೆಗೆ ಗುರಿಯಾಗಿದ್ದರು.

# ರಾಜ್ಯ ಸರ್ಕಾರದಿಂದ ಮಂಜೂರಾದ ಭೂಮಿಯನ್ನು ಸಾರ್ವಜನಿಕ ಉದ್ಯಮಗಳು ಹರಾಜು ಹಾಕಲು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಆಕ್ಷೇಪ



**ಮಹಾಬಲಿಪುರಂ, ಆ.20:** ರಾಜ್ಯ ಸರ್ಕಾರಗಳು ಸಾರ್ವಜನಿಕ ವಲಯದ ಸಂಸ್ಥೆಗಳಿಗೆ ಮಂಜೂರು ಮಾಡಿರುವ ಭೂಮಿಯನ್ನು ಹರಾಜು ಹಾಕುತ್ತಿರುವುದಕ್ಕೆ ಕರ್ನಾಟಕ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಗುರುವಾರ ತೀವ್ರ ಆಕ್ಷೇಪ ವ್ಯಕ್ತಪಡಿಸಿದರು. ಫಲಾನುಭವಿ ಸಂಸ್ಥೆ ಕಾರ್ಯನಿರ್ವಹಿಸದೆ ಹೋದಾಗ ಅಥವಾ ತನ್ನ ಕಾರ್ಯಾಚರಣೆಯನ್ನು ಸ್ಥಗಿತಗೊಳಿಸಿದಾಗ ಅಂತಹ ಭೂಮಿಯನ್ನು ಸರ್ಕಾರಕ್ಕೆ ಹಿಂದಿರುಗಿಸಬೇಕು ಎಂದು ಅವರು ಹೇಳಿದರು.

ದಕ್ಷಿಣ ವಲಯ ಮಂಡಳಿ ಸಭೆಯಲ್ಲಿ ರಕ್ಷಣಾ ಭೂಮಿಯ ಬಳಕೆಗೆ ಸಂಬಂಧಿಸಿದ ವಿಷಯದ ಚರ್ಚೆ ವೇಳೆ ಈ ವಿಚಾರ ಪ್ರಸ್ತಾಪವಾಯಿತು. ರಾಷ್ಟ್ರ ನಿರ್ಮಾಣದ ಭಾಗವಾಗಿ ರಾಜ್ಯ ಸರ್ಕಾರಗಳು PSUಗಳು ಹಾಗೂ ಇತರ ಸಂಸ್ಥೆಗಳಿಗೆ ಉಚಿತವಾಗಿ ಮಂಜೂರು ಮಾಡಿರುವ ಭೂಮಿಯನ್ನು, ಸರ್ಕಾರದ ಅನುಮತಿ ಪಡೆಯದೆ ಬಳಿಕ ಮಾರಾಟ ಮಾಡುವುದು ಅಥವಾ ಹರಾಜು ಹಾಕುತ್ತಿರುವ ಬಗ್ಗೆ ಶಿವಕುಮಾರ್ ವ್ಯಾಪಕ ಕಳವಳ ವ್ಯಕ್ತಪಡಿಸಿದರು.

ಇಂದು ಬೆಳಗ್ಗೆ ನನ್ನ ಅಧಿಕಾರಿಗಳಿಂದ ನನಗೆ ಕರೆ ಬಂದಿತ್ತು. ಕಾರ್ಯನಿರ್ವಹಿಸದೆ ಇರುವ ಖಖಖಯೊಂದು ಭೂಮಿಯನ್ನು ಹರಾಜು ಹಾಕುತ್ತಿದೆ ಎಂದು ಅವರು ತಿಳಿಸಿದರು. ನಾವು ಕಖಗಗಳಿಗೆ ಭೂಮಿಯನ್ನು ನೀಡುತ್ತೇವೆ. ಅವು ಮುಚ್ಚಿದಾಗ ಅಥವಾ ಕಾರ್ಯಾಚರಣೆಯಿಂದ ಹೊರಬಂದಾಗ ಆ ಭೂಮಿಯನ್ನು ಹರಾಜು ಹಾಕುತ್ತಾರೆ. ನಾವು ಭೂಮಿಯನ್ನು ನೀಡಿರುವುದರಿಂದ ಅಂತಹ ಭೂಮಿಯನ್ನು ಸರ್ಕಾರಕ್ಕೆ ಹಿಂದಿರುಗಿಸಬೇಕು. ರಾಜ್ಯ ಸರ್ಕಾರವಾಗಿ ನಾವು ನ್ಯಾಯಾಲಯಕ್ಕೆ ಹೋಗಿ ಇದನ್ನು ತಡೆಯುತ್ತೇವೆ ಮತ್ತು ಈ ಭೂಮಿಯನ್ನು ಅಭಿವೃದ್ಧಿಪಡಿಸಲು ಅನುಮತಿ ಯನ್ನೂ ನೀಡುವುದಿಲ್ಲ, ಎಂದು ಅವರು ಹೇಳಿದರು.

ಸೂಕ್ತ ರಾಜ್ಯ ಪ್ರಾಧಿಕಾರಗಳ ಅನುಮತಿ ಅಥವಾ ಸಮ್ಮತಿ ಪಡೆಯದೆ ಫಲಾನುಭವಿಗಳು ಭೂಮಿಯನ್ನು ವಿಲೇವಾರಿ ಮಾಡಿರುವ ಹಲವು ಪ್ರಕರಣಗಳಿವೆ ಎಂದು ಮುಖ್ಯಮಂತ್ರಿ ಹೇಳಿದರು.

ರಾಷ್ಟ್ರ ನಿರ್ಮಾಣದ ದೊಡ್ಡ ಉದ್ದೇಶಕ್ಕಾಗಿ ಸಂಸ್ಥೆಗಳಿಗೆ ನೀಡಲಾದ ಸಂಪನ್ಮೂಲಗಳನ್ನು ಈ ರೀತಿಯಲ್ಲಿ ವಿಲೇವಾರಿ ಮಾಡುವುದು ದುರ್ಬಳಕೆಯಾಗಿದೆ ಎಂದು ಅವರು ಹೇಳಿದರು. ಇಂತಹ ಭೂಮಿಯ ಬಳಕೆ ಅಥವಾ ವಿಲೇವಾರಿ ಕುರಿತು ರಾಜ್ಯ ಸರ್ಕಾರಗಳಿಗೂ ನಿರ್ಧಾರ ಕೈಗೊಳ್ಳುವ ಅವಕಾಶ ಇರಬೇಕು ಎಂದು ಅವರು ಅಭಿಪ್ರಾಯಪಟ್ಟರು.

ಶಿವಕುಮಾರ್ ಅವರ ಕಳವಳಕ್ಕೆ ಪ್ರತಿಕ್ರಿಯಿಸಿದ ದಕ್ಷಿಣ ವಲಯ ಮಂಡಳಿ ಸಭೆಯ ಅಧ್ಯಕ್ಷರೂ ಆಗಿರುವ ಕೇಂದ್ರ ಗೃಹ ಸಚಿವ ಅಮಿತ್ ಶಾ, ಇದು ನೀತಿಗೆ ಸಂಬಂಧಿಸಿದ ವಿಷಯವಾಗಿದ್ದು, ಕೇಂದ್ರ ಸರ್ಕಾರದ ಮುಂದೆ ಪ್ರಸ್ತಾಪಿಸಬೇಕು ಎಂದು ಹೇಳಿದರು.

# ಪಶ್ಚಿಮಘಟ್ಟ ರಕ್ಷಣೆ: ಕಸ್ತೂರಿರಂಗನ್ ವರದಿಯ 7ನೇ ಕರಡು ಅಧಿಸೂಚನೆ ತಿರಸ್ಕರಿಸಲು ರಾಜ್ಯ ನಿರ್ಧಾರ

**ಬೆಂಗಳೂರು, ಆ.20:** ಪಶ್ಚಿಮ ಘಟ್ಟಗಳ ರಕ್ಷಣೆಗೆ ಕೇಂದ್ರ ಸರ್ಕಾರದ ಕಸ್ತೂರಿ ರಂಗನ್ ವರದಿಯ ಏಳನೇ ಕರಡು ಅಧಿಸೂಚನೆ ತಿರಸ್ಕರಿಸಲು ರಾಜ್ಯ ಸರ್ಕಾರ ನಿರ್ಧರಿಸಿದೆ. ವಿಧಾನಸಭೆಯಲ್ಲಿ ಇಂದು ಕೇಂದ್ರದ ಏಳನೇ ಕರಡು ಅಧಿಸೂಚನೆ ವಿರೋಧಿಸಿ ನಡೆದ ಚರ್ಚೆಗೆ ಉತ್ತರ ಕೊಡುವಾಗ ಅರಣ್ಯ ಸಚಿವ ರಾಮಲಿಂಗಾರೆಡ್ಡಿ ಕೇಂದ್ರದ ಅಧಿಸೂಚನೆಗೆ ಆಕ್ಷೇಪಣೆ ಸಲ್ಲಿಸಲು 60 ದಿನಗಳ ಕಾಲಾವಕಾಶ ಇದೆ. ರಾಜ್ಯ ಸರ್ಕಾರ ತನ್ನ ಆಕ್ಷೇಪಣೆಗಳನ್ನು ಸಲ್ಲಿಸುವ ಮೂಲಕ ಕೇಂದ್ರದ ಅಧಿಸೂಚನೆಯನ್ನು ತಿರಸ್ಕರಿಸಲಾಗುತ್ತದೆಎಂದು ಹೇಳಿದರು . ಕೇಂದ್ರ ಸರ್ಕಾರ ಮತ್ತೆ ಅಧಿಸೂಚನೆ ಹೊರಡಿಸಿರೋದು ಆ ಭಾಗದ ಶಾಸಕರ ತೀವ್ರ ವಿರೋಧಕ್ಕೆ ಕಾರಣವಾಗಿದೆ.


**ಮೀಸಲು ಅರಣ್ಯ ಪ್ರದೇಶದಿಂದ ಹೊರತಾದ 10 ಸಾವಿರ ಹೆಕ್ಟೇರ್ ಜಮೀನಿನ ಗಡಿ ಗುರುತಿಸುವ ಸರ್ವೇ ಶೀಘ್ರ ಪೂರ್ಣ**

ಚಿಕ್ಕಮಗಳೂರು ಜಿಲ್ಲೆಯ ಮೀಸಲು ಅರಣ್ಯ ಪ್ರದೇಶದಿಂದ ಹೊರತುಪಡಿಸಲಾದ 10 ಸಾವಿರ ಹೆಕ್ಟೇರ್ ಜಮೀನಿನ ಗಡಿ ಗುರುತಿಸುವ ಜಂಟಿ ಸರ್ವೆ ಕಾರ್ಯವನ್ನು ಶೀಘ್ರದಲ್ಲೇ ಪೂರ್ಣಗೊಳಿಸಲಾಗುವುದು ಎಂದು ಅರಣ್ಯ ಸಚಿವ ರಾಮಲಿಂಗಾರೆಡ್ಡಿ ಭರವಸೆ ನೀಡಿದ್ದಾರೆ.

ವಿಧಾನಸಭೆಯ ಕಲಾಪದಲ್ಲಿ ಕಾಂಗ್ರೆಸ್ ಶಾಸಕ ಟಿ.ಡಿ. ರಾಜೇಗೌಡ ಅವರು ಕೇಳಿದ ಪ್ರಶ್ನೆಗೆ ಸಚಿವರು ಸುದೀರ್ಘವಾಗಿ ಉತ್ತರಿಸಿದರು. ಬಾಕಿ ಇರುವ ಜಂಟಿ ಮೋಜಣಿ ಕಾರ್ಯವನ್ನು ತ್ವರಿತವಾಗಿ ಮುಗಿಸಲು ಜಿಲ್ಲಾ ಮಟ್ಟದ ಮೇಲ್ವಿಚಾರಣಾ ಸಮಿತಿ ಹಾಗೂ ಟಾಸ್ಕ್ ಫೋರ್ಸ್ ಅವಧಿಯನ್ನು ವಿಸ್ತರಿಸಲಾಗುತ್ತಿದೆ ಎಂದು ತಿಳಿಸಿದರು. ಚಿಕ್ಕಮಗಳೂರು ಜಿಲ್ಲೆಯ ಕೊಪ್ಪ, ಶೃಂಗೇರಿ, ನರಸಿಂಹರಾಜಪುರ, ಮೂಡಿಗೆರೆ ಹಾಗೂ ಚಿಕ್ಕಮಗಳೂರು ತಾಲೂಕುಗಳ ವ್ಯಾಪ್ತಿಯಲ್ಲಿರುವ 55,989.69 ಹೆಕ್ಟೇರ್ ಅಧಿಸೂಚಿತ ಅರಣ್ಯ ಪ್ರದೇಶದ ಕುರಿತು ಜಿಲ್ಲಾಧಿಕಾರಿಗಳು ಈಗಾಗಲೇ ಸಮಗ್ರ ಪ್ರಗತಿ ವರದಿ ಸಲ್ಲಿಸಿದ್ದಾರೆ ಎಂದು ಸಚಿವರು ಸದನಕ್ಕೆ ಮಾಹಿತಿ ನೀಡಿದರು.ಕೊಪ್ಪ ಮತ್ತು ಚಿಕ್ಕಮಗಳೂರು ಅರಣ್ಯ ವಿಭಾಗಗಳ 185 ಗ್ರಾಮಗಳ ಪೈಕಿ ಇದುವರೆಗೆ 97 ಗ್ರಾಮಗಳ 797 ಸರ್ವೆ ನಂಬರ್‌ಗಳ ಜಂಟಿ ಮೋಜಣಿ ಪೂರ್ಣಗೊಂಡಿದೆ. ಈ ಮೂಲಕ ಒಟ್ಟಾರೆ ಶೇ.45 ರಷ್ಟು ಅರಣ್ಯ ಭೂಮಿಯ ಸರ್ವೆ ಪ್ರಕ್ರಿಯೆ ಯಶಸ್ವಿಯಾಗಿ ಮುಕ್ತಾಯಗೊಂಡಿದೆ ಎಂದು ಸಚಿವರು ಸ್ಪಷ್ಟಪಡಿಸಿದರು.

# ವಂದೇ ಮಾತರಂನ ಎರಡು ಚರಣ ಹಾಡುವ ನಿರ್ಧಾರ ಕಾಂಗ್ರೆಸ್‌ನ ದೇಶ ವಿರೋಧಿ ನೀತಿ: ಶಾ ವಾಗ್ದಾಳಿ

**ಮತಬ್ಯಾಂಕ್ ರಾಜಕಾರಣಕ್ಕಾಗಿ ಕಾಂಗ್ರೆಸ್ ಹೊಸ ಮುಸ್ಲಿಂ ಲೀಗ್ ಆಗಿದೆ; ನಿತಿನ್ ನಬಿನ್**



**ಚೆನ್ನೈ, ಆ.20:** ವಂದೇ ಮಾತರಂ ಗೀತೆಯ ಮೊದಲ ಎರಡು ಚರಣಗಳನ್ನು ಮಾತ್ರ ಕಾಂಗ್ರೆಸ್ ಕಾರ್ಯಕ್ರಮಗಳಲ್ಲಿ ಹಾಡುವ ನಿರ್ಧಾರಕ್ಕೆ ಕೇಂದ್ರ ಗೃಹ ಸಚಿವ ಅಮಿತ್ ಶಾ ತೀವ್ರ ಆಕ್ಷೇಪ ವ್ಯಕ್ತಪಡಿಸಿದ್ದಾರೆ. ಕಾಂಗ್ರೆಸ್ ಕಾರ್ಯಕಾರಿ ಸಮಿತಿಯ ಈ ನಿರ್ಧಾರವನ್ನು ಅವರು ದೇಶವಿರೋಧಿ ಎಂದು ಟೀಕಿಸಿದ್ದು, ಇದು ಕಾಂಗ್ರೆಸ್‌ನ ಹಳೆಯ ತುಷ್ಟೀಕರಣ ರಾಜಕಾರಣವನ್ನು ಮತ್ತೆ ಮುನ್ನೆಲೆಗೆ ತಂದಿದೆ ಎಂದು ಆರೋಪಿಸಿದ್ದಾರೆ.

ತ್ ವಿ ು ಳ್ ು ನಾ ಡಿ ನ್ ಚೆಂಗಲ್ಪಟ್ಟಿನಲ್ಲಿ ಮಾತನಾಡಿದ ಅಮಿತ್ ಶಾ, 1937ರಲ್ಲಿ ಕಾಂಗ್ರೆಸ್ ವಂದೇ ಮಾತರಂ ಅನ್ನು ಎರಡು ಭಾಗಗಳಾಗಿ ವಿಭಜಿಸುವ ನಿರ್ಧಾರ ಕೈಗೊಂಡಿತ್ತು. ಮುಸ್ಲಿಮರ ತುಷ್ಟೀಕರಣಕ್ಕಾಗಿ ಕೈಗೊಂಡ ಆ ನಿರ್ಧಾರವೇ ದೇಶ ವಿಭಜನೆಗೆ ದಾರಿ ಮಾಡಿಕೊಟ್ಟಿತು ಎಂದು ಆರೋಪಿಸಿದರು. ಈಗ ಅದೇ ನಿರ್ಧಾರವನ್ನು ಕಾಂಗ್ರೆಸ್ ಮತ್ತೆ ಜಾರಿಗೆ ತರುತ್ತಿದೆ ಎಂದು ವಾಗ್ದಾಳಿ ನಡೆಸಿದರು.


ಕಾಂಗ್ರೆಸ್ ಕಾರ್ಯಕಾರಿ ಸಮಿತಿ ಬುಧವಾರ ನಡೆದ ಸಭೆಯಲ್ಲಿ, 1937ರ ತನ್ನ ನಿರ್ಣಯವನ್ನು ಮುಂದುವರಿಸಲು ತೀರ್ಮಾನಿಸಿದೆ. ಅದರಂತೆ ಪಕ್ಷದ ಕಾರ್ಯಕ್ರಮಗಳಲ್ಲಿ ವಂದೇ ಮಾತರಂನ ಮೊದಲ ಎರಡು ಚರಣಗಳನ್ನು ಮಾತ್ರ ಹಾಡಲಾಗುವುದು ಎಂದು ಸ್ಪಷ್ಟಪಡಿಸಿದೆ.

ಈ ಬೆಳವಣಿಗೆಗೆ ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ನಿತಿನ್ ನಬೀನ್ ಕೂಡ ತೀವ್ರ ಪ್ರತಿಕ್ರಿಯೆ ನೀಡಿದ್ದಾರೆ. ವಂದೇ ಮಾತರಂ ಅನ್ನು ಕೇವಲ ಎರಡು ಚರಣಗಳಿಗೆ ಸೀಮಿತಗೊಳಿಸುವ ಮೂಲಕ ಕಾಂಗ್ರೆಸ್ ಈಗ ತನ್ನ ಅವಮಾನವನ್ನು ಅಧಿಕೃತ ನಿರ್ಣಯವನ್ನಾಗಿ ಮಾಡಿಕೊಂಡಿದೆ ಎಂದು ಟೀಕಿಸಿದ್ದಾರೆ. ಮತಬ್ಯಾಂಕ್ ರಾಜಕಾರಣಕ್ಕಾಗಿ ಕಾಂಗ್ರೆಸ್ ಹೊಸ ಮುಸ್ಲಿಂ ಲೀಗ್ ಆಗಿದೆ ಎಂದೂ ಆರೋಪಿಸಿದ್ದಾರೆ.

ವಂದೇ ಮಾತರಂ ಅನ್ನು ಭಾರತ ಮಾತೆಯ ಪವಿತ್ರ ಸ್ತುತಿ ಎಂದು ಬಣ್ಣಿಸಿರುವ ನಬೀನ್, ಈ ಗೀತೆಯನ್ನು ಮನಸ್ಸಿನಲ್ಲಿ ಇಟ್ಟುಕೊಂಡು ದೇಶಕ್ಕಾಗಿ ಪ್ರಾಣತ್ಯಾಗ ಮಾಡಿದ ಸಾವಿರಾರು ಹುತಾತ್ಮರಿಗೆ ಇದು ಅವಮಾನ ಎಂದು ಹೇಳಿದ್ದಾರೆ.

ಕೆಲ ದಿನಗಳ ಹಿಂದೆ ನಡೆದ ವಂದೇ ಮಾತರಂ ಕುರಿತ ವಿವಾದವನ್ನೂ ಉಲ್ಲೇಖಿಸಿರುವ ಅವರು, ಆಗ ನಡೆದದ್ದು ವ್ಯಕ್ತಿಯ ನಡವಳಿಕೆ ಆಗಿದ್ದರೆ, ಇದೀಗ ಅದೇ ನಿಲುವು ಕಾಂಗ್ರೆಸ್‌ನ ನೀತಿಯಾಗಿ ಮಾರ್ಪಟ್ಟಿದೆ ಎಂದು ಟೀಕಿಸಿದ್ದಾರೆ.

# ಕೂಲಿ ಕಾರ್ಮಿಕರನ್ನು ಭೂಮಾಲೀಕರನ್ನಾಗಿಸಿದ ಧೀಮಂತ ವ್ಯಕ್ತಿ ದೇವರಾಜ ಅರಸು ಟಿ.ಎಂ ಶಾಹಿದ್ ತೆಕ್ಕಿಲ್ ಅಭಿಮತ



**ಮಂಗಳೂರು, ಆ.20:** ಬೆರಳೆಣಿಕೆಯಷ್ಟು ಮಂದಿ ಭೂಮಿಯ ಒಡೆತನ ಹೊಂದಿದ್ದ ಸಮಾಜದಲ್ಲಿ ಇಂದು ಲಕ್ಷಾಂತರ ಮಂದಿ ಭೂ ಮಾಲೀಕರಾಗಲು ಅಂದಿನ ಮುಖ್ಯಮಂತ್ರಿ ಡಿ.ದೇವರಾಜು ಅರಸು ಅವರ ದೂರದೃಷ್ಟಿ ಕಾರಣ ಎಂದು ರಾಜ್ಯ ಕನಿಷ್ಠ ವೇತನಾ ಸಲಹಾ ಮಂಡಳಿ ಅಧ್ಯಕ್ಷ ಟಿ.ಎಂ ಶಾಹಿದ್ ತೆಕ್ಕಿಲ್ ಹೇಳಿದರು. ಅವರು ಗುರುವಾರ ದಕ್ಷಿಣ ಕನ್ನಡ ಜಿಲ್ಲಾ ಪಂಚಾಯತ್ ನೇತ್ರಾವತಿ ಸಭಾಂಗಣದಲ್ಲಿ ನಡೆದ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಸಂಯುಕ್ತ ಆಶ್ರಯದೊಂದಿಗೆ ಸಾಮಾಜಿಕ ನ್ಯಾಯದ ಹರಿಕಾರ, ಕರ್ನಾಟಕ ರಾಜ್ಯದ ಮಾಜಿ ಮುಖ್ಯಮಂತ್ರಿ ಡಿ. ದೇವರಾಜ ಅರಸು ಅವರ 111 ನೇ ಜನ್ಮ ದಿನಾಚರಣೆ ಸಮಾರಂಭ ಉದ್ಘಾಟಿಸಿ ಮಾತನಾಡಿದರು.

ಜಮೀನಿನಲ್ಲಿ ಕೂಲಿ ಕಾರ್ಮಿಕರಾಗಿ ಕೆಲಸ ಮಾಡುತ್ತಿದ್ದ ಜನರು, ಭೂಮಿಯ ಮಾಲೀಕರಾಗುವ ಕನಸು ಕಾಣಲು ಕೂಡ ಸಾಧ್ಯವಿಲ್ಲದಂತಹ ಕಾಲಘಟ್ಟದಲ್ಲಿ ದೇವರಾಜು ಅರಸು ಅವರ ಆಡಳಿತ ಮತ್ತು ನೀತಿಯ ಫಲವಾಗಿ ಸಮಾಜದ ಅತ್ಯಂತ ಕೆಳಸ್ತರದಲ್ಲಿರುವವರಿಗೆ ಕೂಡ ಭೂಮಿಯ ಒಡೆತನ ದೊರೆಯಿತು ಎಂದರು.

ಶಿಕ್ಷಣದಿಂದ ಯಾವುದೇ ಸಮುದಾಯವು ಮೇಲಕ್ಕೆ ಬರಲು ಸಾಧ್ಯ ಎಂಬುದನ್ನು ಮನಗಂಡ ಅರಸು ಅವರು, ಅದಕ್ಕಾಗಿ ಹಲವಾರು ಶಾಲೆಗಳನ್ನು ತೆರೆಯಲು ಕಾರಣರಾದರು. ನಗರ ಪ್ರದೇಶಗಳಲ್ಲಿ ಹಾಸ್ಟೆಲ್‌ಗಳನ್ನು ಸ್ಥಾಪಿಸುವ ಮೂಲಕ ಬಡವರು ಉನ್ನತ ಶಿಕ್ಷಣ ಕಲಿಯಲು ನಗರಗಳಿಗೆ ಬರುವಂತಾಯಿತು. ಅವಿಭಜಿತ ದಕ್ಷಿಣ ಕನ್ನಡ ಜಿಲ್ಲೆಯು ಸಾಮಾಜಿಕ ಮತ್ತು ಶೈಕ್ಷಣಿಕವಾಗಿ ಪ್ರಗತಿ ಹೊಂದಲು ಅರಸು ಅವರ ಆಡಳಿತ ದೂರದೃಷ್ಟಿ ಸಹಕಾರಿ ಯಾಯಿತು ಎಂದು ಟಿ.ಎಂ ಶಾಹಿದ್ ತೆಕ್ಕಿಲ್ ಹೇಳಿದರು.

ಸಂಪನ್ಮೂಲ ವ್ಯಕ್ತಿ ನಂದಿಕೂರು ಎಜುಕೇಶನ್ ಟ್ರಸ್ಟ್ ಆಡಳಿತ ಅಧಿಕಾರಿ ಸಾಯಿನಾಥ್ ಶೆಟ್ಟಿ ಮುಂಡ್ಕೂರು ಮಾತನಾಡಿ, ಹಿಂದುಳಿದ ವರ್ಗ, ಅಲ್ಪಸಂಖ್ಯಾತರ ಮತ್ತು ದಲಿತರ ಸಾಮಾಜಿಕ ಮತ್ತು ಶೈಕ್ಷಣಿಕ ಪ್ರಗತಿಗೆ ದೇವರಾಜ ಅರಸು ಅಹರ್ನಿಶಿ ದುಡಿದರು. ಭೂ ಒಡೆತನದಿಂದ ದುರ್ಬಲ ವರ್ಗದವರು ಸಾಮಾಜಿಕ ಮತ್ತು ಆರ್ಥಿಕವಾಗಿ ಪ್ರಗತಿ ಹೊಂದುವಂತಾಯಿತು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಕರ್ನಾಟಕ ಗೇರು ಅಭಿವೃದ್ಧಿ ನಿಗಮದ ಅಧ್ಯಕ್ಷೆ ಮಮತಾ ಗಟ್ಟಿ, ಕರ್ನಾಟಕ ಪರಿಸರ ಪ್ರವಾಸೋದ್ಯಮ ಅಭಿವೃದ್ಧಿ ಮಂಡಳಿ ಅಧ್ಯಕ್ಷೆ ಶಾಲೆಟ್ ಪಿಂಟೋ, ತುಳು ಸಾಹಿತ್ಯ ಅಕಾಡೆಮಿ ಅಧ್ಯಕ್ಷ ತಾರಾನಾಥ ಗಟ್ಟಿ ಅಪರ ಜಿಲ್ಲಾಧಿಕಾರಿ ರಾಜು ಕೆ, ದಕ್ಷಿಣ ಕನ್ನಡ ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿ ಜಯಲಕ್ಷ್ಮಿ, ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ ಶಶಿಧರ್, ಹೆಚ್ಚುವರಿ ಪೊಲೀಸ್ ಅಧೀಕ್ಷಕ ಅನಿಲ್ ಕುಮಾರ್ ಭೂಮಾರೆಡ್ಡಿ, ಜಿಲ್ಲಾ ಪಂಚಾಯತ್ ಮುಖ್ಯ ಲೆಕ್ಕಾಧಿಕಾರಿ ಶಕುಂತಲಾ ಮತ್ತಿತ್ತರರು ಇದ್ದರು.

ಇದೇ ಸಂದರ್ಭದಲ್ಲಿ ಮಾಜಿ ಪ್ರಧಾನಿ ದಿ.ರಾಜೀವ್ ಗಾಂಧಿ ಅವರ ಜನ್ಮದಿನದ ಪ್ರಯುಕ್ತ ಸದ್ಭಾವನಾ ದಿನದ ಪ್ರತಿಜ್ಞೆ ಸ್ವೀಕರಿಸಲಾಯಿತು.

ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಜಿಲ್ಲಾ ಅಧಿಕಾರಿ ಬಿಂದಿಯಾ ಎನ್ ನಾಯಕ್ ಸ್ವಾಗತಿಸಿದರು.

# ಶೋಷಿತರ ಧ್ವನಿಯಾಗಿ ಸಾಮಾಜಿಕ ಪರಿವರ್ತನೆಗೆ ಅರಸು ಕೊಡುಗೆ ಅಪಾರ: ತಂಗಡಗಿ



**ಬೆಂಗಳೂರು, ಆ.20:** ಮಾಜಿ ಮುಖ್ಯಮಂತ್ರಿ ಡಿ. ದೇವರಾಜ ಅರಸು ಅವರು ಶೋಷಿತರು, ಹಿಂದುಳಿದ, ಬಡವರು ಹಾಗೂ ಅವಕಾಶ ವಂಚಿತರ ಧ್ವನಿಯಾಗಿ ಸಾಮಾಜಿಕ ಪರಿವರ್ತನೆಗೆ ಅವರು ನೀಡಿದ ಕೊಡುಗೆ ಅಪಾರ ಎಂದು ಕನ್ನಡ ಮತ್ತು ಸಂಸ್ಕೃತಿ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಸಚಿವ ಶಿವರಾಜ್. ಎಸ್.ತಂಗಡಗಿ ಅವರು ಅಭಿಪ್ರಾಯಪಟ್ಟರು.

ವಿಧಾನಸೌಧದ ಬ್ಯಾಂಕ್ವೆಂಟ್ ಹಾಲ್‌ನಲ್ಲಿ ದೇವರಾಜ ಅರಸು ಅವರ 111ನೇ ಜನ್ಮದಿನಾಚರಣೆ ಅಂಗವಾಗಿ ಗುರುವಾರ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಪ್ರೊ.ಪಿ.ವಿ.ನಂಜರಾಜ ಅರಸ ಅವರಿಗೆ ಡಿ.ದೇವರಾಜ ಅರಸು ಪ್ರಶಸ್ತಿ ಪ್ರದಾನ ಮಾಡಿ ಮಾತನಾಡಿದರು.

ಅಧಿಕಾರವೆಂದರೆ ಕೇವಲ ಆಡಳಿತ ನಡೆಸುವ ಸಾಧನವಲ್ಲ; ಸಮಾಜದ ಕಟ್ಟಕಡೆಯ ವ್ಯಕ್ತಿಗೂ ಅವಕಾಶ, ಗೌರವ ಮತ್ತು ಸಮಾನ ಹಕ್ಕುಗಳನ್ನು ತಲುಪಿಸುವ ಜವಾಬ್ದಾರಿ ಎಂಬುದನ್ನು ಅರಸು ಅವರು ತಮ್ಮ ಆಡಳಿತದ ಮೂಲಕ ತೋರಿಸಿಕೊಟ್ಟರು ಎಂದರು.

ಭೂ ಸುಧಾರಣೆ ದೇವರಾಜ ಅರಸು ಅವರ ಆಡಳಿತದ ಪ್ರಮುಖ ಮೈಲಿಗಲ್ಲು ಆಗಿತ್ತು. ಉಳುವವನೇ ಭೂಮಿಯ ಒಡೆಯ ಎಂಬ ಆಶಯಕ್ಕೆ ಬಲ ತುಂಬುವ ಮೂಲಕ ತಲೆತಲಾಂತರಗಳಿಂದ ಭೂಮಿಯನ್ನು ಉಳುಮೆ ಮಾಡುತ್ತಿದ್ದ ರೈತರಿಗೆ ಹಕ್ಕು ದೊರೆಯುವಂತೆ ಮಾಡಿದರು. ಇದರಿಂದ ಗ್ರಾಮೀಣ ಕರ್ನಾಟಕದ ಸಾಮಾಜಿಕ ಮತ್ತು ಆರ್ಥಿಕ ವ್ಯವಸ್ಥೆಯಲ್ಲಿ ಮಹತ್ವದ ಬದಲಾವಣೆ ಉಂಟಾಯಿತು ಎಂದು ಹೇಳಿದರು.


**ಶೈಕ್ಷಣಿಕ– ಆರ್ಥಿಕ ಪ್ರಗತಿಗೆ ಆದ್ಯತೆ:**

ಹಿಂದುಳಿದ ವರ್ಗಗಳ ಸಾಮಾಜಿಕ, ಶೈಕ್ಷಣಿಕ ಮತ್ತು ಆರ್ಥಿಕ ಪ್ರಗತಿಗೆ ಅರಸು ಅವರು ವಿಶೇಷ ಆದ್ಯತೆ ನೀಡಿದ್ದರು. ಸಮಾನ ಅವಕಾಶ ಕಲ್ಪಿಸಲು ಶಿಕ್ಷಣ ಮತ್ತು ಉದ್ಯೋಗ ಕ್ಷೇತ್ರದಲ್ಲಿ ಹಿಂದುಳಿದ ಸಮುದಾಯಗಳಿಗೆ ಅವಕಾಶ ದೊರೆಯಬೇಕು ಎಂಬ ಅವರ ನಿಲುವು ಕರ್ನಾಟಕದಲ್ಲಿ ಸಾಮಾಜಿಕ ನ್ಯಾಯದ ನೀತಿಗಳಿಗೆ ಬಲವಾದ ಅಡಿಪಾಯ ಹಾಕಿತು ಎಂದು ವಿವರಿಸಿದರು.

ದೇವರಾಜ ಅರಸು ಅವರನ್ನು ಸ್ಮರಿಸುವುದು ಕೇವಲ ಜಯಂತಿ ಆಚರಣೆ ಅಥವಾ ಭಾವಚಿತ್ರಕ್ಕೆ ಮಾಲಾರ್ಪಣೆ ಮಾಡುವುದಕ್ಕೆ ಸೀಮಿತವಾಗಬಾರದು. ಅವರ ಸಾಮಾಜಿಕ ನ್ಯಾಯ, ಸಮಾನತೆ ಮತ್ತು ಸರ್ವರ ಅಭಿವೃದ್ಧಿಯ ವಿಚಾರಗಳನ್ನು ಅಳವಡಿಸಿಕೊಂಡು ದುರ್ಬಲ ವರ್ಗಗಳ ಬದುಕಿನಲ್ಲಿ ಬದಲಾವಣೆ ತರುವುದು ಅವರಿಗೆ ಸಲ್ಲಿಸುವ ನಿಜವಾದ ಗೌರವ ಎಂದು ಸಚಿವರು ಅಭಿಪ್ರಾಯಪಟ್ಟರು. ಅರಸು ಅವರ ಜೀವನ ಮತ್ತು ಸಾಮಾಜಿಕ ನ್ಯಾಯದ ಮಹತ್ವವನ್ನು ಸಾರುತ್ತದೆ. ಅವರ ಚಿಂತನೆಗಳು ಮುಂದಿನ ಪೀಳಿಗೆಗೂ ಮಾರ್ಗ ದರ್ಶಕವಾಗಲಿ ಹಾಗೂ ಸಮಾನತೆ, ಸ್ವಾಭಿಮಾನ ಮತ್ತು ಸರ್ವರ ಅಭಿವೃದ್ಧಿಯ ಕರ್ನಾಟಕ ನಿರ್ಮಾಣಕ್ಕೆ ಪ್ರೇರಣೆಯಾಗಲಿ ಎಂದು ಸಚಿವರು ಆಶಿಸಿದರು.

# ನಾಟಕ ಅಕಾಡೆಮಿ ಪ್ರಶಸ್ತಿಗೆ ಮುಖ್ಯಮಂತ್ರಿ ಚಂದ್ರು ಭಾಜನ

**ಮೂವರಿಗೆ ಜೀವಮಾನ ಸಾಧನೆ ಗೌರವ, 14 ಮಂದಿಗೆ ವಾರ್ಷಿಕ ಪ್ರಶಸ್ತಿ ಗೌರವ, ಏಳು ಮಂದಿಗೆ ದತ್ತಿನಿಧಿ ಪುರಸ್ಕಾರ**



**ಬೆಂಗಳೂರು, ಆ.20:** ಕರ್ನಾಟಕ ನಾಟಕ ಅಕಾಡೆಮಿಯು 2026–27ನೇ ಸಾಲಿನ ಜೀವಮಾನ ಸಾಧನೆ ಗೌರವ ಪ್ರಶಸ್ತಿ, ವಾರ್ಷಿಕ ಪ್ರಶಸ್ತಿ ಹಾಗೂ ವಿವಿಧ ದತ್ತಿನಿಧಿ ಪುರಸ್ಕಾರಗಳಿಗೆ ನಾಟಕ ಕ್ಷೇತ್ರದ ಗಣ್ಯ ಕಲಾವಿದರು ಮತ್ತು ಸಾಧಕರ ಪಟ್ಟಿಯನ್ನು ಅಧಿಕೃತವಾಗಿ ಪ್ರಕಟಿಸಿದೆ. ಅಕಾಡೆಮಿ ಅಧ್ಯಕ್ಷ ಡಾ. ಕೆ.ವಿ. ನಾಗರಾಜ ಮೂರ್ತಿ ಹಾಗೂ ರಿಜಿಸ್ಟ್ರಾರ್ ಬಿ. ನೀಲಮ್ಮ ಅವರು ಪುರಸ್ಕೃತರ ವಿವರಗಳನ್ನು ಬಿಡುಗಡೆ ಮಾಡಿದ್ದಾರೆ.

□ **ಜೀವಮಾನ ಸಾಧನೆ ಗೌರವ ಪ್ರಶಸ್ತಿ:**

ಡಾ. ಮುಖ್ಯಮಂತ್ರಿ ಚಂದ್ರು (ಬೆಂಗಳೂರು ನಗರ), ವಿಶ್ವೇಶ್ವರಿ ಬಸವಲಿಂಗಯ್ಯ ಹಿರೇಮಠ (ಧಾರವಾಡ) ಮತ್ತು ರಮೇಶ ತಿಪ್ಪಣ್ಣ ಚಿತ್ರಗಾರ (ಇಳಕಲ್, ಬಾಗಲಕೋಟೆ)

□ **ವಾರ್ಷಿಕ ಪ್ರಶಸ್ತಿ ಪುರಸ್ಕೃತರು:** ಶಿವಾನಂದ ತಗಡೂರು (ಹಾಸನ/ಬೆಂಗಳೂರು), ಆರ್. ರಾಮಕೃಷ್ಣ (ಚನ್ನಯ್ಯ) (ದೇವನಹಳ್ಳಿ, ಬೆಂಗಳೂರು ಗ್ರಾಮಾಂತರ), ಅನುಸೂಯ ರೇವಣಸಿದ್ದಯ್ಯ ಹೊಸೂರುಮಠ (ಲಕ್ಕುಂಡಿ, ಗದಗ), ಅಯ್ಯಣ್ಣಸ್ವಾಮಿ ಹಿರೇಮಠ (ಕಲಬುರಗಿ), ಫಣಿಯಮ್ಮ ಎಚ್.ಎಸ್. (ಸಾಗರ, ಶಿವಮೊಗ್ಗ), ಮಲ್ಲಪ್ಪ ಭರಮಪ್ಪ ಕುರಿ (ಕೊಪ್ಪಳ), ಕೆ.ಪಿ. ಸ್ವಾಮಿ (ಮಂಡ್ಯ), ಸುಶೀಲಾ ಹೆಗಡೆ ಮೂರೂರು (ಸಿದ್ದಾಪುರ, ಉತ್ತರ ಕನ್ನಡ), ರಾಜಕುಮಾರ್ ಎಸ್. (ಬೆಂಗಳೂರು ನಗರ), ಡಾ. ಎಂ. ಗಣೇಶ್ ಹೆಗ್ಗೋಡು (ಸಾಗರ, ಶಿವಮೊಗ್ಗ), ಪ್ರದೀಪ್‌ಚಂದ್ರ ಕುತ್ಪಾಡಿ (ಉಡುಪಿ), ಎನ್.ಟಿ. ಕೃಷ್ಣಪ್ಪ (ಬೆಂಗಳೂರು ನಗರ), ಪುರುಷೋತ್ತಮ ಹಂದ್ಯಾಳ್ (ಬಳ್ಳಾರಿ), ಡಾ. ಎಸ್.ವಿ. ಸುಷ್ಮಾ (ಬೆಂಗಳೂರು ನಗರ), ನಂದ ಹಳೇಮನೆ (ಮೈಸೂರು), ಶ್ರೀನಿವಾಸ್ (ರಾಮನಗರ), ವೈ.ಎನ್. ಉಮಾ (ಯಲಹಂಕ, ಬೆಂಗಳೂರು ನಗರ), ಗದಿಗೆಯ್ಯಾ ವಿ. ಹಿರೇಮಠ (ಬೈಲಹೊಂಗಲ, ಬೆಳಗಾವಿ), ಟಿ. ಭಾರತಿ (ಕೂಡ್ಲಿಗಿ, ವಿಜಯನಗರ), ಬಿ. ಸಾವಿತ್ರಮ್ಮ (ದಾವಣಗೆರೆ), ಎಂ.ಸಿ. ಶಿವರುದ್ರಪ್ಪ (ತುಮಕೂರು), ವೇಣುಗೋಪಾಲ್ ಕೆ. (ಬೆಂಗಳೂರು ನಗರ), ಎನ್.ಎಂ.ಲಕ್ಷ್ಮಯ್ಯ (ಮಾಲೂರು, ಕೋಲಾರ)

ದತ್ತಿನಿಧಿ ಪುರಸ್ಕಾರ: ಎಚ್.ವಿ. ವೆಂಕಟಸುಬ್ಬಯ್ಯ ದತ್ತಿ ಪುರಸ್ಕಾರ: ಬಿ.ಜಿ. ಶ್ರೀಧರ (ಬೆಂಗಳೂರು ನಗರ), ಬಿ. ಆರ್. ಅರಿಶಿಣಗೋಡಿ ದತ್ತಿ ಪುರಸ್ಕಾರ: ಅಶ್ಫಾಕ್ ಹುಸೇನ್ ಹಾ. ಜಾಗೀರದಾರ (ವಿಜಯಪುರ), ಕೆ. ರಾಮಚಂದ್ರಯ್ಯ ದತ್ತಿ ಪುರಸ್ಕಾರ: ಡಾ. ಎಂ. ಚಂದ್ರಪ್ಪ (ಟಿ. ನರಸೀಪುರ, ಮೈಸೂರು), ಮಾಲತಿ ಶ್ರೀ ಮೈಸೂರು ದತ್ತಿ ಪುರಸ್ಕಾರ: ದಯಾನಂದ ಚ. ಬೀಳಗಿ (ಗದಗ), ನಟರತ್ನ ಚಿಂದೋಡಿ ವೀರಪ್ಪನವರ ದತ್ತಿ ಪುರಸ್ಕಾರ: ಗಂಗಾಧರ ರೆಡ್ಡಿ ವಿ.ಆರ್. (ಕುಣಿಗಲ್, ತುಮಕೂರು), ಪದ್ಮಶ್ರೀ ಚಿಂದೋಡಿ ಲೀಲಾ ದತ್ತಿ ಪುರಸ್ಕಾರ: ವೈ.ಎನ್.ಶಿವಣ್ಣ (ತುಮಕೂರು), ಕಲ್ಚರ್ಡ್ ಕಮೆಡಿಯನ್ ಕೆ.ಹಿರಣ್ಣಯ್ಯ ದತ್ತಿ ಪುರಸ್ಕಾರ: ಚಂದ್ರಮ್ಮ (ಸಾಣೇಹಳ್ಳಿ, ಚಿತ್ರದುರ್ಗ)

# ಪಾಲಿಟೆಕ್ನಿಕ್‌ಗಳಲ್ಲಿ 72,057 ಸೀಟು ಲಭ್ಯ ಸಚಿವ ರಾಯರೆಡ್ಡಿ

**ಬೆಂಗಳೂರು, ಆ.20:** ರಾಜ್ಯದಲ್ಲಿ 120 ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜುಗಳು ಮಂಜೂರಾಗಿದ್ದು, 117 ಪಾಲಿಟೆಕ್ನಿಕ್ ಕಾಲೇಜುಗಳು ಕಾರ್ಯನಿರ್ವಹಿಸುತ್ತಿವೆ. ಸರ್ಕಾರಿ, ಅನುದಾನಿತ ಹಾಗೂ ಅನುದಾನರಹಿತ ಪಾಲಿಟೆಕ್ನಿಕ್ ಕಾಲೇಜುಗಳಲ್ಲಿ 72,057 ಸೀಟುಗಳು ಲಭ್ಯವಿದ್ದು, ಪೂರ್ಣ ಪ್ರಮಾಣದಲ್ಲಿ ವಿದ್ಯಾರ್ಥಿಗಳು ಪ್ರವೇಶ ಪಡೆಯುತ್ತಿಲ್ಲ ಎಂದು ಉನ್ನತ ಶಿಕ್ಷಣ ಸಚಿವ ಬಸವರಾಜ ರಾಯರೆಡ್ಡಿ ವಿಧಾನಸಭೆಗೆ ತಿಳಿಸಿದರು.

ರಾಜ್ಯದಲ್ಲಿ 25,921 ಪಾಲಿಟೆಕ್ನಿಕ್ ಸೀಟುಗಳು ಪ್ರವೇಶ ಪಡೆಯದೆ ಖಾಲಿ ಉಳಿದಿವೆ ಎಂದು ಅವರು ಹೇಳಿದರು. ಪ್ರತಿಪಕ್ಷಗಳ ಪ್ರತಿಭಟನೆ, ಗದ್ದಲದ ನಡುವೆ ನಡೆದ ಪ್ರಶ್ನೋತ್ತರ ಕಲಾಪದಲ್ಲಿ ಆಡಳಿತ ಪಕ್ಷದ ಶಾಸಕ ಅಬ್ಬಯ್ಯ ಪ್ರಸಾದ್ ಅವರ ಪ್ರಶ್ನೆಗೆ ಉತ್ತರಿಸಿದ ಸಚಿವರು, 46,136 ವಿದ್ಯಾರ್ಥಿಗಳು ಪ್ರವೇಶ ಪಡೆದಿದ್ದು, ಉಳಿದ ಸೀಟುಗಳು ಖಾಲಿ ಉಳಿದಿವೆ ಎಂದರು.

ಕಾಗವಾಡ, ಮಾಗಡಿ ಹಾಗೂ ಟಿ. ನರಸೀಪುರದಲ್ಲಿ ಪಾಲಿಟೆಕ್ನಿಕ್ ಕಾಲೇಜು ಕಟ್ಟಡಗಳ ನಿರ್ಮಾಣ ಕಾಮಗಾರಿಗಳು ಪ್ರಗತಿಯಲ್ಲಿದ್ದು, ಕಾಮಗಾರಿ ಪೂರ್ಣಗೊಂಡ ನಂತರ ಆ ಕಾಲೇಜುಗಳನ್ನು ಪ್ರಾರಂಭಿಸ ಲಾಗುವುದು. ಎಂದು ತಿಳಿಸಿದರು.

# ಗುಣಮಟ್ಟದ ಶಿಕ್ಷಣಕ್ಕಾಗಿ 100 ಸರ್ಕಾರಿ ಶಾಲೆ, 100 ದಿನ ಅಭಿಯಾನ

**ಖಾಸಗಿ ಕಂಪನಿ, ಕಾರ್ಪೋರೇಟ್ ಸಂಸ್ಥೆ, ಟ್ರಸ್ಟ್, ದತ್ತಿ ಸಂಸ್ಥೆಗಳ ಸಹಭಾಗಿತ್ವದಲ್ಲಿ ಯೋಜನೆ: ಸಚಿವ ಮಧು ಬಂಗಾರಪ್ಪ**



**ಬೆಂಗಳೂರು, ಆ.20:** ರಾಜ್ಯದ ಸರ್ಕಾರಿ ಶಾಲೆಗಳನ್ನು ಆಧುನಿಕ ಹಾಗೂ ಗುಣಮಟ್ಟದ ಶಿಕ್ಷಣ ಸಂಸ್ಥೆಗಳನ್ನಾಗಿ ರೂಪಿಸುವ ಉದ್ದೇಶದಿಂದ ಕರ್ನಾಟಕ ಸರ್ಕಾರ 100 ದಿನಗಳ 100 ಶಾಲೆಗಳನ್ನು ಎಂಬ ವಿಶೇಷ ಅಭಿಯಾನ ಆರಂಭಿಸಲು ಮುಂದಾಗಿದೆ.

ಈ ಯೋಜನೆಯಡಿ ಖಾಸಗಿ ಕಂಪನಿಗಳು, ಕಾರ್ಪೊರೇಟ್ ಸಂಸ್ಥೆಗಳು, ಟ್ರಸ್ಟ್‌ಗಳು ಹಾಗೂ ದತ್ತಿ ಸಂಸ್ಥೆಗಳ ಸಹಭಾಗಿತ್ವದೊಂದಿಗೆ 100 ಸರ್ಕಾರಿ ಶಾಲೆಗಳನ್ನು 100 ದಿನಗಳ ಅವಧಿಯಲ್ಲಿ ಅಭಿವೃದ್ಧಿಪಡಿಸಲು ಸರ್ಕಾರ ಯೋಜನೆ ರೂಪಿಸಿದೆ ಎಂದು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವ ಮಧು ಬಂಗಾರಪ್ಪ ತಿಳಿಸಿದ್ದಾರೆ.

ಪರಿಷತ್‌ನಲ್ಲಿ ಕಾಂಗ್ರೆಸ್ ಸದಸ್ಯ ವಿನಯ್ ಕಾರ್ತಿಕ್ ಪ್ರಕಾಶ್ ಅವರ ಪ್ರಶ್ನೆಗೆ ಉತ್ತರಿಸಿದ ಸಚಿವರು, ಸಿಎಸ್‌ಆರ್ ಯೋಜನೆಯಡಿ ಸರ್ಕಾರಿ ಶಾಲೆಗಳ ಅಭಿವೃದ್ಧಿಗೆ ಸರ್ಕಾರದೊಂದಿಗೆ ಒಪ್ಪಂದ ಮಾಡಿಕೊಳ್ಳುವ ಸಂಸ್ಥೆಗಳಿಗೆ ಶಾಲೆಗಳನ್ನು ಅಭಿವೃದ್ಧಿಪಡಿಸಲು 100 ದಿನಗಳ ಕಾಲಾವಕಾಶ ನೀಡಲಾಗುವುದು. ಆಸಕ್ತ ಕಾರ್ಪೊರೇಟ್ ಸಂಸ್ಥೆಗಳು, ಎನ್‌ಜಿಒಗಳು ಹಾಗೂ ಟ್ರಸ್ಟ್‌ಗಳೊಂದಿಗೆ ಪ್ರತ್ಯೇಕ ಒಡಂಬಡಿಕೆ ಮಾಡಿಕೊಳ್ಳಲಾಗುವುದು. ಈ ಸಂಸ್ಥೆಗಳು ಶಾಲೆಗಳ ಅಭಿವೃದ್ಧಿಗೆ ಕನಿಷ್ಠ ಮೂರು ವರ್ಷ ಹಾಗೂ ಗರಿಷ್ಠ ಐದು ವರ್ಷಗಳ ಕಾಲ ಬೆಂಬಲ ನೀಡುವಂತೆ ಒಪ್ಪಂದದಲ್ಲಿ ಷರತ್ತು ವಿಧಿಸಲಾಗುವುದು ಎಂದು ಸಚಿವರು ವಿವರಿಸಿದರು.

ಗ್ರಾಮೀಣ ಶಾಲೆಗಳಿಗೆ ಆದ್ಯತೆ ಸಿಎಸ್‌ಆರ್ ಅನುದಾನದ ಮೂಲಕ ಶಾಲೆಗಳ ಅಭಿವೃದ್ಧಿ ಕೈಗೊಳ್ಳುವಾಗ ಗ್ರಾಮೀಣ ಪ್ರದೇಶದ ಸರ್ಕಾರಿ ಶಾಲೆಗಳಿಗೆ ಹೆಚ್ಚಿನ ಆದ್ಯತೆ ನೀಡುವಂತೆ ಜಿಲ್ಲಾಡಳಿತಗಳಿಗೆ ಸೂಚಿಸಲಾಗಿದೆ. ರಾಜ್ಯದ ಪ್ರತಿ ಜಿಲ್ಲೆಯಲ್ಲೂ ಆಯ್ದ ಸರ್ಕಾರಿ ಶಾಲೆಗಳನ್ನು ಕರ್ನಾಟಕ ಪಬ್ಲಿಕ್ ಸ್ಕೂಲ್‌ಗಳಾಗಿ ಅಭಿವೃದ್ಧಿಪಡಿಸುವ ಪ್ರಕ್ರಿಯೆ ಈಗಾಗಲೇ ಆರಂಭವಾಗಿದೆ. ಈ ಸಂಬಂಧ ಜಿಲ್ಲಾಧಿಕಾರಿಗಳಿಗೆ ನಿಯಮಿತ ಸಭೆ ನಡೆಸುವಂತೆ ಹಾಗೂ ಸಮನ್ವಯಕ್ಕಾಗಿ ಪ್ರತ್ಯೇಕ ಇ–ಮೇಲ್ ಮತ್ತು ದೂರವಾಣಿ ವ್ಯವಸ್ಥೆ ಕಲ್ಪಿಸುವಂತೆ ಸೂಚಿಸಲಾಗಿದೆ. ಶಾಲೆಗಳ ಅಭಿವೃದ್ಧಿಯ ಪ್ರಗತಿಯನ್ನು 'ನನ್ನ ಶಾಲೆ ನನ್ನ ಕೊಡುಗೆ' ಪೋರ್ಟಲ್‌ನಲ್ಲಿ ಅಪ್ಲೋಡ್ ಮಾಡುವಂತೆ ಅಧಿಕಾರಿಗಳಿಗೆ ಸೂಚಿಸಲಾಗಿದೆ.

**1,672 ಶಾಲೆಗಳು ಆಯ್ಕೆ**

ರಾಜ್ಯದಲ್ಲಿ ಈಗಾಗಲೇ 1,672 ಸರ್ಕಾರಿ ಶಾಲೆಗಳನ್ನು ಅಭಿವೃದ್ಧಿಗೆ ಆಯ್ಕೆ ಮಾಡಲಾಗಿದೆ. '100 ದಿನ, 100 ಶಾಲೆ' ಅಭಿಯಾನದ ಪ್ರಗತಿಯನ್ನು ಮುಖ್ಯಮಂತ್ರಿ ನೇತೃತ್ವದ ಮೇಲ್ವಿಚಾರಣಾ ಸಮಿತಿ ಗಮನಿಸಲಿದೆ ಎಂದು ಮಧು ಬಂಗಾರಪ್ಪ ತಿಳಿಸಿದ್ದಾರೆ. ಈ ಅಭಿಯಾನದ ಮೂಲಕ ಸರ್ಕಾರಿ ಶಾಲೆಗಳಿಗೆ ಖಾಸಗಿ ವಲಯದ ಅಖಖ ನೆರವು ಪಡೆದು ಮೂಲಸೌಕರ್ಯ, ಕಲಿಕಾ ವಾತಾವರಣ ಹಾಗೂ ಶಿಕ್ಷಣದ ಗುಣಮಟ್ಟವನ್ನು ಮತ್ತಷ್ಟು ಸುಧಾರಿಸುವ ಗುರಿಯನ್ನು ಸರ್ಕಾರ ಹೊಂದಿದೆ ಎಂದರು.

# ಮಾಜಿ ಪ್ರಧಾನಿ ರಾಜೀವ್ ಗಾಂಧಿ ಜನ್ಮದಿನ ಗೌರವ ನವಭಾರತ ಶಿಲ್ಪಿಗೆ ಪ್ರಧಾನಿ ಮೋದಿ ನಮನ

**ನವದೆಹಲಿ, ಆ.20:** 1984 ರಿಂದ 1989 ರವರೆಗೆ ಭಾರತದ ಪ್ರಧಾನಿಯಾಗಿ ಸೇವೆ ಸಲ್ಲಿಸಿದ ಕಾಂಗ್ರೆಸ್ ನಾಯಕ ರಾಜೀವ್ ಗಾಂಧಿ ಅವರನ್ನು ಸ್ಮರಿಸಿಕೊಂಡು ಪ್ರಧಾನಿ ನರೇಂದ್ರ ಮೋದಿ ಗುರುವಾರ ಅವರಿಗೆ ಗೌರವ ಸಲ್ಲಿಸಿದರು. ಸಾಮಾಜಿಕ ಮಾಧ್ಯಮ ವೇದಿಕೆಯಲ್ಲಿ ಪೋಸ್ಟ್ ಮಾಡಿದ ಪ್ರಧಾನಿ ನರೇಂದ್ರ ಮೋದಿ, "ಇಂದು ಅವರ ಜನ್ಮ ವಾರ್ಷಿಕೋತ್ಸವದಂದು, ಮಾಜಿ ಪ್ರಧಾನಿ ರಾಜೀವ್ ಗಾಂಧಿ ಅವರಿಗೆ ನನ್ನ ಗೌರವಗಳು" ಎಂದು ಹೇಳಿದ್ದಾರೆ.

ಆಗಸ್ಟ್ 20, 1944 ರಂದು ಜನಿಸಿದ ರಾಜೀವ್ ಗಾಂಧಿ, 1984 ರ ಅಕ್ಟೋಬರ್‌ನಲ್ಲಿ ತಮ್ಮ ತಾಯಿ ಮತ್ತು ಅಂದಿನ ಪ್ರಧಾನಿ ಇಂದಿರಾ ಗಾಂಧಿಯವರ ಹತ್ಯೆಯ ನಂತರ 40 ನೇ ವಯಸ್ಸಿನಲ್ಲಿ ಭಾರತದ ಅತ್ಯಂತ ಕಿರಿಯ ಪ್ರಧಾನಿಯಾದರು. ತರುವಾಯ ಅವರು 1989 ರ ಲೋಕಸಭಾ ಚುನಾವಣೆಯಲ್ಲಿ ಪಕ್ಷ ಸೋಲನುಭವಿಸುವವರೆಗೂ ಕಾಂಗ್ರೆಸ್ ಮತ್ತು ದೇಶವನ್ನು ಮುನ್ನಡೆಸಿದರು.

ರಾಜೀವ್ ಗಾಂಧಿಯವರ ಅಧಿಕಾರಾವಧಿಯು ಆಧುನೀಕರಣ ಮತ್ತು ತಂತ್ರಜ್ಞಾನದ ಬಳಕೆಗೆ ಬಲವಾದ ಒತ್ತು ನೀಡಿತು. ಅವರ ಸರ್ಕಾರವು ಶಿಕ್ಷಣ ಮತ್ತು ಪಂಚಾಯತ್



ರಾಜ್‌ನಂತಹ ಕ್ಷೇತ್ರಗಳಲ್ಲಿ ಉಪಕ್ರಮಗಳನ್ನು ಪರಿಚಯಿಸುವುದರ ಜೊತೆಗೆ ಗಣಕೀಕರಣ ಮತ್ತು ದೂರಸಂಪರ್ಕ ವಿಸ್ತರಣೆಯನ್ನು ಉತ್ತೇಜಿಸಿತು. ಅವರ ಸರ್ಕಾರವು ಮತದಾನದ ವಯಸ್ಸನ್ನು 21 ರಿಂದ 18ಕ್ಕೆ ಇಳಿಸಿತು. 1989 ರಲ್ಲಿ ಕಾಂಗ್ರೆಸ್ ಅಧಿಕಾರ ಕಳೆದುಕೊಂಡ ನಂತರ, ರಾಜೀವ್ ಗಾಂಧಿ ಲೋಕಸಭೆಯಲ್ಲಿ ವಿರೋಧ ಪಕ್ಷದ ನಾಯಕರಾದರು. ಮೇ 21, 1991 ರಂದು ತಮಿಳುನಾಡಿನ ಶ್ರೀಪೆರಂಬದೂರಿನಲ್ಲಿ ಲೋಕಸಭಾ ಚುನಾವಣೆಗೆ ಪ್ರಚಾರ ನಡೆಸುತ್ತಿದ್ದಾಗ ಬಾಂಬ್ ಸ್ಫೋಟದಲ್ಲಿ ಅವರು ಹತ್ಯೆಗೀಡಾದರು. ಕಾಂಗ್ರೆಸ್ ಅವರ ಜನ್ಮ ದಿನಾಚರಣೆಯನ್ನು ಸದ್ಭಾವನಾ ದಿವಸ್ ಎಂದು ಆಚರಿಸುತ್ತದೆ, ಪಕ್ಷದ ನಾಯಕರು ಮತ್ತು ಕಾರ್ಯಕರ್ತರು ನವದೆಹಲಿಯಲ್ಲಿರುವ ಅವರ ಸ್ಮಾರಕವಾದ ವೀರ್ ಭೂಮಿಯಲ್ಲಿ ಅವರಿಗೆ ಗೌರವ ಸಲ್ಲಿಸುತ್ತಾರೆ. ಪ್ರಧಾನಿ ನರೇಂದ್ರ ಮೋದಿ ಅವರು ರಾಜೀವ್ ಗಾಂಧಿ ಅವರ ಜನ್ಮ ದಿನಾಚರಣೆಯಂದು ನಿಯಮಿತವಾಗಿ ಗೌರವ ಸಲ್ಲಿಸುತ್ತಾರೆ. 2024 ರಲ್ಲಿ, "ನಮ್ಮ ಮಾಜಿ ಪ್ರಧಾನಿ ರಾಜೀವ್ ಗಾಂಧಿ ಜಿ ಅವರಿಗೆ ಅವರ ಜನ್ಮ ವಾರ್ಷಿಕೋತ್ಸವದಂದು ಗೌರವಗಳು" ಎಂದು ಪೋಸ್ಟ್ ಮಾಡಿದ್ದರು. ರಾಜೀವ್ ಗಾಂಧಿಯವರ ರಾಜಕೀಯ ಪರಂಪರೆ ನೆಹರೂ–ಗಾಂಧಿ ಕುಟುಂಬ ಮತ್ತು ಕಾಂಗ್ರೆಸ್ಸೊಂದಿಗೆ ನಿಕಟ ಸಂಬಂಧ ಹೊಂದಿರುವುದರಿಂದ ಈ ಗೌರವ ಸಲ್ಲಿಸಲಾಗಿದೆ. ಅವರ ಮಗ ರಾಹುಲ್ ಗಾಂಧಿ ಪ್ರಸ್ತುತ ಲೋಕಸಭೆಯಲ್ಲಿ ವಿರೋಧ ಪಕ್ಷದ ನಾಯಕರಾಗಿದ್ದಾರೆ ಮತ್ತು ಪಕ್ಷದ ಪ್ರಮುಖ ನಾಯಕರಲ್ಲಿ ಒಬ್ಬರಾಗಿದ್ದಾರೆ.



ಸಿಂಗಾಪುರದ ಪ್ರಧಾನಿ ಲಾರೆನ್ಸ್ ವಾಂಗ್ ಅವರು ಬುಧವಾರ ಸಿಂಗಾಪುರದಲ್ಲಿ ನಡೆದ ಭಾರತ–ಸಿಂಗಾಪುರ ಸಮಗ್ರ ಕಾರ್ಯತಂತ್ರದ ಪಾಲುದಾರಿಕೆ ಕುರಿತ ಸಭೆಯಲ್ಲಿ, ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್, ವಿದೇಶಾಂಗ ವ್ಯವಹಾರಗಳ ಸಚಿವ ಎಸ್. ಜೈಶಂಕರ್, ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪಿಯೂಷ್ ಗೋಯಲ್ ಹಾಗೂ ರಾಜ್ಯ ಸಚಿವ ಜಿತಿನ್ ಪ್ರಸಾದ್ ಅವರನ್ನು ಭೇಟಿಯಾದರು.

## ಜಂಟಿ ಹಡಗು ನಿರ್ಮಾಣ ಅನ್ವೇಷಿಸಲು ಭಾರತ, ಜಪಾನ್ ಒಪ್ಪಿಗೆ

**ನವದೆಹಲಿ, ಆ.20:** ರಕ್ಷಣಾ ಸಚಿವ ರಾಜನಾಥ್ ಸಿಂಗ್ ಮತ್ತು ಅವರ ಜಪಾನಿನ ಪ್ರತಿರೂಪ ಶಿಂಜಿರೊ ಕೊಯಿಜುಮಿ ರಾಷ್ಟ್ರೀಯ ರಾಜಧಾನಿಯಲ್ಲಿ ದ್ವಿಪಕ್ಷೀಯ ಮಾತುಕತೆ ನಡೆಸುತ್ತಿದ್ದಂತೆ, ಭಾರತ ಮತ್ತು ಜಪಾನ್ ಗುರುವಾರ ರಕ್ಷಣಾ ಮತ್ತು ಕಡಲ ಭದ್ರತಾ ಸಹಕಾರವನ್ನು ಇನ್ನಷ್ಟು ಆಳಗೊಳಿಸಲು ಒಪ್ಪಿಕೊಂಡಿವೆ, ಇದರಲ್ಲಿ ಕಡಲ ಡೊಮೇನ್ ಜಾಗೃತಿ ಕುರಿತು ಮಾಹಿತಿ ಹಂಚಿಕೆ, ಜಂಟಿ ವ್ಯಾಯಾಮ, ನೌಕಾ ಲಾಜಿಸ್ಟಿಕ್ಸ್ ಮತ್ತು ಹಡಗು ದುರಸ್ತಿ ಸೇರಿವೆ. ಜಪಾನ್ ರಕ್ಷಣಾ ಸಚಿವಾಲಯ ಮತ್ತು ಭಾರತದ ರಕ್ಷಣಾ ಸಚಿವಾಲಯದ ನಡುವಿನ ಕಡಲ ಭದ್ರತಾ ಸಹಕಾರದ ಕುರಿತು ಒಪ್ಪಂದಕ್ಕೆ ಇಬ್ಬರು ಸಚಿವರು ಸಹಿ ಹಾಕಿದರು, ಇದು ಜಪಾನ್ ಕಡಲ ಸ್ವರಕ್ಷಣಾ ಪಡೆ ಮತ್ತು ಭಾರತೀಯ ನೌಕಾಪಡೆಯ ನಡುವಿನ ಕಾರ್ಯಾಚರಣೆಯ ಸಹಕಾರವನ್ನು ಬಲಪಡಿಸುವ ಚೌಕಟ್ಟನ್ನು ಒದಗಿಸುತ್ತದೆ. ಸಭೆಯ ನಂತರ ಬಿಡುಗಡೆಯಾದ ಜಂಟಿ ಪತ್ರಿಕಾ ಹೇಳಿಕೆಯ ಪ್ರಕಾರ, ಹುಡುಕಾಟ ಮತ್ತು ಅಭಿವೃದ್ಧಿ ಮತ್ತು ಮಾನವೀಯ ನೆರವು ಮತ್ತು ವಿಪತ್ತು ಪರಿಹಾರ ನಲ್ಲಿ ವರ್ಧಿತ ಸಹಕಾರವನ್ನು



ಕಲ್ಪಿಸುತ್ತದೆ. ನೌಕಾ ಹಡಗುಗಳು ಮತ್ತು ಘಟಕಗಳ ಪರಸ್ಪರ ಭೇಟಿಗಳು, ಜಂಟಿ ವ್ಯಾಯಾಮಗಳು, ಸಿಬ್ಬಂದಿ ಮತ್ತು ವಿಷಯ ತಜ್ಞರ ವಿನಿಮಯಗಳು ಮತ್ತು ಬಂದರುಗಳು ಮತ್ತು ನಿರ್ವಹಣೆ ಮತ್ತು ದುರಸ್ತಿ ಸೌಲಭ್ಯಗಳಿಗೆ ಪ್ರವೇಶ ಸೇರಿದಂತೆ ಲಾಜಿಸ್ಟಿಕಲ್ ಬೆಂಬಲದ ಮೂಲಕ ಸಮುದ್ರ ಮಾರ್ಗಗಳ ಸಂವಹನವನ್ನು ರಕ್ಷಿಸಲು ಸಮನ್ವಯವನ್ನು ಬಲಪಡಿಸಲು ಎರಡೂ ಕಡೆಯವರು ಒಪ್ಪಿಕೊಂಡರು. "ಮೇಕ್ ಇನ್ ಇಂಡಿಯಾ" ಚೌಕಟ್ಟಿನಡಿಯಲ್ಲಿ ಭಾರತದ ರಕ್ಷಣಾ ಉತ್ಪಾದನಾ ಸಾಮರ್ಥ್ಯಗಳ ಹೆಚ್ಚಿನ ಬಳಕೆಯನ್ನು ಅನ್ವೇಷಿಸಲು ಮತ್ತು ರಕ್ಷಣಾ ಹಡಗು ನಿರ್ಮಾಣ ಮತ್ತು ಸಂಬಂಧಿತ ವಲಯಗಳಲ್ಲಿ ಜಪಾನ್ ಭಾರತೀಯ ಉತ್ಪಾದನಾ ಸಾಮರ್ಥ್ಯವನ್ನು ಬಳಸುವ ಕುರಿತು ಚರ್ಚೆಗಳನ್ನು ಹೆಚ್ಚಿಸಲು ಎರಡೂ ಕಡೆಯವರು ಒಪ್ಪಿಕೊಂಡರು. ಭಾರತದ ರಕ್ಷಣಾ ಸಂಶೋಧನೆ ಮತ್ತು ಅಭಿವೃದ್ಧಿ ಸಂಸ್ಥೆ ಮತ್ತು ಜಪಾನ್‌ನ ಸ್ವಾಧೀನ, ತಂತ್ರಜ್ಞಾನ ಮತ್ತು ಲಾಜಿಸ್ಟಿಕ್ಸ್ ಏಜೆನ್ಸಿ ಮುಂದುವರಿದ ರಕ್ಷಣಾ ತಂತ್ರಜ್ಞಾನಗಳಲ್ಲಿ ಸಂಶೋಧನೆ ಮತ್ತು ಅಭಿವೃದ್ಧಿಯಲ್ಲಿ ಸಹಕಾರವನ್ನು ಇನ್ನಷ್ಟು ಹೆಚ್ಚಿಸುತ್ತವೆ. ಎರಡೂ ಕಡೆಯವರು ರಕ್ಷಣಾ ಉದ್ಯಮ ವೇದಿಕೆಯನ್ನು ಕರೆಯಲು ಸಹ ಒಪ್ಪಿಕೊಂಡರು. ಎರಡೂ ದೇಶಗಳ ಭದ್ರತೆಯನ್ನು ಖಚಿತಪಡಿಸಿಕೊಳ್ಳಲು ಮತ್ತು ಈ ಪ್ರದೇಶದಲ್ಲಿ ಶಾಂತಿ ಮತ್ತು ಸ್ಥಿರತೆಗೆ ಕೊಡುಗೆ ನೀಡಲು ಅಗತ್ಯವಿದ್ದಾಗಲೆಲ್ಲಾ ಸಮಾಲೋಚನೆಗಳನ್ನು ನಿರ್ವಹಿಸಲು ಸಚಿವರು ಒಪ್ಪಿಕೊಂಡರು.

## ಲಿವ್–ಇನ್ ಸಂಬಂಧಕ್ಕೂ ವಿವಾಹದಷ್ಟೇ ಕಾನೂನು ರಕ್ಷಣೆ: ದೆಹಲಿ ಹೈಕೋರ್ಟ್

**ನವದೆಹಲಿ, ಆ.20:** ಪರಸ್ಪರ ಒಪ್ಪಿಗೆಯಿಂದ ಲಿವ್–ಇನ್ ಸಂಬಂಧದಲ್ಲಿ ವಾಸಿಸುತ್ತಿರುವ ವಯಸ್ಕರ ಸಂಬಂಧವು ವಿವಾಹಕ್ಕೆ ಸಮಾನವಾಗಿದ್ದು, ಅವರ ವೈಯಕ್ತಿಕ ಆಯ್ಕೆಯಲ್ಲಿ ಪೋಷಕರು, ಸಂಬಂಧಿಕರು ಅಥವಾ ಸ್ನೇಹಿತರು ಹಸ್ತಕ್ಷೇಪ ಮಾಡುವಂತಿಲ್ಲ ಎಂದು ದೆಹಲಿ ಹೈಕೋರ್ಟ್ ಮಹತ್ವದ ಅದೇಶ ನೀಡಿದೆ.

ಅರ್ಜಿಯೊಂದರ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಸೌರಭ್ ಬ್ಯಾನರ್ಜಿ ನೇತೃತ್ವದ ಪೀಠ, ಕುಟುಂಬದವರಿಂದ ಬೆದರಿಕೆ ಎದುರಿಸುತ್ತಿದ್ದ ಜೋಡಿಗೆ ಪೊಲೀಸ್ ರಕ್ಷಣೆ ನೀಡುವಂತೆ ನ್ಯಾಯಾಲಯ ಆದೇಶಿಸಿದೆ.

30 ವರ್ಷ ಮೇಲ್ಪಟ್ಟ ಈ ಜೋಡಿ ಕೆಲಕಾಲದಿಂದ ಒಟ್ಟಿಗೆ ವಾಸಿಸುತ್ತಿದ್ದು, ಮುಂದಿನ ದಿನಗಳಲ್ಲಿ ವಿವಾಹವಾಗುವ ಉದ್ದೇಶ ಹೊಂದಿರುವುದಾಗಿ ನ್ಯಾಯಾಲಯಕ್ಕೆ ತಿಳಿಸಿತ್ತು. ಯುವತಿಯ ತಂದೆ ಮತ್ತು ಸಹೋದರ ತಮ್ಮ




ಸಂಬಂಧವನ್ನು ವಿರೋಧಿಸಿ ಹಿಂಸೆಯ ಬೆದರಿಕೆ ಹಾಕುತ್ತಿದ್ದಾರೆ ಎಂದು ಜೋಡಿ ಆರೋಪಿಸಿತ್ತು. ಈ ಕುರಿತು ಸ್ಥಳೀಯ ಪೊಲೀಸ್ ಠಾಣೆಗೆ ದೂರು ನೀಡಿದ್ದರೂ ಕ್ರಮ ಕೈಗೊಂಡಿರಲಿಲ್ಲ.

ತಮ್ಮ ಇಚ್ಛೆ, ಒಪ್ಪಿಗೆ ಮತ್ತು ಸಂಪೂರ್ಣ ಜವಾಬ್ದಾರಿಯಿಂದ ಇಬ್ಬರೂ ಲಿವ್–ಇನ್ ಸಂಬಂಧದಲ್ಲಿ ವಾಸಿಸಲು ನಿರ್ಧರಿಸಿರುವುದರಿಂದ, ಅವರ ಆಯ್ಕೆಗೆ ಅಡ್ಡಿಪಡಿಸುವ ಅಥವಾ ಹಸ್ತಕ್ಷೇಪ ಮಾಡುವ ಅಧಿಕಾರ ಯಾರಿಗೂ ಇಲ್ಲ ಎಂದು ಹೈಕೋರ್ಟ್ ಸ್ಪಷ್ಟಪಡಿಸಿದೆ. ಅವರ ಜೀವ ಅಥವಾ ಸ್ವಾತಂತ್ರ್ಯಕ್ಕೆ ಬೆದರಿಕೆ ಹಾಕುವುದಕ್ಕೂ ಯಾರಿಗೂ ಹಕ್ಕಿಲ್ಲ ಎಂದು ಹೇಳಿದೆ.

ವಿವಾಹವಾಗದಿದ್ದರೂ ಇಬ್ಬರೂ ಸಮ್ಮತಿಯ ವಯಸ್ಕರಾಗಿರುವ ಹಿನ್ನೆಲೆಯಲ್ಲಿ ಅವರ ಲಿವ್–ಇನ್ ಸಂಬಂಧವನ್ನು ವಿವಾಹದಂತೆಯೇ ಪರಿಗಣಿಸಬೇಕು ಎಂದು ನ್ಯಾಯಾಲಯ ಹೇಳಿದೆ.

ಜಾತಿ, ಧರ್ಮ, ಪಂಥ, ಬಣ್ಣ ಅಥವಾ ನಂಬಿಕೆಯ ಆಧಾರದ ಮೇಲೆ ವಯಸ್ಕರ ವೈಯಕ್ತಿಕ ಆಯ್ಕೆ ಮತ್ತು ಮೂಲಭೂತ ಹಕ್ಕುಗಳನ್ನು ನಿರ್ಬಂಧಿಸಲು ಸಾಧ್ಯವಿಲ್ಲ ಎಂದು ನ್ಯಾಯಮೂರ್ತಿ ಸೌರಭ್ ಬ್ಯಾನರ್ಜಿ ಹೇಳಿದ್ದಾರೆ. ಸಾಮಾಜಿಕ ನೈತಿಕತೆ ಮತ್ತು ಪೂರ್ವಾಗ್ರಹ?ಗಳ ಹೆಸರಿನಲ್ಲಿ ಸಂವಿಧಾನ ನೀಡಿರುವ ಮೂಲಭೂತ ಹಕ್ಕುಗಳನ್ನು ಮೊಟಕುಗೊಳಿಸುವುದು ವ್ಯಕ್ತಿಯ ಸ್ವತಂತ್ರ ಅಸ್ತಿತ್ವವನ್ನು ನಿರಾಕರಿಸಿದಂತಾಗುತ್ತದೆ ಎಂದು ಅವರು ಅಭಿಪ್ರಾಯಪಟ್ಟಿದ್ದಾರೆ.

## ಮೂರು ದೊಡ್ಡ ಹಗರಣ ಬಯಲಿಗೆಳೆಯುತ್ತೇನೆ ಕೆಜ್ರಿವಾಲ್, ಸತ್ಯೇಂದ್ರ ಜೈನ್‌ಗೆ ಸುಕೇಶ್ ಚಂದ್ರಶೇಖರ್ ಪತ್ರ

**ನವದೆಹಲಿ,ಆ.20:** ದೆಹಲಿಯ ಮಾಜಿ ಸಿಎಂ ಹಾಗೂ ಆಮ್ ಆದ್ಮಿ ಪಕ್ಷದ ರಾಷ್ಟ್ರೀಯ ಸಂಚಾಲಕ ಅರವಿಂದ್ ಕೇಜ್ರಿವಾಲ್ ಮತ್ತು ಮಾಜಿ ಸಚಿವ ಸತ್ಯೇಂದ್ರ ಜೈನ್‌ಗೆ ಪತ್ರ ಬರೆದಿರುವ ವಂಚಕ ಸುಖೇಶ್ ಚಂದ್ರಶೇಖರ್ ಆಪ್ ಸರ್ಕಾರದ ಮೂರು ಹಗರಣ ಬಹಿರಂಗೊಳಿಸುವ ಬೆದರಿಕೆ ಹಾಕಿದ್ದಾನೆ.

ಜೈಲಿನಿಂದಲೇ ಪತ್ರ ಬರೆದಿರುವ ವಂಚಕ ಸತೀಶ್ ಚಂದ್ರಶೇಖರ್, ಎಎಪಿ ನಾಯಕತ್ವಕ್ಕೆ ಸಂಬಂಧಿಸಿದ ಇನ್ನೂ ಮೂರು ಪ್ರಮುಖ ಹಗರಣ ಹಾಗೂ ಭ್ರಷ್ಟಾಚಾರದ ವಿಚಾರಗಳನ್ನು ಶೀಘ್ರದಲ್ಲೇ ಬಯಲಿಗೆಳೆಯುವುದಾಗಿ ಬೆದರಿಕೆ ಹಾಕಿದ್ದಾನೆ.

2021–22ರಲ್ಲಿ ತಾನು ಮಾಡಿದ್ದ ಆರೋಪಗಳು ಈಗ ಸತ್ಯವಾಗಿವೆ ಎಂದು ಸುಕೇಶ್ ಪತ್ರದಲ್ಲಿ ಹೇಳಿಕೊಂಡಿದ್ದಾನೆ. ದೆಹಲಿಯ ಅಬಕಾರಿ ನೀತಿ ಪ್ರಕರಣದ ಬಳಿಕ ಇದೀಗ ದೆಹಲಿ ಜಲ ಮಂಡಳಿಗೆ ಸಂಬಂಧಿಸಿದ ಹಗರಣಗಳ ವಿಚಾರವೂ ಮುನ್ನೆಲೆಗೆ ಬಂದಿದೆ ಎಂದು ಆತ ಉಲ್ಲೇಖಿಸಿದ್ದಾನೆ. ಅಲ್ಲದೆ, ಇನ್ನೂ ಮೂರು ಪ್ರಮುಖ ಇಲಾಖೆಗಳಲ್ಲಿನ ಅಕ್ರಮ ಹಾಗೂ ಭ್ರಷ್ಟಾಚಾರದ ವಿವರಗಳನ್ನು ಬಹಿರಂಗಪಡಿಸುವುದಾಗಿ ಹೇಳಿದ್ದಾನೆ.

ಎಎಪಿಯನ್ನು ವ್ಯಂಗ್ಯವಾಗಿ ಹಗರಣಗಳ ಪಕ್ಷ ಎಂದು ಟೀಕಿಸಿರುವ ಸುಕೇಶ್, ಪಕ್ಷದ ಖ್ಯಾತಿ ಅದರ ಹಗರಣಗಳ ವಾಸ್ತವಿಕತೆಯ ಮಟ್ಟಕ್ಕಷ್ಟೇ ಸೀಮಿತವಾಗಲಿದೆ ಎಂದು ಆರೋಪಿಸಿದ್ದಾನೆ.

**ಪಂಜಾಬ್ ವಿಚಾರದಲ್ಲೂ ಎಚ್ಚರಿಕೆ**

ಪಂಜಾಬ್ ಜನರನ್ನು ಮತ್ತೊಮ್ಮೆ ಮೋಸಗೊಳಿಸುವ ಪ್ರಯತ್ನ ಯಶಸ್ವಿಯಾಗುವುದಿಲ್ಲ ಎಂದು ಸುಕೇಶ್



ಪತ್ರದಲ್ಲಿ ಹೇಳಿದ್ದಾನೆ. ದೆಹಲಿಯಲ್ಲಿ ಎಎಪಿಗೆ ಎದುರಾದ ಬೆಳವಣಿಗೆಗಳಿಗಿಂತಲೂ ದೊಡ್ಡ ರಾಜಕೀಯ ಆಘಾತ ಪಂಜಾಬ್‌ನಲ್ಲಿ ಎದುರಾಗಲಿದೆ ಎಂದು ಆತ ಹೇಳಿಕೊಂಡಿದ್ದಾನೆ. ಕೇಜ್ರಿವಾಲ್ ಅವರ ರಾಜಕೀಯ ಪ್ರಭಾವದ ಮೂಲಕ ಯುವಜನರನ್ನು ಪ್ರಚೋದಿಸುವ ಪ್ರಯತ್ನವೂ ಯಶಸ್ವಿಯಾಗುವುದಿಲ್ಲ ಎಂದು ಆರೋಪಿಸಿದ್ದಾನೆ.

2015–16ರ ಅವಧಿಯಲ್ಲಿ ಎಎಪಿಯ ಕೆಲವು ಸ್ಥಾಪಕರ ಜತೆ ತಾನು ಹೊಂದಿದ್ದ ಸಂಪರ್ಕದ ಬಗ್ಗೆಯೂ ಪತ್ರದಲ್ಲಿ ಸುಕೇಶ್ ಸುಳಿವು ನೀಡಿದ್ದಾನೆ. ಶೀಘ್ರದಲ್ಲೇ ಈ ವಿಚಾರದಲ್ಲಿ ಅಚ್ಚರಿ ಮೂಡಿಸುವಂತಹ ಮಾಹಿತಿಯನ್ನು ಬಹಿರಂಗಪಡಿಸುವುದಾಗಿ ಹೇಳಿದ್ದಾನೆ.

## ನನ್ನ ಬೆಡ್ರೂಮ್ ಕನಸು ಕಾಣಬೇಡಿ: ರಾಮ್‌ದೇವ್‌ಗೆ ಕಂಗನಾ ತಿರುಗೇಟು

**ನವದೆಹಲಿ, ಆ. 20:** ನಟಿ ಹಾಗೂ ಬಿಜೆಪಿ ಸಂಸದೆ ಕಂಗನಾ ರಣಾವತ್ ಮತ್ತು ಬಾಬಾ ರಾಮ್‌ದೇವ್ ನಡುವೆ ವಾಕ್ಸಮರ ತೀವ್ರಗೊಂಡಿದೆ. ಯುವಜನರ ಕುರಿತು ಕಂಗನಾ ನೀಡಿದ್ದ ಹೇಳಿಕೆಯನ್ನು ರಾಮ್ದೇವ್ ವಿರೋಧಿಸಿದ ಬೆನ್ನಲ್ಲೇ, ಕಂಗನಾ ಇನ್ಸ್ಟಾಗ್ರಾಮ್ ಸ್ಟೋರಿಯಲ್ಲಿ ರಾಮ್ದೇವ್ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದ್ದಾರೆ. ನನ್ನ ಬೆಡ್ರೂಮ್ ಕನಸು ಕಾಣಬೇಡಿ ಎಂದು ಬಾಬಾ ರಾಮ್ದೇವ್ಗೆ ಕಂಗನಾ ತಿರುಗೇಟು ನೀಡಿದ್ದಾರೆ.

ಇತ್ತೀಚೆಗೆ ಪ್ರತಿಭಟನೆಯಲ್ಲಿ ನಿರತರಾಗಿದ್ದ ಯುವಜನರನ್ನು (ಜೇನ್–ಜೀ) ಕಂಗನಾ ರಣಾವತ್ ಜನರೇಷನ್ ಗಟರ್ ಎಂದು ಕರೆದಿದ್ದರು. ಈ ಹೇಳಿಕೆಗೆ ಪ್ರತಿಕ್ರಿಯಿಸಿದ್ದ ಬಾಬಾ ರಾಮ್‌ದೇವ್, ದೇಶದ ಯುವಕರನ್ನು ಗಟರ್ ಎಂದು ಕರೆಯುವುದು ಹಾಳಾದ ಮಾನಸಿಕತೆಯ ಸಂಕೇತ. ಅವರ ಬಾಲ್ಯ, ಹರೆಯ ಹೇಗಿತ್ತು. ಈ ಹಿಂದಿನ ಸಾಧನೆಗಳು ಹೇಗಿದ್ದವು. ಅವರ ರಾಜಕೀಯ ಪಕ್ಷವೇ ಈ ಹೇಳಿಕೆಯನ್ನು ಗಂಭೀರವಾಗಿ ಪರಿಗಣಿಸಬೇಕು ಎಂದು ಟೀಕಿಸಿದ್ದರು.



ಇದೇ ವೇಳೆ, ಕಂಗನಾ ಪ್ರತಿನಿಧಿಸುವ ಬಿಜೆಪಿ ಪಕ್ಷವು ಅವರ ಈ ಹೇಳಿಕೆಯ ಕುರಿತು ಗಮನ ಹರಿಸಿ ಕ್ರಮ ಕೈಗೊಳ್ಳಬೇಕು ಎಂದು ಸಲಹೆ ನೀಡಿದ್ದರು.

ಇನ್ನು ಮಾಧ್ಯಮದವರು ಕಂಗನಾ ಅವರು ನಿಮ್ಮ ಯೋಗವನ್ನು ಬೆಂಬಲಿಸುತ್ತಾರೆ ಮತ್ತು ಸನಾತನಿ ಎಂದು ಹೇಳಿಕೊಳ್ಳುತ್ತಾರಲ್ಲವೇ ಎಂದಾಗ, ಯಾರಾದರೂ ನನ್ನ ಯೋಗವನ್ನು ಹೊಗಳಿದರೆಂದ ಮಾತ್ರಕ್ಕೆ ನಾನು ಅವರ ತಪ್ಪುಗಳನ್ನು ಅಥವಾ ಪಾಪಗಳನ್ನು ಮುಚ್ಚಿಹಾಕಲು ಸಾಧ್ಯವೇ ಎಂದು ಮರುಪ್ರಶ್ನಿಸಿದ್ದರು.

ಇದೀಗ ಬಾಬಾ ರಾಮ್‌ದೇವ್ ಅವರ ಈ ಹೇಳಿಕೆಗಳಿಗೆ ತಿರುಗೇಟು ನೀಡಿರುವ ಕಂಗನಾ ರಣಾವತ್, ತಮ್ಮ ಇನ್ಸ್ಟಾಗ್ರಾಮ್ನಲ್ಲಿ ಸ್ಟೋರಿ ಹಾಕಿಕೊಂಡಿದ್ದಾರೆ. ಬಾಬಾ ಜಿ, ನನ್ನ ಹರೆಯ ಅಥವಾ ಬೆಡ್ರೂಮ್ ಬಗ್ಗೆ ನೀವು ಹಗಲುಗನಸು ಕಾಣಬೇಡಿ. ವದಂತಿ ಮತ್ತು ಗಾಸಿಪ್‌ಗಳ ಆಧಾರದ ಮೇಲಷ್ಟೇ ಯಾರನ್ನಾದರೂ ಅಳೆಯಲು ಸಾಧ್ಯ ಎಂದು ಬರೆದುಕೊಂಡಿದ್ದಾರೆ.

ಹಾಗೆಯೇ ಬಾಬಾ ರಾಮ್‌ದೇವ್ ಅವರ ಪತಂಜಲಿ ಸಂಸ್ಥೆಯ ವಿರುದ್ಧ ಇರುವ ಪ್ರಕರಣಗಳತ್ತವೂ ಕಂಗನಾ ಬೊಟ್ಟು ಮಾಡಿದ್ದಾರೆ. 2024ರಲ್ಲಿ ಪತಂಜಲಿ ಸಂಸ್ಥೆಯ ದಾರಿತಪ್ಪಿಸುವ ಜಾಹೀರಾತುಗಳ ಪ್ರಕರಣದಲ್ಲಿ ಸುಪ್ರೀಂ ಕೋರ್ಟ್‌ನಿಂದ ಬಾಬಾ ರಾಮ್‌ದೇವ್ ಎದುರಿಸಿದ್ದ ಕಾನೂನು ತಗಾದೆಯನ್ನು ಕಂಗನಾ ನೆನಪಿಸಿದ್ದಾರೆ. ಕನಿಷ್ಠ ಸುಳ್ಳು ಹಾಗೂ ವಂಚನೆಯ ಔಷಧೀಯ ಕ್ಲೇಮ್‌ಗಳಿಗಾಗಿ ಸುಪ್ರೀಂ ಕೋರ್ಟ್‌ನಿಂದ ನನಗೆ ಎಂದೂ ಛೀಮಾರಿ ಸಿಕ್ಕಿಲ್ಲ. ಆದ್ದರಿಂದ ನನಗೆ ಚಾರಿತ್ರ್ಯದ ಪಾಠ ಕಲಿಸಲು ಬರಬೇಡಿ. ನನ್ನ ಚಾರಿತ್ರ್ಯ ನಿಮ್ಮಗಿಂತ ಎಷ್ಟೋ ಉತ್ತಮವಾಗಿದೆ ಎಂದು ಹೇಳಿದ್ದಾರೆ.

## ಬಿಎನ್‌ಪಿ ನಾಯಕ ಫಕ್ರುಲ್ ಇಸ್ಲಾಮ್ ಆಲಂಗೀರ್ ಬಾಂಗ್ಲಾದ ನೂತನ ಅಧ್ಯಕ್ಷ

**ಢಾಕಾ,ಆ.20:** ಬಾಂಗ್ಲಾದೇಶದಲ್ಲಿ ನಡೆದ ರಾಷ್ಟ್ರಾಧ್ಯಕ್ಷರ ಚುನಾವಣೆಯಲ್ಲಿ ಆಡಳಿತಾರೂಢ ಬಾಂಗ್ಲಾದೇಶ ರಾಷ್ಟ್ರೀಯವಾದಿ ಪಕ್ಷದ (ಬಿಎನ್‌ಪಿ) ಅಭ್ಯರ್ಥಿ ಮಿರ್ಜಾ ಫಕ್ರುಲ್ ಇಸ್ಲಾಂ ಅಲಂಗೀರ್ ಆಯ್ಕೆಯಾಗಿದ್ದಾರೆ. 35 ವರ್ಷಗಳ ನಂತರ ಬಾಂಗ್ಲಾ ರಾಷ್ಟ್ರಾಧ್ಯಕ್ಷ ಹುದ್ದೆಗೆ ಸ್ಪರ್ಧೆ ಇದ್ದ ಚುನಾವಣೆ ನಡೆದಿದೆ. 78 ವರ್ಷದ ಬಿಎನ್‌ಪಿ ನಾಯಕ, ತಮ್ಮ ಪ್ರತಿಸ್ಪರ್ಧಿ ಲಿಬರಲ್ ಡೆಮಾಕ್ರಟಿಕ್ ಪಕ್ಷದ ಅಧ್ಯಕ್ಷ ಮತ್ತು ಜಮಾತ್–ಇ–ಇಸ್ಲಾಮಿ ನೇತೃತ್ವದ 11–ಪಕ್ಷಗಳ ವಿರೋಧ ಪಕ್ಷದ ಮೈತ್ರಿಕೂಟದ ನಾಮನಿರ್ದೇಶಿತ ಕರ್ನಲ್ ಓಲಿ ಅಹ್ಮದ್ ಅವರನ್ನು ಸೋಲಿಸಿದರು ಎಂದು ಮುಖ್ಯ ಚುನಾವಣಾ ಆಯುಕ್ತ ಮತ್ತು ಚುನಾವಣಾ ಚುನಾವಣಾ ಅಧಿಕಾರಿ ಎಎಂಎಂ ನಾಸಿರ್ ಉದ್ದೀನ್ ಹೇಳಿದ್ದಾರೆ.



ಆಲಂಗೀರ್ 255 ಮತಗಳನ್ನು ಪಡೆದರೆ, ಓಲಿ ಅಹ್ಮದ್ 88 ಮತಗಳನ್ನು ಪಡೆದರು ಎಂದು ಅವರು ಹೇಳಿದರು. ಒಟ್ಟು 349 ನೋಂದಾಯಿತ ಮತದಾರರಲ್ಲಿ 343 ಮಂದಿ ಚುನಾವಣೆಯಲ್ಲಿ ಮತ ಚಲಾಯಿಸಿದರು. 6 ಶಾಸಕರು ಮತ ಚಲಾಯಿಸಲಿಲ್ಲ ಎಂದು ಅವರು ಹೇಳಿದರು. ಆಯ್ಕೆಯಾದ ಅಧ್ಯಕ್ಷರು ಶುಕ್ರವಾರ ಸಂಜೆ ಬಂಗಭಬನ್‌ನ ದರ್ಬಾರ್ ಹಾಲ್‌ನಲ್ಲಿ ಬಾಂಗ್ಲಾದೇಶದ ಹೊಸ ಅಧ್ಯಕ್ಷರಾಗಿ ಪ್ರಮಾಣ ವಚನ ಸ್ವೀಕರಿಸಲಿದ್ದಾರೆ.

1991 ರ ನಂತರ ಮೊದಲ ಬಾರಿಗೆ ಬಾಂಗ್ಲಾದೇಶದಲ್ಲಿ ನಡೆಯುತ್ತಿರುವ ಮೊದಲ, ಸ್ಪರ್ಧೆ ಇದ್ದ ಅಧ್ಯಕ್ಷೀಯ ಚುನಾವಣೆ ಇದಾಗಿದೆ ಏಕೆಂದರೆ ಇತ್ತೀಚಿನ ದಶಕಗಳಲ್ಲಿ ಈ ಹುದ್ದೆಯನ್ನು ಹೆಚ್ಚಾಗಿ ಒಮ್ಮತ ಮತ್ತು ಅವಿರೋಧ ಮತದಾನದ ಮೂಲಕ ಭರ್ತಿ ಮಾಡಲಾಗಿತ್ತು. ಪದಚ್ಯುತ ಪ್ರಧಾನಿ ಶೇಖ್ ಹಸೀನಾ ಅವರ ಆಪ್ತ ಸಹಾಯಕ ಮೊಹಮ್ಮದ್ ಶಹಾಬುದ್ದೀನ್ ಅವರು ತಮ್ಮ ಐದು ವರ್ಷಗಳ ಅಧಿಕಾರಾವಧಿಯನ್ನು ಪೂರ್ಣಗೊಳಿಸುವ ಮೊದಲು ಅನಾರೋಗ್ಯದ ಕಾರಣ ಕಳೆದ ತಿಂಗಳು ರಾಜೀನಾಮೆ ನೀಡಿದ ನಂತರ ಅಧ್ಯಕ್ಷೀಯ ಚುನಾವಣೆ ಅನಿವಾರ್ಯವಾಯಿತು.

## ಪಿಣರಾಯಿ ವಿಜಯನ್ ಪುತ್ರಿಗೆ ಇ.ಡಿ ಸಂಕಷ್ಟ

**ನವದೆಹಲಿ, ಆ. 20:** ಕೇರಳದ ಮಾಜಿ ಮುಖ್ಯಮಂತ್ರಿ ಹಾಗೂ ಪ್ರಸ್ತುತ ವಿಧಾನಸಭೆಯ ವಿರೋಧ ಪಕ್ಷದ ನಾಯಕ ಪಿಣರಾಯಿ ವಿಜಯನ್ ಅವರ ಪುತ್ರಿ ಟಿ. ವೀಣಾ ಅವರಿಗೆ ಅಕ್ರಮ ಹಣ ವರ್ಗಾವಣೆ ಪ್ರಕರಣಕ್ಕೆ ಸಂಬಂಧಿಸಿದಂತೆ ಜಾರಿ ನಿರ್ದೇಶನಾಲಯದ (ಇಡಿ) ಸಂಕಷ್ಟ ಮತ್ತೆ ಎದುರಾಗಿದೆ. ಮಾಸಿಕ ಕೊಡು–ಕೊಳ್ಳುವಿಕೆ ಹಗರಣದ ತನಿಖೆಯನ್ನು ತೀವ್ರಗೊಳಿಸಿರುವ ಇಡಿ ಅಧಿಕಾರಿಗಳು, ವೀಣಾ ಅವರ ಕೈಬರಹದ ಪ್ರಮುಖ ಟಿಪ್ಪಣಿಗಳನ್ನು ವಶಕ್ಕೆ ಪಡೆದುಕೊಂಡಿದ್ದಾರೆ ಎಂದು ವರದಿಯಾಗಿದೆ.

ಖಾಸಗಿ ರಸಗೊಬ್ಬರ ಹಾಗೂ ಖನಿಜ ಸಂಸ್ಥೆಯಾದ ಕೊಚ್ಚಿನ್ ಮಿನರಲ್ಸ್ ಅಂಡ್ ರೂಟೈಲ್ ಲಿಮಿಟೆಡ್ ಸಂಸ್ಥೆಯಿಂದ ವೀಣಾ ಅವರ ಐಟಿ ಸಂಸ್ಥೆಯಾದ ?ಎಕ್ಸಾಲಾಜಿಕ್ ಸೊಲ್ಯೂಷನ್ಸ್? ಯಾವುದೇ ಸೇವೆ ನೀಡದೆ ಕೋಟ್ಯಂತರ ರೂಪಾಯಿ ಹಣ ಪಡೆದಿದೆ ಎಂಬ ಆರೋಪ



ಕೇಳಿಬಂದಿತ್ತು. ಈ ಪ್ರಕರಣದ ತನಿಖೆ ನಡೆಸುತ್ತಿರುವ ಜಾರಿ ನಿರ್ದೇಶನಾಲಯ, ಇತ್ತೀಚೆಗೆ ನಡೆಸಿದ ಶೋಧ ಕಾರ್ಯಾಚರಣೆ ವೇಳೆ ಹಣಕಾಸು ವ್ಯವಹಾರ ಹಾಗೂ ಪಾವತಿಗಳಿಗೆ ಸಂಬಂಧಿಸಿದ ಕೈಬರಹದ ಪ್ರಮುಖ ದಾಖಲೆಗಳು ಮತ್ತು ಟಿಪ್ಪಣಿಗಳನ್ನು ಜಪ್ತಿ ಮಾಡಿದೆ.

ವಶಪಡಿಸಿಕೊಳ್ಳಲಾದ ಟಿಪ್ಪಣಿಯಲ್ಲಿ ಸಿಎಮ್‌ಆರ್‌ಎಲ್ ಸಂಸ್ಥೆಯಿಂದ ಎಕ್ಸಾಲಾಜಿಕ್ ಸಂಸ್ಥೆಗೆ ಹಂತ–ಹಂತವಾಗಿ ವರ್ಗಾವಣೆಯಾದ ಹಣದ ವಿವರಗಳು ಹಾಗೂ ಕೆಲವು ಸಂಕೇತನಾಮಗಳು ಇವೆ ಎಂದು ಹೇಳಲಾಗಿದೆ. ಸಂಸ್ಥೆಯು ಸೇವೆ ಒದಗಿಸದಿದ್ದರೂ ಕೋಟ್ಯಂತರ ರೂಪಾಯಿ ಪಾವತಿಸಿರುವುದು ಅಕ್ರಮ ಹಣ ವರ್ಗಾವಣೆ ತಡೆ ಕಾಯ್ದೆಯ ವ್ಯಾಪ್ತಿಗೆ ಬರಲಿದ್ದು, ಶೀಘ್ರದಲ್ಲೇ ವೀಣಾ ಅವರಿಗೆ ವಿಚಾರಣೆಗೆ ಹಾಜರಾಗುವಂತೆ ಇಡಿ ಸಮನ್ಸ್ ಜಾರಿ ಮಾಡುವ ಸಾಧ್ಯತೆಯಿದೆ.

ಈ ನಡುವೆ ಕೇಂದ್ರದ ಮೋದಿ ಸರ್ಕಾರವು ವಿಪಕ್ಷಗಳ ನಾಯಕರ ಮೇಲೆಯೇ ಇಡಿ, ಸಿಬಿಐ ಬಳಸಿಕೊಳ್ಳುತ್ತಿದೆ ಎಂಬ ಆರೋಪವನ್ನು ಎಡಪಕ್ಷ, ಕಾಂಗ್ರೆಸ್ ಮಾಡುತ್ತಿದೆ.

## ವಿಷಪೂರಿತ ನಕಲಿ ಮದ್ಯ ಸೇವನೆ ಸಾವನ್ನಪ್ಪಿದವರ ಸಂಖ್ಯೆ 7ಕ್ಕೆ

**ಅಹಮದಾಬಾದ್,ಆ.20:** ಭಾವನಗರದಲ್ಲಿ ನಕಲಿ ಮದ್ಯ ಸೇವಿಸಿ ಸಾವನ್ನಪ್ಪಿದವರ ಸಂಖ್ಯೆ ಇದೀಗ 7ಕ್ಕೆ ಏರಿದೆ. ತೀವ್ರವಾಗಿ ಅಸ್ವಸ್ಥರಾದ 18 ಮಂದಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ ಎಂದು ಅಧಿಕಾರಿಗಳು ಗುರುವಾರ ತಿಳಿಸಿದ್ದಾರೆ. ಮದ್ಯ ನಿಷೇಧವಿರುವ ಗುಜರಾತ್ ರಾಜ್ಯದಲ್ಲಿ ನಕಲಿ ಮದ್ಯ ತಯಾರಿಕೆ ಪ್ರಕರಣ ಬೆಳಕಿಗೆ ಬಂದಿದ್ದು, ವಿಷಪೂರಿತ ನಕಲಿ ಮದ್ಯ ಸೇವಿಸಿ ಮಂಗಳವಾರ ಸಂಜೆ ನಾಲ್ವರು ಸಾವನ್ನಪ್ಪಿದ್ದರು. ಈ ಕುರಿತು ಮಾತನಾಡಿದ ಭಾವನಗರ ಜಿಲ್ಲಾಧಿಕಾರಿ ಮನೀಶ್ ಕುಮಾರ್ ಬನ್ಸಾಲ್ ಅವರು, "ಆ.18ರಂದು ಘಟನೆಯ ಮಾಹಿತಿ ಲಭ್ಯವಾಯಿತು. ಘೋಗಾ ತಾಲೂಕಿನ ಖಾರ್ಖಡಿ ಗ್ರಾಮದಲ್ಲಿ ಐವರು ಸ್ನೇಹಿತರು ಪಾರ್ಟಿ ಮಾಡಿದ್ದು, ನಂತರ ಅವರ ಆರೋಗ್ಯ ಹದಗೆಟ್ಟಿತ್ತು. ಇವರಲ್ಲಿ ಒಬ್ಬರು ಸೂರತ್ ಮತ್ತು ಇನ್ನೊಬ್ಬರು ಜಾಮ್‌ನಗರದ ನಿವಾಸಿಯಾಗಿದ್ದಾರೆ. ಸೂರತ್‌ನ ವ್ಯಕ್ತಿ ಅಲ್ಲಿಯೇ ಚಿಕಿತ್ಸೆ ಪಡೆಯುತ್ತಿದ್ದರೆ, ಜಾಮ್‌ನಗರದ ವ್ಯಕ್ತಿಯಲ್ಲಿ ಯಾವುದೇ ರೋಗಲಕ್ಷಣಗಳು ಕಂಡುಬಂದಿಲ್ಲ.



ಜಪಾನ್‌ನ ರಕ್ಷಣಾ ಸಚಿವ ಶಿಂಜಿರೊ ಕೊಯಿಜುಮಿ ಗುರುವಾರ ನವದೆಹಲಿಯ ಮಾಣೆಕ್‌ಶಾ ಕೇಂದ್ರದಲ್ಲಿ ಮೂರು ಸೇನಾ ವಿಭಾಗಗಳಿಂದ ಗೌರವ ಸ್ವೀಕರಿಸಿದರು.

ಕಲ್ಲುಗಣಿ -ಕ್ರಷರ್ ಮಾಲೀಕರ ಒಕ್ಕೂಟದಲ್ಲಿ ಬಣ ರಾಜಕೀಯ

# ಸಮಸ್ಯೆ ಬಗೆಹರಿಸಲು ನಿಮಗೇ ಆಸಕ್ತಿ ಇಲ್ಲ, ಪ್ರತಿಭಟನಾಕಾರರನ್ನು ತರಾಟೆಗೆ ತೆಗೆದುಕೊಂಡ ಸಚಿವ ಎಸ್.ಎಸ್. ಮಲ್ಲಿಕಾರ್ಜುನ್



**ಬೆಂಗಳೂರು, ಆ.20:** ಕಲ್ಲುಗಣಿ ಮತ್ತು ಕ್ರಷರ್ ಮಾಲೀಕರಿಂದ ಎರಡು ಕಡೆ ರಾಜಧನ ವಸೂಲಿ ಮಾಡುವುದನ್ನು ಕೂಡಲೇ ಸ್ಥಗಿತಗೊಳಿಸುವುದು ಸೇರಿದಂತೆ ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಒತ್ತಾಯಿಸಿ ಕರ್ನಾಟಕ ರಾಜ್ಯ ಕಲ್ಲುಗಣಿ ಮತ್ತು ಕ್ರಷರ್ ಮಾಲೀಕರ ಒಕ್ಕೂಟದ ನೇತೃತ್ವದಲ್ಲಿ ನಗರದ ಫ್ರೀಡಂ ಪಾರ್ಕ್‌ನಲ್ಲಿ ನಡೆದ ಬೃಹತ್ ಪ್ರತಿಭಟನೆ ಸಂದರ್ಭದಲ್ಲಿ ಸಂಘದ ಪ್ರತಿನಿಧಿಗಳನ್ನು, ಗಣಿ ಮತ್ತು ಭೂ ವಿಜ್ಞಾನ ಸಚಿವ ಎಸ್.ಎಸ್. ಮಲ್ಲಿಕಾರ್ಜುನ್ ತೀವ್ರ ತರಾಟೆಗೆ ತೆಗೆದುಕೊಂಡ ಪ್ರಸಂಗ ನಡೆಯಿತು.

ಸಹಸ್ರಾರು ಕಲ್ಲುಗಣಿ ಮತ್ತು ಕ್ರಷರ್ ಮಾಲೀಕರು, ಕಾರ್ಮಿಕರು ಹಾಗೂ ಉದ್ಯಮದ ಪ್ರತಿನಿಧಿಗಳು ಪ್ರತಿಭಟನೆಯಲ್ಲಿ ಭಾಗವಹಿಸಿ ಸರ್ಕಾರದ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು.

ಮಾಜಿ ಉಪಮುಖ್ಯಮಂತ್ರಿ ಡಾ. ಸಿ. ಎನ್. ಅಶ್ವತ್ಥನಾರಾಯಣ್, ಶಾಸಕರಾದ ಗೋಪಾಲಯ್ಯ, ಐವಾನ್ ಡಿಸೋಜಾ ಸೇರಿದಂತೆ ಹತ್ತಕ್ಕೂ ಹೆಚ್ಚು ಮಂದಿ ಪ್ರತಿಭಟನಾಕಾರರನ್ನು ಭೇಟಿ ಮಾಡಿದರು.

ಅಂತಿಮವಾಗಿ ಪ್ರತಿಭಟನಾಕಾರ ರಿಂದ ಮನವಿ ಸ್ವೀಕರಿಸಿ ಮಾತನಾಡಿದ ಸಚಿವ ಎಸ್‌ಎಸ್. ಮಲ್ಲಿಕಾರ್ಜುನ್, ಕರ್ನಾಟಕ ರಾಜ್ಯ ಕಲ್ಲುಗಣಿ ಮತ್ತು ಕ್ರಷರ್ ಮಾಲೀಕರ ಒಕ್ಕೂಟದಲ್ಲಿ ಎರಡು ಸಂಘಗಳಿವೆ. ಒಂದು ಸಂಘಕ್ಕೆ ಸಂಜೀವ್ ಹಟ್ಟಿಹೊಳಿ ಮತ್ತೊಂದು ಸಂಘಕ್ಕೆ ಡಿ. ಸಿದ್ಧರಾಜು ಅಧ್ಯಕ್ಷರು, ನಿಮ್ಮ ಬೇಡಿಕೆ ಏನಿದೆ ಎಂದು ನಿಮ್ಮ ಬಳಿ ಸರ್ಕಾರವೇ ಬರಬೇಕಾಯಿತು. ನೀವಂತೂ ಒಬ್ಬರೂ ಸರ್ಕಾರದ ಹತ್ತಿರ ಬರಲಿಲ್ಲ. ಹಿಂದಿನ ಸರ್ಕಾರ ನಿಮ್ಮ ಮೇಲೆ ಒಂದಕ್ಕೆ ಐದು ಪಟ್ಟು ದಂಡ ವಿಧಿಸಿತ್ತು. ನಾನೂ ವ್ಯಾಪಾರಸ್ಥನಿದ್ದೇನೆ. ನನಗೆ ಸ್ವಲ್ಪ ಸಣ್ಣಪುಟ್ಟ ತಿಳಿವಳಿಕೆ ಇರುವುದರಿಂದ ಏನು ತೊಂದರೆ ಇದೆ ಎಂದು ನಿಮಗೂ ಕೇಳಿದ್ದೆ. ಏನೇನ್ ಕಷ್ಟ ಸುಖ ಇದೆ ಎಂದು ಕೇಳಿದರೆ ನಿಮ್ಮ ನಿಮ್ಮ ರಾಜಕೀಯದಲ್ಲಿ ನೀವು ಮುಳುಗಿಹೋದಿರಿ. ಬಂದು ಈ ರೀತಿ ಇದೆ, ಹೀಗೆ ಮಾಡಿ ಎಂದು ಯಾರೂ ಹೇಳಲಿಲ್ಲ. ಸ್ವತಃ ತಾವೇ ಐದು ಪಟ್ಟು ದಂಡ ಬೇಡ, ಕಡಿಮೆ ಮಾಡೋಣ ಎಂದು ಉಪ ಸಮಿತಿ ರಚಿಸಿ ಒಂದು ಪಟ್ಟು ದಂಡ ವಿಧಿಸುವ ತೀರ್ಮಾನ ಕೈಗೊಂಡೆವು. ಅಲ್ಲಿ ತನಕ ನಮ್ಮನ್ನು ನೀವ್ಯಾರೂ ಕೇಳಲಿಲ್ಲ. ನಾನು ಯಾಕಂದ್ರೆ ಇದ್ದಿದ್ ಇದ್ದಂಗೆ ಹೇಳುತ್ತೇನೆ. ಸ್ಟ್ರೈಟ್ ಫಾರ್ವರ್ಡ್ ಆಗಿ ಮಾತನಾಡುತ್ತೇನೆ. ಆವಾಗ ನೀವ್ ಬಂದ್ ಹೇಳಿದ್ದರೆ ಏನೇನ್ ತಿದ್ದುಪಡಿ ಮಾಡಬೇಕೋ ಅದನ್ನು ಮಾಡುತ್ತಿದ್ದೆ. ಆಗ ನೀವು ಅದೇನೋ ಡ್ರೋಣ್ ಸರ್ವೆ ಆಗಬೇಕು, ಅದು, ಇದು ಎಂದು ಹೇಳಿದಿರಿ. ಆಗ ಒಂದ್ ಸ್ವಲ್ಪ ವೈಜ್ಞಾನಿಕವಾಗಿ ಮಾಡಿದ್ದೀವಿ.

ಒನ್ ಟೈಮ್ ಸೆಟಲ್ಮೆಂಟ್ ಮಾಡಬೇಕು ಎಂದು ಕೇಳುತ್ತಿದ್ದೀರಿ. ಹಿಂದೆ ಸಾರಾಯಿ, ಸೇಂದಿ ಮಾರುತ್ತಿದ್ದ ಗುತ್ತಿಗೆದಾರರಿಗೆ 200, 300 ಕೋಟಿ ರೂ ಬಾಕಿ ಇದ್ದರೆ ಆಗ ದಂಡ ಹಾಕುತ್ತಿದ್ದರು. ಅದಕ್ಕೆ ಬಡ್ಡಿ ಸೇರಿ ಇನ್ನೂ 200 ಕೋಟಿ ಆಗುತ್ತಿತ್ತು. ನಿಮ್ಮದೂ ಅದೇ ಪರಿಸ್ಥಿತಿ ಆಗಿದೆ. ಎರಡು ಕಡೆ ರಾಜಧನ ಸಂಗ್ರಹಿಸುತ್ತಿರುವ ಬಗ್ಗೆ ಚರ್ಚಿಸಿ ಸೂಕ್ತ ನಿರ್ಧರಿಸುತ್ತೇವೆ. ಸರ್ಕಾರ ಮತ್ತು ಒಕ್ಕೂಟದ ನಡುವೆ ಕೊಡು, ಕೊಳ್ಳುವಿಕೆ ನೀತಿ ಅಗತ್ಯ. ಇಲ್ಲಿ ಸರ್ಕಾರದ್ದೇನು ತಪ್ಪಿಲ್ಲ. ಲೋಪದೋಷಗಳಿಂದ ಕಾರ್ಮಿಕರಿಗೆ ತೊಂದರೆಯಾಗ ಬಾರದು. ಎಲ್ಲರೂ ಸೇರಿ ಕೂಲಂಕಶ ವಾಗಿ ಪರಿಶೀಲಿಸಿ, ಸರ್ಕಾರ ಮತ್ತು ಒಕ್ಕೂಟಕ್ಕೆ ಅನ್ಯಾಯವಾಗದಂತೆ ಸೂಕ್ತ ನಿರ್ಧಾರ ತೆಗೆದುಕೊಳ್ಳೋಣ. ಮಾಲೀಕರಿಗೆ ಎರಡನೇ ಬಾರಿಗೆ ನೀಡಿರುವ ನೋಟೀಸ್ ಬಗ್ಗೆ ಇಲಾಖಾ ಕಾರ್ಯದರ್ಶಿಗಳು, ಮುಖ್ಯಕಾರ್ಯದರ್ಶಿಗಳ ಜೊತೆ ಚರ್ಚಿಸುತ್ತೇನೆ ಎಂದರು.

ಸಮಸ್ಯೆಗಳನ್ನು ಬಗೆಹರಿಸಲು ತಮ್ಮ ಸಂಪೂರ್ಣ ಸಹಕಾರವಿದೆ. ಮುಖ್ಯಮಂತ್ರಿ ಜೊತೆ ಚರ್ಚಿಸುತ್ತೇನೆ. ಎಲ್ಲಾ ಸಮಸ್ಯೆಗಳಿಗೆ ಒಂದೇ ಬಾರಿಗೆ ಪರಿಹಾರ ಹುಡುಕಲು ಸರ್ಕಾರ ಬದ್ಧವಾಗಿದೆ ಎಂದರು.

ಇದಕ್ಕೂ ಮುನ್ನ ಕರ್ನಾಟಕ ರಾಜ್ಯ ಕಲ್ಲುಗಣಿ ಮತ್ತು ಕ್ರಷರ್ ಮಾಲೀಕರ ಒಕ್ಕೂಟದ ಅಧ್ಯಕ್ಷ ಡಿ. ಸಿದ್ಧರಾಜು, ಪ್ರತಿಭಟನೆಯಲ್ಲಿ ಒಕ್ಕೂಟದ ಪ್ರಧಾನ ಕಾರ್ಯದರ್ಶಿ ಎಚ್.ಡಿ.ಆರ್. ಮಹೇಶ್, ಸಿ.ಎಸ್. ಭಾಸ್ಕರ್, ಉಪಾಧ್ಯಕ್ಷ ಪ್ರವೀಣ್ ಹಿರೇಮಠ್, ಪಂಚಮಿ ಶ್ರೀನಿವಾಸ ಬಿ.ಎನ್., ಅಬ್ದುಲ್ ಗನಿ ಮಜೀದ್, ಕೋಶಾಧಿಕಾರಿ ಉಮಾಶಂಕರಯ್ಯ, ಕಾರ್ಯದರ್ಶಿ ಚೌಧರಿ ಸೇರಿದಂತೆ ರಾಜ್ಯದ ವಿವಿಧ ಜಿಲ್ಲೆಗಳ ಅಧ್ಯಕ್ಷರು, ಪದಾಧಿಕಾರಿಗಳು ಹಾಗೂ ಸಾವಿರಾರು ಕಲ್ಲುಗಣಿ ಮತ್ತು ಕ್ರಷರ್ ಮಾಲೀಕರು ಪಾಲ್ಗೊಂಡಿದ್ದರು.



ರಾಷ್ಟ್ರೀಯ ಸದ್ಭಾವನಾ ದಿನಾಚರಣೆಯ ಅಂಗವಾಗಿ ಡಾ. ಮನಮೋಹನ್ ಸಿಂಗ್ ಬೆಂಗಳೂರು ನಗರ ವಿಶ್ವವಿದ್ಯಾನಿಲಯದ ನೂತನ ಶೈಕ್ಷಣಿಕ ವಿಭಾಗದಲ್ಲಿ ವಿದ್ಯಾರ್ಥಿಗಳು ಮತ್ತು ಬೋಧಕರು ಪ್ರತಿಜ್ಞಾವಿಧಿ ಸ್ವೀಕರಿಸಿದರು. ಕುಲಸಚಿವ ಪ್ರೊ.ರಮೇಶ ಕುಡೇನಟ್ಟಿ ಪ್ರತಿಜ್ಞಾವಿಧಿ ಬೋಧಿಸಿದರು. ಪ್ರಸಾರಾಂಗ ನಿರ್ದೇಶಕ ಡಾ. ಟಿ.ಎನ್.ತಾಂಡವಗೌಡ, ಕಲಾ ನಿಕಾಯದ ಡೀನ್ ಪ್ರೊ. ಜ್ಯೋತಿ ವೆಂಕಟೇಶ್ ಕಾರ್ಯಕ್ರಮದಲ್ಲಿ ಹಾಜರಿದ್ದರು.

## ಮಾಫಿ ಸಾಕ್ಷಿಯಾಗುವ ಆರೋಪಿ ಪ್ರದೋಷ್ ಅರ್ಜಿ ವಿಚಾರಣೆ ಆ.24ಕ್ಕೆ



**ಬೆಂಗಳೂರು, ಆ.20** ರೇಣುಕಾ ಸ್ವಾಮಿ ಹತ್ಯೆ ಪ್ರಕರಣದಲ್ಲಿ ಮಾಫಿ ಸಾಕ್ಷಿಯಾಗಲು ಆರೋಪಿ ಪ್ರದೋಷ್ ಸಲ್ಲಿಸಿರುವ ಅರ್ಜಿ ವಿಚಾರಣೆಯನ್ನು 59ನೇ ಸಿಸಿಹೆಚ್ ನ್ಯಾಯಾಲಯ ಆ.24ಕ್ಕೆ ಮುಂದೂಡಿದೆ.

ವಿಡಿಯೋ ಕಾನ್ಫರೆನ್ಸ್ ಮೂಲಕ ವಿಚಾರಣೆಗೆ ಹಾಜರಾದ ಪ್ರದೋಷ್‌ನ ವಿಚಾರಣೆ ನಡೆಸಿದ ನ್ಯಾಯಾಲಯ, ಮಾಫಿ ಸಾಕ್ಷಿಯಾಗಲು ಬಯಸಿರುವ ಅವರ ಅರ್ಜಿ ವಿಚಾರಣೆಯನ್ನು ಮುಂದೂಡಿದ್ದು, ಸೋಮವಾರ ಆದೇಶ ಪ್ರಕಟಿಸುವ ಸಾಧ್ಯತೆಯಿದೆ.

ಮಾಫಿ ಸಾಕ್ಷಿಯಾಗಲು ಬಯಸಿರುವ ಅರ್ಜಿಯನ್ನು ಪರಿಗಣಿಸುವ ಮುನ್ನ ಅದರಲ್ಲಿರುವ ಅಂಶಗಳ ಕುರಿತು ತಮಗೆ ಮಾಹಿತಿ ಇದೆಯಾ, ಓದಿ ಸಹಿ ಹಾಕಿದ್ದೀರಾ, ಏನು ಬರೆದಿದ್ದೀರಾ ಎಂದು ಹೇಳಬಹುದಾ ಎಂದು ನ್ಯಾಯಾಧೀಶರು ಪ್ರದೋಷ್‌ನನ್ನು ಪ್ರಶ್ನಿಸಿದರು. ಹೌದು, ಸಂಪೂರ್ಣವಾಗಿ ಓದಿ ಸಹಿ ಹಾಕಿದ್ದೇನೆ, ರೇಣುಕಾಸ್ವಾಮಿ ಹತ್ಯೆ, ನನ್ನ ಪಾತ್ರದ ಬಗ್ಗೆ ಸ್ವಯಂ ಪ್ರೇರಿತವಾಗಿ ಸತ್ಯವನ್ನು ಬರೆದಿದ್ದೇನೆ ಎಂದು ಪ್ರದೋಷ್ ಉತ್ತರಿಸಿದ್ದಾರೆ.

ಪ್ರದೋಷ್ ಹೇಳಿಕೆಗಳನ್ನು ದಾಖಲಿಸಿಕೊಂಡಿರುವ ನ್ಯಾಯಾಲಯ ಆತನ ಹಿನ್ನೆಲೆ, ಈ ಪ್ರಕರಣದಲ್ಲಿ ಆತನ ಪಾತ್ರದ ಕುರಿತು ವರದಿ ನೀಡುವಂತೆ ತನಿಖಾಧಿಕಾರಿಗಳಿಗೆ ಈಗಾಗಲೇ ಸೂಚಿಸಿದೆ. ವರದಿ ಬಂದ ಬಳಿಕ ಪ್ರದೋಷ್ ಸಲ್ಲಿಸಿರುವ ಮಾಫಿ ಸಾಕ್ಷಿ ಅರ್ಜಿ ಪರಿಗಣಿಸುವ ಬಗ್ಗೆ ಆದೇಶ ನೀಡುವ ಸಾಧ್ಯತೆಯಿದೆ.

ಆರೋಪಿ ಪವಿತ್ರಾ ಗೌಡ ಗುರುವಾರ ನ್ಯಾಯಾಲಯದ ಮುಂದೆ ಹಾಜರಾದರು. ಅನಾರೋಗ್ಯದ ಕಾರಣ ನೀಡಿ ಕಳೆದ ಎರಡು ಬಾರಿ ವಿಚಾರಣೆಗೆ ಗೈರುಹಾಜರಾಗಿದ್ದ ಪವಿತ್ರಾ ಗೌಡ ವಿಡಿಯೋ ಕಾನ್ಫರೆನ್ಸ್ ಮೂಲಕ ವಿಚಾರಣೆಗೆ ಹಾಜರಾಗಿದ್ದರು. ಪವಿತ್ರಾ ಗೌಡ ಅವರ ವಿಚಾರಣೆ ನಡೆಸಿದ ನ್ಯಾಯಾಧೀಶರು 'ಅನಾರೋಗ್ಯ ವಿದ್ದರೆ ವಿಶ್ರಾಂತಿ ಪಡೆಯಿರಿ, ಸಾಕ್ಷಿ ವಿಚಾರಣೆ ಕೇಳ ಬಯಸಿದರೆ ಮಾತ್ರವೇ ಇರಿ' ಎಂದು ಸೂಚಿಸಿದರು.

ನಕಲಿ ಔಷಧ ಹಾವಳಿ ತಡೆಗೆ ಆರೋಗ್ಯ ಇಲಾಖೆ ಮಹತ್ವದ ಕ್ರಮ

## ಔಷಧದ ಸಾಚಾತನ ತಿಳಿಯಲು ಕ್ಯೂಆರ್ ಕೋಡ್ ಅಳವಡಿಸಲು ಚಿಂತನೆ

**ಬೆಂಗಳೂರು.ಆ.20:** ಮೆಡಿಕಲ್ ಸ್ಟೋರ್‌ಗಳಲ್ಲಿ ಔಷಧ ಖರೀದಿಸುವ ಮುನ್ನ ಜನರು ಇನ್ಮುಂದೆ ಮತ್ತಷ್ಟು ಎಚ್ಚರಿಕೆ ವಹಿಸಬೇಕಿದೆ. ನಕಲಿ ಔಷಧಿಗಳ ಹಾವಳಿ ತಡೆದು, ಸಾರ್ವಜನಿಕರ ಆರೋಗ್ಯ ಕಾಪಾಡಲು ಆರೋಗ್ಯ ಇಲಾಖೆ ಮಹತ್ವದ ಕ್ರಮಕ್ಕೆ ಮುಂದಾಗಿದೆ.



ಔಷಧಿಗಳು ಅಸಲಿಯೋ ಅಥವಾ ನಕಲಿಯೋ ಎಂಬುದನ್ನು ಗ್ರಾಹಕರೇ ಸುಲಭವಾಗಿ ಪರಿಶೀಲಿಸಿಕೊಳ್ಳುವ ವ್ಯವಸ್ಥೆ ಜಾರಿಗೆ ತರಲು ಇಲಾಖೆ ಸಿದ್ಧತೆ ನಡೆಸಿದೆ. ಇದಕ್ಕಾಗಿ ಔಷಧಿಗಳ ಮೇಲೆ ಕ್ಯೂಆರ್ ಕೋಡ್ ಅಳವಡಿಸುವ ಪ್ರಕ್ರಿಯೆಗೆ ಚಾಲನೆ ನೀಡಲು ಚಿಂತನೆ ನಡೆಸಲಾಗಿದೆ.

ಔಷಧಿ ಖರೀದಿಸುವ ವೇಳೆ ಅದರ ಮೇಲಿರುವ ಕ್ಯುಆರ್ ಕೋಡ್ ಅನ್ನು ಮೊಬೈಲ್‌ನಲ್ಲಿ ಸ್ಕ್ಯಾನ್ ಮಾಡಿದರೆ, ಔಷಧಿಯ ತಯಾರಿಕಾ ಸಂಸ್ಥೆ, ಬ್ಯಾಚ್ ನಂಬರ್, ತಯಾರಿಕಾ ದಿನಾಂಕ ಸೇರಿದಂತೆ ಅಗತ್ಯ ಮಾಹಿತಿಯನ್ನು ಪಡೆಯುವ ವ್ಯವಸ್ಥೆ ರೂಪಿಸುವ ಉದ್ದೇಶ ಹೊಂದಲಾಗಿದೆ.

ಈ ಮೂಲಕ ಔಷಧಿಯ ಪ್ಯಾಕೆಟ್‌ನಲ್ಲಿರುವ ಮಾಹಿತಿ ಮತ್ತು ಕ್ಯೂಆರ್ ಕೋಡ್‌ನಿಂದ ದೊರೆಯುವ ಮಾಹಿತಿಯನ್ನು ಹೋಲಿಕೆ ಮಾಡಿ ಅಸಲಿ–ನಕಲಿ ಎಂಬುದನ್ನು ಪತ್ತೆಹಚ್ಚಲು ಸಾಧ್ಯವಾಗಲಿದೆ.

ನಕಲಿ ಔಷಧಿಗಳ ಬಳಕೆಯಿಂದ ರೋಗಿಗಳ ಆರೋಗ್ಯದ ಮೇಲೆ ಗಂಭೀರ ಪರಿಣಾಮ ಬೀರುವ ಸಾಧ್ಯತೆ ಇರುವ ಹಿನ್ನೆಲೆಯಲ್ಲಿ ಆರೋಗ್ಯ ಇಲಾಖೆ ಈ ಕ್ರಮಕ್ಕೆ ಮುಂದಾಗಿದೆ. ಔಷಧಿ ಮಾರಾಟ ವ್ಯವಸ್ಥೆಯಲ್ಲಿ ಪಾರದರ್ಶಕತೆ ಹೆಚ್ಚಿಸುವುದರ ಜೊತೆಗೆ ನಕಲಿ ಔಷಧಿ ದಂಧೆಗೆ ಕಡಿವಾಣ ಹಾಕುವುದು ಇಲಾಖೆಯ ಉದ್ದೇಶವಾಗಿದೆ.

ಇನ್ಮುಂದೆ ಮೆಡಿಕಲ್ ಶಾಪ್‌ಗೆ ಹೋದಾಗ ಔಷಧಿ ಖರೀದಿಸುವ ಮುನ್ನ ಕ್ಯೂಆರ್ ಕೋಡ್ ಸ್ಕ್ಯಾನ್ ಮಾಡಿ. ಔಷಧಿ ಅಸಲಿಯೇ ಎಂಬುದನ್ನು ಪರಿಶೀಲಿಸಿ ಪಡೆದುಕೊಳ್ಳಿ ಎಂದು ಅರೋಗ್ಯ ಸಚಿವ ಯು.ಟಿ.ಖದರ್ ತಿಳಿಸಿದರು.

## ಐಎಎಸ್ ಅಧಿಕಾರಿ ವಿರುದ್ಧ ಹೇಳಿಕೆ: ರವಿಕುಮಾರ್‌ಗೆ ಹೈಕೋರ್ಟ್ ತರಾಟೆ



**ಬೆಂಗಳೂರು, ಆ.20:** ಕಲಬುರಗಿ ಯಲ್ಲಿ ನಡೆದಿದ್ದ ಪ್ರತಿಭಟನೆಯ ವೇಳೆ ಕಲಬುರಗಿ ಜಿಲ್ಲಾಧಿಕಾರಿ, ಐಎಎಸ್ ಅಧಿಕಾರಿ ಫೌಜಿಯಾ ತರನ್ನುಮ್ ಅವರ ವಿರುದ್ಧ ವಿವಾದಾತ್ಮಕ, ಕೋಮುದ್ವೇಷದ ಹೇಳಿಕೆ ನೀಡಿದ್ದ ಬಿಜೆಪಿ ವಿಧಾನ ಪರಿಷತ್ ಸದಸ್ಯ ಎನ್. ರವಿಕುಮಾರ್ ಅವರಿಗೆ ಹೈಕೋರ್ಟ್ ತೀವ್ರ ತರಾಟೆಗೆ ತೆಗೆದುಕೊಂಡಿದೆ.

ಕಲಬುರಗಿಯಲ್ಲಿ ನಡೆದ ಪ್ರತಿಭಟನೆ ಸಂದರ್ಭದಲ್ಲಿ ಮಾತ ನಾಡಿದ್ದ ಎನ್. ರವಿಕುಮಾರ್ ಅವರು, ಐಎಎಸ್ ಅಧಿಕಾರಿ ಫೌಜಿಯಾ ತರನ್ನುಮ್ ಅವರು ಭಾರತೀಯರೋ ಅಥವಾ ಪಾಕಿ ಸ್ತಾನಿಯೋ ಎಂದು ಪ್ರಶ್ನಿಸುವ ಮೂಲಕ ಮುಸ್ಲಿ ವಿರೋಧಿ ಹೇಳಿಕೆ ನೀಡಿದ್ದರು.

ಈ ಸಂಬಂಧ ಕಲಬುರಗಿಯ ಸ್ಟೇಷನ್ ಬಜಾರ್ ಪೊಲೀಸ್ ಠಾಣೆಯಲ್ಲಿ ಬಿಜೆಪಿ ನಾಯಕ ರವಿಕುಮಾರ್ ವಿರುದ್ಧ ಎಫ್‌ಐಆರ್ ದಾಖಲಾಗಿತ್ತು. ಈ ಎಫ್‌ಐಆರ್ ರದ್ದುಗೊಳಿಸುವಂತೆ ಕೋರಿ ರವಿಕುಮಾರ್ ಅವರು ಹೈಕೋರ್ಟ್‌ಗೆ ಅರ್ಜಿ ಸಲ್ಲಿಸಿದ್ದರು.

ಈ ಅರ್ಜಿ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಎಂ ನಾಗಪ್ರಸನ್ನ ಅವರ ಹೈಕೋರ್ಟ್‌ನ ಏಕಸದಸ್ಯ ನ್ಯಾಯಪೀಠವು, ನಾಗರಿಕ ಸೇವೆ ಯಲ್ಲಿರುವ ಕರ್ತವ್ಯನಿರತ ಅಧಿಕಾರಿಯ ವಿರುದ್ಧ ಈ ರೀತಿಯ ಕೋಮು ಪ್ರಚೋದಕ ಹಾಗೂ ಅವಹೇಳನಕಾರಿ ಹೇಳಿಕೆ ನೀಡುವುದನ್ನು ಸಹಿಸಲಾಗದು ಎಂದು ಕಟುವಾಗಿ ಹೇಳಿದ್ದಾರೆ.

ಇದು ಅತಿಯಾಯಿತು, ಇದನ್ನು ಕ್ಷಮಿಸಲಾಗದು. ನಾಲಗೆಯ ಮೇಲೆ ಎಚ್ಚರಿಕೆ ಇರಲಿ ಎಂದು ನ್ಯಾಯಾಲಯ ಅರ್ಜಿದಾರರಿಗೆ ಎಚ್ಚರಿಕೆ ನೀಡಿದೆ.

ಐಎಎಸ್ ಅಧಿಕಾರಿ ಫೌಜಿಯಾ ಅವರು ಮುಸ್ಲಿಮ್ ಎಂಬ ಕಾರಣಕ್ಕೆ ಹಾಗೆ ಹೇಳಿರುವುದನ್ನು ಒಪ್ಪಲಾಗದು. ಕಳೆದ ವಿಚಾರಣೆಯಲ್ಲಿ ಇದನ್ನು ಸ್ಪಷ್ಟಪಡಿಸಲಾಗಿದೆ ಎಂದೂ ನ್ಯಾಯಮೂರ್ತಿ ಹೇಳಿದ್ದಾರೆ.

ಬೃಹತ್ ಭೂ ಹಗರಣ: ರೂ.500 ಕೋಟಿ ಮೌಲ್ಯದ ಜಮೀನು ಅಕ್ರಮ ಖಾತೆ ವರ್ಗಾವಣೆ

## ಮಾಜಿ ಎಸಿ ದುರ್ಗಾಶ್ರೀ ವಿರುದ್ಧ ಲೋಕಾಯುಕ್ತ ದಾಳಿ, ವಿಚಾರಣೆಗೆ ಸಮನ್ಸ್ ಜಾರಿ

**ಬೆಂಗಳೂರು, ಆ.20:** ಸರ್ಕಾರಿ ಸಾಫ್ಟ್‌ವೇರ್ ಹಾಗೂ ಡಿಜಿಟಲ್ ಸಹಿ ದುರ್ಬಳಕೆ ಮಾಡಿಕೊಂಡು 500 ಕೋಟಿ ರೂಪಾಯಿ ಮೌಲ್ಯದ 62.20 ಎಕರೆ ಖಾಸಗಿ ಜಮೀನನ್ನು ಅಕ್ರಮವಾಗಿ ಖಾತೆ ವರ್ಗಾವಣೆ ಮಾಡಿರುವ ಬೃಹತ್ ಹಗರಣವನ್ನು ಕರ್ನಾಟಕ ಲೋಕಾಯುಕ್ತ ಸಂಸ್ಥೆ ಭೇದಿಸಿದೆ.

ಉಪಲೋಕಾಯುಕ್ತ ನ್ಯಾಂ ಬಿ. ವೀರಪ್ಪ ರವರು ಈ ಗಂಭೀರ ಪ್ರಕರಣವನ್ನು ಸ್ವಯಂಪ್ರೇರಿತವಾಗಿ ದಾಖಲಿಸಿಕೊಂಡು ಶೋಧನಾ ಹೊರಡಿಸಿದ್ದರು. ಲೋಕಾಯುಕ್ತ ಪೊಲೀಸ್ ಇನ್‌ಸ್ಪೆಕ್ಟರ್‌ಗಳಾದ ಶ್ರೀ ಉಮಾಮಹೇಶ್ ಮತ್ತು ಶ್ರೀ ಹಾಲಪ್ಪ ವೈ. ಬಾಲದಂಡಿ ಅವರ ತಂಡ ಮೇ 7 ರಂದು ದೊಡ್ಡಬಳ್ಳಾಪುರ ಉಪವಿಭಾಗಾಧಿಕಾರಿಗಳ ಕಚೇರಿ ಹಾಗೂ ದೇವನಹಳ್ಳಿ ತಹಶೀಲ್ದಾರ್ ಕಚೇರಿಗಳ ಮೇಲೆ ದಿಢೀರ್ ದಾಳಿ ನಡೆಸಿ ದಾಖಲೆ ಪರಿಶೀಲಿಸಿದಾಗ ಈ ಆಘಾತಕಾರಿ ಅಂಶಗಳು ಹೊರ ಬಂದಿವೆ. ದೇವನಹಳ್ಳಿ ತಾಲೂಕಿನ ಸಣ್ಣ ಅಮಾನಿಕೆರೆ, ಬೈಚಾಪುರ ಮತ್ತು ಪ್ರಸನ್ನಹಳ್ಳಿ ಗ್ರಾಮಗಳ ಒಟ್ಟು 84 ಸರ್ವೇ ನಂಬರ್ಗಳಲ್ಲಿ ಈ ಅಕ್ರಮ ಕಂಡು ಬಂದಿದೆ. ಜಮೀನಿನ ಮೌಲ್ಯ ರೂ. 103.68 ಕೋಟಿ ಹಾಗೂ ಪ್ರಸ್ತುತ ಮಾರುಕಟ್ಟೆ ಮೌಲ್ಯ (ಎಕರೆಗೆ ರೂ. 8 ಕೋಟಿಯಂತೆ) ರೂ. 500 ಕೋಟಿ ಆಗಲಿದೆ.

ದೊಡ್ಡಬಳ್ಳಾಪುರ ಉಪವಿಭಾಗದ ಮಾಜಿ ಉಪವಿಭಾಗಾಧಿಕಾರಿ ದುರ್ಗಾಶ್ರೀ ಹಾಗೂ ಪ್ರಥಮ ದರ್ಜೆ ಸಹಾಯಕ




ಶ್ರೀ ಮನೋಜ್ ಎಸ್ ಇದರಲ್ಲಿ ಭಾಗಿಯಾಗಿದ್ದಾರೆ ಎನ್ನಲಾಗಿದೆ.

ಇ–ಆಫೀಸ್‌ನಲ್ಲಿ ಜನರೇಟ್ ಆಗದ ನಕಲಿ ಆದೇಶಗಳನ್ನು ಬೇರೆಡೆ ಸೃಷ್ಟಿಸಿ, ದೇವನಹಳ್ಳಿ ತಹಶೀಲ್ದಾರ್ ಅವರಿಗೆ 'ಭೂಮಿ' ತಂತ್ರಾಂಶದಲ್ಲಿ ಸೇರ್ಪಡಿಸಲು ಕಳುಹಿಸಲಾಗಿತ್ತು. ನಕಲಿ ಆದೇಶಗಳಲ್ಲಿ ಉಲ್ಲೇಖಿಸಲಾಗಿದ್ದ ಕರ್ನಾಟಕ ಉಚ್ಚ ನ್ಯಾಯಾಲಯದ ರಿಟ್ ಅರ್ಜಿ ಹಾಗೂ ಕೆಎಟಿ ಪ್ರಕರಣ ಸಂಖ್ಯೆಗಳು ಆನ್‌ಲೈನ್‌ನಲ್ಲಿ ಪರಿಶೀಲಿಸಿದಾಗ, ಅವು ಈ ಜಮೀನುಗಳಿಗೆ ಸಂಬಂಧಿಸಿಲ್ಲ ದಿರುವುದು ದೃಢಪಟ್ಟಿದೆ.

ಬಯೋಮೆಟ್ರಿಕ್ ಮತ್ತು ಡಿಜಿಟಲ್ ಸಹಿ ದುರ್ಬಳಕೆ: ವಿಷಯ ನಿರ್ವಾಹಕ ಮನೋಜ್ ಎಸ್. ಅವರ ಲಾಗಿನ್ ಮೂಲಕ ನಕಲಿ ದಾಖಲೆಗಳನ್ನು ಅಪ್ಲೋಡ್ ಮಾಡಲಾಗಿತ್ತು. ನಂತರ ಎಸಿ ದುರ್ಗಾಶ್ರೀ ಅವರು ತಮ್ಮ ಬಯೋಮೆಟ್ರಿಕ್ ಥಂಬ್ ಹಾಗೂ ಡಿಜಿಟಲ್ ಸಿಗ್ನೇಚರ್ ಬಳಸಿ ಅಕ್ರಮವಾಗಿ ಅನುಮೋದನೆ ನೀಡಿದ್ದಾರೆ.

ಅರ್ಜಿಯೇ ಇಲ್ಲದೆ ಅನುಮೋದನೆ: ಉಪವಿಭಾಗಾಧಿಕಾರಿ ಕಚೇರಿಯಲ್ಲಿ ಯಾವುದೇ ಅಧಿಕೃತ ಅರ್ಜಿ ಸ್ವೀಕೃತವಾಗದಿದ್ದರೂ ನೇರವಾಗಿ ಖಾತೆ ಬದಲಾವಣೆಗೆ ಕ್ರಮ ವಹಿಸಲಾಗಿದೆ. ಖಾಸಗಿ ಲ್ಯಾಪ್ಟಾಪ್ ಬಳಕೆ: ಉಪವಿಭಾಗಾಧಿಕಾರಿ ದುರ್ಗಾಶ್ರೀ ಅವರು ಕಚೇರಿ ಕೆಲಸಗಳಿಗೆ ಅಧಿಕೃತ ಕಂಪ್ಯೂಟರ್ ಬದಲಿಗೆ ಖಾಸಗಿ ಲ್ಯಾಪ್ಟಾಪ್ ಬಳಸಿರುವುದು ಕಂಡು ಬಂದಿದೆ. ಸಾರ್ವಜನಿಕ ದಾಖಲೆಗಳನ್ನು ತಿರುಚಿ, ಸರ್ಕಾರಿ ವ್ಯವಸ್ಥೆಗೆ ಧಕ್ಕೆ ತಂದು ನೂರಾರು ಕೋಟಿ ಮೌಲ್ಯದ ಆಸ್ತಿ ಅಕ್ರಮ ವರ್ಗಾವಣೆ ಎಸಗಿರುವ ಹಿನ್ನೆಲೆಯಲ್ಲಿ, ಆರೋಪಿಗಳಾದ ದುರ್ಗಾಶ್ರೀ ಹಾಗೂ ಮನೋಜ್ ಎಸ್. (ಎಫ್‌ಡಿಎ) ಅವರು ಆಗಸ್ಟ್ 22 ಲೋಕಾಯುಕ್ತ ಪೀಠದ ಮುಂದೆ ಖುದ್ದಾಗಿ ಹಾಜರಾಗಿ ತಮ್ಮ ಆಕ್ಷೇಪಣೆ ಸಲ್ಲಿಸುವಂತೆ ಉಪ ಲೋಕಾಯುಕ್ತರು ಆದೇಶಿಸಿದ್ದಾರೆ.

## ಮೊದಲನೇ ಪುಟದಿಂದ

### ಪ್ರತಿಪಕ್ಷಗಳ ಗದ್ದಲದ ನಡುವೆಯೇ ಪ್ರಮುಖ ಮೂರು ವಿಧೇಯಕಗಳಿಗೆ ಅಂಗೀಕಾರ

ಖರ್ಚು ವೆಚ್ಚಗಳನ್ನು ಪರಿಗಣಿಸಿ ಪ್ರಾಧಿಕಾರದ ಆಯುಕ್ತರ ಅಧಿಕಾರ ಮಂಜೂರಾತಿ ಮಿತಿಯನ್ನು ಹೆಚ್ಚಿಸುವ ಉದ್ದೇಶದಿಂದ 2026ನೇ ಸಾಲಿನ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ (ತಿದ್ದುಪಡಿ) ವಿಧೇಯಕ ತರಲಾಗಿದೆ ಎಂದು ಕೃಷ್ಣ ಬೈರೇಗೌಡರು ತಿಳಿಸಿದರು.

**2026ನೇ ಸಾಲಿನ ನಾಡಪ್ರಭು ಕೆಂಪೇಗೌಡ ಪಾರಂಪರಿಕ ತಾಣದ ಅಭಿವೃದ್ಧಿ ಪ್ರಾಧಿಕಾರ (ತಿದ್ದುಪಡಿ) ವಿಧೇಯಕ**

ನಾಡಪ್ರಭು ಕೆಂಪೇಗೌಡ ಪಾರಂಪರಿಕ ತಾಣದ ಅಭಿವೃದ್ಧಿ ಪ್ರಾಧಿಕಾರಕ್ಕೆ ಪದನಿಮಿತ್ತ ಉಪಾಧ್ಯಕ್ಷರಾಗಿ ಉಪ ಮುಖ್ಯಮಂತ್ರಿ ಅಥವಾ ಕಂದಾಯ ಮಂತ್ರಿಯನ್ನು, ಪದನಿಮಿತ್ತ ಸದಸ್ಯರುಗಳಾಗಿ ಬೆಂಗಳೂರು ಅಭಿವೃದ್ಧಿ ಸಚಿವರು, ಬೆಂಗಳೂರು ದಕ್ಷಿಣ ಜಿಲ್ಲೆಯ ಉಸ್ತುವಾರಿ ಸಚಿವರು ಹಾಗೂ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಉಸ್ತುವಾರಿ ಸಚಿವರನ್ನು ಮತ್ತು ಸರ್ಕಾರೇತರ ಸದಸ್ಯರಾಗಿ ರಾಜ್ಯ ಸರ್ಕಾರವು ನಾಮ ನಿರ್ದೇಶಿಸುವ ನಾಡಪ್ರಭು ಕೆಂಪೇಗೌಡರ ಇತಿಹಾಸ ಮತ್ತು ಪರಂಪರೆಯಲ್ಲಿ ತಜ್ಞರಾಗಿರುವ ಬೆಂಗಳೂರು ನಗರ ಜಿಲ್ಲೆ / ಬೆಂಗಳೂರು ಗ್ರಾಮಾಂತರ ಜಿಲ್ಲೆ / ಬೆಂಗಳೂರು ದಕ್ಷಿಣ ಜಿಲ್ಲೆಯ ಆರು ಸರ್ಕಾರೇತರ ಸದಸ್ಯರುಗಳನ್ನು ನೇಮಿಸುವ ಸಲುವಾಗಿ ಸದಸ್ಯರ ಕುರಿತಾದ ಉಪಬಂಧ ಪರಿಷ್ಕರಿಸುವ ಸಲುವಾಗಿ ನಾಡಪ್ರಭು ಕೆಂಪೇಗೌಡ ಪಾರಂಪರಿಕ ತಾಣದ ಅಭಿವೃದ್ಧಿ ಪ್ರಾಧಿಕಾರ ಅಧಿನಿಯಮ, 2018 (2018ರ ಕರ್ನಾಟಕ ಅಧಿನಿಯಮ 12) ವನ್ನು ಮತ್ತಷ್ಟು ತಿದ್ದುಪಡಿ ಮಾಡುವ ಕಾರಣಕ್ಕಾಗಿ ನಾಡಪ್ರಭು ಕೆಂಪೇಗೌಡ ಪಾರಂಪರಿಕ ತಾಣದ ಅಭಿವೃದ್ಧಿ ಪ್ರಾಧಿಕಾರ (ತಿದ್ದುಪಡಿ) ವಿಧೇಯಕ–2026ವನ್ನು ತರಲಾಗಿದೆ.

**2026ನೇ ಸಾಲಿನ ಕರ್ನಾಟಕ ಪಟ್ಟಣ ಮತ್ತು ಗ್ರಾಮಾಂತರ ಯೋಜನೆ (ತಿದ್ದುಪಡಿ) ವಿಧೇಯಕ**

2026ನೇ ಸಾಲಿನ ಕರ್ನಾಟಕ ಪಟ್ಟಣ ಮತ್ತು ಗ್ರಾಮಾಂತರ ಯೋಜನೆ (ತಿದ್ದುಪಡಿ ) ವಿದೇಯಕವನ್ನು ತರುವ ಉದ್ದೇಶ 2005ರ ನಂತರದಲ್ಲಿ ಮತ್ತು ಕರ್ನಾಟಕ ಪಟ್ಟಣ ಮತ್ತು ಗ್ರಾಮಾಂತರ ಯೋಜನೆ (ತಿದ್ದುಪಡಿ) ಅಧಿನಿಯಮ, 2015 (2015ರ ಕರ್ನಾಟಕ ಅಧಿನಿಯಮ 38)ರ ಪ್ರಾರಂಭದ ದಿನಾಂಕಕ್ಕೆ ಮೊದಲು ಅನುಮೋದನೆಗೊಂಡ ಬಡಾವಣೆಗಳ ಸಂದರ್ಭದಲ್ಲಿ ಅಭಿವೃದ್ಧಿ ಕಾಮಗಾರಿಗಳನ್ನು ಪೂರ್ಣಗೊಳಿಸದಿರುವುದಕ್ಕಾಗಿ ದಂಡ ವಿಧಿಸುವ ಉಪಬಂಧವನ್ನು ಕಲ್ಪಿಸಲು ಅನುವಾಗುವಂತೆ ಕರ್ನಾಟಕ ಪಟ್ಟಣ ಮತ್ತು ಗ್ರಾಮಾಂತರ ಯೋಜನೆ ಅಧಿನಿಯಮ, 1961 (1963ರ ಕರ್ನಾಟಕ ಅಧಿನಿಯಮ 11)ನ್ನು ಮತ್ತಷ್ಟು ತಿದ್ದುಪಡಿ ಮಾಡುವುದಾಗಿದೆ. ಹಾಗೆಯೇ ಅನುಮೋದಿತ ಬಡಾವಣೆಗಳಲ್ಲಿನ ಅಭಿವೃದ್ಧಿ ಕಾಮಗಾರಿಗಳನ್ನು ಪೂರ್ಣಗೊಳಿಸದಿರುವುದಕ್ಕಾಗಿ ಯೋಜನಾ ಪ್ರಾಧಿಕಾರಗಳು ಸರ್ಕಾರಿ ನಿರ್ದೇಶನಗಳ ಮೂಲಕ ದಂಡ ವಿಧಿಸಿವೆ ಮತ್ತು ಅದನ್ನು ಶಾಸನಾತ್ಮಕ ಉಪಬಂಧಗಳೊಳಗೆ ತರುವುದು ಹಾಗೂ ಈಗಾಗಲೇ ವಿಧಿಸಲಾದ ಅಥವಾ ಸಂಗ್ರಹಿಸಲಾದ ದಂಡವನ್ನು ಸಿಂಧುಗೊಳಿಸುವುದಕ್ಕೆ ಅವಶ್ಯವಾಗಿದೆ.


**ಕರ್ನಾಟಕ ಪುರಸಭೆಗಳ ಮತ್ತು ಕರ್ನಾಟಕ ಮಹಾನಗರ ಪಾಲಿಕೆಗಳ (ತಿದ್ದುಪಡಿ) ವಿಧೇಯಕಕ್ಕೂ ಅನುಮೋದನೆ**

ನಿಮ್ಮ ಬಡಾವಣೆಯ ಅಥವಾ ಖಾಸಗಿ ಲೇಔಟ್‌ನ ರಸ್ತೆಗಳು ಗುಂಡಿ ಬಿದ್ದು ಹಾಳಾಗಿದ್ದರೂ ಸ್ಥಳೀಯ ಸಂಸ್ಥೆಗಳು ದುರಸ್ತಿ ಮಾಡುತ್ತಿಲ್ಲವೇ? ಇನ್ನು ಮುಂದೆ ಆ ಚಿಂತೆ ಇರುವುದಿಲ್ಲ. ಕರ್ನಾಟಕದ ನಗರ ಮತ್ತು ಪಟ್ಟಣಗಳಲ್ಲಿರುವ ಖಾಸಗಿ ರಸ್ತೆಗಳ ಚಿತ್ರಣವೇ ಸಂಪೂರ್ಣವಾಗಿ ಬದಲಾಗಲಿದ್ದು, ಆ ಖಾಸಗಿ ರಸ್ತೆಗಳನ್ನು ಇನ್ನು ಮುಂದೆ ಸಾರ್ವಜನಿಕ ರಸ್ತೆ ಎಂದು ಪರಿಗಣಿಸುವದಕ್ಕೆ ವಿಧಾನಸಭೆಯಲ್ಲಿ ಅಂಗೀಕಾರವಾಗಿದೆ. ಈ ನಿರ್ಧಾರದಿಂದ ನಗರವಾಸಿಗಳ ದೀರ್ಘಕಾಲದ ಸಮಸ್ಯೆಗೆ ಪರಿಹಾರ ಸಿಗಲಿದೆ ಎಂದರೆ, ಖಾಸಗಿ ಬಡಾವಣೆ ಮಾಲೀಕರಿಗೆ ಆಘಾತವಾಗಿದೆ.ಹೌದು, ಸಂಸದೀಯ ವ್ಯವಹಾರಗಳ ಸಚಿವ ಕೃಷ್ಣ ಬೈರೇಗೌಡ ಅವರು ಮಂಡಿಸಿದ 'ಕರ್ನಾಟಕ ಪುರಸಭೆಗಳ (ತಿದ್ದುಪಡಿ) ವಿಧೇಯಕ 2026' ಮತ್ತು 'ಕರ್ನಾಟಕ ಮಹಾನಗರ ಪಾಲಿಕೆಗಳ (ತಿದ್ದುಪಡಿ) ವಿಧೇಯಕ 2026' ಕ್ಕೆ ವಿರೋಧ ಪಕ್ಷಗಳ ಭಾರಿ ಗದ್ದಲ ಮತ್ತು ಪ್ರತಿಭಟನೆಯ ನಡುವೆಯೇ ಸದನದಲ್ಲಿ ಅನುಮೋದನೆ ಸಿಕ್ಕಿದೆ.

ನಗರ ಅಥವಾ ಪಟ್ಟಣ ವ್ಯಾಪ್ತಿಯಲ್ಲಿರುವ ಖಾಸಗಿ ರಸ್ತೆಗಳು ಮತ್ತು ಚರಂಡಿಗಳು ತೀರಾ ಹದಗೆಟ್ಟು, ಸಾರ್ವಜನಿಕರ ಆರೋಗ್ಯ ಮತ್ತು ಸುರಕ್ಷತೆಗೆ ಧಕ್ಕೆ ತರುತ್ತಿದ್ದರೆ, ಅಂತಹ ರಸ್ತೆಗಳನ್ನು ಮುನ್ಸಿಪಲ್ ಕಮಿಷನರ್‌ಗಳು ಅಥವಾ ಅಧಿಕಾರಿಗಳು ನೇರವಾಗಿ ತಮ್ಮ ಸುಪರ್ದಿಗೆ ಪಡೆಯಬಹುದು. ಈ ಹಿಂದೆ ಖಾಸಗಿ ಲೇಔಟ್‌ಗಳು ಅಥವಾ ಜಾಗಗಳಲ್ಲಿನ ರಸ್ತೆಗಳನ್ನು ದುರಸ್ತಿ ಮಾಡಲು ಸ್ಥಳೀಯ ಸಂಸ್ಥೆಗಳಿಗೆ ಕಾನೂನಾತ್ಮಕವಾಗಿ ಅವಕಾಶವಿರಲಿಲ್ಲ. ಇನ್ನು ಮುಂದೆ ಸರ್ಕಾರವೇ ಇವುಗಳನ್ನು ಸಾರ್ವಜನಿಕ ರಸ್ತೆ ಎಂದು ಘೋಷಿಸಿ, ತಾನೇ ಅಭಿವೃದ್ಧಿಪಡಿಸಲಿದೆ.

## ವಿಮುಕ್ತ ದೇವದಾಸಿ ತಾಯಂದಿರ ಮಹಾ ಒಕ್ಕೂಟದಿಂದ ಫ್ರೀಡಂ ಪಾರ್ಕ್‌ನಲ್ಲಿ ಧರಣಿ

**ಬೆಂಗಳೂರು, ಆ.20:** ವಿಮುಕ್ತ ದೇವದಾಸಿ ತಾಯಂದಿರ ಮಹಾ ಒಕ್ಕೂಟದ ನೇತೃತ್ವದಲ್ಲಿ, ಸಾವಿರಾರು ದೇವದಾಸಿಯರು ತಮ್ಮ ಘನತೆಯ ಬದುಕಿಗಾಗಿ ಹೋರಾಟ ನಗರದ ಫ್ರೀಡಂ ಪಾರ್ಕ್‌ನಲ್ಲಿ ಹೋರಾಟ ನಿರತರಾಗಿದ್ದಾರೆ.ದೇವದಾಸಿ ಪದ್ಧತಿಯಿಂದ ವಿಮುಕ್ತರಾದ ಮಹಿಳೆಯರ ಬದುಕಿನ ನೋವು, ಹೋರಾಟ ಮತ್ತು ನಿರೀಕ್ಷೆಗಳು ಇಂದಿಗೂ ಮುಗಿದಿಲ್ಲ. ಒಂದು ಅನ್ಯಾಯಪೂರ್ಣ ಸಾಮಾಜಿಕ ಪದ್ಧತಿ ಯಿಂದ ಹೊರ ಬಂದ ನಂತರವೂ, ಅದರ ಪರಿಣಾಮಗಳಿಂದ ಸಂಪೂರ್ಣ ವಾಗಿ ಹೊರ ಬರಲು ಸಾಧ್ಯವಾಗದೆ ಬದುಕುತ್ತಿರುವ ಸಾವಿರಾರು ಮಹಿಳೆಯರ ಧ್ವನಿ ಮೊಳಗುತ್ತಿದೆ.



ಈ ಹೋರಾಟವನ್ನು ಕೇವಲ ಒಂದು ಪ್ರತಿಭಟನೆ ಎಂದು ನೋಡುವುದು ಸರಿಯಲ್ಲ. ಇದು ಹಕ್ಕಿಗಾಗಿ, ಗೌರವಕ್ಕಾಗಿ, ಸ್ವಾಭಿಮಾನಕ್ಕಾಗಿ ಮತ್ತು ಮುಂದಿನ ಪೀಳಿಗೆಯ ಭವಿಷ್ಯಕ್ಕಾಗಿ ನಡೆಯುತ್ತಿರುವ ಹೋರಾಟವಾಗಿದೆ. ವಿಶೇಷತೆ ಎಂದರೆ, ತಮ್ಮ ಊರುಗಳಿಂದಲೇ ತಾವೇ ಅಡುಗೆ ಸಿದ್ಧಪಡಿಸಿ, ಊಟದ ವ್ಯವಸ್ಥೆ ಮಾಡಿಕೊಂಡು ಬೆಂಗಳೂರಿಗೆ ಬಂದು ಮಹಿಳೆಯರು ಪ್ರತಿಭಟನೆಯಲ್ಲಿ ಭಾಗವಹಿಸಿದ್ದಾರೆ. ಇದು ಅವರ ಸಂಕಲ್ಪದ ಪ್ರತೀಕ. ಸರ್ಕಾರದ ಮುಂದೆ ತಮ್ಮ ಸಮಸ್ಯೆಗಳನ್ನು ಇಡುವುದಷ್ಟೇ ಅಲ್ಲದೆ, ನಮ್ಮ ಬದುಕಿನ ಜವಾಬ್ದಾರಿಯನ್ನು ನಾವು ಹೊತ್ತುಕೊಳ್ಳುತ್ತೇವೆ; ಆದರೆ ನಮ್ಮ ಹಕ್ಕುಗಳನ್ನು ಸರ್ಕಾರ ನಿರಾಕರಿಸಬಾರದು ಎಂಬ ಸಂದೇಶವನ್ನು ಅವರು ನೀಡುತ್ತಿದ್ದಾರೆ.

ಮಾಜಿ ದೇವದಾಸಿ ಮಹಿಳೆಯರ ಪ್ರಮುಖ ಬೇಡಿಕೆಗಳಲ್ಲಿ ವಸತಿ ಮತ್ತು ಮನೆ ಪ್ರಮುಖವಾಗಿವೆ. ವಸತಿ ಎನ್ನುವುದು ಕೇವಲ ಒಂದು ಕಟ್ಟಡವಲ್ಲ. ಅದು ಭದ್ರತೆ, ಗೌರವ ಮತ್ತು ಸ್ಥಿರ ಬದುಕಿನ ಆಧಾರ. ಸರ್ವೆಯಲ್ಲಿ ಗುರುತಿಸಲ್ಪಟ್ಟ ಅರ್ಹ ಮಹಿಳೆಯರಿಗೆ ಮನೆಗಳನ್ನು ಮಂಜೂರು ಮಾಡುವ ಜೊತೆಗೆ, ಸರ್ವೆಯಲ್ಲಿ ಹೊರಗುಳಿದ ಅರ್ಹ ಮಹಿಳೆಯರನ್ನು ಪುನಃ ಗುರುತಿಸಿ ಪಟ್ಟಿಗೆ ಸೇರಿಸಬೇಕು ಎಂದು ಒತ್ತಾಯಿಸಿದ್ದಾರೆ. ತಿಂಗಳಿಗೆ 5,000 ಮಾಸಿಕ ಪಿಂಚಣಿ ನೀಡಬೇಕು. ಈ ಹೋರಾಟ ಕೇವಲ ತಾಯಂದಿರ ಬದುಕಿನ ಕುರಿತಲ್ಲ. ಅವರ ಮಕ್ಕಳ ಶಿಕ್ಷಣ ಮತ್ತು ಭವಿಷ್ಯವೂ ಇದರ ಕೇಂದ್ರದಲ್ಲಿದೆ.

ಹೊಸದಾಗಿ ಗುರುತಿಸಲ್ಪಟ್ಟ ಮಾಜಿ ದೇವದಾಸಿ ತಾಯಂದಿರ ಮಕ್ಕಳಿಗೆ ಅಗತ್ಯ ಪ್ರಮಾಣಪತ್ರಗಳನ್ನು ನೀಡುವ, ಶಿಕ್ಷಣ ಮತ್ತು ಸರ್ಕಾರಿ ಸೌಲಭ್ಯಗಳನ್ನು ದೊರಕಿಸಿಕೊಡುವುದು ಅತ್ಯಂತ ಮುಖ್ಯ. ಒಂದು ಪೀಳಿಗೆ ಅನುಭವಿಸಿದ ನೋವು ಮತ್ತೊಂದು ಪೀಳಿಗೆಗೆ ವರ್ಗಾವಣೆಯಾಗಬಾರದು ಎನ್ನುತ್ತಿದ್ದಾರೆ. ದೇವದಾಸಿ ಪದ್ಧತಿಯನ್ನು ನಿರ್ಮೂಲನೆ ಮಾಡುವುದಷ್ಟೇ ಸಾಕಾಗುವುದಿಲ್ಲ. ಆ ಪದ್ಧತಿಯಿಂದ ಹೊರಬಂದ ಮಹಿಳೆಯರಿಗೆ ಗೌರವ ಯುತ ಬದುಕಿನ ಅವಕಾಶಗಳನ್ನು ಸೃಷ್ಟಿಸುವುದು ಸರ್ಕಾರ ಮತ್ತು ಸಮಾಜದ ಜವಾಬ್ದಾರಿಯಾಗಿದೆ.

## ರೈಲ್ವೆ ನಿಲ್ದಾಣಗಳಲ್ಲಿ ನೈರ್ಮಲ್ಯ ಕೊರತೆ: ಪ್ಲಾಸ್ಟಿಕ್ ಹಾಳೆ ಬಳಸಿ ಇಡ್ಲಿ ತಯಾರಿಕೆ, ಆಹಾರದಲ್ಲಿ ಶಿಲೀಂದ್ರ

**ಬೆಂಗಳೂರು, ಆ.20:** ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಕಾಯ್ದೆ 2006 ರ ನಿಯಮಾವಳಿಗಳಂತೆ ರೈಲ್ವೆ ನಿಲ್ದಾಣಗಳಲ್ಲಿ ನಡೆದ ಈ ಕಾರ್ಯಾಚರಣೆಯಲ್ಲಿ, ಬಹುತೇಕ ಕಡೆಗಳಲ್ಲಿ ನೈರ್ಮಲ್ಯದ ಕೊರತೆ ಹಾಗೂ ಸಾರ್ವಜನಿಕರ ಆರೋಗ್ಯಕ್ಕೆ ಹಾನಿಕರವಾದ ಗಂಭೀರ ಲೋಪ ದೋಷಗಳು ಕಂಡುಬಂದಿವೆ.

ಬೆಂಗಳೂರಿನ ಕೆ.ಆರ್. ಪುರಂ ರೈಲ್ವೆ ನಿಲ್ದಾಣದ ಹೋಟೆಲ್‌ನಲ್ಲಿ ತೀವ್ರ ಅನೈರ್ಮಲ್ಯ ವಾತಾವರಣ ಕಂಡುಬಂದಿದ್ದು, ಆಹಾರ ತಯಾರಿಕೆಗೆ ಬಳಸುತ್ತಿದ್ದ ಈರುಳ್ಳಿ ಮತ್ತು ಇತರ ತರಕಾರಿಗಳಲ್ಲಿ ಶಿಲೀಂಧ್ರ ಬೆಳೆದಿರುವುದು ಅಧಿಕಾರಿಗಳ ಗಮನಕ್ಕೆ ಬಂದಿದೆ.

ಹಾವೇರಿ ಜಿಲ್ಲೆಯ ರೈಲ್ವೆ ನಿಲ್ದಾಣದಲ್ಲಿ ಅವಧಿ ಮುಗಿದಿದ್ದ ನಂದಿನಿ ಮೊಸರು ಹಾಗೂ ದೊಡ್ಡ ಬ್ರ್ಯಾಂಡ್‌ನ ಹಾಲಿನ ಪ್ಯಾಕೆಟ್‌ಗಳು ಮಾರಾಟಕ್ಕಿಟ್ಟಿರುವುದು ಪತ್ತೆಯಾಗಿವೆ. ಮೈಸೂರು ರೈಲ್ವೆ ನಿಲ್ದಾಣದ ಕೆಲವು ಆಹಾರ ತಯಾರಿಕಾ ಘಟಕಗಳಲ್ಲಿ ಇಡ್ಲಿಯನ್ನು ಅಪಾಯಕಾರಿ ಪ್ಲಾಸ್ಟಿಕ್ ಬಳಸಿ ತಯಾರಿಸುತ್ತಿರುವುದು ಕಂಡುಬಂದಿದೆ.




## ಆ.25ರಿಂದ ಐದು ದಿನ ರಾಜ್ಯದ 15 ಜಿಲ್ಲೆಗಳಲ್ಲಿ ವ್ಯಾಪಕ ಮಳೆ

**ಬೆಂಗಳೂರು, ಆ.20:** ರಾಜ್ಯದಲ್ಲಿ ಮುಂದಿನ 5 ದಿನ ಆಗಸ್ಟ್ 25ರವರೆಗೆ ರಾಜ್ಯದ 15 ಜಿಲ್ಲೆಗಳ ವಿವಿಧ ಭಾಗಗಳಲ್ಲಿ ಸಾಧಾರಣದಿಂದ ಭಾರಿ ಮಳೆಯಾಗಲಿದೆ ಎಂದು ಭಾರತೀಯ ಹವಾಮಾನ ಇಲಾಖೆ ಎಚ್ಚರಿಕೆ ನೀಡಿದೆ.

ಮುಖ್ಯವಾಗಿ ರಾಜ್ಯದ 15 ಜಿಲ್ಲೆಗಳಲ್ಲಿ ಮಳೆಯ ಪ್ರಭಾವ ಹೆಚ್ಚಿರಲಿದೆ. ಕರಾವಳಿ ಮತ್ತು ಮಲೆನಾಡು ಭಾಗಗಳಲ್ಲಿ ಬಿರುಗಾಳಿ ಹಾಗೂ ಗುಡುಗು ಸಹಿತ ಮಳೆಯಾಗಲಿದೆ ಎಂದು ಮುನ್ಸೂಚನೆ ನೀಡಿದೆ. ಮಲೆನಾಡು ಹಾಗೂ ದಕ್ಷಿಣ ಒಳನಾಡಿ 7 ಜಿಲ್ಲೆಗಳಲ್ಲಿ ಮಳೆ ಇರಲಿದೆ. ಶಿವಮೊಗ್ಗ, ಚಿಕ್ಕಮಗಳೂರು, ಕೊಡಗು, ಹಾಸನ, ಮೈಸೂರು, ಮಂಡ್ಯ ಮತ್ತು ಚಾಮರಾಜನಗರ ಜಿಲ್ಲೆಗಳಲ್ಲಿ ಮುಂದಿನ 48 ರಿಂದ 72 ಗಂಟೆಗಳಲ್ಲಿ ಹಗುರದಿಂದ ಸಾಧಾರಣ ಮಳೆಯಾಗುವ ಮುನ್ಸೂಚನೆ ಇದೆ.



ಬೆಂಗಳೂರಿನ ಕೆ.ಆರ್. ಮಾರುಕಟ್ಟೆಯಲ್ಲಿ ವರಮಹಾಲಕ್ಷ್ಮಿ ವ್ರತದ ಮುನ್ನಾದಿನವಾದ ಗುರುವಾರ ಜನರು ಖರೀದಿಯಲ್ಲಿ ತೊಡಗಿದ ದೃಶ್ಯ.

### ಬರಗಾಲ ಘೋಷಣೆಗೆ ಆಗ್ರಹಿಸಿ ಬಂದ್ ಕರೆ,

# ಪ್ರತಿಭಟನೆಗೆ ಸೀಮಿತವಾದ ಕಲಬುರಗಿ ಬಂದ್



**ಕಲಬುರಗಿ, ಆ. 20:** ಪ್ರಸಕ್ತವಾಗಿ ಮುಂಗಾರು ಪ್ರಾರಂಭವಾಗಿ ಮೂರು ತಿಂಗಳಾಗುತ್ತಿದ್ದರೂ ಮಳೆ ಬಾರದೆ ವ್ಯಾಪಕ ಬರಗಾಲ ಎದುರಾಗಿ ರೈತರು ಹಾಗೂ ಕೃಷಿ ಕೂಲಿ ಕಾರ್ಮಿಕರು ತೀವ್ರ ಸಂಕಷ್ಟದಲ್ಲಿರುವುದರಿಂದ ಈ ಕೂಡಲೇ ಕಲಬುರಗಿ ಜಿಲ್ಲೆಯನ್ನು ಬರಗಾಲ ಪೀಡಿತ ಜಿಲ್ಲೆ ಪ್ರದೇಶವೆಂದು ಘೋಷಿಸುವಂತೆ ಹಾಗೂ ಕಳೆದ ವರ್ಷದ ಬೆಳೆವಿಮೆ ಪರಿಹಾರ ಬಿಡುಗಡೆ ಮಾಡುವುದು ಸೇರಿದಂತೆ ಇತರ ಬೇಡಿಕೆಗಳಿಗೆ ಆಗ್ರಹಿಸಿ ವಿವಿಧ ರೈತ ಸಂಘಟನೆಗಳು ಗುರುವಾರ ಕಲಬುರಗಿ ಬಂದ್ ಕರೆ ನೀಡಿದ್ದವು.

ರಾಜ್ಯ ರೈತಸಂಘ, ಹಸಿರು ಸೇನೆ, ಕರ್ನಾಟಕ ಪ್ರಾಂತ ರೈತ ಸಂಘ, ಕರ್ನಾಟಕ ಸಂಯುಕ್ತ ಹೋರಾಟ ಸಮಿತಿ ಸೇರಿ ವಿವಿಧ ರೈತಪರ, ಕನ್ನಡಪರ, ದಲಿತ ಸಂಘಟನೆಗಳ ನೇತೃತ್ವದಲ್ಲಿ ಕಲಬುರಗಿ ಬಂದ್‌ಗೆ ಕರೆ ನೀಡಲಾಗಿತ್ತು. ಬಂದ್ ಹಿನ್ನೆಲೆಯಲ್ಲಿ ವ್ಯಾಪಕ ಪೊಲೀಸ್ ಬಂದೋಬಸ್ತ್ ಕಲ್ಪಿಸಲಾಗಿತ್ತು. ಆದರೆ ಬಂದ್ ಕೇವಲ ಪ್ರತಿಭಟನೆಗೆ ಸೀಮಿತವಾಯಿತು.

ಬಂದ್ ಕರೆ ಹಿನ್ನೆಲೆ ಅಂಗವಾಗಿ ಬೆಳಂಬೆಳಿಗ್ಗೆ ರೈತ ಮುಖಂಡರು ರಸ್ತೆಗಿಳಿದು ಪ್ರತಿಭಟನೆ ನಡೆಸಿದರು. ರೈತರ ಪ್ರತಿಭಟನೆ ಹಿನ್ನೆಲೆಯಲ್ಲಿ ಸಾರಿಗೆ ಸಂಸ್ಥೆ ಬಸ್‌ಗಳ ಸಂಚಾರ ಹಿಂತೆಗೆದುಕೊಳ್ಳಲಾಯಿತು. ಬೆಳಗಿನ ಅವಧಿಯ ಬಸ್ ಸಂಚಾರ ಬಂದ್ ಹಿನ್ನೆಲೆಯಲ್ಲಿ ಪ್ರಯಾಣಿಕರು ತೀವ್ರ ಪರದಾಡಿದರು. ರೈತ ಮುಖಂಡರು ಕೇಂದ್ರ ಬಸ್ ನಿಲ್ದಾಣ ಎದುರುಗಡೆ ಪ್ರತಿಭಟನೆ ನಡೆಸಿದರೆ ನಗರದ ವರ್ತುಲ ರಸ್ತೆ ಬಳಿಯ ಕೆಎಂಎಫ್ ಕಚೇರಿ ಹತ್ತಿರ ರೈತರು ಅರೆ ಬೆತ್ತಲೆ ಮೆರವಣಿಗೆ ನಡೆಸಿ ಆಕ್ರೋಶ ವ್ಯಕ್ತಪಡಿಸಿದರು.

ಪ್ರತಿಭಟನಾಕಾರರು ಮೆರವಣಿಗೆ ಮೂಲಕ ತೆರಳಿದ ನಂತರ ಬಸ್ ಸಂಚಾರ ಪುನರಾರಂಭಿಸಲಾಯಿತು.

ಕಲಬುರಗಿ ಬಂದ್ ಅಂಗವಾಗಿ ನಗರದ ನಗರೇಶ್ವರ ಶಾಲೆಯಿಂದ ಡಿಸಿ ಕಚೇರಿವರೆಗೆ ಬೃಹತ್ ಪ್ರತಿಭಟನಾ ಮೆರವಣಿಗೆ ನಡೆಸಿ ಬೇಡಿಕೆಗಳಿಗೆ ಆಗ್ರಹಿಸಲಾಯಿತು. ಮೆರವಣಿಗೆ ಯುದ್ದಕ್ಕೂ ಅಂಗಡಿಗಳು ಬಂದ್ ಮಾಡಲಾಯಿತು. ಮೆರವಣಿಗೆ ಮುಂದೆ ಹೋಗುತ್ತಲೇ ಮತ್ತೆ ಅಂಗಡಿಗಳು ತೆರೆದುಕೊಂಡು ವ್ಯಾಪಾರ ವಹಿವಾಟು ಆರಂಭಿಸಿದವು.

ಸಂಯುಕ್ತ ಹೋರಾಟ ಸಂಘಟನೆಯ ಶರಣಬಸಪ್ಪ ಮಮಶೆಟ್ಟಿ, ಮೌಲಾ ಮುಲ್ಲಾ, ಭೀಮಾಶಂಕರ ಮಾಡಿಯಾಳ, ಸಿದ್ದು ಎಸ್.ಎಲ್., ಕರೆಪ್ಪ ಕರೆಗೊಂಡ, ಗುರಣ್ಣಗೌಡ ಜೇವರ್ಗಿ, ಪದ್ಮಿನಿ ಕಿರಣಗಿ ಸೇರಿದಂತೆ ನೂರಾರು ರೈತರು ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು.

ಸರ್ಕಾರ ಈಗಲಾದರೂ ತಮ್ಮ ಬೇಡಿಕೆಗಳಿಗೆ ಸ್ಪಂದಿಸದಿದ್ದರೆ ಮತ್ತೆ ಹೋರಾಟಕ್ಕಿಳಿಯುವುದಾಗಿ ರೈತ ಮುಖಂಡರು ಎಚ್ಚರಿಕೆ ನೀಡಿದರು.

ಬೇಡಿಕೆಗಳು: ಕಲಬುರಗಿ ಜಿಲ್ಲೆ ಬರ ಪೀಡಿತ ಪ್ರದೇಶವೆಂದು ಘೋಷಣೆ ಮಾಡಬೇಕು, ಪ್ರತಿ ಎಕರೆಗೆ 50 ಸಾವಿರ ರೂ. ಪರಿಹಾರ ನೀಡಬೇಕು, ವಿಮೆಯಿಂದ ವಂಚಿತ ಎಲ್ಲ ರೈತರಿಗೆ ವಿಮೆ ಹಣ ಬಿಡುಗಡೆ ಮಾಡಬೇಕು, ಉಜನಿ ಡ್ಯಾಂನಿಂದ ನಿಗದಿತ 15 ಟಿಎಂಸಿ ನೀರು ಬಿಡುಗಡೆ ಮಾಡಬೇಕು ಎಂಬುದು ಕಲಬುರಗಿ ಬಂದ್ ನ ವಿವಿಧ ಬೇಡಿಕೆಗಳಾಗಿವೆ. ಅರೆಬೆತ್ತಲೆ ಮೆರವಣಿಗೆ: ಕಲಬುರಗಿ ಬಂದ್ ಹಿನ್ನಲೆ ನಗರದಲ್ಲಿ ರೈತರು ಅರೆಬೆತ್ತಲೆ ಮೆರವಣಿಗೆ ಆಕ್ರೋಶ ವ್ಯಕ್ತಪಡಿಸಿದರು. ನಗರದ ಹುಮನಾಬಾದ್ ರಿಂಗ್ ರಸ್ತೆಯಲ್ಲಿ ಅರೆಬೆತ್ತಲೆ ಪ್ರತಿಭಟನೆ ನಡೆಸಿದರು. ಮಾನವ ಸರಪಳಿ ನಿರ್ಮಿಸಿ ರಸ್ತೆ ತಡೆ ನಡೆಸಿ ಸರ್ಕಾರದ ವಿರುದ್ಧ ಧಿಕ್ಕಾರದ ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿದರು.

## ಬಸವ ಜಯಂತಿಗೆ ಅನುಭವ ಮಂಟಪ ಲೋಕಾರ್ಪಣೆ: ಖಂಡ್ರೆ



**ಬೀದರ್, ಆ. 20:** ಬಸವಣ್ಣನ ಕರ್ಮಭೂಮಿ ಬಸವಕಲ್ಯಾಣದಲ್ಲಿ 750 ಕೋ.ಟಿ ರೂ. ವೆಚ್ಚದಲ್ಲಿ ನಿರ್ಮಾಣಗೊಳ್ಳುತ್ತಿರುವ ಅಂತಾರಾಷ್ಟ್ರೀಯ ಅನುಭವ ಮಂಟಪ ಕಾಮಗಾರಿಗಳು ಮುಕ್ತಾಯ ಹಂತದಲ್ಲಿದ್ದು, ಶೀಘ್ರವೇ ಪೂರ್ಣಗೊಳಿಸಿ ಮುಂಬರುವ ಬಸವ ಜಯಂತಿ (ಏಪ್ರಿಲ್ 20) ಯ ದಿನದಂದು ಲೋಕಾರ್ಪಣೆಗೊಳಿಸಲಾಗುವುದು ಎಂದು ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ್ ಖಂಡ್ರೆ ಹೇಳಿದರು.

ಅನುಭವ ಮಂಟಪದ ಅಂತಿಮ ಹಂತದ ಕಾಮಗಾರಿಗಳನ್ನು ವೀಕ್ಷಿಸಿದ ನಂತರ ಬಾಕಿ ಉಳಿದ ಕಾಮಗಾರಿಗಳಿಗೆ ಅಗತ್ಯ ಹಣ ಬಿಡುಗಡೆ ಮಾಡುವುದಾಗಿ ಎಷ್ಟು ಹಣ ಬೇಕೆಂಬ ಮಾಹಿತಿಯನ್ನು ಪಡೆದ ಸಚಿವರು, ಕಾಮಗಾರಿಗಳನ್ನು ನಿರ್ವಹಿಸುತ್ತಿರುವ ಅಧಿಕಾರಿಗಳೊಂದಿಗೆ ಸಮಾಲೋಚನೆ ನಡೆಸಿದರು.

ಇದುವರೆಗೂ ಶೇ.80ರಷ್ಟು ಕಾಮಗಾರಿಗಳು ಪೂರ್ಣಗೊಂಡಿದ್ದು, ಈ ಕಾಮಗಾರಿಗಳಿಗಾಗಿ ಇಲ್ಲಿಯವರೆಗೆ ಒಟ್ಟು 480 ಕೋಟಿ ರೂ ಖರ್ಚಾಗಿದೆ. ಇನ್ನೊಂದು ವಾರದಲ್ಲಿ ಮತ್ತೆ 50 ಕೋಟಿ ರೂಗಳನ್ನು ಬಿಡುಗಡೆ ಮಾಡುವುದಾಗಿ, ಮಾರ್ಚ ಒಳಗಾಗಿ 150 ಕೋಟಿ ರೂ ಬಿಡುಗಡೆ ಮಾಡುವ ಮೂಲಕ ಕಾಮಗಾರಿಗಳನ್ನು ಪೂರ್ಣಗೊಳಿಸುವ ಕುರಿತು ಅಧಿಕರಿಗಳೊಂದಿಗೆ ಚರ್ಚಿಸಿದರು.

ಪ್ರತಿ ಹಂತದ ಕಾಮಗಾರಿಗಳ ಪ್ರಗತಿಯ ವಿವರ ತಮಗೆ ನೀಡಬೇಕೆಂದು ಮತ್ತು ಪ್ರತಿ ತಿಂಗಳೂ ತಾವು ಸ್ವತಃ ಭೇಟಿನೀಡಿ ಬಿಡುಗಡೆಯಾಗಿರುವ ಹಣಕ್ಕೆ ಅನುಗುಣವಾಗಿ ಕಾಮಗಾರಿಗಳನ್ನು ಪೂರ್ಣ ಗೊಳಿಸಿರುವ ಬಗ್ಗೆ ಪರಿಶೀಲಿಸುವು ದಾಗಿಯೂ ತಿಳಿಸಿದ್ದಾಗಿ ಮಾಧ್ಯಮ ಗಳಿಗೆ ಮಾಹಿತಿ ನೀಡಿದರು.

## ಮೋಕಾ ಹೋಬಳಿಯಲ್ಲಿ ಅಧಿಕಾರಿಗಳ ದಾಳಿ: 6 ಬಾಲಕಾರ್ಮಿಕರ ರಕ್ಷಣೆ



**ಬಳ್ಳಾರಿ,ಆ.20.**ಜಿಲ್ಲಾಡಳಿತ ಹಾಗೂ ಕಾರ್ಮಿಕ ಇಲಾಖೆಯ ಸಂಯುಕ್ತಾಶ್ರಯದಲ್ಲಿ 'ಪಾನ್-ಇಂಡಿಯಾ ರೆಸ್ಕ್ಯೂ ಅಂಡ್ ರಿಹೆಬಿಲಿಟೇಶನ್ ಕ್ಯಾಂಪೇನ್' ಅಡಿಯಲ್ಲಿ ನಡೆಸಲಾದ ಜಂಟಿ ಕಾರ್ಯಾಚರಣೆಯಲ್ಲಿ, ಮೋಕಾ ಹೋಬಳಿ ವ್ಯಾಪ್ತಿಯ ಉದ್ದಿಮೆಗಳಲ್ಲಿ ಕೆಲಸ ಮಾಡುತ್ತಿದ್ದ 6 ಬಾಲಕಾರ್ಮಿಕ ಹಾಗೂ ಕಿಶೋರ ಕಾರ್ಮಿಕರನ್ನು ಅಧಿಕಾರಿಗಳ ತಂಡ ಯಶಸ್ವಿಯಾಗಿ ರಕ್ಷಿಸಿದೆ.

ಜಿಲ್ಲಾಧಿಕಾರಿಗಳ ನಿರ್ದೇಶನದಂತೆ, ಉಪ ತಹಶೀಲ್ದಾರರ ಉಪಸ್ಥಿತಿಯಲ್ಲಿ ಗುರುವಾರ ಬಾಲಕಾರ್ಮಿಕ ಮತ್ತು ಕಿಶೋರ ಕಾರ್ಮಿಕರ ಟಾಸ್ಕ್‌ಫೋರ್ಸ್ ಸಮಿತಿಯ ಸಭೆ ನಡೆಸಲಾಯಿತು. ಸಭೆಯ ನಂತರ ಮೋಕಾ ಹೋಬಳಿಯ ವಿವಿಧ ಉದ್ದಿಮೆ ಹಾಗೂ ಅಂಗಡಿ-ಮುಂಗಟ್ಟುಗಳ ಮೇಲೆ ಟಾಸ್ಕ್‌ಫೋರ್ಸ್ ತಂಡವು ಆಕಸ್ಮಿಕ ದಾಳಿ ನಡೆಸಿತು.

ಈ ವೇಳೆ ನಿಯಮ ಉಲ್ಲಂಘಿಸಿ ಮಕ್ಕಳನ್ನು ದುಡಿಸಿಕೊಳ್ಳುತ್ತಿರುವುದು ಕಂಡುಬಂದಿದ್ದು, ತಕ್ಷಣವೇ 6 ಬಾಲ ಮತ್ತು ಕಿಶೋರ ಕಾರ್ಮಿಕರನ್ನು ರಕ್ಷಿಸಿ ವಶಕ್ಕೆ ಪಡೆಯಲಾಯಿತು.

ಸ್ಥಳದಲ್ಲೇ ಮಕ್ಕಳ ಹೇಳಿಕೆಗಳನ್ನು ದಾಖಲಿಸಿಕೊಂಡ ಅಧಿಕಾರಿಗಳು, ನಂತರ ಅವರನ್ನು ಮಕ್ಕಳ ಕಲ್ಯಾಣ ಸಮಿತಿಯ ಮುಂದೆ ಹಾಜರು ಪಡಿಸಿದರು.

ಇದೇ ಸಂದರ್ಭದಲ್ಲಿ ವ್ಯಾಪ್ತಿಯ ಎಲ್ಲಾ ಉದ್ದಿಮೆದಾರರಿಗೆ ಹಾಗೂ ಮಾಲೀಕರಿಗೆ ಕರಪತ್ರ ಮತ್ತು ಭಿತ್ತಿಪತ್ರಗಳನ್ನು ವಿತರಿಸಿ, ಬಾಲಕಾರ್ಮಿಕ ಪದ್ಧತಿಯ ದುಷ್ಪರಿಣಾಮ ಹಾಗೂ ಕಾನೂನು ಕ್ರಮಗಳ ಕುರಿತು ಜಾಗೃತಿ ಮೂಡಿಸಲಾಯಿತು.

### ವಿದ್ಯಾರ್ಥಿಗಳಿಗೆ ಪೌಷ್ಠಿಕಾಂಶ ಮತ್ತು ಹಾಲಿನ ಉತ್ಪನ್ನಗಳ ಮಹತ್ವದ ಅರಿವು

## ರಾಷ್ಟ್ರೋತ್ಥಾನ ವಿದ್ಯಾಕೇಂದ್ರದಲ್ಲಿ ನಂದಿನಿ ಜಾಗೃತಿ ಕಾರ್ಯಕ್ರಮ ಹಾಗೂ ಚಿತ್ರಕಲಾ ಸ್ಪರ್ಧೆ

**ಬಳ್ಳಾರಿ,ಆ.20.**ಕರ್ನಾಟಕ ಸಹಕಾರ ಹಾಲು ಮಹಾಮಂಡಳಿ (ಕೆಎಂಎಫ್) ಮತ್ತು ರಾಯಚೂರು, ಬಳ್ಳಾರಿ ಹಾಗೂ ಕೊಪ್ಪಳ ಜಿಲ್ಲಾ ಸಹಕಾರ ಹಾಲು ಉತ್ಪಾದಕರ ಸಂಘಗಳ ಒಕ್ಕೂಟದ (ರಾಬಕೊವಿ) ಸಂಯುಕ್ತ ಆಶ್ರಯದಲ್ಲಿ ನಗರದ ರಾಷ್ಟ್ರೋತ್ಥಾನ ವಿದ್ಯಾಕೇಂದ್ರದಲ್ಲಿ ಗುರುವಾರ ಶಾಲಾ ಮಕ್ಕಳಿಗೆ ಚಿತ್ರಕಲಾ ಸ್ಪರ್ಧೆ ಹಾಗೂ ನಂದಿನಿ ಹಾಲು ಮತ್ತು ಹಾಲಿನ ಉತ್ಪನ್ನಗಳ ಕುರಿತು ಜಾಗೃತಿ ಕಾರ್ಯಕ್ರಮ ಹಮ್ಮಿಕೊಳ್ಳಲಾಯಿತು.



ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿದ ಒಕ್ಕೂಟದ ವ್ಯವಸ್ಥಾಪಕ ನಿರ್ದೇಶಕ ಎಸ್. ಸುದರ್ಶನ್ ರೆಡ್ಡಿ ಅವರು, ಮಾನವನ ದೈನಂದಿನ ಜೀವನದಲ್ಲಿ ಹಾಲು ಅತ್ಯಂತ ಅವಶ್ಯಕ ಪೌಷ್ಠಿಕ ಆಹಾರವಾಗಿದೆ. ಹಾಲಿನಲ್ಲಿರುವ ಕ್ಯಾಲ್ಸಿಯಂ, ಪ್ರೋಟೀನ್ ಹಾಗೂ ವಿಟಮಿನ್-ಬಿ2 ನಂತಹ ಪ್ರಮುಖ ಪೋಷಕಾಂಶಗಳು ಮಕ್ಕಳ ದೈಹಿಕ ಮತ್ತು ಮಾನಸಿಕ ಬೆಳವಣಿಗೆಗೆ ಸಹಕಾರಿಯಾಗಿವೆ. ಒಕ್ಕೂಟವು ನಿತ್ಯ ಸರಾಸರಿ 2.50 ಲಕ್ಷ ಲೀಟರ್ ಗುಣಮಟ್ಟದ ಹಾಲನ್ನು ಶೇಖರಿಸಿ, ವೈಜ್ಞಾನಿಕವಾಗಿ ಸಂಸ್ಕರಿಸಿ, ಸಂಪೂರ್ಣ ಕಲಬೆರಕೆ ರಹಿತ ಮತ್ತು ಸುರಕ್ಷಿತ ನಂದಿನಿ ಉತ್ಪನ್ನಗಳನ್ನು ಗ್ರಾಹಕರಿಗೆ ತಲುಪಿಸುತ್ತಿರುವ ಕಾರ್ಯವೈಖರಿಯನ್ನು ವಿವರಿಸಿದ ಅವರು, ಸರ್ಕಾರದ ಮಹತ್ವಾಕಾಂಕ್ಷಿ ಕ್ಷೀರಭಾಗ್ಯ ಹಾಗೂ ಕ್ಷೀರಧಾರೆ ಯೋಜನೆಗಳನ್ನು ಒಕ್ಕೂಟವು ಯಶಸ್ವಿಯಾಗಿ ಅನುಷ್ಠಾನಗೊಳಿಸುತ್ತಿದೆ ಎಂದರು.

ಐಸ್‌ಕ್ರೀಂ ಘಟಕದ ಅಪರ ನಿರ್ದೇಶಕ ರವಿಕಿರಣ್ ಅವರು ಶುದ್ಧ ನಂದಿನಿ ಐಸ್‌ಕ್ರೀಂ ಮತ್ತು ಮಾರುಕಟ್ಟೆಯಲ್ಲಿ ಸಿಗುವ ಫ್ರೋಜನ್ ಡೆಸರ್ಟ್‌ಗಳ ನಡುವಿನ ವ್ಯತ್ಯಾಸವನ್ನು ವಿದ್ಯಾರ್ಥಿಗಳಿಗೆ ಸ್ಪಷ್ಟಪಡಿಸಿದರು.

ಮಾರುಕಟ್ಟೆ ವಿಭಾಗದ ವ್ಯವಸ್ಥಾಪಕ ವಿ. ನಾಗರಾಜ ಶರ್ಮ ಅವರು ಸಮತೋಲನ ಆಹಾರದ ಮಹತ್ವ ಹಾಗೂ ನಂದಿನಿ ಉತ್ಪನ್ನಗಳಿಂದ ಆರೋಗ್ಯಕ್ಕಾಗುವ ಪ್ರಯೋಜನಗಳ ಬಗ್ಗೆ ಮಾಹಿತಿ ಹಂಚಿಕೊಂಡರು.

**ಕಿರುಚಿತ್ರ ಪ್ರದರ್ಶನ ಹಾಗೂ ಸ್ಪರ್ಧೆಗಳು:**ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳಿಗೆ ಹಾಲಿನ ಶೇಖರಣೆ ಮತ್ತು ವೈಜ್ಞಾನಿಕ ಸಂಸ್ಕರಣಾ ವಿಧಾನಗಳನ್ನು ವಿವರಿಸುವ ಕಿರುಚಿತ್ರವನ್ನು ಪ್ರದರ್ಶಿಸಲಾಯಿತು. ನಂತರ ಶಾಲಾ ಮಕ್ಕಳಿಗೆ ಚಿತ್ರಕಲಾ ಸ್ಪರ್ಧೆ ಹಾಗೂ ನಂದಿನಿ ಉತ್ಪನ್ನಗಳ ಕುರಿತ ರಸಪ್ರಶ್ನೆ ಸ್ಪರ್ಧೆಯನ್ನು ಏರ್ಪಡಿಸಿ, ವಿಜೇತ ವಿದ್ಯಾರ್ಥಿಗಳಿಗೆ ಆಕರ್ಷಕ ಬಹುಮಾನಗಳನ್ನು ವಿತರಿಸಲಾಯಿತು.

## ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ - ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಗಳಲ್ಲಿ ಮಕ್ಕಳಸ್ನೇಹಿ ಕ್ರಮಕ್ಕೆ ಮೆಚ್ಚುಗೆ

**ಕಲಬುರಗಿ, ಆ.20:** ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ ಹಾಗೂ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ ಮಕ್ಕಳ ಸ್ನೇಹಿ ವಲಯದಲ್ಲಿ ಕೈಗೊಂಡಿರುವ ಕ್ರಮಗಳ ಬಗ್ಗೆ ಮಕ್ಕಳ ಹಕ್ಕುಗಳ ಹೋರಾಟಗಾರರು ತೃಪ್ತಿ ವ್ಯಕ್ತಪಡಿಸಿದ್ದಾರೆ.

ತಮ್ಮ ವ್ಯಾಪ್ತಿಯಲ್ಲಿರುವ ಶಾಲೆಗಳ ಶಿಕ್ಷಕರು ಹಾಗೂ ಮುಖ್ಯೋಪಾಧ್ಯಾಯರೊಂದಿಗೆ ಸಭೆ ನಡೆಸಿ, ಬೇಡಿಕೆಗೆ ಅನುಗುಣವಾಗಿ ಬಸ್‌ಗಳ ವ್ಯವಸ್ಥೆ ಮಾಡುವ ಜೊತೆಗೆ ಮಕ್ಕಳು ಸಮಯಕ್ಕೆ ಸರಿಯಾಗಿ ಶಾಲೆ ತಲುಪುವಂತೆ ಕ್ರಮ ಕೈಗೊಳ್ಳಲು ಎರಡೂ ಸಂಸ್ಥೆಗಳು ಕಾರ್ಯೋನ್ಮುಖವಾಗಿವೆ. ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಮಾಜಿ ಸದಸ್ಯ ಡಾ. ತಿಪ್ಪೇಸ್ವಾಮಿ ಕೆ.ಟಿ. ಅವರು ಬಸ್‌ಗಳನ್ನು ಮಕ್ಕಳ ಸ್ನೇಹಿಯಾಗಿಸುವ ನಿಟ್ಟಿನಲ್ಲಿ ಅಗತ್ಯ ಕ್ರಮಗಳನ್ನು ಕೈಗೊಳ್ಳುವಂತೆ ಈ ಎರಡೂ ಸಂಸ್ಥೆಗಳಿಗೆ ಈ ಹಿಂದೆ ಪತ್ರ ಬರೆದಿದ್ದರು.

ಬಸ್‌ಗಳನ್ನು ಮಕ್ಕಳ ಸ್ನೇಹಿಯಾಗಿಸುವ ನಿಟ್ಟಿನಲ್ಲಿ ನಾನು ನೀಡಿದ್ದ ಶಿಫಾರಸುಗಳ ಅನುಷ್ಠಾನದ ಕುರಿತು ಈ ಸಂಸ್ಥೆಗಳಿಂದ ಮಧ್ಯಂತರ ವರದಿ ದೊರೆತಿರುವುದು ನಮಗೆ ತುಂಬಾ ಸಂತಸ ತಂದಿದೆ. ಎರಡೂ ಸಂಸ್ಥೆಗಳು ಕೈಗೊಂಡಿರುವ ಕ್ರಮಗಳು ಮಕ್ಕಳ ಶಿಕ್ಷಣದ ಹಕ್ಕು ಹಾಗೂ ಸುರಕ್ಷಿತ ಪ್ರಯಾಣದ ಹಕ್ಕನ್ನು ಮತ್ತಷ್ಟು ಬಲಪಡಿಸಲಿವೆ. ಈ ವಿಚಾರದಲ್ಲಿ ಸಕ್ರಿಯವಾಗಿ ಸ್ಪಂದಿಸಿರುವ ವಾ.ಕ.ರ.ಸಾ.ಸಂಸ್ಥೆ ಹಾಗೂ ಕ.ಕ.ರ.ಸಾ ಸಂಸ್ಥೆಗಳ ಅಧಿಕಾರಿಗಳಿಗೆ ಧನ್ಯವಾದ ಸಲ್ಲಿಸುತ್ತೇನೆ. ರಾಜ್ಯದ ಉಳಿದ ರಸ್ತೆ ಸಾರಿಗೆ ಸಂಸ್ಥೆಗಳೂ ಇದೇ ರೀತಿಯಲ್ಲಿ ಬಸ್‌ಗಳನ್ನು ಮಕ್ಕಳ ಸ್ನೇಹಿಯಾಗಿಸುವ ಕ್ರಮ ಕೈಗೊಳ್ಳಲಿವೆ ಎಂದು ನಿರೀಕ್ಷಿಸುತ್ತೇನೆಂದು ಡಾ. ತಿಪ್ಪೇಸ್ವಾಮಿ ಹೇಳಿದರು.

ಸಾರ್ವಜನಿಕ ಬಸ್‌ಗಳ ಪ್ರಯಾಣವನ್ನು ಮತ್ತಷ್ಟು ಸುರಕ್ಷಿತ, ಎಲ್ಲರನ್ನೂ ಒಳಗೊಂಡ ಹಾಗೂ ಮಕ್ಕಳ ಸ್ನೇಹಿಯಾಗಿಸುವ ನಿಟ್ಟಿನಲ್ಲಿ ಸ್ಪಷ್ಟ ಹಾಗೂ ಪರಿಣಾಮಕಾರಿ ಕ್ರಮಗಳನ್ನು ಕೈಗೊಂಡಿರುವ ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ ಹಾಗೂ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಗಳನ್ನು ಅಭಿನಂದಿಸಿದ ನಾಗಸಿಂಹ ರಾವ್, ಸಾರ್ವಜನಿಕ ಬಸ್‌ಗಳು ಕೇವಲ ಒಂದು ಸ್ಥಳದಿಂದ ಮತ್ತೊಂದು ಸ್ಥಳಕ್ಕೆ ಕರೆದೊಯ್ಯುವ ಸಾರಿಗೆ ಸಾಧನವಾಗಿರಬಾರದು; ಪ್ರತಿಯೊಬ್ಬ ಮಗುವಿಗೂ ಸುರಕ್ಷಿತ ಹಾಗೂ ಗೌರವಯುತ ಪ್ರಯಾಣದ ಸ್ಥಳವಾಗಿರಬೇಕು.ವಿಶೇಷವಾಗಿ ದೈಹಿಕ ನ್ಯೂನತೆ ಹೊಂದಿರುವ ಮಕ್ಕಳಿಗೆ ಹೆಚ್ಚಿನ ಗಮನ ನೀಡಬೇಕು. ಬಸ್ ಹತ್ತುವಾಗ, ಪ್ರಯಾಣಿಸುವಾಗ ಹಾಗೂ ಬಸ್‌ನಿಂದ ಇಳಿಯುವಾಗ ಇಂತಹ ಮಕ್ಕಳು ಹಲವು ಸಮಸ್ಯೆಗಳನ್ನು ಎದುರಿಸುತ್ತವೆ. ರ್‍ಯಾಂಪ್‌ಗಳು, ಕಡಿಮೆ ಎತ್ತರದ ನೆಲವಿನ್ಯಾಸ, ಆದ್ಯತೆಯ ಆಸನಗಳು, ಸ್ಪಷ್ಟ ಧ್ವನಿ ಪ್ರಕಟಣೆ ಹಾಗೂ ತರಬೇತಿ ಪಡೆದ ಸಿಬ್ಬಂದಿಯನ್ನು ಹೊಂದಿರುವ ಸುಲಭವಾಗಿ ಪ್ರವೇಶಿಸ ಬಹುದಾದ ಬಸ್‌ಗಳು ಈ ಮಕ್ಕಳ ಪ್ರಯಾಣದಲ್ಲಿ ಮಹತ್ವದ ಬದಲಾವಣೆ ತರಬಲ್ಲವು ಎಂದು ರಾವ್ ಅಭಿಪ್ರಾಯಪಟ್ಟಿದ್ದಾರೆ.

ಈ ಕ್ರಮಗಳು ವಿಶ್ವಸಂಸ್ಥೆಯ ಮಕ್ಕಳ ಹಕ್ಕುಗಳ ಒಡಂಬಡಿಕೆಯ ಆಶಯಕ್ಕೆ ನಿಕಟವಾಗಿ ಸಂಬಂಧಿಸಿವೆ. ಅದರಲ್ಲೂ 23ನೇ ವಿಧಿಯು ಅಂಗವೈಕಲ್ಯ ಹೊಂದಿರುವ ಮಕ್ಕಳಿಗೆ ವಿಶೇಷ ಆರೈಕೆ, ನೆರವು ಹಾಗೂ ಸಮಾಜದಲ್ಲಿ ಸಂಪೂರ್ಣವಾಗಿ ಪಾಲ್ಗೊಳ್ಳುವ ಹಕ್ಕನ್ನು ಗುರುತಿಸುತ್ತದೆ. ಅದೇ ರೀತಿ 26ನೇ ವಿಧಿಯು ಸಾಮಾಜಿಕ ರಕ್ಷಣೆ ಹಾಗೂ ಬೆಂಬಲದ ಮಹತ್ವವನ್ನು ಒತ್ತಿಹೇಳುತ್ತದೆ ಎಂದು ಅವರು ಹೇಳಿದರು.

ಹೀಗಾಗಿ ಸುರಕ್ಷಿತ ಶಾಲಾ ಮಾರ್ಗಗಳು, ಸಿಬ್ಬಂದಿಗೆ ಸೂಕ್ತ ತರಬೇತಿ, ಪರಿಣಾಮಕಾರಿ ದೂರು ಪರಿಹಾರ ವ್ಯವಸ್ಥೆ ಹಾಗೂ ನಿರಂತರ ಮೇಲ್ವಿಚಾರಣೆಯ ಮೂಲಕ ಮಕ್ಕಳ ಸ್ನೇಹಿ ಸಾರಿಗೆ ವ್ಯವಸ್ಥೆಯನ್ನು ಮತ್ತಷ್ಟು ಬಲಪಡಿಸಬೇಕು. ಪ್ರತಿಯೊಬ್ಬ ಮಗುವಿಗೂ ಸುರಕ್ಷಿತವಾಗಿ, ಸ್ವತಂತ್ರವಾಗಿ ಹಾಗೂ ಗೌರವಯುತವಾಗಿ ಪ್ರಯಾಣಿಸುವ ಹಕ್ಕಿದೆ. ವಿಶೇಷವಾಗಿ ಅಂಗವೈಕಲ್ಯ ಹೊಂದಿರುವ ಯಾವುದೇ ಮಗುವೂ ಸಾರಿಗೆ ವ್ಯವಸ್ಥೆಯಿಂದ ಹೊರಗುಳಿಯಬಾರದು. ಕೆ.ಎಸ್.ಆರ್.ಟಿ.ಸಿ ವ್ಯವಸ್ಥಾಪಕ ನಿರ್ದೇಶಕರು ಪ್ರತೀ ಸೋಮವಾರ 'ಫೋನ್-ಇನ್' ಕಾರ್ಯಕ್ರಮ ನಡೆಸುತ್ತಿದ್ದು, ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರಿಂದ ಸ್ವೀಕರಿಸುವ ಸಲಹೆ ಮತ್ತು ದೂರುಗಳನ್ನು ಪರಿಶೀಲಿಸಿ ಅಗತ್ಯ ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ತಿಳಿಸಿದ್ದಾರೆ.

ವಿದ್ಯಾರ್ಥಿಗಳಿಗೆ ವಿತರಿಸಿರುವ ಬಸ್‌ಪಾಸ್‌ಗಳ ಮಾಹಿತಿಯನ್ನು ಆಧರಿಸಿ ಅಗತ್ಯವಿರುವ ಮಾರ್ಗಗಳಿಗೆ ಬಸ್‌ಗಳನ್ನು ಒದಗಿಸಲಾಗುತ್ತಿದೆ. ವಿದ್ಯಾರ್ಥಿಗಳಿಗೆ ಕಿರುಕುಳ ನೀಡುವುದು ಅಥವಾ ಅವರನ್ನು ಹೀಯಾಳಿಸುವುದು ಸೇರಿದಂತೆ ಅನುಚಿತವಾಗಿ ವರ್ತಿಸುವ ಚಾಲಕರು ಹಾಗೂ ನಿರ್ವಾಹಕರನ್ನು ಗುರುತಿಸಿ, ಅಂತಹ ಸಿಬ್ಬಂದಿಯನ್ನು ಬೇರೆ ಬಸ್ ಮಾರ್ಗಗಳಿಗೆ ವರ್ಗಾಯಿಸುವ ಕ್ರಮವನ್ನೂ ಕೈಗೊಳ್ಳಲಾಗಿದೆ ಎಂದು ವ್ಯವಸ್ಥಾಪಕ ನಿರ್ದೇಶಕರು ತಿಳಿಸಿದ್ದಾರೆ.

# ರಾಯಚೂರು ನಗರಕ್ಕೆ ಅಗತ್ಯಕ್ಕೆ ತಕ್ಕಷ್ಟು ಕುಡಿಯುವ ನೀರಿಗಿಲ್ಲ ವ್ಯವಸ್ಥೆ



**ರಾಯಚೂರು, ಆ. 20:** ಪ್ರಸ್ತುತ ನಗರದ ಜನಸಂಖ್ಯೆಯು 3.50 ಲಕ್ಷ ದಾಟಿದೆ. ಜನಸಂಖ್ಯೆಗೆ ಅನುಗುಣವಾಗಿ ಮಹಾನಗರಕ್ಕೆ ಸಂಪೂರ್ಣ ಸಮರ್ಪಕ ಮತ್ತು ನಿರಂತರ ಕುಡಿಯುವ ನೀರು ಪೂರೈಕೆಯೇ ಆಗುತ್ತಿಲ್ಲ.

ನಗರದ ಬಳಿ ಕೃಷ್ಣಾ ಮತ್ತು ತುಂಗಭದ್ರಾ ಎರಡು ನದಿಗಳು ಹರಿಯುತ್ತಿದ್ದರೂ, ಹೆಚ್ಚುತ್ತಿರುವ ಜನಸಂಖ್ಯೆಗೆ ತಕ್ಕಂತೆ ಮೂಲಸೌಕರ್ಯಗಳು ಮತ್ತು ನೀರು ಪೂರೈಕೆ ಜಾಲಗಳು ಅಭಿವೃದ್ಧಿ ಹೊಂದದ ಕಾರಣ ನಗರ ನಿವಾಸಿಗಳು ನಿಯಮಿತವಾಗಿ ನೀರಿನ ಕೊರತೆಯನ್ನು ಎದುರಿಸುವಂತಾಗಿದೆ.

ನಗರಸಭೆಯು ಮಹಾನಗರ ಪಾಲಿಕೆಯಾಗಿ ಮೇಲ್ದರ್ಜೆಗೇರಿದ ನಂತರ ಮಹಾನಗರದ ವ್ಯಾಪ್ತಿ ಹೆಚ್ಚಾಗಿದೆ. ಆದರೆ, ಪಾಲಿಕೆ ವ್ಯಾಪ್ತಿಯಲ್ಲಿ ಸುಮಾರು 23,600 ಅನಧಿಕೃತ ನಲ್ಲಿಗಳು ಇರುವ ಮಾಹಿತಿ ಇದೆ. ಇದರಿಂದಾಗಿ ಸಮಾನವಾಗಿ ನೀರು ಹಂಚಿಕೆಯಾಗುತ್ತಿಲ್ಲ.

ನಗರದ ಬಹುತೇಕ ವಾರ್ಡ್‌ಗಳಲ್ಲಿ ಪ್ರತಿದಿನ ನೀರು ಬರುವುದಿಲ್ಲ. ಬೇಸಿಗೆಯಲ್ಲಂತೂ 2 ರಿಂದ 4 ದಿನಗಳಿಗೊಮ್ಮೆ ಅಥವಾ ವಾರಕ್ಕೊಮ್ಮೆ ನೀರು ಪೂರೈಸುವ ಪರಿಸ್ಥಿತಿ ಇದೆ. ನಗರದ ಜನಸಂಖ್ಯೆಗೆ ಸದ್ಯದ ಅಗತ್ಯವನ್ನು ಪೂರೈಸಲು ಹೆಚ್ಚುವರಿ ಪ್ರತಿದಿನ 20 ದಶಲಕ್ಷ ಗ್ಯಾಲನ್ ನೀರಿನ ಅಗತ್ಯವಿದೆ ಎಂದು ಸ್ಥಳೀಯ ಜನಪ್ರತಿನಿಧಿಗಳು ಸರ್ಕಾರದ ಗಮನಕ್ಕೆ ತಂದಿದ್ದಾರೆ.ಕೇಂದ್ರ ಸರ್ಕಾರದ ನಿಯಮಾವಳಿಗಳ ಪ್ರಕಾರ ನಗರ ಪ್ರದೇಶಗಳಲ್ಲಿ ಪ್ರತಿ ವ್ಯಕ್ತಿಗೆ ನಿಗದಿಪಡಿಸಿರುವ ಕನಿಷ್ಠ ನೀರಿನ ಪ್ರಮಾಣಕ್ಕಿಂತ ರಾಯಚೂರು ನಿವಾಸಿಗಳಿಗೆ ಕಡಿಮೆ ನೀರು ಸಿಗುತ್ತಿದೆ.

ನಗರದ ಹೊರವಲಯದ ರಾಂಪುರ ಕೆರೆಯಿಂದ ಕಾಲುವೆ ನೀರು ತುಂಬಿಕೊಂಡು, ಇಲ್ಲಿಂದ ನಗರಕ್ಕೆ ನೀರು ಹರಿಸಲಾಗುತ್ತದೆ ಯಾದರೂ, ಹಳೆಯ ನೀರು ಶುದ್ಧೀಕರಣ ಘಟಕಗಳ ಸರಿಯಾದ ನಿರ್ವಹಣೆ ಇಲ್ಲದೆ ಕಲುಷಿತ ನೀರು ಪೂರೈಕೆಯಾಗುವ ದೂರುಗಳು ಪದೇ ಪದೇ ಕೇಳಿಬರುತ್ತಿವೆ.

ನಗರದಲ್ಲಿ 12 ಓವರ್‌ಹೆಡ್ ಟ್ಯಾಂಕ್ ನಿರ್ಮಾಣ ಮಾಡಲಾಗಿದ್ದರೂ ಅದರ ಬಳಕೆ ಮಾಡುತ್ತಿಲ್ಲ. ನಗರದಲ್ಲಿ ಜಲ ಸಂಗ್ರಹವೇ ದೊಡ್ಡ ಸವಾಲಾಗಿದೆ. ಮಹಾನಗರ ಪಾಲಿಕೆ ಅಧಿಕಾರಿಗಳು ಓವರ್‌ಹೆಡ್ ಟ್ಯಾಂಕ್‌ಗಳನ್ನು ಬಳಸಿಕೊಳ್ಳುವ ದಿಸೆಯಲ್ಲಿ ಕ್ರಮ ಕೈಗೊಳ್ಳಬೇಕಿದೆ ಎಂದು ಹೈದರಾಬಾದ್ ಕರ್ನಾಟಕ ಹೋರಾಟಡಾ.ರಜಾಕ್ ಉಸ್ತಾದ್ ಹೇಳುತ್ತಾರೆ.

ಪ್ರಸ್ತುತ ನಗರದಲ್ಲಿ 36 ಓವರ್‌ಹೆಡ್ ಟ್ಯಾಂಕ್‌ಗಳನ್ನು ಬಳಸಲಾಗುತ್ತಿದೆ. ಇದು ಹೊರತು ಪಡಿಸಿ ಹೊಸದಾಗಿ 12 ಓವರ್‌ಹೆಡ್ ಟ್ಯಾಂಕ್ ನಿರ್ಮಾಣ ಮಾಡಲಾಗಿದ್ದರೂ ತಾಂತ್ರಿಕ ಸಮಸ್ಯೆ ಇರುವ ಕಾರಣ ಅದನ್ನು ಬಳಕೆ ಮಾಡುತ್ತಿಲ್ಲ ಎಂದು ಆಯುಕ್ತ ಜುಬಿನ್ ಮೊಹಾಪಾತ್ರ ಹೇಳುತ್ತಾರೆ.

ನಗರಕ್ಕೆ ಶುದ್ಧ ಕುಡಿಯುವ ನೀರು ಒದಗಿಸಲು ಕೃಷ್ಣಾ ನದಿ ಮತ್ತು ಚಿಕ್ಕಸುಗೂರು ಜಲಾಶಯದಿಂದ ಪ್ರತಿದಿನ ನೀರು ಸರಬರಾಜು ಹೆಚ್ಚಿಸಲು ಕ್ರಿಯಾ ಯೋಜನೆ ರೂಪಿಸಲಾಗಿದೆ. ಪ್ರಸ್ತುತ ಪೂರೈಕೆಗೆ ಹೆಚ್ಚುವರಿಯಾಗಿ ಪ್ರತಿದಿನ 20 ದಶಲಕ್ಷ ಗ್ಯಾಲನ್ ನೀರನ್ನು ಸೇರಿಸಲು ಮತ್ತು ಕೊಳವೆ ಮಾರ್ಗಗಳನ್ನು ಸರಿಪಡಿಸುವ ಕಾರ್ಯ ನಡೆದಿದೆ ಎನ್ನುತ್ತಾರೆ.

ಚಿಕ್ಕಸುಗೂರು ಬಳಿಯ ಕೃಷ್ಣಾ ನದಿ ಜಲಾಶಯ ಹಾಗೂ ನಾರಾಯಣಪುರ ಹಿನ್ನೀರಿನ ಯೋಜನೆಗಳನ್ನು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಕುಡಿಯುವ ನೀರು ಪೂರೈಕೆಗೆ ಬಳಸಿಕೊಳ್ಳಲಾಗುತ್ತಿದೆ. ಈಗಾಗಲೇ ಹಳೆಯ ಪೈಪ್‌ಲೈನ್‌ಗಳನ್ನು ತೆಗೆದು ಹಾಕಿ ಹೊಸ ಪೈಪ್‌ಲೈನ್‌ಗಳಲ್ಲಿ ಅಳವಡಿಸುವ ಕಾರ್ಯ ನಡೆದಿದೆ ಎಂದು ವಿವರಿಸುತ್ತಾರೆ.

# ಬೀದರ್ ಮಹಾನಗರ ಪಾಲಿಕೆಯಿಂದ ಶ್ವಾನಗಳ ಪೋಷಣೆಗೆ ಸಂರಕ್ಷಣಾ ಕೇಂದ್ರ ಆರಂಭ



**ಬೀದರ, ಆ. 20:** ನಗರದ ಹೊರವಲಯದ ಮರಕಲ್-ಜನವಾಡ ಬಳಿ ಮಹಾನಗರ ಪಾಲಿಕೆಯ ವತಿಯಿಂದ ಬೀದಿನಾಯಿ ಹಾಗೂ ಬೀಡಾಡಿ ದನಗಳ ಸಂರಕ್ಷಣೆಗೆ ಹಳೆಯ ಜಲ ಶುದ್ಧೀಕರಣ ಘಟಕದಲ್ಲಿ 'ಪ್ರಾಣಿಗಳ ಸಂರಕ್ಷಣೆ ಕೇಂದ್ರ' ಆರಂಭಿಸಿದೆ.

ಘಟಕದ ಕಟ್ಟಡಗಳನ್ನು ಕೇಂದ್ರದ ಅವಶ್ಯಕತೆಗೆ ಅನುಗುಣವಾಗಿ ನವೀಕರಣ ಮಾಡಿದೆ. ಪ್ರತ್ಯೇಕ ಕಟ್ಟಡಗಳನ್ನು ಮೇವು ತಯಾರಿಕೆ ಕೊಠಡಿ, ವೈದ್ಯರ ಕೊಠಡಿ, ಶಸ್ತ್ರಚಿಕಿತ್ಸಾ ಕೊಠಡಿ, ಭದ್ರತಾ ಸಿಬ್ಬಂದಿ ಕೊಠಡಿಗಳಾಗಿ ಪರಿವರ್ತಿಸಿದೆ.

150 ನಾಯಿಗಳ ಸಾಮರ್ಥ್ಯದ ಕಬ್ಬಿಣದ ನಾಯಿಗಳ ಗೂಡುಗಳನ್ನು ನಿರ್ಮಿಸಿದೆ. ಕುಡಿಯುವ ನೀರಿಗಾಗಿ ಕೊಳವೆಬಾವಿ ಕೊರೆಯಿಸಿದೆ. ಆವರಣದಲ್ಲಿ ಸಸಿ ನೆಟ್ಟಿದೆ. ಕೇಂದ್ರದಲ್ಲಿ ಮೊದಲ ಹಂತದಲ್ಲಿ ಬೀದರ್ ನಗರದಲ್ಲಿನ ಬೀದಿನಾಯಿಗಳಿಗೆ ಸಂತಾನ ನಿಯಂತ್ರಣ ಶಸ್ತ್ರಚಿಕಿತ್ಸೆ ಮಾಡುವ ಕಾರ್ಯ ಶುರು ಮಾಡಿದೆ.

ಸುಪ್ರೀಂಕೋರ್ಟ್ ಆದೇಶದ ಪ್ರಕಾರ ಪ್ರಾಣಿಗಳ ಸಂರಕ್ಷಣೆ ಕೇಂದ್ರ ಪ್ರಾರಂಭಿಸಲಾಗಿದೆ ಎಂದು ಬೀದರ್ ಮಹಾನಗರ ಪಾಲಿಕೆಯ ಆಯುಕ್ತ ಮುಕುಲ್ ಜೈನ್ ತಿಳಿಸಿದರು.

ಸಾರ್ವಜನಿಕರಿಗೆ ಹಾನಿ ಉಂಟು ಮಾಡಬಾರದೆಂಬ ಕಾರಣಕ್ಕೆ ನಾಯಿ ಹಿಡಿಯುವ ಸ್ವಯಂ ಸೇವಾ ಸಂಸ್ಥೆ ಮೂಲಕ ಈಗಾಗಲೇ ಬ್ರಿಮ್ಸ್, ಬೀದರ್‌ನ ಓಲ್ಡ್ ಸಿಟಿಯ ಸಾರ್ವಜನಿಕ ಆಸ್ಪತ್ರೆ, ಶಾಲೆ, ಕಾಲೇಜು, ಬಸ್ ನಿಲ್ದಾಣ, ರೈಲ್ವೆ ನಿಲ್ದಾಣ ಪ್ರದೇಶದಲ್ಲಿನ 65 ಬೀದಿನಾಯಿಗಳನ್ನು ಹಿಡಿದು ತಂದು, ಕೇಂದ್ರದಲ್ಲಿ ಇಡಲಾಗಿದೆ ಎಂದು ಮಾಹಿತಿ ನೀಡಿದ್ದಾರೆ.

ಬೀದಿನಾಯಿಗಳಿಗೆ ಪಶು ವೈದ್ಯರು ರೇಬಿಸ್ ಪ್ರತಿರೋಧಕ ಲಸಿಕೆ ಕೊಡಲಾಗಿದೆ. ಕರ್ನಾಟಕ ಪಶು ವೈದ್ಯಕೀಯ ವಿಶ್ವವಿದ್ಯಾಲಯ ಹಾಗೂ ಪಶು ಪಾಲನಾ ಮತ್ತು ಪಶು ವೈದ್ಯಕೀಯ ಸೇವಾ ಇಲಾಖೆಯ ಪಶುವೈದ್ಯರಿಂದ ಸಂತಾನ ನಿಯಂತ್ರಣ ಶಸ್ತ್ರಚಿಕಿತ್ಸೆ ಮಾಡಿಸಿ, ಏಳು ದಿನ ನಿಗಾ ಘಟಕದಲ್ಲಿ ಇರಿಸಲಾಗುವುದು. ಬಳಿಕ ಅವುಗಳ ಪೋಷಣೆ ಮಾಡಲಾಗುವುದು ಎಂದು ಹೇಳಿದ್ದಾರೆ.

ಸಮೀಕ್ಷೆ ಪ್ರಕಾರ ಬೀದರ್‌ನ ಶಾಲೆ, ಕಾಲೇಜು, ಆಸ್ಪತ್ರೆ, ಬಸ್ ನಿಲ್ದಾಣ, ರೈಲು ನಿಲ್ದಾಣ ಪ್ರದೇಶದಲ್ಲಿ 725 ಬೀದಿನಾಯಿಗಳಿವೆ. ಬೀದರ್ ಮಹಾನಗರದ ಸಾರ್ವಜನಿಕ ಸ್ಥಳಗಳಲ್ಲಿನ ನಾಯಿಗಳನ್ನು ಸಹ ಹಿಡಿದು ತಂದು, ಸಂತಾನ ನಿಯಂತ್ರಣ ಶಸ್ತ್ರಚಿಕಿತ್ಸೆ ಮಾಡಿಸಿ, ನಂತರ ಅವುಗಳನ್ನು ತಂದ ಸ್ಥಳಕ್ಕೆ ಮರಳಿ ಒಯ್ದು ಬಿಡಲಾಗುವುದು ಎಂದು ತಿಳಿಸಿದ್ದಾರೆ.

**ಬೀದರ್‌ನ 10 ಸಸ್ಯಹಾರಿ ಹಾಗೂ ಮಾಂಸಾಹಾರಿ ಹೋಟೆಲ್‌ಗಳ ಮಾಲೀಕರು ಕೇಂದ್ರದ ಬೀದಿ ನಾಯಿಗಳಿಗೆ ಉಚಿತವಾಗಿ ಆಹಾರ ಒದಗಿಸುತ್ತಿದ್ದಾರೆ. ಆರೋಗ್ಯ ನಿರೀಕ್ಷಕ ಸೇರಿ ಕೇಂದ್ರದಲ್ಲಿ ಆರು ಸಿಬ್ಬಂದಿ ಇದ್ದಾರೆ. ನಗರಾಭಿವೃದ್ಧಿ ಇಲಾಖೆಯ 34 ಲಕ್ಷ ಅನುದಾನದಲ್ಲಿ ಕೇಂದ್ರ ನಿರ್ಮಾಣ ಮಾಡಲಾಗಿದೆ. ಕೇಂದ್ರ ಸ್ಥಾಪನೆಗೆ ಎರಡು ತಿಂಗಳು ಹಿಡಿದಿದೆ.**

**-ಮುಕುಲ್ ಜೈನ್, ಪಾಲಿಕೆ ಆಯುಕ್ತ**

### ಜಿಲ್ಲಾ ಪ್ರಥಮ ಮಹಿಳಾ ಕಾವ್ಯ ಸಮ್ಮೇಳನ

## ಸ್ತ್ರೀವಾದಿ ಸಾಹಿತ್ಯ ಪ್ರಗತಿಗೆ ಪೂರಕ: ಜಾವಳಿ




**ಕಲಬುರಗಿ, ಆ. 20:** ಯಾವುದೇ ಸಮಾಜ ಪ್ರಗತಿಯಾಗಬೇಕಾದರೆ ಸ್ತ್ರೀವಾದಿ ಸಾಹಿತ್ಯ ಪೂರಕವಾಗುತ್ತದೆ. ಜಿಲ್ಲೆಯಲ್ಲಿ ಮಹಿಳಾ ಬರಹಗಾರರ ಕೊರತೆಯಿಲ್ಲ. ಅವರ ಸಂವೇದನಾಶೀಲತೆ ಮತ್ತು ಅಧ್ಯಯನಗಳು ನಮ್ಮ ಕನ್ನಡ ಸಾಹಿತ್ಯ ಪರಂಪರೆ ಇನ್ನಷ್ಟು ಶ್ರೀಮಂತಗೊಳ್ಳುತ್ತಿದೆ. ಆದರೆ ಮಹಿಳಾ ಸಾಹಿತಿಗಳಿಗೆ ವೇದಿಕೆಯ ಕೊರತೆ, ಅಕಾಡೆಮಿಗಳಲ್ಲಿ ಸ್ಥಾನಮಾನ ದೊರೆಯುತ್ತಿಲ್ಲ. ಮಹಿಳಾ ವಚನಕಾರ್ತಿಯರ ಸ್ಮಾರಕಗಳು ಇಂದು ಅವಸಾನದ ಅಂಚಿಗೆ ತಲುಪಿವೆ. ಅವುಗಳ ಸಂರಕ್ಷಣೆ ಅವಶ್ಯವಾಗಿದೆ. ಈ ದಿಸೆಯಲ್ಲಿ ಸರಕಾರ ಕ್ರಮ ಕೈಗೊಳ್ಳಬೇಕು ಎಂದು ಸಾಹಿತಿ ಶಕುಂತಲಾ ಪಾಟೀಲ್ ಜಾವಳಿ ಅವರು ಮನವಿ ಮಾಡಿದರು.

ಜಿಲ್ಲೆಯ ವಿಶ್ವವಿದ್ಯಾಲಯಗಳಲ್ಲಿ ಮಹಿಳಾ ಸಾಹಿತ್ಯ ಅಧ್ಯಯನ ಪೀಠಗಳು ಆರಂಭಿಸಬೇಕು. ಜನಪದ ಸಾಹಿತ್ಯದ ಮಹಿಳಾ ಕಲಾವಿದರಿಗೆ, ಸಂಗೀತಗಾರರಿಗೆ ಪ್ರೋತ್ಸಾಹಿಸುವಂತೆ ಮನವಿ ಮಾಡಿದ ಅವರು, ಈ ಭಾಗದ 371 (ಜೆ) ಕಲಂ ಅಡಿಯಲ್ಲಿ ಮಹಿಳೆಯರಿಗಾಗಿ ವಿಶೇಷ ನೇಮಕಾತಿ ಮಾಡಿಕೊಳ್ಳಬೇಕು ಹಾಗೂ ಮಹಾನಗರ ಪಾಲಿಕೆ ವ್ಯಾಪ್ತಿಯ ಪ್ರಮುಖ ರಸ್ತೆ ಮತ್ತು ಬಡಾವಣೆಗಳಿಗೆ ಮಹಿಳಾ ಹಿರಿಯ ಸಾಹಿತಿಗಳ ಹೆಸರನ್ನು ಇಡಬೇಕು ಎಂದು ಎಂದು ಕಾವ್ಯ ಮಹಿಳಾ ಸಮ್ಮೇಳನದ ಸರ್ವಾಧ್ಯಕ್ಷ ಹಿರಿಯ ಲೇಖಕಿ ಜಾವಳಿ ಹೇಳಿದರು.

ಜಿಲ್ಲಾ ಕಸಾಪ ಅಧ್ಯಕ್ಷ ವಿಜಯಕುಮಾರ ಪಾಟೀಲ ತೇಗಲತಿಪ್ಪಿ, ಸಮಾಜದಲ್ಲಿ ಮಹಿಳೆಯರ ಧ್ವನಿಗೆ ಗೌರವ ಕೊಡುವುದು ಮತ್ತು ಅವರನ್ನು ಪ್ರೋತ್ಸಾಹಿಸುವುದು ಬಹಳ ಮುಖ್ಯವಾಗಿದೆ.

ನಮ್ಮ ಕನ್ನಡ ನಾಡು-ನುಡಿಯಲ್ಲಿ ಹಾಗೂ ಸಮಾಜದ ಪ್ರತಿಯೊಂದು ಕ್ಷೇತ್ರದಲ್ಲಿ ಮಹಿಳೆಯರ ಸಾಧನೆಯನ್ನು ಗೌರವಿಸಿ ಮುನ್ನಡೆಸಬೇಕು. ಮಹಿಳೆಯನ್ನು ಕೇವಲ ಭೋಗದ ವಸ್ತುವಾಗಿ ನೋಡದೆ ಅವಳ ಸಾಮರ್ಥ್ಯವನ್ನು ಗುರುತಿಸಿ ಸಮಾಜದ ಮುಖ್ಯವಾಹಿನಿಗೆ ತರುವ ಕಾರ್ಯ ಪರಿಷತ್ತು ಮಾಡುತ್ತಿದೆ ಎಂದರು.

# ಬಿಬಿಎ ವಿದ್ಯಾರ್ಥಿಗಳ ಇಂಟರ್ನ್‌ಶಿಪ್ ತರಬೇತಿ

## ಶರಣಬಸವ ವಿವಿ-ಎಜುಫಿನಿಕ್ಸ್ ಸಂಸ್ಥೆಯೊಂದಿಗೆ ಒಡಂಬಡಿಕೆ



ಕಲಬುರಗಿ, ಆ. 20: ನಗರದ ಶರಣಬಸವ ವಿಶ್ವವಿದ್ಯಾಲಯದ ವ್ಯವಹಾರ ಅಧ್ಯಯನ ನಿಕಾಯದಡಿ ಕಾರ್ಯನಿರ್ವಹಿಸುತ್ತಿರುವ ಬಿಬಿಎ ವಿಭಾಗವು ಬೆಂಗಳೂರಿನ ಎಜುಫಿನಿಕ್ಸ್ ಸೊಲ್ಯೂಷನ್ಸ್ ಸಂಸ್ಥೆಯೊಂದಿಗೆ ಮಹತ್ವದ ಒಡಂಬಡಿಕೆ ಮಾಡಿಕೊಂಡಿದೆ.

ಬಿಬಿಎ ವಿದ್ಯಾರ್ಥಿಗಳಿಗೆ ಇಂಟರ್ನ್‌ಶಿಪ್, ಪ್ರಾಯೋಗಿಕ ತರಬೇತಿ ಹಾಗೂ ಸಂಸ್ಥೆ ಮತ್ತು ವ್ಯವಹಾರ ಕ್ಷೇತ್ರದ ನೈಜ ಕಾರ್ಯವೈಖರಿ ಪರಿಚಯಿಸುವುದು ಒಡಂಬಡಿಕೆಯ ಪ್ರಮುಖ ಉದ್ದೇಶ.ವಿವಿ ಉಪಕುಲಪತಿ ಕಚೇರಿಯಲ್ಲಿ ಶರಣಬಸವೇಶ್ವರ ವಿದ್ಯಾವರ್ಧಕ ಸಂಘದ ಕಾರ್ಯದರ್ಶಿ ಬಸವರಾಜ ದೇಶಮುಖ ಹಾಗೂ ಎಜುಫಿನಿಕ್ಸ್ ಸೊಲ್ಯೂಷನ್ಸ್ ನಿರ್ದೇಶಕ ಗರ್ವಿತ್ ಗರ್ಗ್ ಸಹಿ ಮಾಡಿದ ಒಡಂಬಡಿಕೆ ಪ್ರತಿಗಳನ್ನು ಪರಸ್ಪರ ವಿನಿಮಯ ಮಾಡಿಕೊಂಡರು.

ಇದಕ್ಕೂ ಮುನ್ನ ವಿವಿ ಪರವಾಗಿ ಕುಲಸಚಿವೆ ಡಾ.ಲಕ್ಷ್ಮೀ ಪಾಟೀಲ್ ಮಾಕಾ ಹಾಗೂ ಗರ್ವಿತ್ ಒಡಂಬಡಿಕೆಗೆ ಸಹಿ ಹಾಕಿದರು. ವಿವಿ ಉಪಕುಲಪತಿ ಪ್ರೊ. ಅನಿಲಕುಮಾರ್ ಬಿಡವೆ, ಕುಲಸಚಿವ (ಮೌಲ್ಯಮಾಪನ) ಡಾ.ಎಸ್.ಎಚ್. ಹೊನ್ನಳ್ಳಿ, ಬಿಬಿಎ ವಿಭಾಗದ ಡಾ.ಶಶಿಕಾಂತ ಎಸ್.ಕೆ. ಇತರರಿದ್ದರು.

ಬಸವರಾಜ ದೇಶಮುಖ ಮಾತನಾಡಿ, ಈ ಒಡಂಬಡಿಕೆ ಮೂಲಕ ವಿದ್ಯಾರ್ಥಿಗಳಿಗೆ ಇಂಟರ್ನ್‌ಶಿಪ್ ಅವಕಾಶ ಕಲ್ಪಿಸುವುದರ ಜತೆಗೆ ಕೈಗಾರಿಕಾ ಭೇಟಿ, ಅತಿಥಿ ಉಪನ್ಯಾಸ, ಕಾರ್ಯಾಗಾರ, ಜ್ಞಾನ ಮತ್ತು ಕೌಶಲಾಭಿವೃದ್ಧಿಗೆ ಪೂರಕ ವಿವಿಧ ಚಟುವಟಿಕೆ ಹಮ್ಮಿಕೊಳ್ಳಲು, ಉದ್ಯಮ ಸಹಭಾಗಿತ್ವ, ಪರಸ್ಪರ ಸಹಕಾರದ ಚೌಕಟ್ಟು ರೂಪಿಸುವ ಮೂಲಕ ಅನುಭವ ಆಧಾರಿತ ಕಲಿಕೆ, ಜ್ಞಾನ ಹಂಚಿಕೆ ಹಾಗೂ ಉತ್ತಮ ವೃತ್ತಿ ಅವಕಾಶಗಳಿಗೆ ಉತ್ತೇಜನ ದೊರೆಯಲಿದೆ ಎಂದು ತಿಳಿಸಿದರು.

**ಬಿಬಿಎ ವಿದ್ಯಾರ್ಥಿಗಳ ಕೌಶಲ ಮತ್ತಷ್ಟು ಅಭಿವೃದ್ಧಿಪಡಿಸಲು ಹಾಗೂ ಇಂಟರ್ನ್‌ಶಿಪ್ ಅವಧಿಯಲ್ಲಿ ಉದ್ಯಮ ಕ್ಷೇತ್ರದಲ್ಲಿ ನೇರವಾಗಿ ಕಾರ್ಯನಿರ್ವಹಿಸಿ ಪ್ರಾಯೋಗಿಕ ಅನುಭವ ಪಡೆಯಲು ಹೆಚ್ಚಿನ ಅವಕಾಶ ದೊರೆಯಲಿದೆ.**
**– ಬಸವರಾಜ ದೇಶಮುಖ, ಕಾರ್ಯದರ್ಶಿ, ಶರಣಬಸವೇಶ್ವರ ವಿದ್ಯಾವರ್ಧಕ ಸಂಘ.**

ಸಂಸ್ಥೆಯು ಅರ್ಹ ಬಿಬಿಎ ವಿದ್ಯಾರ್ಥಿಗಳಿಗೆ ಇಂಟರ್ನ್‌ಶಿಪ್ ಅವಕಾಶ ಒದಗಿಸಿ ವ್ಯವಹಾರ ಆಡಳಿತ, ಸಂಸ್ಥೆ ಕಾರ್ಯವೈಖರಿ ಹಾಗೂ ನಿರ್ವಹಣಾ ಕ್ಷೇತ್ರಗಳಲ್ಲಿ ಪ್ರಾಯೋಗಿಕ ಅನುಭವ ಪಡೆಯಲು ನೆರವಾಗಲಿದೆ. ವ್ಯವಹಾರ ಆಡಳಿತ, ಮಾನವ ಸಂಪನ್ಮೂಲ ನಿರ್ವಹಣೆ, ಮಾರುಕಟ್ಟೆ ನಿರ್ವಹಣೆ, ಹಣಕಾಸು ಕಾರ್ಯಾಚರಣೆ, ಸಾಮಾನ್ಯ ಆಡಳಿತ ಸೇರಿ ವಿವಿಧ ಕ್ಷೇತ್ರಗಳಲ್ಲಿ ವಿದ್ಯಾರ್ಥಿಗಳಿಗೆ ನೇರ ತರಬೇತಿ ಮತ್ತು ಅನುಭವ ಸಿಗಲಿದೆ.




ಕಲಬುರಗಿ ಜಿಲ್ಲೆಯಲ್ಲಿ ಬರಗಾಲ ಘೋಷಣೆಗೆ ಒತ್ತಾಯಿಸಿ ಸಂಯುಕ್ತ ಹೋರಾಟ ಕರ್ನಾಟಕ ಕರೆ ನೀಡಿರುವ ಬಂದ್‌ನ ಭಾಗವಾಗಿ ಗುರುವಾರ ಕಲಬುರಗಿಯಲ್ಲಿ ರೈತರು ಪ್ರತಿಭಟನಾ ಮೆರವಣಿಗೆ ನಡೆಸಿದರು.

### ಡಿ.ದೇವರಾಜ ಅರಸು 111ನೇ ಜನ್ಮದಿನಾಚರಣೆ

# ಸಾಮಾಜಿಕ ನ್ಯಾಯದ ಆಶಯ ಮೈಗೂಡಿಸಿಕೊಳ್ಳಿ ಲಿಡ್ಕರ್ ಅಧ್ಯಕ್ಷ ಮುಂಡರಗಿ ನಾಗರಾಜ ಕರೆ



**ಬಳ್ಳಾರಿ,ಆ.20**.ಸಂವಿಧಾನದ ಪೀಠಿಕೆಯಲ್ಲಿ ಪ್ರತಿಪಾದಿಸಿರುವ ಸಾಮಾಜಿಕ ನ್ಯಾಯದ ಆಶಯವನ್ನು ಪ್ರತಿಯೊಬ್ಬರೂ ಮೈಗೂಡಿಸಿಕೊಳ್ಳಬೇಕು ಎಂದು ಡಾ.ಬಾಬು ಜಗಜೀವನ್ ರಾಂ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮದ ಅಧ್ಯಕ್ಷ ಮುಂಡರಗಿ ನಾಗರಾಜ ಅವರು ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರ ಸಂಯುಕ್ತಾಶ್ರಯದಲ್ಲಿ ನಗರದ ಡಾ.ಜೋಳದರಾಶಿ ದೊಡ್ಡನಗೌಡ ರಂಗಮಂದಿರದಲ್ಲಿ ಗುರುವಾರ ಏರ್ಪಡಿಸಿದ್ದ ಸಾಮಾಜಿಕ ನ್ಯಾಯದ ಹರಿಕಾರ, ಹಿಂದುಳಿದ ವರ್ಗಗಳ ನೇತಾರ ಹಾಗೂ ಮಾಜಿ ಮುಖ್ಯಮಂತ್ರಿ ದಿವಂಗತ ಡಿ.ದೇವರಾಜ ಅರಸು ಅವರ 111ನೇ ಜನ್ಮದಿನಾಚರಣೆ ಸಮಾರಂಭ ಉದ್ಘಾಟಿಸಿ ಅವರು ಮಾತನಾಡಿದರು.

ವಿನೋಬಾ ಭಾವೆಯವರ ಭೂದಾನ ಚಳವಳಿಯ ಪ್ರೇರಣೆಯೊಂದಿಗೆ ರಾಜ್ಯದಲ್ಲಿ ಮಾಜಿ ಮುಖ್ಯಮಂತ್ರಿ ಡಿ. ದೇವರಾಜ ಅರಸು ಅವರು ?ಉಳುವವನೇ ಒಡೆಯ? ಎಂಬ ಐತಿಹಾಸಿಕ ಭೂಸುಧಾರಣಾ ಕಾಯ್ದೆಯನ್ನು ಜಾರಿಗೆ ತಂದರು. ಬಡವರು, ದಲಿತರು ಹಾಗೂ ಹಿಂದುಳಿದ ವರ್ಗಗಳಿಗೆ ಭೂಮಿಯ ಹಕ್ಕು ನೀಡಿ, ಬಡತನ ನಿರ್ಮೂಲನೆಗೆ ಮತ್ತು ಸಾಮಾಜಿಕ ಸಮಾನತೆಗೆ ಅಡಿಪಾಯ ಹಾಕಿದ ಮಹಾನ್ ನಾಯಕ ಅರಸು ಎಂದು ಸ್ಮರಿಸಿದರು.

ಯುವಜನರು ಮತ್ತು ವಿದ್ಯಾರ್ಥಿಗಳು ಸಾಮಾಜಿಕ ಜಾಲತಾಣಗಳಲ್ಲಿ ವ್ಯರ್ಥವಾಗಿ ಸಮಯ ಕಳೆಯುವುದನ್ನು ನಿಲ್ಲಿಸಬೇಕು. ಮೊಬೈಲ್ ವ್ಯಾಮೋಹದಿಂದ ಹೊರಬಂದು ಪುಸ್ತಕ ಓದುವ ಹವ್ಯಾಸವನ್ನು ಬೆಳೆಸಿಕೊಳ್ಳಬೇಕು. ಡಾ. ಬಿ.ಆರ್. ಅಂಬೇಡ್ಕರ್ ಅವರಂತಹ ನಾಯಕರ ಅಧ್ಯಯನ ಶೀಲತೆಯನ್ನು ಮಾದರಿಯಾಗಿಟ್ಟುಕೊಂಡು, ಜ್ಞಾನವರ್ಧಕ ಕೃತಿಗಳನ್ನು ಓದುವತ್ತ ಗಮನಹರಿಸಬೇಕು ಎಂದು ಸಲಹೆ ನೀಡಿದರು.

ಜಾತಿ, ಧರ್ಮ, ಭಾಷೆ ಮತ್ತು ಪ್ರಾದೇಶಿಕ ಭೇದಭಾವಗಳನ್ನು ಮರೆತು ದೇಶದ ಏಕತೆ, ಸಮಗ್ರತೆ ಮತ್ತು ಶಾಂತಿಯನ್ನು ಕಾಪಾಡುವ ಸಂವಿಧಾನದ ಸಂದೇಶವನ್ನು ಎಲ್ಲರೂ ಪಾಲಿಸಬೇಕೆಂದು ಸದ್ಭಾವನಾ ಪ್ರತಿಜ್ಞೆಯ ಮೂಲಕ ಕರೆ ನೀಡಿದರು.

ಮಹಾನಗರ ಪಾಲಿಕೆಯ ಮಹಾಪೌರರಾದ ಪಿ.ಗಾದೆಪ್ಪ ಅವರು ಮಾತನಾಡಿ, ಹಿಂದುಳಿದ ವರ್ಗಗಳ ಕಲ್ಯಾಣ ಮತ್ತು ಸಾಮಾಜಿಕ ನ್ಯಾಯದ ಹರಿಕಾರ ಡಿ. ದೇವರಾಜ ಅರಸು ಅವರ ದೂರದೃಷ್ಟಿ ಹಾಗೂ ಕೊಡುಗೆಗಳು ಇಂದಿಗೂ ಲಕ್ಷಾಂತರ ಜನರ ಬದುಕಿಗೆ ದಾರಿದೀಪವಾಗಿವೆ ಎಂದು ಹೇಳಿದರು.

ದೇವರಾಜ ಅರಸು ಅವರು ಅಂದಿನ ಕಾಲದಲ್ಲೇ ಸಮಾಜದ ವಿರೋಧವನ್ನು ಎದುರಿಸಿ, ಹಿಂದುಳಿದ ವರ್ಗಗಳ ಪರವಾಗಿ ದಿಟ್ಟ ಕಾಯ್ದೆಗಳನ್ನು ಜಾರಿಗೆ ತಂದರು. ಅವರ ಪರಿಕಲ್ಪನೆಯ ವಸತಿ ನಿಲಯಗಳು ಮತ್ತು ರಾಜಕೀಯ ಮೀಸಲಾತಿಯ ಫಲವಾಗಿಯೇ ಇಂದು ತಳಸಮುದಾಯಗಳ ಲಕ್ಷಾಂತರ ಜನರು ಜನಪ್ರತಿನಿಧಿಗಳಾಗಿ, ಸಮಾಜದ ಮುಖ್ಯವಾಹಿನಿಯಲ್ಲಿ ಗುರುತಿಸಿಕೊಳ್ಳಲು ಸಾಧ್ಯವಾಗಿದೆ ಎಂದರು.

ಭಾರತಕ್ಕೆ ಆಧುನಿಕ ತಂತ್ರಜ್ಞಾನ ಮತ್ತು ಕಂಪ್ಯೂಟರ್ ಯುಗವನ್ನು ಪರಿಚಯಿಸಿದ ಮಾಜಿ ಪ್ರಧಾನಿ ರಾಜೀವ್ ಗಾಂಧಿಯವರ ಚಿಂತನೆಗಳನ್ನು ಸ್ಮರಿಸಿ, ಯುವ ಸಮುದಾಯ ಅವರಂತೆ ಉನ್ನತ ಗುರಿಗಳನ್ನು ಹೊಂದಿರಬೇಕು ಎಂದು ಕರೆ ನೀಡಿದರು.

ಮುಂದೆ ಗುರಿ, ಹಿಂದೆ ಗುರು ಇರಬೇಕು ಎಂಬ ಹಿರಿಯರ ಮಾತಿನಂತೆ, ಯುವಕರು ಜೀವನದಲ್ಲಿ ಸ್ಪಷ್ಟ ಗುರಿಯಿಟ್ಟುಕೊಂಡು ಮುನ್ನಡೆದರೆ ಯಶಸ್ಸು ಖಂಡಿತ ಸಾಧ್ಯ. ಹಿರಿಯರು ಹಾಕಿಕೊಟ್ಟ ಸಾಮಾಜಿಕ ನ್ಯಾಯದ ಹಾದಿಯಲ್ಲಿ ನಾವೆಲ್ಲರೂ ಸಾಗಬೇಕಿದೆ ಎಂದು ತಿಳಿಸಿದರು.

ಅಪರ ಜಿಲ್ಲಾಧಿಕಾರಿ ಮಹಮ್ಮದ್ ಝುಬೇರ್.ಎನ್ ಅವರು ಮಾತನಾಡಿ, ಕರ್ನಾಟಕದಲ್ಲಿ ಸಾಮಾಜಿಕ ಅಸಮಾನತೆಯನ್ನು ಹೋಗಲಾಡಿಸಲು ಮಾಜಿ ಮುಖ್ಯಮಂತ್ರಿ ಡಿ. ದೇವರಾಜ ಅರಸು ಅವರು ಜಾರಿಗೆ ತಂದ ?ಉಳುವವನೇ ಹೊಲದೊಡೆಯ' (ಭೂಸುಧಾರಣಾ ಕಾಯ್ದೆ) ಕ್ರಾಂತಿಕಾರಿ ಹೆಜ್ಜೆಯನ್ನು ಅವರು ಸ್ಮರಿಸಿದರು. ಶೋಷಿತರಿಗೆ ಭೂಮಿಯ ಒಡೆತನ ನೀಡಿ ಸಾಮಾಜಿಕ ನ್ಯಾಯ ದೊರಕಿಸಿಕೊಟ್ಟ ಅರಸು ಅವರ ಆಡಳಿತ ಇಂದಿಗೂ ಮಾದರಿಯಾಗಿದೆ ಎಂದರು.

ಡಾ. ಬಿ.ಆರ್. ಅಂಬೇಡ್ಕರ್ ಅವರು ನಮಗೆ ನೀಡಿರುವ ಸಂವಿಧಾನವೇ ನಮ್ಮ ಅತ್ಯುನ್ನತ ಶಕ್ತಿ. ಶ್ರಮಜೀವಿಗಳಾಗಿ ಶ್ರಮಪಟ್ಟರೆ ಸಂವಿಧಾನ ನೀಡಿರುವ ಉನ್ನತ ಹುದ್ದೆಗಳನ್ನು ಪ್ರತಿಯೊಬ್ಬರೂ ಅಲಂಕರಿಸಲು ಸಾಧ್ಯ. ವಿದ್ಯಾರ್ಥಿಗಳು ಕೇವಲ ಅದೃಷ್ಟವನ್ನು ನಂಬದೆ ಕಠಿಣ ಪರಿಶ್ರಮ, ನಿರಂತರ ಅಧ್ಯಯನ ನಡೆಸಬೇಕು ಎಂದು ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದರು.

# ಅರ್ಹ ಫಲಾನುಭವಿಗಳಿಗೆ ಲಾಭ ತಲುಪಿಸಿ: ಪರಮೇಶ್ವರ ನಾಯ್ಕ್



**ಕಲಬುರಗಿ, ಆ. 20:** ರಾಜ್ಯ ಸರ್ಕಾರದ ಮಹತ್ವಾಕಾಂಕ್ಷಿ ಪಂಚ ಗ್ಯಾರಂಟಿ ಯೋಜನೆಗಳನ್ನು ಜಿಲ್ಲೆಯ ಪ್ರತಿಯೊಬ್ಬ ಅರ್ಹ ಫಲಾನುಭವಿಗಳಿಗೆ ತಲುಪುವಂತೆ ಅಧಿಕಾರಿಗಳು ಸಮನ್ವಯದಿಂದ ಶ್ರಮಿಸಬೇಕು. ಕರ್ತವ್ಯಲೋಪ ಅಥವಾ ಉದಾಸೀನ ತೋರುವವರ ವಿರುದ್ಧ ಶಿಸ್ತುಕ್ರಮ ಜರುಗಿಸುವುದಾಗಿ ಮಾಜಿ ಸಚಿವ, ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರ ರಾಜ್ಯ ಉಪಾಧ್ಯಕ್ಷ ಪಿ.ಟಿ.ಪರಮೇಶ್ವರ ನಾಯ್ಕ್ ಎಚ್ಚರಿಸಿದರು.

ನಗರದ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ನಡೆದ ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆಯಲ್ಲಿ ಅಧ್ಯಕ್ಷತೆ ವಹಿಸಿದ್ದ ಅವರು, ಜಿಲ್ಲೆಯಲ್ಲಿ ಗೃಹಲಕ್ಷ್ಮಿಯಡಿ 5,97,957 ಫಲಾನುಭವಿಗಳು ನೋಂದಾಯಿಸಿದ್ದು, ಸೌಲಭ್ಯ ವಿತರಿಸಲಾಗುತ್ತಿದೆ. ಹೆಸರು ನೋಂದಾಯಿಸಿದ ಬಳಿಕ ಮರಣ ಹೊಂದಿದ ಫಲಾನುಭವಿಗಳ 9,156 ಪ್ರಕರಣಗಳಿಂದ 2,14,63,323 ರೂ. ವಸೂಲಿ ಮಾಡಿ ಸರ್ಕಾರಿ ಖಜಾನೆಗೆ ಜಮೆ ಮಾಡಲಾಗಿದೆ. ಬಾಕಿಯೂ ವಸೂಲಿ ಮಾಡಲು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಯುವನಿಧಿಯಡಿ 32,289 ಪದವೀಧರರು ಸೇರಿ 32,943 ನಿರುದ್ಯೋಗಿಗಳು, 15,690 ಮಹಿಳೆಯರು, 17,253 ಪುರುಷರು ನೋಂದಾಯಿಸಿದ್ದು, ಕಾಲೇಜು ಮತ್ತು ವಿಶ್ವವಿದ್ಯಾಲಯಗಳಲ್ಲಿ ಜಾಗೃತಿ ಮೂಡಿಸಿ ಈ ಸಂಖ್ಯೆ ಹೆಚ್ಚಿಸಲು ಸೂಚಿಸಿದರು. ಗೃಹಜ್ಯೋತಿಯಡಿ ಜೆಸ್ಕಾಂ ವ್ಯಾಪ್ತಿಯಲ್ಲಿ 10.50 ಲಕ್ಷಕ್ಕೂ ಹೆಚ್ಚು ಗ್ರಾಹಕರ ನೋಂದಣಿ ಪೂರ್ಣಗೊಂಡಿದ್ದು, ಪ್ರತ್ಯೇಕ ಮೀಟರ್ ಇಲ್ಲದ ಕಡೆ ಹೊಸ ಮೀಟರ್ ಅಳವಡಿಸಲು ಆದೇಶಿಸಲಾಗಿದೆ. ಅನ್ನಭಾಗ್ಯದಡಿ ಜಿಲ್ಲೆಯ 21.22 ಲಕ್ಷ ಫಲಾನುಭವಿಗಳಿಗೆ ಪ್ರತಿ ತಿಂಗಳು 7 ಕೆಜಿ ಅಕ್ಕಿ ಮತ್ತು 3 ಕೆಜಿ ಜೋಳ ವಿತರಿಸಲಾಗುತ್ತಿದೆ. ಶಕ್ತಿ ಯೋಜನೆಯಿಂದಾಗಿ ಕೆಕೆಆರ್‌ಟಿಸಿ ಸಂಸ್ಥೆಯ ಲೋಡ್ ಫ್ಯಾಕ್ಟರ್ ಶೇ.85ಕ್ಕೆ ಏರಿಕೆಯಾಗಿದ್ದು, ಹೊಸದಾಗಿ 400 ಬಸ್ ಸೇರ್ಪಡೆಗೊಳಿಸಲಾಗುತ್ತಿದೆ. ಸರ್ಕಾರದ 6ನೇ ಗ್ಯಾರಂಟಿ ಉಚಿತ ಬಸ್ ಪಾಸ್ ಜಿಲ್ಲೆಯಲ್ಲಿ 1,85,460 ಲಕ್ಷ ವಿದ್ಯಾರ್ಥಿಗಳಿಗೆ ನೀಡಲಾಗಿದೆ ಎಂದು ನಾಯ್ಕ್ ವಿವರಿಸಿದರು.

ಅನುಷ್ಠಾನ ಪ್ರಾಧಿಕಾರ ಜಿಲ್ಲಾಧ್ಯಕ್ಷೆ ಚಂದ್ರಿಕಾ ಪರಮೇಶ್ವರ, ಕೆಕೆಆರ್‌ಟಿಸಿ ವ್ಯವಸ್ಥಾಪಕ ನಿರ್ದೇಶಕಿ ಡಾ.ಬಿ. ಸುಶೀಲಾ, ಜೆಸ್ಕಾಂ ವ್ಯವಸ್ಥಾಪಕ ನಿರ್ದೇಶಕ ಶಶಿಧರ ಕುರೇರ, ಜಿಪಂ ಸಿಇಒ ರಾಹುಲ್ ಸಂಕನೂರ, ಮುಖ್ಯ ಯೋಜನಾ ನಿರ್ದೇಶಕಿ (ಪ್ರಭಾರ) ಮಧುಮತಿ, ವಿಜಯಕುಮಾರ ಕಟ್ಟಿಮನಿ, ಸೋಮಶೇಖರ ಹಿರೇಮಠ, ನರಸಿಂಹಲು ಕುಂಬಾರ, ನಿರ್ಮಲಾ ಬರಗಾಲೆ, ಸುರೇಶ ತಿಪ್ಪಶೆಟ್ಟಿ ಇತರರಿದ್ದರು.

ಗ್ಯಾರಂಟಿ ಯೋಜನೆ ಕಾರ್ಯಾಗಾರ ಶೀಘ್ರಕಲಬುರಗಿ: ರಾಜ್ಯ ಸರ್ಕಾರದ ಐದು ಗ್ಯಾರಂಟಿಗಳಿಂದ ಜಿಲ್ಲೆಯಲ್ಲಿ 5,561.81 ಕೋಟಿ ರೂ. ಲಾಭ ಲಾನುಭವಿಗಳಿಗೆ ತಲುಪಿದ್ದು, ಪ್ರತಿ ಅರ್ಹರಿಗೆ ಸರ್ಕಾರದ ಸೌಲಭ್ಯ ಕಲ್ಪಿಸಲು ಪಂಚ ಗ್ಯಾರಂಟಿ ಯೋಜನೆಗಳ ಬಗ್ಗೆ ಅಧಿವೇಶನದ ನಂತರ ಜಿಲ್ಲೆಯಲ್ಲಿ ಬೃಹತ್ ಕಾರ್ಯಾಗಾರ ಏರ್ಪಡಿಸಲಾಗುವುದು ಎಂದು ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷ ಪಿ.ಟಿ. ಪರಮೇಶ್ವರ ನಾಯ್ಕ್ ಹೇಳಿದರು.

ಗೃಹಜ್ಯೋತಿ ಯೋಜನೆ ಹೊಸ ಸರ್ವೆಯಲ್ಲಿ ಹೊರಜಿಲ್ಲೆ, ಹೊರರಾಜ್ಯಗಳ ವಲಸಿಗರು ಹಾಗೂ ಬಾಡಿಗೆದಾರರಿಗೆ ಎದುರಾಗುತ್ತಿರುವ ತೊಡಕು ಬಗೆಹರಿಸಲು ಎಸ್‌ಐಆರ್ ಪ್ರಕ್ರಿಯೆ ಪೂರ್ಣಗೊಂಡ ತಕ್ಷಣ ಮುಖ್ಯಮಂತ್ರಿ ನೇತೃತ್ವದಲ್ಲಿ ಉನ್ನತ ಮಟ್ಟದ ಸಭೆ ನಡೆಸಿ ನಿರ್ಧಾರ ಕೈಗೊಳ್ಳಲಾಗುವುದು ಎಂದು ಅವರು ಸುದ್ದಿಗೋಷ್ಠಿಯಲ್ಲಿ ತಿಳಿಸಿದರು.

ಫಲಾನುಭವಿಗಳಿಗೆ ಅನ್ಯಾಯವಾಗದಂತೆ ತಾಲೂಕು ಮತ್ತು ಹೋಬಳಿ ಮಟ್ಟದ ಗ್ಯಾರಂಟಿ ಸಮಿತಿಗಳು ಮನೆ ಮನೆಗೆ ತೆರಳಿ ಪರಿಶೀಲನೆ ನಡೆಸಲಿವೆ. ಸರ್ವೆ ಪ್ರಕ್ರಿಯೆ ಸೆಪ್ಟೆಂಬರ್ ಕೊನೆಯೊಳಗೆ ಪೂರ್ಣಗೊಳಿಸಲಾಗುವುದು. ಬ್ಯಾಂಕ್‌ಗಳಲ್ಲಿದ್ದ ಮೃತ ಫಲಾನುಭವಿಗಳ ಹಣದ ಪೈಕಿ ರಾಜ್ಯಾದ್ಯಂತ 40 ಕೋಟಿ ಹಾಗೂ ಕಲಬುರಗಿ ಜಿಲ್ಲೆಯ 2 ಕೋಟಿ ರೂ. ಸರ್ಕಾರಿ ಖಾತೆಗೆ ಹಿಂಪಡೆದಿದ್ದು, ಅಕ್ರಮಕ್ಕೆ ಆಸ್ಪದ ನೀಡುವುದಿಲ್ಲ. ಲೀಡ್ ಬ್ಯಾಂಕ್‌ಗಳ ಜತೆ ಚರ್ಚಿಸಿ ಸುದೀರ್ಘ ಕಾಲದ ಸಮಸ್ಯೆಗೆ ಮುಕ್ತಿ ನೀಡಲಾಗುವುದು. ಬಸ್ ಸಂಚಾರವಿಲ್ಲದ ಗ್ರಾಮೀಣ ಭಾಗದಲ್ಲಿ ರಸ್ತೆ ನಿರ್ಮಿಸಿ ಬಸ್ ಓಡಿಸಲು ಕ್ರಮ ಕೈಗೊಳ್ಳಲಾಗುವುದು. ಸಿಎಂ ಡಿ.ಕೆ. ಶಿವಕುಮಾರ್ ಅವರ ಹೊಸ ಯೋಜನೆಯಾದ ವಿದ್ಯಾರ್ಥಿಗಳಿಗೆ ಬಸ್ ಪಾಸ್ ವಿತರಣೆಯೂ ಯಶಸ್ವಿಯಾಗಿದ್ದು, ಜಿಲ್ಲೆಯಲ್ಲಿ 1,85,485 ದಾಖಲೆಯ ಪಾಸ್ ವಿತರಿಸಲಾಗಿದೆ ಎಂದು ಹೇಳಿದರು.

# ನಿಂತಿದ್ದ ಲಾರಿಗೆ ಕಾರು ಡಿಕ್ಕಿ: ಮೂವರ ದುರ್ಮರಣ

ರಾಣೆಬೆನ್ನೂರು, ಆ.20: ರಸ್ತೆ ಬದಿ ನಿಂತಿದ್ದ ಲಾರಿಗೆ ವೇಗವಾಗಿ ಬಂದ ಕಾರು ಡಿಕ್ಕಿ ಹೊಡೆದು ಮೂವರು ಸ್ಥಳದಲ್ಲೇ ಮೃತಪಟ್ಟಿದ್ದು, ಮೂವರು ಗಾಯಗೊಂಡಿರುವ ದಾರುಣ ಘಟನೆ ರಾಣೇಬೆನ್ನೂರು ತಾಲೂಕಿನ ಚಳಗೇರಿ ಟೋಲ್ ಬಳಿ ನಡೆದಿದೆ. ದಾವಣಗೆರೆಯ ನಿಟವಳ್ಳಿ ಮೌನೇಶ್ವರ ಬಡಾವಣೆ ನಿವಾಸಿಗಳಾದ ಸಿದ್ದಾರ್ಥ (27), ಹಸನ್ಮುಖಿ (29) ಹಾಗೂ ಯಶೋಧಾ ಬಾಯಿ (51) ಮೃತಪಟ್ಟವರು. ಅಪಘಾತದಲ್ಲಿ ಸೌಂದರ್ಯ (26), ಸಿಂಧು (24) ಹಾಗೂ ಒಂದು ವರ್ಷದ ಮಗು ಕಶ್ವಶ್ರೀ ಗಾಯಗೊಂಡಿದ್ದಾರೆ. ಗಾಯಾಳುಗಳನ್ನು ದಾವಣಗೆರೆಯ ಎಸ್.ಎಸ್.ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಲಾಗುತ್ತಿದೆ. ರಾಣೇಬೆನ್ನೂರಿನಿಂದ ದಾವಣಗೆರೆ ಕಡೆಗೆ ತೆರಳುತ್ತಿದ್ದ ಚಳಗೇರಿ ಟೋಲ್ ಬಳಿ ನಿಂತಿದ್ದ ಲಾರಿಗೆ ಕಾರುಡಿಕ್ಕಿ ಹೊಡೆದು ಈ ದುರ್ಘಟನೆ ಸಂಭವಿಸಿದೆ.

# ಸಂಕಲ್ಪ ದಿನಾಚರಣೆ ಅಂಗವಾಗಿ ವಿಶ್ವ ಹಿಂದೂ ಪರಿಷತ್‌ನಿಂದ ಭವ್ಯ ಪಂಜಿನ ಮೆರವಣಿಗೆ



**ರಾಯಚೂರು, ಆ. 20:** ವಿಶ್ವ ಹಿಂದೂ ಪರಿಷತ್ ಹಾಗೂ ಬಜರಂಗ ದಳದ ವತಿಯಿಂದ ಅಖಂಡ ಭಾರತ ಸಂಕಲ್ಪ ದಿನಾಚರಣೆ ಅಂಗವಾಗಿ ನಗರದಲ್ಲಿ ನಗರದಲ್ಲಿ ಬುಧವಾರ ರಾತ್ರಿ ಪಂಜಿನ ಮೆರವಣಿಗೆ ನಡೆಸಲಾಯಿತು.

ಇಲ್ಲಿನ ಚಂದ್ರಮೌಳೇಶ್ವರ ವೃತ್ತದಿಂದ ಆರಂಭಗೊಂಡ ಮೆರವಣಿಗೆ ಭಗತ್‌ಸಿಂಗ್ ವೃತ್ತದವರೆಗೆ ಸಾಗಿತು. ಮೆರವಣಿಗೆಯಲ್ಲಿ ಕಾರ್ಯಕರ್ತರು 'ಜೈ ಜೈ ಶ್ರೀರಾಮ್', 'ಜೈ ಜೈ ಹನುಮ', 'ಜೈ ಜೈ ಮಾತಾ', 'ಭಾರತ ಮಾತಾ', 'ಜೋರ್ ಸೆ ಬೋಲೊ ಹಿಂದೂಸ್ತಾನ್ ಜಿಂದಾಬಾದ್' ಸೇರಿದಂತೆ ವಿವಿಧ ಘೋಷಣೆಗಳನ್ನು ಕೂಗಿ ಗಮನ ಸೆಳೆದರು.

'ಸಿಡಿದೇಳಲಿ ಹಿಂದುತ್ವದ ಕಣ ಕಣ, ಒಂದು ಗೂಡಲಿ ಭಾರತದ ಜನಮನ' ಎಂಬ ಘೋಷಣೆಗಳೂ ಮೆರವಣಿಗೆಯಲ್ಲಿ ಮೊಳಗಿದವು. ಭಾಗವಹಿಸಿದ್ದವರು ಭಾರತ ಮಾತೆಯ ಭಾವಚಿತ್ರ ಹಾಗೂ ವಿವಿಧ ಬ್ಯಾನರ್‌ಗಳನ್ನು ಹಿಡಿದು ಮೆರವಣಿಗೆಯಲ್ಲಿ ಸಾಗಿದರು.

# ಉದ್ಯಮಿ ಮಾಲಾ ಕಣ್ಣಿಗೆ ಜನ್ಮ ದಿನದ ಸನ್ಮಾನದಲ್ಲಿ ಸುರೇಶ್ ಬಡಿಗೇರ್ ಹೇಳಿಕೆ

### ಸೇವೆ ಜೀವನ ತತ್ವವಾದಾಗ ಬದುಕು ಸಾರ್ಥಕ



**ಕಲಬುರಗಿ, ಆ.20–** ಸೇವೆಯೇ ಜೀವನ ತತ್ವ ಮಾಡಿ ಜನಮುಖಿಯಾದಾಗ ಮನುಷ್ಯ ಜೀವನ ಸಾರ್ಥಕವಾಗುತ್ತದೆ ಎಂದು ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಮಾಜಿ ಸದಸ್ಯರಾದ ಸುರೇಶ ಬಡಿಗೇರ ಅಭಿಪ್ರಾಯಪಟ್ಟರು.

ಕಲಬುರಗಿಯ ಹೋಟೆಲ್, ವಸತಿ ಮತ್ತು ಬೇಕರಿ ಮಾಲೀಕರ ಸಂಘದ ಆಶ್ರಯದಲ್ಲಿ ಆಗಸ್ಟ್ 18ರಂದು ಮಂಗಳವಾರ ನಗರದ ಸಾರ್ವಜನಿಕ ಉದ್ಯಾನವನದ ಶ್ರೀ ಯಾತ್ರಿಕ ನಿವಾಸ ಸಭಾಂಗಣದಲ್ಲಿ 4 ಚಕ್ರ ಚಾರಿಟೇಬಲ್ ಟ್ರಸ್ಟ್ ನ ಮುಖ್ಯಸ್ಥೆ ಹಾಗು ಉದ್ಯಮಿ ಮಾಲಾ ಕಣ್ಣಿ ಅವರಿಗೆ ಹುಟ್ಟುಹಬ್ಬದ ನಿಮಿತ್ತ ನಡೆದ ಅಭಿನಂದನಾ ಸಮಾರಂಭದಲ್ಲಿ ಮಾತನಾಡಿ ಬಡತನದಲ್ಲಿ ಹುಟ್ಟಿ ಛಲದಿಂದ ಬದುಕು ಮಾಡಿ ಸಮಾಜದ ನೋವಿಗೆ ಧ್ವನಿಯಾಗಿ ತಾಯಿಯ ಮಮತೆ ತೋರಿ ಸೇವೆಯ ಬಾಳಿನಿಂದ ಎಲ್ಲರಿಗೂ ಪ್ರೀತಿ ಪಾತ್ರರಾಗಿದ್ದಾರೆ ಎಂದು ಬಡಿಗೇರ ಹೇಳಿದರು.

ಬೇಕರಿ ಉದ್ಯಮದ ಜೊತೆಗೆ ಸಮಾಜ ಸೇವೆಗೆ ತೊಡಗಿದ ಮಾಲಾ ಅವರ ವ್ಯಕ್ತಿತ್ವ ಯುವಕರಿಗೆ ಮಾದರಿ.ಸಮಾಜದ ಋಣ ತೀರಿಸಲು ಅವರ ಸೇವೆ ಎಲ್ಲರಿಗೂ ಪ್ರೇರಣೆಯಾಗಲಿ ಎಂದು ಪ್ರದೇಶ ಹೋಟೆಲ್ ಅಸೋಸಿಯೇಷನ್ ಸದಸ್ಯ ಡಾ ಸದಾನಂದ ಪೆರ್ಲ ಹೇಳಿದರು. ಜಿಲ್ಲಾ ಹೋಟೆಲ್ ಸಂಘದ ಅಧ್ಯಕ್ಷ ನರಸಿಂಹ ಮೆಂಡನ್ ಮಾತನಾಡಿ ಸಂಘಕ್ಕೆ ಮಾಲಾ ಅವರು ದೊಡ್ಡ ಶಕ್ತಿ ಹಾಗೂ ಅವರ ಸಮಾಜ ಸೇವೆಯಿಂದ ಎಲ್ಲ ಉದ್ಯಮಿಗಳಿಗೆ ಕೀರ್ತಿ ಬಂದಿದೆ ಎಂದರು. ಸಮಾಜ ಸೇವಾ ಕಾರ್ಯದಲ್ಲಿ ಯಶಸ್ಸು ಗಳಿಸುವಲ್ಲಿ ಉದ್ಯಮಿ ಬಂಧುಗಳ ಮತ್ತು ಸಾರ್ವಜನಿಕರ ಪೂರ್ಣ ಸಹಕಾರ ಬೆನ್ನ ಹಿಂದಿನ ಶಕ್ತಿಯಾಗಿದೆ ಎಂದು ಮಾಲಾ ಕಣ್ಣಿ ಹೇಳಿದರು.ಸಂಘದ ಗೌರವಾಧ್ಯಕ್ಷ ರಾಜಶೇಖರ ಶೆಳ್ಳಗಿ ಅಧ್ಯಕ್ಷತೆ ವಹಿಸಿದ್ದರು.ಕರ್ನಾಟಕ ಪ್ರದೇಶ ಹೋಟೆಲ್ ಅಸೋಸಿಯೇಷನ್ ಉಪಾಧ್ಯಕ್ಷ ಸತ್ಯನಾಥ ಶೆಟ್ಟಿ, ಶಿವರಾಜ್ ಕೋಟ್ಯಾನ್, ಗಿರಿಧರ ಭಟ್, ಪ್ರಶಾಂತ ಶೆಟ್ಟಿ,ಅಂಬುಜಾ ಎಂ ಡಿ, ದೀಪಕ್ ರಾಯ್ಕರ್,

ಮೊಯಿನುದ್ದೀನ್, ಅನಿಲ್ ಸಿಂದಗಿ, ಶರಣು ಪಾಟೀಲ್ ರಾಜಶೇಖರ ಪಾಟೀಲ್ ವಿಜಯಲಕ್ಷ್ಮೀ, ಪೂರ್ಣಿಮಾ, ಸುನಿಲ್ ಶೆಟ್ಟಿ, ಚಂದ್ರಶೇಖರ ಶೆಟ್ಟಿ ಇದ್ದರು. ಮಹಾಕೀರ್ತಿ ಶೆಟ್ಟಿ ಸ್ವಾಗತಿಸಿ ನಿರೂಪಿಸಿದರು. ಹುಟ್ಟುಹಬ್ಬದ ನಿಮಿತ್ತ ಕೇಕ್ ಕತ್ತರಿಸಿ ಸಂಭ್ರಮಿಸಲಾಯಿತು.

# ಬೀದರ್ ಕೃಷ್ಣಮೃಗ ಬೇಟೆ ಪ್ರಕರಣ: ಬಂಧಿತರ ಸಂಖ್ಯೆ ಆರಕ್ಕೆ ಏರಿಕೆ



**ಬೀದರ್, ಆ. 20:** ತಾಲ್ಲೂಕಿನ ಚೊಂಡಿ–ಮಮದಾಪುರ ಹುಲ್ಲುಗಾವಲು ಪ್ರದೇಶದಲ್ಲಿ ಕೃಷ್ಣಮೃಗ ಬೇಟೆಯಾಡಿದ ಪ್ರಕರಣ ಸಂಬಂಧ ಈಗಾಗಲೇ ಮೂವರನ್ನು ಬಂಧಿಸಿದ್ದು, ಅನಂತರ ಈಗ ಮತ್ತೆ ಮೂವರನ್ನು ಅರಣ್ಯ ಇಲಾಖೆಯವರು ಬಂಧಿಸಿದ್ದಾರೆ. ಇದರೊಂದಿಗೆ ಬಂಧಿತರ ಸಂಖ್ಯೆ ಆರಕ್ಕೆ ಏರಿದೆ.

ಕಳೆದ ಸೋಮವಾರ ಕೃಷ್ಣಮೃಗ ಬೇಟೆ ಪ್ರಕರಣ ನಡೆದಿತ್ತು. ಕೃಷ್ಣಮೃಗದ ಮೇಲೆ ಗುಂಡು ಹಾರಿಸಿದ್ದರಿಂದ ಚೊಂಡಿ ಹಾಗೂ ಮಮದಾಪುರ ತಾಂಡಾದ ಗ್ರಾಮಸ್ಥರು ಅದರ ಸದ್ದು ಕೇಳಿ, ಮೂವರು ಆರೋಪಿಗಳನ್ನು ಹಿಂಬಾಲಿಸಿ ಹಿಡಿದು ಪೊಲೀಸರಿಗೆ ಒಪ್ಪಿಸಿದ್ದರು. ಅನಂತರ ಪ್ರಕರಣ ದಾಖಲಿಸಿಕೊಂಡು ತನಿಖೆ ನಡೆಸಿ, ಇನ್ನೂ ಮೂವರು ಆರೋಪಿಗಳನ್ನು ಬಂಧಿಸಲಾಗಿದೆ ಎಂದು ಉಪ ಅರಣ್ಯ ಸಂರಕ್ಷಣಾಧಿಕಾರಿ ಸುಮೀತ್ ಕುಮಾರ್ ಸುಭಾಷರಾವ್ ಪಾಟೀಲ ತಿಳಿಸಿದ್ದಾರೆ.

ತೆಲಂಗಾಣದ ಹೈದರಾಬಾದಿನ ಮೊಹಮ್ಮದ್ ನಸೀರ್ ಮೊಹಮ್ಮದ್ ಅಬ್ದುಲ್ ಹಾಮೇದ್, ಕಲಬುರಗಿ ಜಿಲ್ಲೆ ಚಿಂಚೋಳಿ ತಾಲ್ಲೂಕಿನ ಆರೀಫ್ ಖಾನ್ ಹಬೀಬ್ ಖಾನ್ ಹಾಗೂ ಮೊಹಮ್ಮದ್ ಹಾಜಿ ದಾದಾಪೀರ್ ಹಾಜಿ ಬಂಧಿತರು. ಘಟನೆ ನಡೆದ ದಿನ ಚಿಂಚೋಳಿಯ ಸೊಹೆಬ್ ಮಲ್ಲಿಕ್ ಮಸ್ತಾನ್ ಅಲಿ, ಹೈದರಾಬಾದಿನ ಅಬ್ದುಲ್ ಸಯೀದ್ ಅಬ್ದುಲ್ ಜಮೀಲ್ ಹಾಗೂ ಹಮೀದ್ ಉಜ್ಮಾನ್ ಮೊಹಮ್ಮದ್ ಹಾಮೇದ್ ಎಂಬುವರನ್ನು ಬಂಧಿಸಲಾಗಿತ್ತು ಎಂದು ವಿಷಯ ಹಂಚಿಕೊಂಡಿದ್ದಾರೆ.

ಆರೋಪಿಗಳ ಪತ್ತೆಗೆ ಅರಣ್ಯ ಇಲಾಖೆಯಿಂದ ವಿಶೇಷ ತಂಡವನ್ನು ರಚಿಸಲಾಗಿತ್ತು. ಬೀದರ್ ಹಾಗೂ ಕಲಬುರಗಿ ಜಿಲ್ಲಾ ಪೊಲೀಸರು, ತೆಲಂಗಾಣದ ಅರಣ್ಯ ಇಲಾಖೆಯ ಅಧಿಕಾರಿಗಳ ಸಹಕಾರದಿಂದ ಕಾರ್ಯಾಚರಣೆ ನಡೆಸಿ, ಮತ್ತೆ ಮೂವರನ್ನು ವಶಕ್ಕೆ ಪಡೆಯಲಾಗಿದೆ. ಕಲಬುರಗಿ ಜಿಲ್ಲೆಯ ಜಂಬಗಿಯ ಮೂವರು ಹಾಗೂ ತೆಲಂಗಾಣದ ಹೈದರಾಬಾದ್ ಮೂಲದ ಮೂವರು ವ್ಯಕ್ತಿಗಳು ಕೃತ್ಯದಲ್ಲಿ ಶಾಮಿಲಾಗಿದ್ದಾರೆ. ಅತ್ಯಾಧುನಿಕ ಲಾಂಗ್ ರೇಂಜ್ ರೈಫಲ್‌ಗಳನ್ನು ಹೊಂದಿರುವ ಕೆಲವರು ವನ್ಯಪ್ರಾಣಿಗಳನ್ನು ಬೇಟೆಯಾಡುತ್ತಿರುವುದು ಗಮನಕ್ಕೆ ಬಂದಿದೆ.

ಬೀದರ್ ಆರ್.ಎಫ್.ಒ. ಪ್ರವೀಣಕುಮಾರ ತನಿಖೆ ಮುಂದುವರೆಸಿದ್ದಾರೆ ಎಂದು ಮಾಹಿತಿ ಹಂಚಿಕೊಂಡಿದ್ದಾರೆ. ಬಸವಕಲ್ಯಾಣ ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿ ಮುನೀರ್ ಅಹ್ಮದ್ ಅವರ ನೇತೃತ್ವದಲ್ಲಿ ಬಸವಕಲ್ಯಾಣ ಆರ್.ಎಫ್.ಒ. ಶಿವಕುಮಾರ್ ರಾಠೋಡ, ಹುಮನಾಬಾದ್ ಆರ್.ಎಫ್.ಒ. ಪವನಕುಮಾರ ಧೂಳೆ, ಭಾಲ್ಕಿ ಡಿ.ಆರ್.ಎಫ್.ಒ. ಶಾಂತಕುಮಾರ ಅವರ ತಂಡ ಕಾರ್ಯಾಚರಣೆ ನಡೆಸಿ ಆರೋಪಿಗಳನ್ನು ಬಂಧಿಸಿದೆ. ಪ್ರಕರಣ ಸಂಬಂಧ ಎರಡು ಕಾರು ಹಾಗೂ ರೈಫಲ್ ಜಪ್ತಿ ಮಾಡಲಾಗಿದೆ ಎಂದು ತಿಳಿಸಿದ್ದಾರೆ.

ಕೃಷ್ಣಮೃಗವು ವನ್ಯಜೀವಿ ಸಂರಕ್ಷಣಾ ಕಾಯ್ದೆ 1972ರ ಅಡಿಯಲ್ಲಿ ಶೆಡ್ಯೂಲ್–1 ಸಂರಕ್ಷಿತ ವನ್ಯಜೀವಿಯಾಗಿದೆ. ಅದರ ಬೇಟೆ ಅಥವಾ ಹತ್ಯೆ ವನ್ಯಜೀವಿ ಸಂರಕ್ಷಣಾ ಕಾಯ್ದೆ 1972ರ ಸ್ಪಷ್ಟ ಉಲ್ಲಂಘನೆಯಾಗಿದೆ. ಅವುಗಳನ್ನು ಬೇಟೆಯಾಡಿದರೆ ಕಠಿಣ ಶಿಕ್ಷೆಗೆ ಕಾನೂನಿನಲ್ಲಿ ಅವಕಾಶವಿದೆ. ಚೊಂಡಿ ಹಾಗೂ ಮಮದಾಪುರ ತಾಂಡಾದ ಜನರು ತಮ್ಮ ಸಾಹಸ ಹಾಗೂ ಸಮಯಪ್ರಜ್ಞೆ ಮೆರೆದು ಆರೋಪಿಗಳ ಬಂಧನಕ್ಕೆ ಸಹಕರಿಸಿರುವುದು ಶ್ಲಾಘನಾರ್ಹ.

ಯಾವುದೇ ವನ್ಯಜೀವಿ ಬೇಟೆ, ಅಕ್ರಮ ಬೇಟೆ ಅಥವಾ ವನ್ಯಜೀವಿಗಳಿಗೆ ಸಂಬಂಧಿಸಿದ ಕಾನೂನು ಬಾಹಿರ ಚಟುವಟಿಕೆಗಳು ಗಮನಕ್ಕೆ ಬಂದಲ್ಲಿ ಸಮೀಪದ ಅರಣ್ಯ ಇಲಾಖೆಯ ಅಧಿಕಾರಿಗಳು ಅಥವಾ ಸಿಬ್ಬಂದಿಯನ್ನು ಸಂಪರ್ಕಿಸಿ ಮಾಹಿತಿ ನೀಡಬೇಕು ಎಂದು ಮನವಿ ಮಾಡಿದ್ದಾರೆ.

## 30.21 ಲಕ್ಷ ಮೌಲ್ಯದ ಗಾಂಜಾ ಜಪ್ತಿ

**ಔರಾದ್ ತಾಲ್ಲೂಕಿನ ಖಂಡಿಕೇರಿ ಗ್ರಾಮದಲ್ಲಿ ರೈತರೊಬ್ಬರು ತಮ್ಮ ಹೊಲದಲ್ಲಿ ಬೆಳೆದ 30.21 ಲಕ್ಷ ಮೌಲ್ಯದ 100 ಗಾಂಜಾ ಗಿಡಗಳನ್ನು ಪೊಲೀಸರು ಪತ್ತೆ ಮಾಡಿ ಜಪ್ತಿ ಮಾಡಿದ್ದಾರೆ. ಈ ಸಂಬಂಧ ವ್ಯಕ್ತಿಯೊಬ್ಬನನ್ನು ಬಂಧಿಸಲಾಗಿದೆ. ಪಿಎಸ್‌ಐ ವಸೀಮ್ ಪಟೇಲ್ ಹಾಗೂ ಸಿಬ್ಬಂದಿ ಖಚಿತ ಮಾಹಿತಿ ಮೇರೆಗೆ ದಾಳಿ ಮಾಡಿ ಅಕ್ರಮವಾಗಿ ಬೆಳೆದಿದ್ದ ಹಸಿ ಗಾಂಜಾ ಗಿಡಗಳು ವಶಕ್ಕೆ ಪಡೆದಿದ್ದಾರೆ. ಇವುಗಳ ಒಟ್ಟು ತೂಕ 60 ಕೆ.ಜಿ. 430 ಗ್ರಾಂ ಇದ್ದು, ಇದರ ಅಂದಾಜು ಮೌಲ್ಯ 30.21 ಲಕ್ಷ ಆಗಿದೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪ್ರದೀಪ ಗುಂಟಿ ತಿಳಿಸಿದ್ದಾರೆ. ಈ ಕುರಿತು ಔರಾದ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.**

# ಬಳ್ಳಾರಿ ಕಾಂಗ್ರೆಸ್ ಕಚೇರಿಯಲ್ಲಿ ಅರಸು ಜಯಂತಿ ಆಚರಣೆ



**ಬಳ್ಳಾರಿ, ಆ. 20.** ಬಳ್ಳಾರಿ ನಗರ ಜಿಲ್ಲಾ ಕಾಂಗ್ರೆಸ್ ಸಮಿತಿಯ ವತಿಯಿಂದ, ಹಿಂದುಳಿದ ವರ್ಗಗಳ ನೇತಾರ, ಧೀಮಂತ ರಾಜಕಾರಣಿ ಮತ್ತು ಮಾಜಿ ಮುಖ್ಯಮಂತ್ರಿಗಳಾದ ದಿವಗಂತ ಡಿ.ದೇವರಾಜ ಅರಸು ರವರ ಮತ್ತು ಆಧುನಿಕ ಭಾರತ ನಿರ್ಮಾಣಕ್ಕೆ ಅಡಿಗಲ್ಲು ಹಾಕಿದ ಭಾರತದ ಡಿಜಿಟಲ್ ಕ್ರಾಂತಿಯ ಹರಿಕಾರ ಮಾಜಿ ಪ್ರಧಾನಿ ದಿವಗಂತ ರಾಜೀವ್ ಗಾಂಧಿಯವರ ಭಾವ ಚಿತ್ರಗಳಿಗೆ ಪುಷ್ಪಗಳನ್ನು ಹಾಕುವ ಮೂಲಕ ಜಿಲ್ಲಾ ಕಾಂಗ್ರೆಸ್ ಕಚೇರಿಯಲ್ಲಿ ವಿಜೃಂಭಣೆಯಿಂದ ಜಯಂತಿಯನ್ನು ಆಚರಿಸಲಾಯಿತು. ಈ ವೇಳೆ ಮುಖಂಡರುಗಳು ಮಹನೀಯರು ದೇಶಕ್ಕೆ ನೀಡಿದ ಕೊಡುಗೆಗಳನ್ನು ಸ್ಮರಿಸಿದರು.

ಈ ಸಂಧರ್ಭದಲ್ಲಿ ಜಿಲ್ಲಾ ಕಾಂಗ್ರೆಸ್ ಪಕ್ಷದ ಹಿರಿಯ ನಾಯಕರಾದ ಎಲ್. ಮಾರೆಣ್ಣ, ವೆಂಕಟೇಶ್ ಪ್ರಸಾದ್, ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ಹುಮಯೂನ್ ಖಾನ್, ಲಿಡ್ಕರ್ ಅಧ್ಯಕ್ಷ ಮುಂಡರಗಿ ನಾಗರಾಜ್, ಮಹಾಪೌರ ರಾದ ಪಿ.ಗಾದೆಪ್ಪ, ಡಿಸಿಸಿ ಕಾರ್ಯಾಧ್ಯಕ್ಷ ರಾದ ವಿಷ್ಣು ಬೋಯಪಾಟಿ, ಕೆ.ಶ್ರೀನಿ ವಾಸುಲು, ಚಿದಾನಂದಪ್ಪ, ಡಿಸಿಸಿ ಕಾರ್ಯದರ್ಶಿಗಳಾದ ವೈ.ಶ್ರೀನಿವಾಸುಲು, ವೆಂಕಟ ಲಕ್ಷ್ಮೀ ನಾರಾಯಣ, ಎರಕುಲ ಸ್ವಾಮಿ, ಕನೇಕಲ್ ಮೆಹಬೂಬ್ ಸಾಬ್, ಉಪಸ್ಥಿತರಿದ್ದರು.

# ಹಾರ್ಮುಜ್ ಜಲಸಂಧಿ ಮೂಲಕ ತೈಲ ಸಾಗಿಸಲು ಅಮೆರಿಕದಿಂದ ರಹಸ್ಯ ಹಡಗು ಕಾರಿಡಾರ್ ಸ್ಥಾಪನೆ

**ವಾಷಿಂಗ್ಟನ್, ಆ.20:** ಜಾಗತಿಕ ಮಾರುಕಟ್ಟೆಗಳಿಗೆ ತೈಲ ಹರಿಯುವಂತೆ ಮಾಡಲು ಅಮೆರಿಕ ರಹಸ್ಯವಾಗಿ ಹಾರ್ಮುಜ್ ಜಲಸಂಧಿಯ ಮೂಲಕ ಹಡಗು ಕಾರಿಡಾರ್ ಸ್ಥಾಪಿಸಿದೆ, ಅಮೆರಿಕ ನೇತೃತ್ವದ ಕಾರ್ಯಾಚರಣೆಯಡಿಯಲ್ಲಿ ಪ್ರತಿರಾತ್ರಿ 15 ರಿಂದ 20 ಟ್ಯಾಂಕರ್‌ಗಳು ಜಲಮಾರ್ಗವನ್ನು ಸಾಗಿಸುತ್ತವೆ ಎಂದು ಆಕ್ಸಿಯಾಸ್ ವರದಿ ಮಾಡಿದೆ, ಈ ಪ್ರಯತ್ನದ ಬಗ್ಗೆ ಪರಿಚಿತವಾಗಿರುವ ಇಬ್ಬರು ಯುಎಸ್ ಅಧಿಕಾರಿಗಳನ್ನು ಉಲ್ಲೇಖಿಸಿ. ಹಲವಾರು ವಾರಗಳಿಂದ ನಡೆಯುತ್ತಿರುವ ಈ ಕಾರ್ಯಾಚರಣೆಯು ಒಮಾನ್ ಕರಾವಳಿಯಲ್ಲಿ ದಕ್ಷಿಣ ಕಾಲುವೆ ಬಳಸುತ್ತದೆ. ಕಾರಿಡಾರ್ ಪ್ರಸ್ತುತ ದಿನಕ್ಕೆ ಸುಮಾರು 10 ಮಿಲಿಯನ್ ಬ್ಯಾರೆಲ್ ತೈಲವನ್ನು ಕೊಲ್ಲಿಯನ್ನು ಬಿಡಲು ಅನುವು ಮಾಡಿಕೊಡುತ್ತದೆ ಎಂದು ಯುಎಸ್ ಅಧಿಕಾರಿಗಳು ತಿಳಿಸಿದ್ದಾರೆ, ಇದು ಯುದ್ಧದ ಮೊದಲು ಜಲಸಂಧಿಯ ಮೂಲಕ ಸಾಗಿಸಲಾದ ಸರಿಸುಮಾರು ಅರ್ಧದಷ್ಟು ಪ್ರಮಾಣದಲ್ಲಿದೆ. ಸಂಘರ್ಷವು ಕಚ್ಚಾ ತೈಲ ಬೆಲೆಗಳು ಏರಿಕೆಗೆ ಕಾರಣವಾದ ನಂತರ ಜಾಗತಿಕ ತೈಲ ಸರಬರಾಜಿನಲ್ಲಿನ ಅಡಚಣೆಗಳನ್ನು ಕಡಿಮೆ ಮಾಡಲು ಈ ಕಾರ್ಯಾಚರಣೆ ಸಹಾಯ ಮಾಡುತ್ತದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಅಮೆರಿಕ ಮಿಲಿಟರಿ ಲೋಡ್ ಮಾಡಲಾದ ಟ್ಯಾಂಕರ್‌ಗಳನ್ನು ಜಲಮಾರ್ಗದ ಮೂಲಕ ಹಿಂತಿರುಗುವ ಮೊದಲು ಪ್ರಾದೇಶಿಕ ಉತ್ಪಾದಕರಿಂದ ತೈಲವನ್ನು ಸಂಗ್ರಹಿಸಲು ಅರಬ್ಬಿ ಸಮುದ್ರದಿಂದ ಪರ್ಷಿಯನ್ ಕೊಲ್ಲಿಗೆ ಪ್ರಯಾಣಿಸುವ ಖಾಲಿ ಟ್ಯಾಂಕರ್‌ಗಳಿಗೆ ಸಹಾಯ ಮಾಡುತ್ತಿದೆ.



ಅಧಿಕಾರಿಗಳ ಪ್ರಕಾರ, ಪ್ರಾದೇಶಿಕ ಗಲ್ಫ್ ಪಾಲುದಾರರ ಸಹಕಾರದೊಂದಿಗೆ ಉತ್ತರ ಕೆರೊಲಿನಾದ ಫೋರ್ಟ್ ಬ್ರಾಗ್‌ನಿಂದ ಕಾರ್ಯನಿರ್ವಹಿಸುವ ಕಾರ್ಯಪಡೆಯು ಈ ಕಾರ್ಯಾಚರಣೆಯನ್ನು ಸಂಯೋಜಿಸುತ್ತದೆ. ಪ್ರತಿ ರಾತ್ರಿ, ಹಡಗುಗಳನ್ನು ಪ್ರತ್ಯೇಕ ಹೊರಹೋಗುವ ಮತ್ತು ಒಳಬರುವ ಬೆಂಗಾವಲುಗಳಾಗಿ ಸಂಘಟಿಸಲಾಗುತ್ತದೆ ಮತ್ತು ಗುಪ್ತ ಮಿಲಿಟರಿ ಮಾರ್ಗದರ್ಶನದ ಆಧಾರದ ಮೇಲೆ ದಕ್ಷಿಣ ಚಾನಲ್ ಅನ್ನು ಬಳಸಲು ಸೂಚಿಸಲಾಗುತ್ತದೆ. ಇರಾನಿನ ಡ್ರೋನ್ ಮತ್ತು ಕ್ರೂಸ್ ಕ್ಷಿಪಣಿಗಳ ವಿರುದ್ಧ ರಕ್ಷಣೆ ನೀಡುವ ಅಮೆರಿಕ ವಾಯುಪಡೆಯ ಫೈಟರ್ ಜೆಟ್‌ಗಳಿಂದ ಇದು ದಾಳಿಗೆ ಸಹಾಯ ಮಾಡಲ್ಪಟ್ಟಿದೆ ಎಂದು ವರದಿಯಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಇರಾನಿನ ರಾಡಾರ್ ಮತ್ತು ಕಡಲ ಕಣ್ಗಾವಲು ವ್ಯವಸ್ಥೆಗಳನ್ನು ಗುರಿಯಾಗಿಸಿಕೊಂಡು ಎರಡು ವಾರಗಳ ಕಾಲ ನಡೆದ ಅಮೆರಿಕ ಸೆಂಟ್ರಲ್ ಕಮಾಂಡ್ ಕಾರ್ಯಾಚರಣೆಯ ನಂತರ ಈ ಕಾರ್ಯಾಚರಣೆ ನಡೆಯಿತು, ಅಧಿಕಾರಿಗಳ ಪ್ರಕಾರ ದಕ್ಷಿಣ ಚಾನಲ್ ಮೂಲಕ ಸಾಗಣೆಯನ್ನು ಮೇಲ್ವಿಚಾರಣೆ ಮಾಡುವ ಟೆಹ್ರಾನ್‌ನ ಸಾಮರ್ಥ್ಯವನ್ನು ಕಡಿಮೆ ಮಾಡಿದೆ. ಇರಾನ್ ಈಗ ಇಸ್ಲಾಮಿಕ್ ರೆವಲ್ಯೂಷನರಿ ಗಾರ್ಡ್ ಕಾರ್ಪ್ಸ್ ನಿರ್ವಹಿಸುವ ಸಣ್ಣ ದೋಣಿಗಳಲ್ಲಿ ಸೀಮಿತ ಸಂಖ್ಯೆಯ ಪುನಃಸ್ಥಾಪಿಸಲಾದ ರಾಡಾರ್ ವ್ಯವಸ್ಥೆ ಮತ್ತು ಸ್ಪಾಟರ್‌ಗಳನ್ನು ಅವಲಂಬಿಸಿದೆ ಎಂದು ಅವರು ಹೇಳಿದರು.

ಪರಿಣಾಮವಾಗಿ, ಇರಾನಿನ ಪಡೆಗಳು ಹಡಗುಗಳು ಪ್ರಯಾಣಿಸುತ್ತಿರಬಹುದು ಎಂದು ನಂಬುವ ಪ್ರದೇಶಗಳ ಕಡೆಗೆ ಡ್ರೋನ್ ಮತ್ತು ಕ್ರೂಸ್ ಕ್ಷಿಪಣಿಗಳನ್ನು ಹೆಚ್ಚಾಗಿ ಹಾರಿಸುತ್ತಿವೆ. ಅಮೆರಿಕ ಪಡೆಗಳು ಆ ದಾಳಿಗಳಲ್ಲಿ ಹಲವಾರು ದಾಳಿಗಳನ್ನು ತಡೆದಿವೆ. ಈ ವಾರದ ಆರಂಭದಲ್ಲಿ ಅಮೇರಿಕನ್ ಪಡೆಗಳು ಎಂಟು ಇರಾನಿನ ಡ್ರೋನ್ ಮತ್ತು ಎರಡು ಕ್ರೂಸ್ ಕ್ಷಿಪಣಿಗಳನ್ನು ಹೊಡೆದುರುಳಿಸಿವೆ ಎಂದು ಅಮೆರಿಕ ಅಧಿಕಾರಿಯೊಬ್ಬರು ಹೇಳಿದ್ದಾರೆ. ಜಲಸಂಧಿಯ ಮೂಲಕ ತೈಲ ಹರಿವು ಕ್ರಮೇಣ ಹೆಚ್ಚಾಗಿದೆ, ದೈನಂದಿನ ರಫ್ತು 10 ದಶಲಕ್ಷ ಬ್ಯಾರಲ್‌ಗಳನ್ನು ತಲುಪುತ್ತಿದೆ ಎಂದು ಅಮೆರಿಕ ಅಧಿಕಾರಿಗಳು ಹೇಳಿದ್ದಾರೆ.

ಇತ್ತೀಚಿನ ವಾರಗಳಲ್ಲಿ ಕೆಲವು ದಿನಗಳಲ್ಲಿ, ಕೊಲ್ಲಿಯಿಂದ 15ರಿಂದ 20 ದಶಲಕ್ಷ ಬ್ಯಾರಲ್‌ಗಳನ್ನು ಹೊರಗೆ ಸಾಗಿಸಲಾಗಿದೆ. "ಹಾರ್ಮುಜ್ ಜಲಸಂಧಿಯಿಂದ ಅಪಾರ ಪ್ರಮಾಣದ ತೈಲ ಹೊರಬರುತ್ತಿದೆ" ಎಂದು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಬುಧವಾರ ಆಕ್ಸಿಯೋಸ್ಗೆ ತಿಳಿಸಿದರು. ವಾಷಿಂಗ್ಟನ್ ಪ್ರಸ್ತುತ ಇರಾನ್ನೊಂದಿಗೆ ಮಾತುಕತೆ ನಡೆಸುತ್ತಿಲ್ಲ ಎಂದು ಟ್ರಂಪ್ ಹೇಳಿದ್ದಾರೆ, ಟೆಹ್ರಾನ್ ಮಾತುಕತೆಗಳಲ್ಲಿ "ಸಮಯ ವ್ಯರ್ಥ" ಮಾಡುತ್ತಿದೆ ಎಂದು ಆರೋಪಿಸಿದ್ದಾರೆ. "ಇರಾನಿಯನ್ನರು ಇನ್ನೂ ಕೆಲವು ಹೋರಾಟವನ್ನು ಹೊಂದಿದ್ದಾರೆ, ಆದರೆ ಒಟ್ಟಾರೆಯಾಗಿ ಅವರು ಸ್ವತಃ ಶೆಲ್ ಆಗಿದ್ದಾರೆ" ಎಂದು ಟ್ರಂಪ್ ಹೇಳಿದರು.

# ಅಮೆರಿಕೆ ಸಾಲವು ನಿರೀಕ್ಷೆಗಿಂತ ಬಹಳ ಮುಂಚೆಯೇ 40 ಟ್ರಿಲಿಯನ್ ಡಾಲರ್ ಮೈಲಿಗಲ್ಲು ತಲುಪಿದೆ

**ವಾಷಿಂಗ್ಟನ್, ಆ.20:** ತನ್ನ ರಾಷ್ಟ್ರೀಯ ಸಾಲವು ದಾಖಲೆಯ $40 ಟ್ರಿಲಿಯನ್ ತಲುಪಿರುವುದರಿಂದ ಯುಎಸ್ ಆರ್ಥಿಕ ಕುಸಿತಕ್ಕೆ ಆಳವಾಗಿ ಹೋಗುತ್ತಿದೆ. ಫೆಡರಲ್ ಸಾಲವು ಮಂಗಳವಾರ 40 ಟ್ರಿಲಿಯನ್ ಡಾಲರ್ ಗಡಿಯನ್ನು ದಾಟಿದೆ ಎಂದು ಖಜಾನೆ ಇಲಾಖೆ ಹೇಳಿದೆ, ಇದು ಹಿಂದಿನ ಮುನ್ಸೂಚನೆಗಳಿಗೆ ಹೋಲಿಸಿದರೆ ಬಹಳ ಬೇಗ ತಲುಪಿದ ಮೈಲಿಗಲ್ಲು. ಕಾಂಗ್ರೆಸ್ಸಿನ ಬಜೆಟ್ ಕಚೇರಿ ಮೇ 2023 ರಲ್ಲಿ 2028 ರ ಆರ್ಥಿಕ ವರ್ಷಕ್ಕಿಂತ ಮೊದಲು ಮಿತಿಯನ್ನು ದಾಟುವುದಿಲ್ಲ ಎಂದು ಅಂದಾಜಿಸಿತ್ತು. ವಾಷಿಂಗ್ಟನ್‌ನ ಸಾಲವು ಕೇವಲ ಐದು ತಿಂಗಳ ಅವಧಿಯಲ್ಲಿ 1 ಟ್ರಿಲಿಯನ್ ಡಾಲರ್ ಹೆಚ್ಚಾಗಿದೆ, ಆದರೆ ಫೆಡರಲ್ ಖರ್ಚು ಸರ್ಕಾರದ ಆದಾಯವನ್ನು ಮೀರುತ್ತಲೇ ಇದೆ.

ಸೆಪ್ಟೆಂಬರ್ 30 ರಂದು ಕೊನೆಗೊಳ್ಳುವ ಪ್ರಸಕ್ತ ಹಣಕಾಸು ವರ್ಷದ ಮೊದಲ 10 ತಿಂಗಳುಗಳಲ್ಲಿ ಯುಎಸ್ 1.8 ಟ್ರಿಲಿಯನ್ ಡಾಲರ್ ಬಜೆಟ್ ಕೊರತೆಯನ್ನು ದಾಖಲಿಸಿದೆ ಎಂದು ಸಿಎನ್‌ಎನ್ ವರದಿ ಮಾಡಿದೆ. ಪೀಟರ್ ಜಿ ಪೀಟರ್ಸನ್ ಫೌಂಡೇಶನ್‌ನ ಸಿಇಒ ಮೈಕೆಲ್ ಪೀಟರ್ಸನ್, ಆರು ವರ್ಷಗಳಲ್ಲಿ ಸಾಲವು 50 ಟ್ರಿಲಿಯನ್‌ಗೆ ಏರಬಹುದು ಎಂದು ಎಚ್ಚರಿಸಿದ್ದಾರೆ.

"ನಾವು ನಿಜವಾಗಿಯೂ ನಮ್ಮ ಆರ್ಥಿಕತೆ ಮತ್ತು ನಮ್ಮ ದೇಶದ ಭವಿಷ್ಯವನ್ನು ಅಪಾಯಕ್ಕೆ ಸಿಲುಕಿಸುತ್ತಿದ್ದೇವೆ" ಎಂದು ಅವರು ಹೇಳಿದರು. ಹಲವಾರು ದೀರ್ಘಕಾಲೀನ ಅಂಶಗಳು ಈ ಹೆಚ್ಚಳಕ್ಕೆ ಕಾರಣವಾಗುತ್ತಿವೆ, ಇದರಲ್ಲಿ ವಯಸ್ಸಾದ ಜನಸಂಖ್ಯೆಯು ಸಾಮಾಜಿಕ



ಭದ್ರತೆ ಮತ್ತು ಮೆಡಿಕೇರ್ ಮೇಲೆ ಹೆಚ್ಚಿನ ಒತ್ತಡವನ್ನು ಬೀರುತ್ತಿದೆ, ಪ್ರತಿದಿನ 10,000 ಬೇಬಿ ಬೂಮರ್‌ಗಳು ನಿವೃತ್ತರಾಗುತ್ತಿದ್ದಾರೆ ಮತ್ತು ಫಲಾನುಭವಿಗಳು ಹೆಚ್ಚು ಕಾಲ ಬದುಕುತ್ತಿದ್ದಾರೆ. ತೆರಿಗೆ ಕಡಿತಗಳು ಮತ್ತು ಹೆಚ್ಚಿನ ಸರ್ಕಾರಿ ಖರ್ಚು ಕೂಡ ಪ್ರಮುಖ ಕೊಡುಗೆ ನೀಡಿವೆ, 2017 ರ ತೆರಿಗೆ ಕಡಿತ ಮತ್ತು ಉದ್ಯೋಗ ಕಾಯ್ದೆ, ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ ವಿವಾದಾತ್ಮಕ 2025 ಒನ್ ಬಿಗ್ ಬ್ಯೂಟಿಫುಲ್ ಬಿಲ್ ಆಕ್ಟ್, ಹಾಗೆಯೇ ಟ್ರಂಪ್ ಮತ್ತು ಮಾಜಿ ಅಧ್ಯಕ್ಷ ಜೋ ಬಿಡೆನ್ ಅವರ ನೇತೃತ್ವದ ಸತತ ಕೋವಿಡ್–19 ಪರಿಹಾರ ಪ್ಯಾಕೇಜ್‌ಗಳು ಕಾಲಾನಂತರದಲ್ಲಿ ಫೆಡರಲ್ ಸಾಲಕ್ಕೆ ಟ್ರಿಲಿಯನ್‌ಗಟ್ಟಲೆ ಡಾಲರ್‌ಗಳನ್ನು ಸೇರಿಸುವ ನಿರೀಕ್ಷೆಯಿದೆ. ಹೆಚ್ಚುವರಿಯಾಗಿ, ಏರುತ್ತಿರುವ ಬಡ್ಡಿದರಗಳು ಸಮಸ್ಯೆಯನ್ನು ಮತ್ತಷ್ಟು ಹೆಚ್ಚಿಸಿವೆ. ಐತಿಹಾಸಿಕವಾಗಿ ಕಡಿಮೆ ಸಾಲ–ವೆಚ್ಚಗಳ ವರ್ಷಗಳ ನಂತರ, ಸಾಂಕ್ರಾಮಿಕ–ಯುಗದ ಹಣದುಬ್ಬರವನ್ನು ಎದುರಿಸಲು ಫೆಡರಲ್ ರಿಸರ್ವ್ ದರಗಳನ್ನು ಹೆಚ್ಚಿಸಿತು, ಸರ್ಕಾರದ ಸಾಲವನ್ನು ಪೂರೈಸುವ ವೆಚ್ಚವನ್ನು ತೀವ್ರವಾಗಿ ಹೆಚ್ಚಿಸಿತು.

ಬಡ್ಡಿ ಪಾವತಿಗಳು ಈ ಹಣಕಾಸು ವರ್ಷದಲ್ಲಿ 1 ಟ್ರಿಲಿಯನ್ ಮೀರುವ ನಿರೀಕ್ಷೆಯಿದೆ, ಇದು ದಾಖಲೆಯ ಮಟ್ಟವಾಗಿದೆ. ಯುಎಸ್ ತನ್ನ ಸಾಲದ ಅರ್ಹತೆಯ ಬಗ್ಗೆ ಹೆಚ್ಚುತ್ತಿರುವ ಕಳವಳಗಳನ್ನು ಎದುರಿಸುತ್ತಿದೆ.

ಮೂಡೀಸ್ 2025 ರಲ್ಲಿ ಅಮೆರಿಕ ಸಾರ್ವಭೌಮ ಸಾಲವನ್ನು ಕಡಿಮೆ ಮಾಡಿತು, ದೇಶದ ಕೊನೆಯ ಉನ್ನತ ಶ್ರೇಣಿಯ ಕ್ರೆಡಿಟ್ ರೇಟಿಂಗ್ ತೆಗೆದುಹಾಕಿತು. ಆದಾಗ್ಯೂ, ಫ್ರಾನ್ಸ್ ಮತ್ತು ಜಪಾನ್ ಸೇರಿದಂತೆ ಪ್ರಮುಖ ಆರ್ಥಿಕತೆಗಳಿಗಿಂತ ಅಮೆರಿಕದ ಸಾಲವು ಉನ್ನತ ಮಟ್ಟದಲ್ಲಿದೆ. ಹಣಕಾಸಿನ ಒತ್ತಡವು ಅಮೆರಿಕಕ್ಕೆ ಮಾತ್ರ ವಿಶಿಷ್ಟವಲ್ಲ, ಏಕೆಂದರೆ ಯುಕೆ, ಫ್ರಾನ್ಸ್, ಜರ್ಮನಿ ಮತ್ತು ಜಪಾನ್ಗಳಲ್ಲಿ ಸರ್ಕಾರಿ ಬಾಂಡ್ ಇಳುವರಿಗಳು ಸಹ ಬಹು–ವರ್ಷಗಳ ಗರಿಷ್ಠ ಮಟ್ಟಕ್ಕೆ ಅಥವಾ ಹತ್ತಿರಕ್ಕೆ ಏರಿವೆ, ಏಕೆಂದರೆ ಹೂಡಿಕೆದಾರರು ಹೆಚ್ಚಿನ ಖರ್ಚು, ಕೊರತೆಗಳು ಮತ್ತು ಸಾಲದ ಅವಶ್ಯಕತೆಗಳನ್ನು ನಿರ್ಣಯಿಸುತ್ತಾರೆ.

# ಉತ್ತರ ಕೊರಿಯಾ 120 ಪರಮಾಣು ಸಿಡಿತಲೆ ಹೊಂದಿರುವ ಸಾಧ್ಯತೆ ದಕ್ಷಿಣ ಕೊರಿಯಾದ ರಕ್ಷಣಾ ಮುಖ್ಯಸ್ಥ

**ಸಿಯೋಲ್, ಆ.20:** ದಕ್ಷಿಣ ಕೊರಿಯಾದ ರಕ್ಷಣಾ ಸಚಿವ ಅಹ್ನ್ ಗ್ಯು–ಬ್ಯಾಕ್ ಗುರುವಾರ ಉತ್ತರ ಕೊರಿಯಾ 80 ರಿಂದ 120 ಪರಮಾಣು ಸಿಡಿತಲೆಗಳನ್ನು ಹೊಂದಿರಬಹುದು ಎಂದು ದಕ್ಷಿಣ ಕೊರಿಯಾದ ಸಂಶೋಧನಾ ಸಂಸ್ಥೆಗಳು ಬಳಸುವ ಅಂದಾಜುಗಳನ್ನು ಉಲ್ಲೇಖಿಸಿ ಹೇಳಿದ್ದಾರೆ.

"ನಾವು ಸಾಮಾನ್ಯವಾಗಿ ಉತ್ತರ ಕೊರಿಯಾ ಸುಮಾರು 80–120 ಪರಮಾಣು ಸಿಡಿತಲೆಗಳನ್ನು ಹೊಂದಿದೆ ಎಂದು ಭಾವಿಸುತ್ತೇವೆ, ಆದರೆ ನಿರ್ದಿಷ್ಟ ಸಂಖ್ಯೆಯನ್ನು ನೀಡುವ ನನ್ನ ಸಾಮರ್ಥ್ಯವು ತುಂಬಾ ಸೀಮಿತವಾಗಿದೆ" ಎಂದು ಅಹ್ನ್ ಸಂಸತ್ತಿನ ಅಧಿವೇಶನದಲ್ಲಿ ಹೇಳಿದರು.

ಎಂದು ಯೋನ್ಹಾಪ್ ಸುದ್ದಿಸಂಸ್ಥೆ ವರದಿ ಮಾಡಿದೆ. ಪಯೋಂಗ್ಯಾಂಗ್‌ನಲ್ಲಿ 57 "ಅತ್ಯಂತ ಶಕ್ತಿಶಾಲಿ" ಪರಮಾಣು ಸಿಡಿತಲೆಗಳಿವೆ ಎಂದು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಹೇಳಿದ ನಂತರ ಅಹ್ನ್ ಅವರ ಹೇಳಿಕೆ ಬಂದಿದೆ. ಇದು ಟ್ರಂಪ್ ಉತ್ತರ ಕೊರಿಯಾದ ಪರಮಾಣು ಶಸ್ತ್ರಾಗಾರಕ್ಕೆ ನಿರ್ದಿಷ್ಟ ಸಂಖ್ಯೆಯನ್ನು ಸಾರ್ವಜನಿಕವಾಗಿ ಉಲ್ಲೇಖಿಸಿರುವುದು ಇದೇ ಮೊದಲು. ಟ್ರಂಪ್ ಅವರ ಅಂದಾಜಿನ ಬಗ್ಗೆ ಪ್ರತಿಕ್ರಿಯಿಸಿದ ಅಹ್ನ್, ಉತ್ತರ ಕೊರಿಯಾದ ಪರಮಾಣು ದಾಸ್ತಾನಿನ ಬಗ್ಗೆ ದಕ್ಷಿಣ ಕೊರಿಯಾ ಮತ್ತು ಅಮೆರಿಕದ ಮೌಲ್ಯಮಾಪನಗಳು "ಸ್ಪಷ್ಟವಾಗಿ ಭಿನ್ನವಾಗಿವೆ" ಎಂದು



ಹೇಳಿದರು. ದಕ್ಷಿಣ ಕೊರಿಯಾ ತನ್ನದೇ ಆದ ಪರಮಾಣು ಶಸ್ತ್ರಾಸ್ತ್ರಗಳನ್ನು ಅಭಿವೃದ್ಧಿಪಡಿಸುವ ಯಾವುದೇ ಯೋಜನೆಯನ್ನು ಹೊಂದಿಲ್ಲ ಎಂದು ರಕ್ಷಣಾ ಸಚಿವರು ಪುನರುಚ್ಚರಿಸಿದರು. ಬದಲಾಗಿ, ಸಿಯೋಲ್ ತನ್ನ ರಕ್ಷಣೆಯನ್ನು ಬಲಪಡಿಸಲು ಮತ್ತು ಅಮೆರಿಕದೊಂದಿಗೆ ತನ್ನ ಪರಮಾಣು ತಡೆಗಟ್ಟುವ ವ್ಯವಸ್ಥೆಗಳನ್ನು ಅವಲಂಬಿಸುವುದನ್ನು ಮುಂದುವರಿಸಲು ಉದ್ದೇಶಿಸಿದೆ. ಉತ್ತರ ಕೊರಿಯಾ "ಮಹತ್ವದ" ಪರಮಾಣು ಶಸ್ತ್ರಾಗಾರವನ್ನು ಹೊಂದಿದೆ ಎಂದು ಸಿಯೋಲ್ ಮತ್ತು ವಾಷಿಂಗ್ಟನ್ ಒಪ್ಪಿಕೊಂಡಿವೆ ಎಂದು ಸಚಿವಾಲಯ ಹೇಳಿದೆ ಮತ್ತು ಪಯೋಂಗ್ಯಾಂಗ್ ಪರಮಾಣು ಶಸ್ತ್ರಾಸ್ತ್ರಗಳನ್ನು ಹೊಂದಿರುವುದು "ಸ್ವೀಕಾರಾರ್ಹವಲ್ಲ" ಎಂದು ಪುನರುಚ್ಚರಿಸಿದೆ.

